ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ಏಪ್ರಿಲ್ 25 ಶುಕ್ರವಾರ 2025

₹4

ಸಂಪುಟ: 46 | ಸಂಚಿಕೆ: 10 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 25 ಶುಕ್ರವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

46

ಸಂಪುಟ: 46 | ಸಂಚಿಕೆ: 10 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಚಾಮರಾಜನಗರ ಹಿಂದುಳಿದ ಜಿಲ್ಲೆ ಹಣೆಪಟ್ಟಿ ಕಳಚಲಿದೆ

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜಂಟಿ ಘೋಷಣೆ

- ಮಲೆ ಮಹದೇಶ್ವರ ಬೆಟ್ಟದಲ್ಲಿನ ಸಂಪುಟ ಸಭೆಯಲ್ಲಿ ಜಿಲ್ಲೆಗೆ ಭರಪೂರ ಯೋಜನೆ; ಅನುದಾನ
- ಮೈಸೂರು ಕಂದಾಯ ವಿಭಾಗದಲ್ಲಿ 3647.62 ಕೋಟಿಯ ಅಭಿವೃದ್ಧಿ ಕಾರ್ಯಕ್ಕೆ ಅನುಮೋದನೆ
- ಚಿಕ್ಕಲ್ಲೂರಲ್ಲಿ ಮಂಟೇಸ್ವಾಮಿ, ರಾಚಪ್ಪಾಜಿ, ಸಿದ್ದಪ್ಪಾಜಿ ಪ್ರಾಧಿಕಾರ ರಚನೆಗೆ ನಿರ್ಧಾರ

ಸಿದ್ದಲಿಂಗಸ್ವಾಮಿ

ಮಲೆ ಮಹದೇಶ್ವರ ಬೆಟ್ಟ, ಏ.24–ಚಾಮರಾಜನಗರ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಮಲೆ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ನಡೆದ ಮೈಸೂರು ವಿಭಾಗದ ವಿಶೇಷ ಸಂಪುಟ ಸಭೆಯಲ್ಲಿ ಮೈಸೂರು ಕಂದಾಯ ವಿಭಾಗದಲ್ಲಿ 3647.62 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದನೆ ನೀಡಲಾಯಿತು. ವಿಶೇಷವಾಗಿ ಚಿಕ್ಕಲ್ಲೂರಿನಲ್ಲಿ ಮಂಟೇಸ್ವಾಮಿ, ರಾಚಪ್ಪಾಜಿ, ಸಿದ್ದಪ್ಪಾಜಿ ಪ್ರಾಧಿಕಾರ ರಚನೆಗೆ ನಿರ್ಧಾರ ಕೈಗೊಳ್ಳಲಾಗಿದೆ.

ನೀರಾವರಿ ವಿಚಾರದಲ್ಲಿ 1787 ಕೋಟಿ ರೂ.ಗಳ ಯೋಜನೆಗೆ ಸಂಪುಟ ಅಸ್ತು ಎಂದಿದೆ. ರಾಜ್ಯ ಸರ್ಕಾರವು 4 ವಿಭಾಗಗಳಲ್ಲಿ ವಿಶೇಷ ಸಂಪುಟ ಸಭೆಗಳನ್ನು ನಡೆಸಲು ತೀರ್ಮಾನಿಸಿದ್ದು, ಇಂದು ನಡೆದದ್ದು 2ನೇ ಸಂಪುಟ ಸಭೆ. ಈ ಹಿಂದೆ ಕಲಬುರಗಿಯಲ್ಲಿ ನಡೆದಿತ್ತು. ಮುಂದಿನ ಸಂಪುಟ ಸಭೆ ನಂದಿಬೆಟ್ಟದಲ್ಲಿ ನಡೆಸಲು ತೀರ್ಮಾನಿಸಲಾಗಿದೆ.

ಸಭೆಯ ನಂತರ ಜಂಟಿ ಸುದ್ದಿಗೋಷ್ಠಿ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಂಪುಟ ಸಭೆಯ ನಿರ್ಣಯಗಳ ಬಗ್ಗೆ ವಿವರಿಸಿದರು. ಮೈಸೂರು ವಿಭಾಗಕ್ಕೆ ಸಂಬಂಧಿಸಿದಂತೆ 78 ವಿಷಯಗಳ ಮೇಲೆ ಚರ್ಚೆ ಮಾಡಿ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಹೇಳಿದರು.

ನಂಜುಂಡಪ್ಪ ವರದಿಯಲ್ಲಿ ಅತ್ಯಂತ ಹಿಂದುಳಿದ ಜಿಲ್ಲೆ ಎಂದು ಚಾಮರಾಜನಗರವನ್ನು ಹೇಳಲಾಗಿದೆ. ನಮ್ಮ ಸರ್ಕಾರ ಈ ಹಣೆಪಟ್ಟಿಯನ್ನು ತೆಗೆದುಹಾಕುವ ಸಲುವಾಗಿ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಂಪುಟ ಸಭೆ ನಡೆಸಿ ನೀಡಿರುವ ಯೋಜನೆ ಹಾಗೂ ಅನುದಾನಗಳಿಂದ ಜಿಲ್ಲೆಗೆ ಈ ಹಣೆಪಟ್ಟಿ ಕಳಚಲಿದೆ ಎಂಬ ವಿಶ್ವಾಸವನ್ನು ಸಿಎಂ ಮತ್ತು ಡಿಸಿಎಂ ವ್ಯಕ್ತಪಡಿಸಿದರು. ಲೋಕೋಪಯೋಗಿ ■6ನೇ ಪುಟಕ್ಕೆ



ಮಲೆ ಮಹದೇಶ್ವರ ಬೆಟ್ಟದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಗುರುವಾರ ಮೈಸೂರು ವಿಭಾಗದ ವಿಶೇಷ ಸಂಪುಟ ಸಭೆ ನಡೆಯಿತು. ಡಿಸಿಎಂ ಡಿ.ಕೆ. ಶಿವಕುಮಾರ್, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ಸಂಪುಟ ಸಹೋದ್ಯೋಗಿಗಳು ಭಾಗವಹಿಸಿದ್ದರು.

ಚಾ.ನಗರ ಜಿಲ್ಲಾಸ್ಪತ್ರೆಯ ಆಕ್ಸಿಜನ್ ದುರಂತದಲ್ಲಿ ಸತ್ತವರಿಗೆ ಶೀಘ್ರವೇ ನ್ಯಾಯ ಕಲ್ಪಿಸುವ ವಿಶ್ವಾಸ

ಮಲೆ ಮಹದೇಶ್ವರ ಬೆಟ್ಟ, ಏ.24–ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ಕೊರೊನಾ ಸಾಂಕ್ರಾಮಿಕದ ವೇಳೆ ಆಕ್ಸಿಜನ್ ದುರಂತದಲ್ಲಿ 36 ಮಂದಿ ಸಾವನ್ನಪ್ಪಿದ ಘಟನೆ ಕುರಿತು ನ್ಯಾಯಮೂರ್ತಿ ಕುನ್ಹಾ ಅವರು ಸಲ್ಲಿಸಿದ್ದ 2ನೇ ವರದಿಯನ್ನು ಇಂದು ನಡೆದ ಸಂಪುಟ ಸಭೆ ಸ್ವೀಕರಿಸಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಆಕ್ಸಿಜನ್ ದುರಂತದಲ್ಲಿ ಮಡಿದವರ ಕುಟುಂಬ ಸದಸ್ಯರಿಗೆ ಉದ್ಯೋಗ ನೀಡುವುದಾಗಿ ಭರವಸೆ ಕೊಟ್ಟಿದ್ದೆವು. ಈಗಾಗಲೇ ಕೆಲವರಿಗೆ ಹೊರಗುತ್ತಿಗೆ ಆಧಾರದ ಮೇರೆಗೆ ತಾತ್ಕಾಲಿಕವಾಗಿ ಉದ್ಯೋಗ ನೀಡಲಾಗಿದೆ. ಇನ್ನು ಕೆಲವರಿಗೆ ಉದ್ಯೋಗ ನೀಡಬೇಕಾಗಿದ್ದು, ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕಾಗಿದೆ. ಈ ವಿಚಾರದಲ್ಲಿ ಕಾನೂನು ತೊಡಕಿದ್ದು, ಪ್ರತಿಯೊಬ್ಬರ ವಿದ್ಯಾರ್ಹತೆ ಹಾಗೂ ಇತರ ವಿಚಾರಗಳ ಬಗ್ಗೆ ಪರಿಶೀಲನೆ ನಡೆಸುತ್ತಿದ್ದೇವೆ. ಆಕ್ಸಿಜನ್ ದುರಂತದಲ್ಲಿ ಸಾವಿಗೀಡಾದವರ ಕುಟುಂಬಗಳಿಗೆ ನ್ಯಾಯ ಒದಗಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದ್ದು, ನ್ಯಾಯಮೂರ್ತಿ ಕುನ್ಹಾ ಅವರ 2ನೇ ವರದಿ ಆಧಾರದ ಮೇರೆಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮುಂದಿನ ಸಂಪುಟ ಸಭೆಯಲ್ಲಿ ಚರ್ಚಿಸುತ್ತೇವೆ. ಆ ವೇಳೆ ಸಂತ್ರಸ್ತರಿಗೆ ಉದ್ಯೋಗ ನೀಡುವ ವಿಚಾರವೂ ಚರ್ಚೆಗೆ ಬರುತ್ತದೆ ಎಂದರು.

ಚಾ.ನಗರದ ವಿವಿಧ ಗ್ರಾಮದಲ್ಲಿನ ಮೈಸೂರು ರಾಜವಂಶಸ್ಥರ ಆಸ್ತಿ ವಿಚಾರದಲ್ಲಿ ರೈತರಿಗೆ ಸಿಎಂ ಪರೋಕ್ಷ ಬೆಂಬಲ

ಮಲೆ ಮಹದೇಶ್ವರ ಬೆಟ್ಟ, ಏ.24–ಚಾಮರಾಜನಗರ ಜಿಲ್ಲೆಯ ಸಿದ್ದಯ್ಯನಪುರ, ಹರದನಹಳ್ಳಿ ಮತ್ತಿತರೆಡೆ ಸುಮಾರು 5 ಸಾವಿರ ಎಕರೆ ಜಮೀನನ್ನು ರಾಜವಂಶಸ್ಥರ ಹೆಸರಿಗೆ ಖಾತೆ ಮಾಡಿಕೊಡಲು ಸಾಧ್ಯವಿಲ್ಲ ಎಂಬುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪರೋಕ್ಷವಾಗಿ ಪ್ರಸ್ತಾಪಿಸಿದರು. ಈ ಸಂಬಂಧ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, 'ಉಳುವವರೇ ಭೂಮಿ ಒಡೆಯರು'. ಅವರಿಗೆ ಖಾತೆ ಮಾಡಿಕೊಡಲಾಗುವುದು ಎಂದು ಹೇಳುವ ಮೂಲಕ ಈ ಜಮೀನನ್ನು ರೈತರಿಗೆ ಖಾತೆ ಮಾಡಿಕೊಡುವುದಾಗಿ ಪರೋಕ್ಷವಾಗಿ ತಿಳಿಸಿದರು. ■6ನೇ ಪುಟಕ್ಕೆ

ಒಬ್ಬೊಬ್ಬ ಉಗ್ರನನ್ನೂ ಹುಡುಕಿ ಹೊಡೆದುರುಳಿಸುತ್ತೇವೆ...

ಕಲ್ಪನೆಗೂ ಮೀರಿದ ಶಿಕ್ಷೆ ಉಗ್ರರಿಗೆ ಕಾದಿದೆ: ಪ್ರಧಾನಿ ಮೋದಿ ಶಪಥ

ಬಿಹಾರ: ಬಿಹಾರದ ಈ ಮಣ್ಣಿನಲ್ಲಿ ನಿಂತು ಇಂದು ಇಡೀ ಜಗತ್ತಿಗೆ ಹೇಳುತ್ತಿದ್ದೇನೆ, ಭಾರತವು ಪ್ರತಿಯೊಬ್ಬ ಭಯೋತ್ಪಾದಕ ಮತ್ತು ಅವರ ಬೆಂಬಲಿಗರನ್ನು ಪತ್ತೆಹಚ್ಚಿ, ಶಿಕ್ಷಿಸಲಿದೆ. ಈ ಭೂಮಿಯ ತುದಿಯವರೆಗೆ ಹಿಂಬಾಲಿಸುತ್ತೇವೆ. ಭಾರತದ ಚೈತನ್ಯವು ಭಯೋತ್ಪಾದನೆಯಿಂದ ಎಂದಿಗೂ ಕುಗ್ಗುವುದಿಲ್ಲ. ಭಯೋತ್ಪಾದನೆಗೆ ಶಿಕ್ಷೆಯಾಗದೆ ಉಳಿಯುವುದಿಲ್ಲ. ಈ ದೇಶದ ಜನರಿಗೆ ನ್ಯಾಯ ಸಿಗುವಂತೆ ನೋಡಿಕೊಳ್ಳಲು ಎಲ್ಲ ಪ್ರಯತ್ನಗಳನ್ನು ಮಾಡುತ್ತೇವೆ ಎಂದು ಪ್ರಧಾನಿ ಮೋದಿ ಉಗ್ರರಿಗೆ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ.



ಭಯೋತ್ಪಾದಕರನ್ನು ಸಂಪೂರ್ಣವಾಗಿ ನಿರ್ನಾಮ ಮಾಡುವ ನಮ್ಮ ಸಂಕಲ್ಪದಲ್ಲಿ ಇಡೀ ರಾಷ್ಟ್ರವು ಒಂದಾಗಿದೆ. ಮಾನವೀಯತೆಯನ್ನು ನಂಬುವ ಪ್ರತಿಯೊಬ್ಬರೂ ನಮ್ಮೊಂದಿಗಿದ್ದಾರೆ. ನಮ್ಮೊಂದಿಗೆ ನಿಂತಿರುವ ವಿವಿಧ ದೇಶಗಳ ಜನರು ಮತ್ತು ಅವರ ನಾಯಕರಿಗೆ ನಾನು ಈ ಸಮಯದಲ್ಲಿ ಧನ್ಯವಾದ ಹೇಳುತ್ತೇನೆ ಎಂದು ಹೇಳಿದರು.

ಕಳೆದ ಮಂಗಳವಾರ ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಉಗ್ರರ ದಾಳಿಯ ನಂತರ ಬಿಹಾರದಲ್ಲಿ ಇಂದು ಸಾರ್ವಜನಿಕ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಸಂದರ್ಭದಲ್ಲಿ ಪ್ರತಿಕ್ರಿಯೆ ನೀಡಿದ್ದಾರೆ. ಭಾಷಣ ಆರಂಭಕ್ಕೆ ಪಹಲ್ಗಾಮ್ ದುರಂತದಲ್ಲಿ ಮೃತಪಟ್ಟ 28 ಮಂದಿಗೆ 2 ನಿಮಿಷ ಶ್ರದ್ಧಾಂಜಲಿ ಸಲ್ಲಿಸಿದರು.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ದೇಶದ ಅಮಾಯಕ ಜನರನ್ನು ಕೊಂದರು. ಈ ಘಟನೆ ನಂತರ ಇಡೀ ದೇಶ ದುಃಖಿತವಾಗಿದೆ, ನೋವಿನಲ್ಲಿದೆ. ಬಲಿಪಶುಗಳ ಕುಟುಂಬಗಳೊಂದಿಗೆ ನಾವು ನಿಲ್ಲುತ್ತೇವೆ. ಭಯೋತ್ಪಾದಕರನ್ನು ಬಿಡಲಾಗುವುದಿಲ್ಲ, ಅವರ ವಿರುದ್ಧ ಬಲವಾದ ಕ್ರಮ ಕೈಗೊಳ್ಳಲಾಗುವುದು, ಶಿಕ್ಷೆ ಎಷ್ಟು ಕಠಿಣವಾಗಿರುತ್ತದೆ ಎಂದರೆ ಭಯೋತ್ಪಾದಕರು ಎಂದಿಗೂ ಯೋಚಿಸಲು ಸಾಧ್ಯವಿಲ್ಲ. ಈ ದಾಳಿಗೆ ಸಂಚು ರೂಪಿಸಿದವರಿಗೆ ಊಹಿಸಲೂ ಸಾಧ್ಯವಾಗದಷ್ಟು ದೊಡ್ಡ ಶಿಕ್ಷೆ ಕಾದಿದೆ ಎಂದು ನಾನು ಸ್ಪಷ್ಟವಾಗಿ ಹೇಳಲು ಬಯಸುತ್ತೇನೆ. 140 ಕೋಟಿ ಭಾರತೀಯರ ಇಚ್ಛಾಶಕ್ತಿಯಂತೆ ಈಗ ಭಯೋತ್ಪಾದಕರ ಬೆನ್ನು ಮುರಿಯುವುದಂತೂ ಖಂಡಿತ ಎಂದರು.

ಉಗ್ರರ ನಿಗ್ರಹಕ್ಕೆ ಸರ್ಕಾರ ಕೈಗೊಳ್ಳುವ ಎಲ್ಲಾ ನಿರ್ಧಾರಗಳಿಗೆ ಸರ್ವಪಕ್ಷಗಳ ಬೆಂಬಲ

ಪ್ರಧಾನಿ ಮೋದಿ ಅನುಪಸ್ಥಿತಿಯಲ್ಲಿ ರಕ್ಷಣಾ ಸಚಿವ ರಾಜನಾಥಸಿಂಗ್ ನೇತೃತ್ವದಲ್ಲಿ ಸಭೆ

ನವದೆಹಲಿ, ಏ.24– ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಗುರುವಾರ ರಾತ್ರಿ ಸರ್ವಪಕ್ಷ ಸಭೆ ನಡೆಯಿತು. ಪ್ರಧಾನಿ ನರೇಂದ್ರ ಮೋದಿ ಅನುಪಸ್ಥಿತಿಯಲ್ಲಿ ರಕ್ಷಣಾ ಸಚಿವ ರಾಜ್‌ನಾಥ್ ಸಿಂಗ್ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಭಯೋತ್ಪಾದನಾ ಚಟುವಟಿಕೆ ನಿಗ್ರಹಕ್ಕೆ ಸರ್ಕಾರ ತೆಗೆದುಕೊಳ್ಳುವ ಎಲ್ಲಾ ನಿರ್ಧಾರಗಳಿಗೆ ಸರ್ವಪಕ್ಷಗಳ ಎಲ್ಲಾ ನಾಯಕರು ಬೆಂಬಲ ವ್ಯಕ್ತಪಡಿಸಿದ್ದಾರೆ.

ಸಭೆಯಲ್ಲಿ ಪಕ್ಷಭೇದ ಮರೆತು ಭಯೋತ್ಪಾದಕರ ಶಿಬಿರಗಳನ್ನು ನಾಶಗೊಳಿಸಲು ನಿರ್ಣಾಯಕ ಕ್ರಮ ಕೈಗೊಳ್ಳುವಂತೆ ನಾಯಕರು ಕೋರಿದರು. ಪ್ರತಿಪಕ್ಷದ ನಾಯಕರು ಭದ್ರತಾ ವೈಫಲ್ಯಗಳ ಕುರಿತು ಪ್ರಶ್ನೆಗಳನ್ನು ಎತ್ತಿದರು. ಆದರೆ, ಅಂತಿಮವಾಗಿ ಭಯೋತ್ಪಾದನೆ ನಿಭಾಯಿಸುವ ವಿಷಯದಲ್ಲಿ ಸರ್ಕಾರ ಕೈಗೊಳ್ಳುವ ನಿರ್ಧಾರಗಳಿಗೆ ಎಲ್ಲಾ ರೀತಿಯ ಬೆಂಬಲ ನೀಡುವುದಾಗಿ ಭರವಸೆ ನೀಡಿದರು.



ರಾಜನಾಥ್‌ಸಿಂಗ್ ನೇತೃತ್ವದಲ್ಲಿ ನವದೆಹಲಿಯಲ್ಲಿ ಸರ್ವಪಕ್ಷ ಸಭೆ ಗುರುವಾರ ನಡೆಯಿತು.

ಸಭೆಯ ಆರಂಭದಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರಿಗೆ ಮೌನ ಪ್ರಾರ್ಥನೆ ಸಲ್ಲಿಸಲಾಯಿತು. 28 ಮಂದಿ ಪ್ರವಾಸಿಗರು ಸಾವನ್ನಪ್ಪಿದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಸರ್ಕಾರ ವಿವಿಧ ರಾಜಕೀಯ ಪಕ್ಷಗಳ ನಾಯಕರಿಗೆ ಮಾಹಿತಿ ನೀಡಿತು ಹಾಗೂ ಅವರ ನಿಲುವುಗಳನ್ನು ಆಲಿಸಿತು.

ಸಭೆಯಲ್ಲಿ ಸರ್ಕಾರದ ಭಾಗವಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಗೃಹ ಸಚಿವ ಅಮಿತ್ ಶಾ, ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್, ಹಣಕಾಸು ಸಚಿವೆ ನಿರ್ಮಲಾ ಸೀತಾ ರಾಮನ್, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಇತರರು ■6ನೇ ಪುಟಕ್ಕೆ

ಯುದ್ಧದ ಕಾರ್ಮೋಡ /ಪುಟ-5

ಬೆಂಗಳೂರು ಮಾದರಿ ಮೈಸೂರು ರಸ್ತೆಗಳಿಗೂ 391 ಕೋಟಿ ವೆಚ್ಚದಲ್ಲಿ ವೈಟ್ ಟ್ಯಾಂಪಿಂಗ್

ಮಲೆ ಮಹದೇಶ್ವರ ಬೆಟ್ಟ, ಏ.24–ಬೆಂಗಳೂರು ಮಾದರಿಯಲ್ಲಿ ಮೈಸೂರಿನ ರಸ್ತೆಗಳಿಗೆ 391 ಕೋಟಿ ರೂ. ವೆಚ್ಚದಲ್ಲಿ ವೈಟ್ ಟ್ಯಾಂಪಿಂಗ್ ಸೇರಿದಂತೆ ಮೈಸೂರಿನ ಹಲವಾರು ಯೋಜನೆಗಳಿಗೆ ಇಂದು ನಡೆದ ಸಂಪುಟ ಸಭೆ ಅನುಮೋದನೆ ನೀಡಿದೆ.

ಇಲವಾಲ ಹೋಬಳಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರಿಕೆಟ್ ಸ್ಟೇಡಿಯಂ ರೂಪಿಸಲು ರಾಜ್ಯ ಕ್ರಿಕೆಟ್ ಸಂಸ್ಥೆಗೆ ಜಾಗ ನೀಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಮೈಸೂರು ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆ ಮಾಡಲು 101 ಕೋಟಿ ರೂ. ವೆಚ್ಚ ಮಾಡಿ ಜಾಗ ನೀಡಲು ಸಂಪುಟ ಸಭೆ ಒಪ್ಪಿಗೆ ನೀಡಿದೆ. ಮೈಸೂರಿನ ಹಳೇ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮ್ಯೂಸಿಯಂ ನಿರ್ಮಾಣಕ್ಕೆ 30 ಕೋಟಿ, ಮೈಸೂರಲ್ಲಿ ಹೊಸ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜು ನಿರ್ಮಾಣಕ್ಕೆ 70 ಕೋಟಿ ಯೋಜನೆ, ಮೈಸೂರು ಜಿಲ್ಲೆಯ ಬುಡಕಟ್ಟು ಜನರು ವಾಸ ಮಾಡುವ ಪ್ರದೇಶಗಳಲ್ಲಿ ವಿದ್ಯುತ್, ರಸ್ತೆ, ಚರಂಡಿ, ಮೂಲಸೌಕರ್ಯ ಒದಗಿಸಲು ತೀರ್ಮಾನಿಸಲಾಗಿದೆ. ಭಾರತ್ ಜೋಡೋ ಯಾತ್ರೆ ಸಂದರ್ಭದಲ್ಲಿ ಭರವಸೆ ನೀಡಿದಂತೆ ಮಹಾತ್ಮ ಗಾಂಧೀಜಿ ಭೇಟಿ ನೀಡಿದ್ದ ಬದನವಾಳು ■6ನೇ ಪುಟಕ್ಕೆ

ಕೊಡಗಿನ ಹಿರಿಯ ಕಾಂಗ್ರೆಸ್ ಮುಖಂಡ ಮಿಟ್ಟು ಚಂಗಪ್ಪ ನಿಧನ

ಮಡಿಕೇರಿ, ಏ.24– ಕೊಡಗಿನ ಹಿರಿಯ ಕಾಂಗ್ರೆಸ್ ಮುಖಂಡ ಮಿಟ್ಟು ಚಂಗಪ್ಪ ಅವರು ಇಂದು ಸಂಜೆ ಅಮೃತ್ತಿಯ ಖಾಸಗಿ ಆಸ್ಪತ್ರೆಯಲ್ಲಿ ವಿಧಿವಶರಾದರು.



ಮಿಟ್ಟು ಚಂಗಪ್ಪ

ಅವರಿಗೆ 83 ವರ್ಷ ವಯಸ್ಸಾಗಿತ್ತು. ಕೆಲವು ತಿಂಗಳುಗಳಿಂದ ಅನಾರೋಗ್ಯಕ್ಕೊಳಗಾಗಿದ್ದ ಅವರು, ಮುಳ್ಳುಸೋಗೆಯಲ್ಲಿರುವ ತಮ್ಮ ಮನೆಯಲ್ಲೇ ವಿಶ್ರಾಂತಿ ಪಡೆಯುತ್ತಿದ್ದರು. ಮಂಗಳವಾರ ರಾತ್ರಿ ಆರೋಗ್ಯದಲ್ಲಿ ಏರುಪೇರಾಗಿದ್ದರಿಂದ ಅವರನ್ನು ಅಮೃತ್ತಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೇ ಇಂದು ಸಂಜೆ ನಿಧನರಾದರು.

5 ದಶಕಗಳ ಕಾಲ ನಿಷ್ಠಾವಂತ ಕಾಂಗ್ರೆಸ್ ಮುಖಂಡರಾಗಿದ್ದ ಮಿಟ್ಟು ಚಂಗಪ್ಪ ರಾಜಕಾರಣ ಮಾತ್ರವಲ್ಲದೆ, ಪ್ರವಾಸೋದ್ಯಮಿಯಾಗಿ, ಕೃಷಿಕರಾಗಿಯೂ ಗಮನ ಸೆಳೆದಿದ್ದರು. 1980ರಲ್ಲಿ ಮಡಿಕೇರಿ ಪುರಸಭೆ ಸದಸ್ಯರಾಗಿದ್ದ ಅವರು, ವಿಧಾನಪರಿಷತ್ ಚುನಾವಣೆಯಲ್ಲಿ ಪರಾಭವಗೊಂಡ ನಂತರ ಯಾವುದೇ ಚುನಾವಣೆಯಲ್ಲೂ ಸ್ಪರ್ಧಿಸಿಲ್ಲವಾದರೂ ಕಾಂಗ್ರೆಸ್ ಹೈಕಮಾಂಡ್‌ನ ನಿಕಟವರ್ತಿಯಾಗಿದ್ದು, ಕಿಂಗ್ ಮೇಕರ್ ಆಗಿದ್ದರು.

ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ, ಮಾಜಿ ಮುಖ್ಯಮಂತ್ರಿಗಳಾದ ಆರ್.ಗುಂಡೂರಾವ್, ಎಸ್.ಎಂ.ಕೃಷ್ಣ, ಹಾಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರುಗಳಾದ ಡಾ. ಜಿ.ಪರಮೇಶ್ವರ್, ಕೆ.ಜೆ.ಜಾರ್ಜ್, ದಿನೇಶ್ ಗುಂಡೂರಾವ್ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಇವರ ಒಡನಾಟದಲ್ಲಿದ್ದರು. ಚಿತ್ರರಂಗದೊಂದಿಗೂ ನಂಟು ಹೊಂದಿದ್ದ ಇವರ ನಿವಾಸಕ್ಕೆ ತಮಿಳುನಾಡಿನ ಸೂಪರ್ ಸ್ಟಾರ್ ರಜನಿಕಾಂತ್, ಸಾಹಸಸಿಂಹ ದಿವಂಗತ ವಿಷ್ಣುವರ್ಧನ್, ■6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ತಿಮ್ಮ : ಇವತ್ತು ಹೆಂಡತೀನ ಶಾಪಿಂಗ್‌ಮಾಲ್‌ಗೆ ಕರ್ಕೊಂಡು ಹೋಗಿದ್ದೆ. ಜೀವನದ ಕಠೋರ ಸತ್ಯ ಅರ್ಥವಾಯ್ತು.

ಗುಂಡ : ಏನಪ್ಪಾ ಅದು?

ತಿಮ್ಮ : ಗಂಡ ಎಷ್ಟೇ ಖರ್ಚು ಮಾಡಿ ಸೀರೆ ಕೊಡಿಸಲಿ. ಹೆಂಡತಿ ಥ್ಯಾಂಕ್ಯೂ ಅನ್ನೋದು ಅಂಗಡಿಯವನಿಗೇ...!

ಮೈಸೂರು ಮಿತ್ರ

ಶುಕ್ರವಾರ, 25 ಏಪ್ರಿಲ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ವಾಸ್ತವದೆದುರು ನಮ್ಮನ್ನು ನಾವು ನಿಲ್ಲಿಸಿ ನೋಡಿದಾಗ
ಹೊರಗಿನವರಿಗಿಂತ ನಮ್ಮವರೇ ನಮ್ಮನ್ನು ಹೀಯ್ಯಾಳಿಸಿದ್ದೆ ಜಾಸ್ತಿ...

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹನುಮಂತಾನೆ ಬಾಲ ಕಡಿತಿರುವಾಗ, ಇವನ್ಯಾವನೋ ಶಾವಿಗೆ ಕೇಳಿದನಂತೆ.

ನಿಮ್ಮ ಪತ್ರಗಳು

ಕೂಡಲೇ ಉಗ್ರರ ಸದೆ ಬಡಿಯಿರಿ

ಮಾನ್ಯರೆ,

ಜಮ್ಮು-ಕಾಶ್ಮೀರದ ಪಹಾಲ್‌ಗಾಮ್‌ನ ರಸ್ತೆ ಬದಿಯಲ್ಲಿ ಬೇಲ್‌ಪುರಿ ತಿನ್ನುತ್ತಿರುವಾಗ ಉಗ್ರರು ಸೇನಾ ಸಮವಸ್ತ್ರದಲ್ಲಿ ಬಂದು ಮೊದಲು ಹೆಸರು ಹಾಗೂ ಯಾವ ಧರ್ಮ ಎಂದು ಕೇಳಿ ಮುಸ್ಲಿಮರಲ್ಲ ಎಂದು ಗೊತ್ತಾದ ತಕ್ಷಣ ಗುಂಡು ಹೊಡೆದು ರಕ್ತದೋಕುಳಿ ನಡೆಸಿ ಹತ್ಯೆ ಮಾಡಿರುವುದು ತುಂಬಾ ಹೇಯ ಕೃತ್ಯ. ಇದೇ ವೇಳೆ ಮೃತ ಮಂಜುನಾಥ್‌ರಾವ್ ಅವರ ಪತ್ನಿ ಪಲ್ಲವಿ ಅವರು ನನ್ನನ್ನು ಹಾಗೂ ನನ್ನ ಮಗನನ್ನು ಸಹ ಕೊಲ್ಲಿ ಎಂದು ಅಂಗಲಾಚಿ ಬೇಡಿಕೊಂಡರೂ, ನೀನು ಹೆಂಗಸು ನಿನ್ನನ್ನು ಕೊಲ್ಲುವುದಿಲ್ಲ. ಈ ಸಂಗತಿಯನ್ನು ನೀನು ಹೋಗಿ ಮೋದಿಗೆ ತಿಳಿಸು ಎಂದು ಹೇಳಿ ತಮ್ಮ ಕ್ರೌರ್ಯವನ್ನು ಮೆರೆದಿರುವುದು ಭಾರತೀಯರಾದ ನಮ್ಮೆಲ್ಲರಿಗೂ ರಕ್ತ ಕುದಿಯುವ ಅನುಭವ ಆಗುತ್ತಿದೆ. 25 ವರ್ಷಗಳಿಂದ ಅಲ್ಲಿನ ನಾಗರಿಕರು ನೆಮ್ಮದಿಯಾಗಿ ಜೀವನ ನಡೆಸುತ್ತಿದ್ದರು. ಪ್ರವಾಸಿಗರು ಜಮ್ಮು ಮತ್ತು ಕಾಶ್ಮೀರದಲ್ಲಿ ನೆಮ್ಮದಿಯಾಗಿ ಪ್ರವಾಸ ಮಾಡಿ ಹಿಂತಿರುಗಿ ಹೋಗುವುದು ಸರ್ವೇಸಾಮಾನ್ಯವಾಗಿತ್ತು. ಪಾಪಿ ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ಲಷ್ಕರ್ ಎ ತೈಬಾದ ಸ್ಥಳೀಯ ಶಾಖೆ ರೆಸಿಸ್ಟನ್ಸ್ ಫ್ರಂಟ್ ಈ ದಾಳಿಯ ಹೊಣೆ ಹೊತ್ತು ಹೇಳಿಕೆ ನೀಡಿರುವುದು ಭಾರತೀಯರ ಕಿಚ್ಚು ಇನ್ನಷ್ಟು ಹೆಚ್ಚಲು ಕಾರಣವಾಗಿದೆ. ಇದನ್ನರಿತ ಪ್ರಧಾನ ಮಂತ್ರಿ ಮೋದಿ ಅವರು ಉಗ್ರರನ್ನು ಸಂಹರಿಸುವ ಶಪಥ ಮಾಡಿ ಯಾರನ್ನೂ ಬಿಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿ ಉನ್ನತ ಸಭೆ ಕರೆದು ಪಾಕಿಸ್ತಾನದ ವಿರುದ್ಧ ರಾಜತಾಂತ್ರಿಕ ಸ್ಟ್ರೈಕ್‌ಗೆ ತೀರ್ಮಾನ ಮಾಡಿರುವುದು ಸ್ವಲ್ಪವಾದರೂ ನೆಮ್ಮದಿ. ಜಮ್ಮು ಕಾಶ್ಮೀರದಲ್ಲಿ ಉಗ್ರರ ಅಟ್ಟಹಾಸಕ್ಕೆ ಮೃತರಾದವರ ಆತ್ಮಕ್ಕೆ ಚಿರಶಾಂತಿ ಸಿಗಲಿ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

ಇ-ಖಾತಾ ಸಕಾಲ ವ್ಯಾಪ್ತಿಗೆ ಒಳಪಡುವಂತೆ ಸರ್ಕಾರ ಆದೇಶಿಸಲಿ



ಮಾನ್ಯರೆ,

ಮೈಸೂರು ನಗರ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರು ತಾವು ಹೊಂದಿರುವ ಸ್ವಂತ ನಿವೇಶನ ಮತ್ತು ಮನೆಗೆ ಇ-ಖಾತಾವನ್ನು ಮಾಡಿಸಿಕೊಳ್ಳಬೇಕೆಂದು ನಗರಪಾಲಿಕೆಯು ಆದೇಶ ಹೊರಡಿಸಿದ ಹಿನ್ನೆಲೆಯಲ್ಲಿ ಸಾರ್ವಜನಿಕರು ದಿಗಿಲುಗೊಂಡು (ಮೈಸೂರಿನ ಮುಡಾ ಪ್ರಕರಣದ ಭಯದಿಂದ) ತಾವು ಹೊಂದಿರುವ ನಿವೇಶನ ಮತ್ತು ಮನೆಗೆ ಇ-ಖಾತಾವನ್ನು ಪಡೆಯಲು ಮೈಸೂರಿನ ಎಲ್ಲಾ ನಗರಪಾಲಿಕೆಯ ವಲಯ ಕಚೇರಿಗಳ ಮುಂದೆ ಜನರು ಸಾಲುಗಟ್ಟಿ ನಿಲ್ಲುವಂತಾಗಿದೆ. ಅದರಲ್ಲೂ ವಿಶೇಷವಾಗಿ ಮನೆಯ ಹಿರಿಯರು ಮತ್ತು ಹಿರಿಯ ನಾಗರಿಕರೇ ಹೆಚ್ಚಾಗಿ ಇ -ಖಾತೆಗೆ ಓಡಾಡುವಂತಾಗಿದೆ. ಇ-ಖಾತೆ ಪಡೆಯಲು ಎಲ್ಲಾ ದಾಖಲೆಗಳನ್ನು ನೀಡಿದರೂ ಎಷ್ಟು ದಿನಗಳಲ್ಲಿ ನೀಡುತ್ತಾರೆ ಎಂಬ ಗ್ಯಾರಂಟಿ ಇಲ್ಲ.

ಈಗಾಗಲೇ ಸರ್ಕಾರದ ಸಕಾಲ ಯೋಜನೆ ಜಾರಿಯಲ್ಲಿರುವುದರಿಂದ ಸಾರ್ವಜನಿಕರು ಇ-ಖಾತೆ ಪಡೆಯುವುದನ್ನೂ ಸಹ ಸಕಾಲ ಯೋಜನೆಯ ವ್ಯಾಪ್ತಿಗೆ ಒಳಪಡುವಂತೆ ಸರ್ಕಾರ ಆದೇಶಿಸಬೇಕು. ಇದರಿಂದಾದರೂ ಸಾರ್ವಜನಿಕರು ಪದೇ ಪದೆ ವಲಯ ಕಚೇರಿಗಳಿಗೆ ಅಲೆಯುವುದು ತಪ್ಪುತ್ತದೆ. ಈ ಬಗ್ಗೆ ಸರ್ಕಾರ ಗಂಭೀರ ಚಿಂತನೆ ನಡೆಸಲಿ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

ಶೀಘ್ರ ಅರ್ಧಕ್ಕೆ ನಿಂತಿರುವ ಮೋರಿ ಕೆಲಸ ಪೂರ್ಣಗೊಳಿಸಿ



ಮಾನ್ಯರೆ,

ಮೈಸೂರಿನ ಸಿದ್ದಾರ್ಥನಗರದ ಗೀತಾ ಶಿಕ್ಷಣ ಸಂಸ್ಥೆ ಸಮೀಪದಲ್ಲಿರುವ ಜ್ಞಾನ ಮಾರ್ಗದ ಆರಂಭದಲ್ಲಿ ಮೋರಿಯ ಕೆಲಸವನ್ನು ಅರ್ಧಕ್ಕೆ ನಿಲ್ಲಿಸಿದ್ದು, ಇದರಿಂದ ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗಿದೆ. ರಾತ್ರಿ ಸಮಯದಲ್ಲಿ ದ್ವಿಚಕ್ರ ವಾಹನ ಸವಾರರು ಆಯತಪ್ಪಿದರೆ ಅನಾಹುತ ಕಟ್ಟಿಟ್ಟಬುತ್ತಿ. ಈ ಮೋರಿ ರಿಪೇರಿ ಮಾಡಲು ಇನ್ನೆಷ್ಟು ದಿನಗಳು ಬೇಕು ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ. ಏನಾದರೂ ಅನಾಹುತ ಸಂಭವಿಸಿದರೆ ಯಾರು ಹೊಣೆ. ಚಿಕ್ಕ ಮಕ್ಕಳು, ವಯೋವೃದ್ಧರು ಈ ಮೋರಿಗೆ ಬಿದ್ದರೆ ಸಾವು ನಿಶ್ಚಿತ. ಈ ಸಮಸ್ಯೆ ಸಂಬಂಧ ಪಾಲಿಕೆ ಅಧಿಕಾರಿಗಳಿಗೆ ಹಲವಾರು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಇದನ್ನು ಗಮನಿಸಿ ಸೂಕ್ತ ಕ್ರಮ ಕೈಗೊಂಡು ಮುಂದಾಗಬಹುದಾದ ಅನಾಹುತ ತಪ್ಪಿಸಬೇಕೆಂದು ಈ ಮೂಲಕ ಮನವಿ.

– ಸಿದ್ಧಾರ್ಥನಗರದ ನಿವಾಸಿಗಳು, ಮೈಸೂರು.

ಚಿಂತನೆ



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ವ್ಯಾಮೋಹರಹಿತ ಬದುಕು ಸುಖಕರ

> ಯಾವುದನ್ನೂ ಅತಿಯಾಗಿ ಅವಲಂಬಿಸಬಾರದು, ವ್ಯಾಮೋಹ ಅತಿಯಾಗಿರಬಾರದು ಎಲ್ಲವೂ ನಮ್ಮ ಮಾನಸಿಕ ಸ್ಥಿತಿಯೇ ಹೊರತು ಯಾವುದೂ ಶಾಶ್ವತವಾಗಿ ನಮಗೆ ಸುಖವನ್ನು ತಂದುಕೊಡುವುದಿಲ್ಲ. ಹಾಗೆಂದುಕೊಳ್ಳುವುದು ಒಂದು ರೀತಿ ಭ್ರಮೆ ಎನ್ನಿಸುತ್ತದೆ. ಜೀವನ ಒಂದು ರೀತಿಯ ಹರಿವ ನೀರಿನಂತೆ ಆಗಬೇಕು. ಹರಿವ ನೀರು ಶುದ್ಧವಾಗಿರುತ್ತದೆ. ನಿಂತ ನೀರು ಕೊಳೆಯುತ್ತದೆ. ನಿಂತ ನೀರು ಎಂದರೆ ನಮ್ಮ ವ್ಯಾಮೋಹ ಮನಸ್ಥಿತಿ. ಯಾವುದಿಲ್ಲದಿದ್ದರೂ ನಮ್ಮ ಜೀವನ ನಡೆಯುತ್ತದೆ. ಕೆಲಕಾಲ ಸ್ವಲ್ಪ ಕಷ್ಟ ಅನುಭವಿಸಬೇಕಾಗಬಹುದು. ಆದರೆ ಜೀವನ ಎಲ್ಲವನ್ನೂ ಕಲಿಸುತ್ತದೆ. ವ್ಯಾಮೋಹ ರಹಿತವಾದ ಜೀವನವೇ ಸುಖ ಜೀವನ ತಂದುಕೊಡುತ್ತದೆ.

ನಮಗೇ ಗೊತ್ತಿಲ್ಲದಂತೆ ನಾವು ಕೆಲವು ವಸ್ತುಗಳ ಬಗ್ಗೆ ವ್ಯಾಮೋಹ ಬೆಳೆಸಿಕೊಂಡಿರುತ್ತೇವೆ. ಕೊನೆಗೆ ಅದು ಸಿಗದೇ ಇದ್ದರೆ ನಮ್ಮ ಜೀವನ ಸುಗಮವಾಗಿ ಸಾಗುವುದೇ ಇಲ್ಲ ಎಂಬಂತಹ ಭಾವನೆ ನಮ್ಮಲ್ಲಿ ಬಂದು ಬಿಡುತ್ತದೆ. ಆದರೆ ಅದು ಇಲ್ಲವಾದಾಗಲೂ ನಮ್ಮ ಬದುಕಿನಲ್ಲಿ ಅಂತಹ ವ್ಯತ್ಯಾಸವೇನೂ ಆಗುವುದಿಲ್ಲ. ಆದರೆ ಅದು ಇರುವವರೆಗೂ ನಮಗೆ ಅದನ್ನು ಬಿಟ್ಟು ಇರಲಾಗುವುದಿಲ್ಲ. ಅದನ್ನು ಯಾರಾದರೂ ಮುಟ್ಟಿದರೂ ನಮಗೆ ಸಿಟ್ಟು ಬಂದುಬಿಡುತ್ತದೆ. ಇನ್ನು ಅದು ಕಳುವಾದರಂತೂ ನಾವು ರೋದಿಸುತ್ತೇವೆ. ಆದರೆ ಅದು ನಮಗೆ ಸಿಗುವುದಿಲ್ಲ ಎಂದಾಗ ಮಾತ್ರ ಕ್ರಮೇಣ ಅದನ್ನು ಮರೆಯುತ್ತೇವೆ. ಇದು ವಸ್ತುವಾಗಿರಬಹುದು, ವ್ಯಕ್ತಿಯೂ ಆಗಿರಬಹುದು. ಅದು ನಮ್ಮೊಡನೆ ಇದೆ ಎನ್ನುವವರೆಗೂ ಅದರ ಬಗ್ಗೆ ಅಪರಿಮಿತ ವ್ಯಾಮೋಹ ನಮ್ಮಲ್ಲಿ ಇರುತ್ತದೆ.

ಹಾಗೆ ನೋಡಿದರೆ ನಾವು ಅತಿಯಾಗಿ ಇಷ್ಟಪಡುವ ಸಂಗತಿಗಳಿಂದಲೇ ನಮಗೆ ತೊಂದರೆ. ಅದು ಇಲ್ಲದಾದಾಗ ನಾವು ನೆಮ್ಮದಿಯಿಂದ ಇರಬಹುದು. ಸಿದ್ದಾರ್ಥ ಪ್ರಾಪಂಚಿಕ ವ್ಯಾಮೋಹದಿಂದ ಹೊರ ಬಂದ ನಂತರವೇ ಬುದ್ಧನಾಗಿದ್ದು. ಅವನ ಕಥೆಯಲ್ಲಿ ಬರುತ್ತದೆ, ಅವನಿಗೆ ಯಾವುದೇ ಕೆಟ್ಟದ್ದು ತಿಳಿಯಬಾರದು. ದುಃಖ-ದುಮ್ಮಾನಗಳು, ರೋಗ-ರುಜಿನಗಳಂತಹ ವಿಷಯಗಳು ಗೊತ್ತಾಗಬಾರದು, ಅಂತಹ ದೃಶ್ಯಗಳು ಕಣ್ಣಿಗೆ ಬೀಳಬಾರದು. ಎಷ್ಟೇ ಎಚ್ಚರ ವಹಿಸಿದ್ದರೂ ಅವನಿಗೆ ರೋಗ, ಸಾವು, ಬಡತನದ ಅರಿವು, ಅಂತಹ ವ್ಯಕ್ತಿಗಳು ಕಣ್ಣಿಗೆ ಬಿದ್ದ ನಂತರ ಅವನಿಗೆ ಒಂದು ರೀತಿಯಲ್ಲಿ ಜೀವನದಲ್ಲಿ ವೈರಾಗ್ಯ ಉಂಟಾಗುತ್ತದೆ. ಮನೆಬಿಟ್ಟು ಹೋಗಬೇಕೆಂದು ತೀರ್ಮಾನಿಸಿ, ಮಧ್ಯರಾತ್ರಿ ಅರಮನೆ ಬಿಟ್ಟು ಹೊರಡುವಾಗ ತನ್ನ ಮುದ್ದಿನ ಮಡದಿ ಹಾಗೂ ಪುಟ್ಟ ಮಗುವನ್ನು ಒಮ್ಮೆ ದಿಟ್ಟಿಸಿ ನೋಡಿ ಹೊರಟೇ ಬಿಡುತ್ತಾನೆ. ಆ ಕ್ಷಣದಲ್ಲಿ ಅವನಿಗೆ ಕಿಂಚಿತ್ತು ಮಡದಿ, ಮಗುವಿನ ಬಗ್ಗೆ ವ್ಯಾಮೋಹ ಕಾಡಿದ್ದಿರಬಹುದು. ಆದರೆ, ಅದಾಗಲೇ ಜೀವನದಲ್ಲಿ ವೈರಾಗ್ಯ ಉಂಟಾಗಿತ್ತು. ಹಾಗಾಗಿ ಬುದ್ಧನಿಗೆ ತಪಸ್ಸಿನಿಂದ ಜ್ಞಾನೋದಯವಾಯಿತು. ಅವನು ತನಗಾಗಿ ಈ ನಿರ್ಧಾರಕ್ಕೆ ಬರಲಿಲ್ಲ. ಅವನು ಸಾಧಿಸಿದ ಸಿದ್ಧಿ ಇದೇ ಮಾನವ ಕುಲಕ್ಕೆ ಮೀಸಲಾಯಿತು. ಅವನು ಸಿದ್ಧಾರ್ಥನಾಗಿ ವೈಭವದ ಜೀವನ ನಡೆಸಿದ್ದರೆ ಚರಿತ್ರೆಯಲ್ಲಿ ಅವನ ಹೆಸರು ಪುಟ್ಟದಾಗಿ ಎಲ್ಲೋ ಒಂದು ಕಡೆ ದಾಖಲಾಗುತ್ತಿತ್ತು. ಆದರೆ ಬುದ್ಧನಿಂದ ಉದಯಿಸಿದ ಬೌದ್ಧ ಧರ್ಮ ಇಡೀ ವಿಶ್ವಕ್ಕೆ ಒಂದು ಹೊಸ ಮಾರ್ಗ ತೋರಿತು. ಬುದ್ಧನ ಜನ್ಮ ದಶಾವತಾರಗಳಲ್ಲಿ ಒಂದು ಎನಿಸುವಂತಾಯಿತು. ತನ್ನ ಜೀವನದ ಅನುಭವವನ್ನೇ ಬುದ್ಧ ಹೇಳಿದ್ದು: ಆಸೆಯೇ ದುಃಖಕ್ಕೆ ಮೂಲ; ದುರಾಸೆಯನ್ನು ಬಿಡಿ. ಇಲ್ಲದಿದ್ದರೆ ನೀವು ಜೀವನದಲ್ಲಿ ದುಃಖ ಅನುಭವಿಸುವಿರಿ ಎಂದು ಸಾರಿದರು. ಇದು ವ್ಯಾಮೋಹರಹಿತ ಜೀವನದ ಬಗ್ಗೆ ನಮಗೆ ಮಾರ್ಗದರ್ಶನ ಮಾಡುತ್ತದೆ.

ಇತ್ತೀಚೆಗೆ ಒಬ್ಬ ಹಿರಿಯ ಸಾಹಿತಿಯನ್ನು ಭೇಟಿ ಮಾಡಬೇಕೆನಿಸಿತು. ಅವರ ಮಗನಿಗೆ ದೂರವಾಣಿ ಕರೆ ಮಾಡಿ ಮನೆಗೆ ಬಂದು ಅವರನ್ನು ಭೇಟಿಯಾಗಬಹುದೇ ಎಂದು ಕೇಳಿದಾಗ, ಆತ ಇಲ್ಲ, ಅವರು ಮನೆಯಲ್ಲಿಲ್ಲ; ವೃದ್ಧಾಶ್ರಮದಲ್ಲಿದ್ದಾರೆ. ನಿಮಗೆ ಅಗತ್ಯವೆನಿಸಿದರೆ ಜೊತೆಗೆ ನಾನೂ ಬರುತ್ತೇನೆ ಹೋಗೋಣ ಎಂದರು. ನನಗೆ ಒಂದಷ್ಟು ಮಾನಸಿಕ ಕಸಿವಿಸಿಯಾಯ್ತು. ಮಗ ಚೆನ್ನಾಗಿಯೇ ಇದ್ದಾನೆ, ಹಣಕಾಸಿನ ಕೊರತೆ ಇಲ್ಲ, ಹಾಗೇ ತಾಯಿಯ ಬಗ್ಗೆಯೂ ಗೌರವ ಕೊಂಚವೂ ಕಡಿಮೆಯಾಗಿಲ್ಲ. ಅಂತಹುದರಲ್ಲಿ ಅವರನ್ನು ವೃದ್ಧಾಶ್ರಮಕ್ಕೆ ಸೇರಿಸಿದ್ದಾನೆ ಎಂದರೆ ಆತನ ಬಗ್ಗೆ ನಾನು ಇಟ್ಟುಕೊಂಡಿದ್ದ ಭಾವನೆಯೇ ಸರಿಯಲ್ಲವೇನೋ ಎನಿಸಿ, ಕೊಂಚ ಕೋಪವೂ ಬಂದಿತು. ಆದರೂ ಅವರನ್ನು ಭೇಟಿಯಾಗಬೇಕೆಂದು ಮನಸ್ಸಾಯಿತು. ಮಗನ ಸಹಕಾರ ಪಡೆದು ವೃದ್ಧಾಶ್ರಮಕ್ಕೆ ಹೋದೆ. ಅದೊಂದು ವಿಶೇಷ ವೃದ್ಧಾಶ್ರಮ. ಅಲ್ಲಿ ಸಾಹಿತಿಗಳು ಸಂತೋಷವಾಗಿದ್ದಾರೆ. ಅವರಿಗೆ ಒಂದು ಪ್ರತ್ಯೇಕ ಕೊಠಡಿ ಇದೆ. ಅದರ ತುಂಬಾ ಪುಸ್ತಕಗಳಿವೆ. ಬರೆಯಲು ಮೇಜು ಇತ್ಯಾದಿ ವ್ಯವಸ್ಥೆ ಇದೆ. ಅವರ ಬಗ್ಗೆ ಆ ವೃದ್ಧಾಶ್ರಮದಲ್ಲಿರುವವರಿಗೆ ಗೌರವವಿದೆ. ಸಂಜೆಯಾದರೆ ಅವರೆಲ್ಲಾ ಬಂದು ಅವರ ಮುಂದೆ ಕೂರುತ್ತಾರೆ. ಗಂಟೆಗಟ್ಟಲೆ ಸಂತೋಷವಾಗಿ ಮಾತನಾಡುತ್ತಾರೆ. ಹಗಲು, ರಾತ್ರಿ ಒಟ್ಟಾಗಿ ಊಟ ಮಾಡುತ್ತಾರೆ. ಅದನ್ನು ಕಂಡು ಇದು ನಾನೆಂದುಕೊಂಡಂತೆ ಇಲ್ಲವಲ್ಲಾ ಎನಿಸಿ, ಮಗನನ್ನು ಕೇಳಿದಾಗ ವಿಷಯ ಅರಿವಾಯಿತು. ತಾಯಿಗೆ ವಯಸ್ಸಾದರೂ ಇನ್ನೂ ಬರೆಯುವ ಹಂಬಲ. ಮನೆಯಲ್ಲಿ ಮೊಮ್ಮಕ್ಕಳು, ಬರುವವರು, ಹೋಗುವವರು ಜಾಸ್ತಿ. ನಾವು ಟಿವಿ ಹಾಕಿಕೊಂಡಾಗ ಅವರಿಗೆ ಕಸಿವಿಸಿಯಾಗುತ್ತಿತ್ತು. ಅವರ ಬರವಣಿಗೆಗೆ ಮನೆಯಲ್ಲಿ ಸೂಕ್ತ ವಾತಾವರಣ ಇರಲಿಲ್ಲ. ಹಾಗಾಗಿ ನಾವು ಮಾತನಾಡಿಕೊಂಡೇ ಈ ತೀರ್ಮಾನ ಮಾಡಿದೆವು. ಅಮ್ಮ ಈಗ ಅವರಿಗೆ ಬೇಕೆನಿಸಿದಾಗಲೆಲ್ಲಾ ಕೂತು ಬರೆಯುತ್ತಾರೆ. ಹಾಗೆ ನೋಡಿದರೆ ಮನೆಗಿಂತ ಇಲ್ಲಿ ಅವರ ಬರವಣಿಗೆ ಹೆಚ್ಚಾಗಿದೆ. ನಾವು ಎರಡು ದಿನಕ್ಕೊಮ್ಮೆ ಬಂದು ಅವರೊಡನೆ ಸಂತೋಷದಿಂದ ಕಾಲ ಕಳೆಯುತ್ತೇವೆ ಎಂದಾಗ, ನನ್ನ ಅನಿಸಿಕೆ ಸರಿಯಲ್ಲ ಎನಿಸಿತು. ಇದೂ ವ್ಯಾಮೋಹ ಕಳಚಿಕೊಂಡ ಪ್ರಸಂಗದ ಉತ್ತಮ ಉದಾಹರಣೆ ಎನಿಸಿತು. ನನ್ನ ಮಗ, ಸೊಸೆ, ಮೊಮ್ಮಗ, ನಾನು ಕಟ್ಟಿಸಿದ ಮನೆ... ಇವೆಲ್ಲಾ ಹಾಗೆ ನೋಡಿದರೆ ಒಂದು ರೀತಿಯ ಮೋಹ. ಅದನ್ನೂ ತ್ಯಜಿಸಿಯೂ ನೆಮ್ಮದಿ ಜೀವನ ಸಾಧ್ಯವಿದೆ ಎಂಬುದು ಇದರಿಂದ ಅರಿವಾಯಿತು.

ಇಂತಹುದೇ ವ್ಯಾಮೋಹ ನಮ್ಮ ಬಹುತೇಕರಲ್ಲಿ ಕಾಣುತ್ತೇವೆ. ಕೆಲವರಿಗೆ ಮೈಸೂರು ಸಿಲ್ಕ್ ಸೀರೆ ಎಂದರೆ ಬಹು ಇಷ್ಟ, ಹತ್ತಾರು ಸಾವಿರ ಸಾವಿರ (ಈಗ ಲಕ್ಷದ ಲಕ್ಷ ಬೆಲೆಯ ಸೀರೆಯೂ ಇದೆಯಂತೆ) ಕೊಟ್ಟು ಖರೀದಿಸಿರುತ್ತಾರೆ. ಅಷ್ಟೊಂದು ದುಬಾರಿ ವೆಚ್ಚದ ಸೀರೆಯನ್ನು ಉಡಲು ಅವರಿಗೆ ಮನಸ್ಸಾಗುವುದಿಲ್ಲ. ಕೊನೆಗೆ ನಾಲ್ಕಾರು ವರ್ಷಕ್ಕೆ ಒಮ್ಮೆ ಧರಿಸಿ, ಜೋಪಾನ ಮಾಡುತ್ತಾರೆ. ಆದರೆ, ಅದರ ಬಗೆಗಿನ ವ್ಯಾಮೋಹ ಕೊಂಚವೂ ಕಡಿಮೆಯಾಗುವುದಿಲ್ಲ. ಆಗಾಗ್ಗೆ ಕಪಾಟಿನಲ್ಲಿರುವ ಅದನ್ನು ತೆಗೆದು ನೋಡಿ, ಮುಟ್ಟಿ ಮುದಗೊಳ್ಳುತ್ತಾರೆ. ಯಾವತ್ತೋ ಒಂದು ದಿನ ಅದನ್ನು ಉಡುವ ಸಂದರ್ಭ ಬಂದಾಗ ತೆಗೆದರೆ ಹರಿದಿರುವುದು ಕಣ್ಣಿಗೆ ಬೀಳುತ್ತದೆ. ಗಾಳಿಯಾಡದೇ ಬಚ್ಚಿಟ್ಟ ಪರಿಣಾಮವದು. ಉಡಲು ಸಾಧ್ಯವಾಗದ ಸ್ಥಿತಿ. ಆಗವರಿಗೆ ಅನ್ನಿಸುತ್ತದೆ; ಇದನ್ನು ಕೊಂಡಾಗಿನಿಂದ ಆಗಾಗ್ಗೆ ಉಪಯೋಗಿಸಿದ್ದರೆ ಹೀಗಾಗುತ್ತಿರಲಿಲ್ಲ ಎಂದು. ಆ ಸ್ಥಿತಿಗೆ ಯಾರನ್ನೂ ಶಪಿಸುವಂತಿಲ್ಲ. ಒಂದು ರೀತಿ ಆಡುವಂತಿಲ್ಲ, ಅನುಭವಿಸುವಂತಿಲ್ಲ ಎಂಬಂತಹ ಸ್ಥಿತಿ. ವ್ಯಾಮೋಹ ಕೈಕೊಡುವ ರೀತಿಯಿದು.

ಮತ್ತೊಂದು ಪ್ರಸಂಗ ಇಲ್ಲಿ ನೆನಪಾಗುತ್ತದೆ. ಹಿಂದೆ ಒಬ್ಬ ಧನಿಕರ ಮನೆಯಲ್ಲಿ ಒಂದು ಸುಂದರವಾದ ಗೋಡೆ ಗಡಿಯಾರವಿತ್ತು. ಅದು ಬಹಳ ಹಳೆಯದು. ಸುಂದರವಾಗೂ, ಸುಸ್ಥಿತಿಯಲ್ಲೂ ಇದ್ದ ಗಡಿಯಾರ ಅದು. ಆ ಧನಿಕನಿಗೆ ಅದರ ಬಗ್ಗೆ ಅಪರಿಮಿತ ವ್ಯಾಮೋಹ. ಅವನ ಮನೆಯಲ್ಲಿ ನಂಬಿಕಸ್ತನಾದ ಒಬ್ಬ ಸೇವಕ ಇದ್ದ. ಬಹಳ ವರ್ಷದಿಂದ ಧನಿಕನೊಟ್ಟಿಗೇ ಇದ್ದವನು. ಒಂದು ಸಂಜೆ ಧನಿಕ ಆ ಗಡಿಯಾರದತ್ತ ನೋಡುತ್ತಾನೆ. ಆದರೆ ಗಡಿಯಾರ ಕೆಳಕ್ಕೆ ಬಿದ್ದು ನುಚ್ಚುನೂರಾಗಿರುತ್ತದೆ. ತಕ್ಷಣವೇ ನೌಕರನನ್ನು ಕರೆದು ಇದೇಕೆ ಹೀಗಾಗಿದೆ ಎಂದು ಪ್ರಶ್ನಿಸುತ್ತಾನೆ. ಆ ಸೇವಕ ಪ್ರಾಮಾಣಿಕ, ಆತ ಹೇಳುತ್ತಾನೆ; ಗಡಿಯಾರ ಸ್ವಚ್ಛ ಮಾಡುವಾಗ ಕೈಜಾರಿ ಕೆಳಗೆ ಬಿದ್ದು ಹೀಗಾಯಿತು, ನನ್ನನ್ನು ಕ್ಷಮಿಸಿ ಎಂದು ಪ್ರಾಮಾಣಿಕವಾಗಿ ಹೇಳುತ್ತಾನೆ. ಅದಕ್ಕೆ ಧನಿಕ, ಇದು ನನಗೆ ಅತ್ಯಂತ ಪ್ರಿಯವಾದ ಗಡಿಯಾರವಾಗಿತ್ತು. ನೀನು ಅದನ್ನು ಬೀಳಿಸಿ ತಪ್ಪು ಮಾಡಿದ್ದೀಯಾ ಎಂದು ನುಡಿದು, ಮೌನವಾಗಿ ತನ್ನ ಕೊಠಡಿಗೆ ಹೋಗುತ್ತಾನೆ. ಆ ರಾತ್ರಿ ಅವನಿಗೆ ನಿದ್ದೆ ಬರುವುದಿಲ್ಲ. ಹಾಸಿಗೆಯಲ್ಲಿ ಹೊರಳಾಡುತ್ತಾನೆ. ಕ್ಷಣಕ್ಷಣಕ್ಕೂ ಆ ಗಡಿಯಾರವೇ ಅವನ ಕಣ್ಣಿನ ಮುಂದೆ ಬರುತ್ತದೆ. ಅವನು ಅಕಸ್ಮಾತ್ತಾಗಿ ತನ್ನ ನೌಕರನ ಕಡೆಗೆ ನೋಡುತ್ತಾನೆ. ಆತ ಗಾಢ ನಿದ್ರೆಯಲ್ಲಿರುತ್ತಾನೆ. ಇಡೀ ರಾತ್ರಿ ನಿದ್ರಿಸದ ಧನಿಕ ಮರುದಿನ ನೌಕರನನ್ನು ಕರೆದು ಹೇಳುತ್ತಾನೆ, ಗಡಿಯಾರ ಹಾಗೆ ಹಾಳಾಗಿದ್ದರಿಂದ ನಿನ್ನೆ ನನಗೆ ತುಂಬಾ ಬೇಸರವಾಗಿತ್ತು. ಇಂದು ನಾನು ಅದನ್ನು ಮರೆತು ಪ್ರಸನ್ನನಾಗಿದ್ದೇನೆ. ನೀನು ಇದುವರೆವಿಗೆ ಮಾಡಿದ ಸೇವೆಗಾಗಿ ನಿನಗೆ ಆ ಗಡಿಯಾರವನ್ನು ಕೊಡಬೇಕು ಎಂದುಕೊಂಡಿದ್ದೆ. ಆದರೆ ಅದು ನಿನ್ನ ಕೈಯಿಂದಲೇ ನಾಶವಾಯಿತು. ಇದು ನನಗೆ ಈಗ ಬೇಸರ ತರಿಸಿದೆ ಎನ್ನುತ್ತಾನೆ. ಆ ರಾತ್ರಿ ಧನಿಕ ಚೆನ್ನಾಗಿ ನಿದ್ರೆ ಮಾಡಿದ, ಆದರೆ ಕೆಲಸಗಾರನಿಗೆ ಎಂತಹ ಸುಂದರವಾದ ಗಡಿಯಾರವನ್ನು ನಾನು ಕಳೆದುಕೊಂಡೆ ಎಂಬ ಪಶ್ಚಾತ್ತಾಪದಲ್ಲಿ ಅವನಿಗೆ ನಿದ್ರೆ ಬರಲಿಲ್ಲ. ಇಬ್ಬರೂ ಒಂದೇ ಗಡಿಯಾರದ ಬಗ್ಗೆ ಒಂದೊಂದು ದಿನ ನಿದ್ರೆ ಕಳೆದುಕೊಂಡರು. ಅದು ಧನಿಕನದ್ದಾಗಿದ್ದಾಗ ಧನಿಕ ನಿದ್ರೆ ಮಾಡಲಿಲ್ಲ. ನಿನ್ನದಾಗಬೇಕಾಗಿತ್ತು ಎಂಬ ಮಾತಿನಿಂದ ಮತ್ತೊಂದು ದಿನ ಸೇವಕ ನಿದ್ರೆ ಮಾಡಲಿಲ್ಲ ಇಂತಹ ಘಟನೆಗಳು ನಮ್ಮ ಜೀವನದಲ್ಲೂ ನಡೆದಿರುತ್ತವೆ. ಯಾವುದೋ ವಸ್ತುವಿನ ಬಗೆಗಿನ ಅತಿಯಾದ ವ್ಯಾಮೋಹ ಅದು ಇಲ್ಲ ಎಂದಾದಾಗ ನಮ್ಮ ನೆಮ್ಮದಿಯನ್ನು ಕಸಿದುಕೊಂಡುಬಿಡುತ್ತದೆ.

ಇಲ್ಲೆಲ್ಲಾ ನಮ್ಮ ವ್ಯಾಮೋಹವೇ ನಮ್ಮ ನಿರಾಸೆಗೆ, ದುಃಖಕ್ಕೆ ಕಾರಣ ಎಂಬುದಾಗಿ ಕಂಡುಬರುತ್ತದೆ. ಆ ವಸ್ತುವಿಲ್ಲದಿದ್ದರೂ ಜೀವನ ಸಾಧ್ಯ. ಆದರೆ ವ್ಯಾಮೋಹ, ಅದಿಲ್ಲದಿದ್ದರೆ ನನಗೆ ಜೀವನವೇ ಇಲ್ಲ ಎನಿಸಿಬಿಡುತ್ತದೆ. ಮನೆಗಳಲ್ಲಿ ಸಾವು ಸಂಭವಿಸಿದಾಗಲೂ ಇಂತಹುದೇ ವಾತಾವರಣ ಕಂಡುಬರುತ್ತದೆ. ನಾವು ಯಾವ ವ್ಯಕ್ತಿಯ ಬಗ್ಗೆ ಅತಿಯಾದ ವ್ಯಾಮೋಹ ಇಟ್ಟುಕೊಂಡಿರುತ್ತೇವೆಯೋ, ಆ ವ್ಯಕ್ತಿ ಇಲ್ಲದಿದ್ದರೆ ನನ್ನ ಜೀವನವೂ ಇಲ್ಲ ಎಂದುಕೊಳ್ಳುತ್ತೇವೆಯೋ, ಅಂತಹ ವ್ಯಕ್ತಿ ಮೃತರಾದಾಗ ನಮಗೆ ಆಕಾಶವೇ ತಲೆಯ ಮೇಲೆ ಬಿದ್ದಂತೆ ಆಗುತ್ತದೆ. ಆದರೆ, ಆ ಭಾವನೆ ಕ್ರಮೇಣ ಕಡಿಮೆಯಾಗುತ್ತಾ ಹೋಗುತ್ತದೆ. ಸಾವಿನ ಸುದ್ದಿ ಕೇಳಿದಾಗ ಆಗಿದ್ದಂತಹ ದುಃಖ, ಅವರ ಅಂತ್ಯಕ್ರಿಯೆ ಸಮಯಕ್ಕೆ ಅರ್ಧದಷ್ಟು ಕಡಿಮೆಯಾಗಿರುತ್ತದೆ. ಇದು ಜೀವನ. ಹಾಗೆ ನೋಡಿದರೆ ಆ ದೇವರು ನಮಗೆ ಕೊಟ್ಟ ಮರೆವಿನಿಂದ ನಾವು ಯಾರಿಲ್ಲದಿದ್ದರೂ, ಯಾವುದಿಲ್ಲದಿದ್ದರೂ ಜೀವಿಸುತ್ತೇವೆ. ಎಷ್ಟೋ ಸಮಯ ಇಂತಹವರು ಇಲ್ಲದಿದ್ದರೆ ನನ್ನ ಜೀವನ ಕಷ್ಟ ಎಂದು ಕೊಂಡಿದ್ದು, ಆ ವ್ಯಕ್ತಿ ಇಲ್ಲದಾದಾಗ ನಾವು ಅತ್ತು-ಕರೆದು ಕೊನೆಗೆ ಸಹಜ ಸ್ಥಿತಿಗೆ ಮರಳುತ್ತೇವೆ. ಮತ್ತಷ್ಟು ಸದೃಢವಾಗಿ ಜೀವನ ಕಟ್ಟಿಕೊಳ್ಳುವ ಸಾಧ್ಯತೆಯೂ ಇದೆ.


ಆದ್ದರಿಂದ ಯಾವುದನ್ನೂ ಅತಿಯಾಗಿ ಅವಲಂಬಿಸಬಾರದು, ವ್ಯಾಮೋಹ ಅತಿಯಾಗಿರಬಾರದು. ಎಲ್ಲವೂ ನಮ್ಮ ಮಾನಸಿಕ ಸ್ಥಿತಿಯೇ ಹೊರತು ಯಾವುದೂ ಶಾಶ್ವತವಾಗಿ ನಮಗೆ ಸುಖವನ್ನು ತಂದುಕೊಡುವುದಿಲ್ಲ. ಹಾಗೆಂದುಕೊಳ್ಳುವುದು ಒಂದು ರೀತಿ ಭ್ರಮೆ ಎನ್ನಿಸುತ್ತದೆ. ಜೀವನ ಒಂದು ರೀತಿಯ ಹರಿವ ನೀರಿನಂತೆ ಆಗಬೇಕು. ಹರಿವ ನೀರು ಶುದ್ಧವಾಗಿರುತ್ತದೆ. ನಿಂತ ನೀರು ಕೊಳೆಯುತ್ತದೆ. ನಿಂತ ನೀರು ಎಂದರೆ ನಮ್ಮ ವ್ಯಾಮೋಹ ಮನಸ್ಥಿತಿ. ಯಾವುದಿಲ್ಲದಿದ್ದರೂ ನಮ್ಮ ಜೀವನ ನಡೆಯುತ್ತದೆ. ಕೆಲಕಾಲ ಸ್ವಲ್ಪ ಕಷ್ಟ ಅನುಭವಿಸಬೇಕಾಗಬಹುದು. ಆದರೆ ಜೀವನ ಎಲ್ಲವನ್ನೂ ಕಲಿಸುತ್ತದೆ. ವ್ಯಾಮೋಹರಹಿತವಾದ ಜೀವನವೇ ಸುಖ ಜೀವನ ತಂದುಕೊಡುತ್ತದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಟೌನ್‌ಶಿಪ್‌ಗೆ ರೈತರ ಭೂಮಿ ಸ್ವಾಧೀನ ಬೇಡ

ಸಿಎಂ ಸಿದ್ದರಾಮಯ್ಯಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಪತ್ರ

ಬೆಂಗಳೂರು,ಏ.24(ಕೆಎಂಶಿ)– ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಟೌನ್‌ಶಿಪ್ ನಿರ್ಮಾಣಕ್ಕೆ ಬಡ ರೈತರ ಭೂಮಿಯನ್ನು ಸ್ವಾಧೀನ ಮಾಡಿಕೊಳ್ಳಬೇಡಿ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ಸಂಬಂಧ ಪತ್ರ ಬರೆದಿದ್ದು, ಕರ್ನಾಟಕ ಗೃಹ ನಿರ್ಮಾಣ ಮಂಡಳಿ ಸೇರಿದಂತೆ ಸರ್ಕಾರದ ವಿವಿಧ ಪ್ರಾಧಿಕಾರಗಳು ರಾಮನಗರ, ಬಿಡದಿ ಸುತ್ತಮುತ್ತ ಹಲವಾರು ವಸತಿ ಯೋಜನೆಗಳನ್ನು ರೂಪಿಸಿ ರೈತರ ಜಮೀನು ಸ್ವಾಧೀನಪಡಿಸಿಕೊಂಡು ಯೋಜನೆ ಅನುಷ್ಠಾನಕ್ಕೆ ಮುಂದಾಗಿವೆ. ಸರ್ಕಾರದ ಈ ನಿರ್ಧಾರದಿಂದ ಸಾವಿರಾರು ರೈತ ಕುಟುಂಬಗಳ ಜೀವನ ನಿರ್ವಹಣೆಗೆ ಧಕ್ಕೆ ಉಂಟಾಗಿ, ರೈತ ಕುಟುಂಬದ ಯುವಜನರು ನಿರುದ್ಯೋಗಿಗಳಾಗಿ ಬೀದಿಪಾಲಾಗಲಿದ್ದಾರೆ. ಬಡ ರೈತರ ಜೀವನೋಪಾಯಕ್ಕೆ ಕೃಷಿ ಭೂಮಿಯೇ ಆಧಾರ. ಅದನ್ನು ಕಸಿದು ಅವರನ್ನು ಬೀದಿಪಾಲು ಮಾಡಬೇಡಿ. ಈಗಾಗಲೇ ರಾಮನಗರ ಮತ್ತು ಕನಕಪುರ ತಾಲೂಕುಗಳಲ್ಲಿ ಸರ್ಕಾರ ಕೈಗಾರಿಕಾ ಅಭಿವೃದ್ಧಿಗಾಗಿ ಸಾವಿರಾರು ಎಕರೆ ರೈತರ ಭೂಮಿ ವಶಪಡಿಸಿಕೊಂಡು ಕೈಗಾರಿಕಾ ಪ್ರದೇಶಾಭಿವೃದ್ಧಿಗೆ ಮುಂದಾಗಿದೆ. ಜಿಲ್ಲೆಯು ಬೆಂಗಳೂರು ಮಹಾನಗರಕ್ಕೆ ಹೊಂದಿಕೊಂಡಂತೆ ಇದ್ದು, ಹಲವಾರು ಉದ್ಯಮಿಗಳು ಖಾಸಗಿಯಾಗಿ ಕೈಗಾರಿಕೆಗಳನ್ನು ಸ್ಥಾಪಿಸಿದ್ದಾರೆ. ಉಳಿದಿರುವ ಕೃಷಿ ಭೂಮಿಯಲ್ಲಿ ರೈತರು ಜೀವನ ನಿರ್ವಹಣೆಗೆ ಹೈನುಗಾರಿಕೆ, ರೇಷ್ಮೆ, ತೋಟಗಾರಿಕಾ ಕೃಷಿ ಮೇಲೆ ಅವಲಂಬಿತರಾಗಿದ್ದಾರೆ.



ಬಹುಪಾಲು ರೈತರು ಸಣ್ಣ ಮತ್ತು ಅತಿ ಸಣ್ಣ ಹಿಡುವಳಿದಾರರಾಗಿದ್ದು, ಅವರು ತಮ್ಮ ಜಮೀನಿನಲ್ಲಿ ಲಕ್ಷಾಂತರ ಮರಗಿಡಗಳನ್ನು ಬೆಳೆಸಿದ್ದು, ಇಂತಹ ಪ್ರದೇಶವನ್ನು ಟೌನ್‌ಶಿಪ್ ಯೋಜನೆಗೆ ಸ್ವಾಧೀನಪಡಿಸಿಕೊಂಡರೆ ಪರಿಸರಕ್ಕೂ ಧಕ್ಕೆ ಆಗುತ್ತದೆ. ಇದನ್ನು ಮನಗಂಡು ಸರ್ಕಾರ ತನ್ನ ನಿರ್ಧಾರದಿಂದ ಹಿಂದೆ ಸರಿಯಬೇಕೆಂದು ದೇವೇಗೌಡರು ಒತ್ತಾಯಿಸಿದ್ದಾರೆ.

ಚೆಸ್ ಪಂದ್ಯಾವಳಿ: ಅಮೋಘ್ ಪ್ರಥಮ



ಮೈಸೂರು: ಮೈಸೂರು ಜಿಲ್ಲಾ ಚೆಸ್ ಅಸೋಸಿಯೇಷನ್ ಆಶ್ರಯದಲ್ಲಿ ಇತ್ತೀಚೆಗೆ ನಡೆದ ಮೈಸೂರು ಜಿಲ್ಲಾ ಚೆಸ್ ಚಾಂಪಿಯನ್‌ಶಿಪ್‌ನ 17 ವರ್ಷದೊಳಗಿನವರ ವಿಭಾಗದಲ್ಲಿ ವಿ.ಎನ್.ಅಮೋಘ್ ಪ್ರಥಮ ಸ್ಥಾನ ಪಡೆದಿದ್ದಾರೆ. ಆ ಮೂಲಕ ಜುಲೈ ತಿಂಗಳಲ್ಲಿ ಗುಲ್ಬರ್ಗಾದಲ್ಲಿ ನಡೆಯಲಿರುವ ಕರ್ನಾಟಕ ರಾಜ್ಯ ಮಟ್ಟದ ಚೆಸ್ ಚಾಂಪಿಯನ್‌ಶಿಪ್ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ.

ವಿ.ಎನ್.ಅಮೋಘ್ ಮೈಸೂರು ಅಂಚೆ ವಿಭಾಗದ ಅಧೀಕ್ಷಕ ನವೀನ್ ವಿ.ಎಲ್ ಅವರ ಪುತ್ರ.

ಉಗ್ರರ ಹುಟ್ಟಡಗಿಸುವ ಕಾರ್ಯಕ್ಕೆ ರಾಜ್ಯ ಸರ್ಕಾರದ ಬೆಂಬಲವಿದೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ● ಭರತ್ ಭೂಷಣ್ ಅಂತಿಮ ದರ್ಶನ; ಕುಟುಂಬಕ್ಕೆ ಸಾಂತ್ವನ

ಬೆಂಗಳೂರು,ಏ.24(ಕೆಎಂಶಿ)– ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯಲ್ಲಿ ಮೃತಪಟ್ಟ ಕನ್ನಡಿಗರ ಕುಟುಂಬಕ್ಕೆ ತಲಾ 10 ಲಕ್ಷ ರೂ. ಪರಿಹಾರ ಘೋಷಿಸಿದ್ದು, ಸಂಕಷ್ಟದಲ್ಲಿ ಇರುವ ಕನ್ನಡಿಗರ ರಕ್ಷಣೆ ಸರ್ಕಾರದ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಉಗ್ರರ ದಾಳಿಯಲ್ಲಿ ಮೃತಪಟ್ಟ ನಗರದ ಮತ್ತೀಕೆರೆ ನಿವಾಸಿ ಭರತ್ ಭೂಷಣ್ ನಿವಾಸಕ್ಕೆ ತೆರಳಿ ಅಂತಿಮ ನಮನ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೃತ ಭರತ್ ಭೂಷಣ್ ಅವರಿಗೆ ಕನ್ನಡ ನಾಡಿನ ಸಮಸ್ತ ಕನ್ನಡಿಗರ ಪರವಾಗಿ ಶ್ರದ್ಧಾಂಜಲಿ ಅರ್ಪಿಸಿದ್ದು, ಅವರು ಉಗ್ರರ ದಾಳಿಗೆ ಬಲಿಯಾಗಿದ್ದು, ದುರದೃಷ್ಟಕರ. ಇದು ಅಮಾನವೀಯ ಕೃತ್ಯವಾಗಿದ್ದು, ತೀವ್ರವಾಗಿ ಖಂಡಿಸುವುದಾಗಿ ತಿಳಿಸಿದರು. ಉಗ್ರರ ಸಂಪೂರ್ಣ ನಿರ್ಮೂಲನೆ ಸರ್ಕಾರದ ಜವಾಬ್ದಾರಿ, ದೇಶದಲ್ಲಿ ಭಯೋತ್ಪಾದನಾ ಚಟುವಟಿಕೆ ನಿಗ್ರಹಿಸಿ, ಉಗ್ರರನ್ನು ಸದೆಬಡಿಯುವಲ್ಲಿ ಕರ್ನಾಟಕ ಸರ್ಕಾರ ಕೇಂದ್ರಕ್ಕೆ ಸಂಪೂರ್ಣ ಬೆಂಬಲ ನೀಡುತ್ತದೆ. ಅಮಾಯಕ ಜನರನ್ನು ಕುಟುಂಬದವರ ಎದುರೇ ಕೊಲ್ಲುವುದು ಹೇಯಕೃತ್ಯ. ಕಾಶ್ಮೀರದಲ್ಲಿ ಈ ಹಿಂದೆಯೂ ಪುಲ್ವಾಮಾ, ಬಾಲಾಕೋಟ್ ಘಟನೆ ನಡೆದಿದ್ದು, ಇದೀಗ ಘಟನೆ ಮರುಕಳಿಸಿದೆ. ಇದಕ್ಕೆ ಗುಪ್ತಚರ ಇಲಾಖೆ ವೈಫಲ್ಯವೂ ಕಾರಣ ಇರಬಹುದು.



ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಗೆ ಮೃತಪಟ್ಟ ಭರತ್ ಭೂಷಣ್‌ರ ಪಾರ್ಥಿವ ಶರೀರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪುಷ್ಪ ನಮನ ಸಲ್ಲಿಸಿದರು.

ಕನ್ನಡಿಗರಾದ ಭರತ್ ಭೂಷಣ್, ಮಂಜುನಾಥ್‌ರಾವ್ ಹಾಗೂ ಮಧುಸೂದನ್ ಮೃತಪಟ್ಟಿದ್ದಾರೆ. ಭರತ್ ಭೂಷಣ್ ಕುಟುಂಬದೊಂದಿಗೆ ಸಚಿವ ರಾಮಲಿಂಗಾರೆಡ್ಡಿ, ಶಿವಮೊಗ್ಗದ ಮಂಜುನಾಥ್ ರಾವ್ ಕುಟುಂಬದವರನ್ನು ಸಚಿವ ಮಧುಬಂಗಾರಪ್ಪ ಭೇಟಿಯಾಗಿದ್ದು, ಕುಟುಂಬಕ್ಕೆ ಎಲ್ಲಾ ಸಹಕಾರ ನೀಡುವಂತೆ ಸೂಚಿಸಲಾಗಿದೆ. ಕಾಶ್ಮೀರದಲ್ಲಿ ಸಿಲುಕಿರುವ 180 ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತರಲಾಗಿದೆ. ಉಗ್ರರ ದಾಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಕೆಲವು ಕ್ರಮಗಳನ್ನು ಈಗಾಗಲೇ ಕೈಗೊಂಡಿದೆ. ಉಗ್ರರ ಮಟ್ಟ ಹಾಕುವಲ್ಲಿ ಇನ್ನೂ ಹೆಚ್ಚಿನ ಕ್ರಮಗಳಿಗೆ ರಾಜ್ಯ ಸರ್ಕಾರದ ಸಂಪೂರ್ಣ ಬೆಂಬಲ ಇರಲಿದೆ ಎಂದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಭಾರತ-ಪಾಕ್ ಯುದ್ಧದ ಕಾರ್ಮೋಡ

ನವದೆಹಲಿ: ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಂತರ ಭಾರತ ಹಾಗೂ ಪಾಕಿಸ್ತಾನದ ನಡುವೆ ಯುದ್ಧದ ಕಾರ್ಮೋಡ ಕವಿದಿದೆ.

ದಾಳಿ ಬೆನ್ನಲ್ಲೇ ಸಿಂಧೂನದಿ ಜಲ ಒಪ್ಪಂದ ರದ್ದು, ಭಾರತ-ಪಾಕ್ ಗಡಿ ಬಂದ್, ಪಾಕಿಸ್ತಾನೀಯರಿಗೆ ವೀಸಾ ರದ್ದು, ತಕ್ಷಣವೇ ಪಾಕ್ ಪ್ರಜೆಗಳು ದೇಶ ದೊರೆಯುವ ಕಟ್ಟಾಜ್ಞೆ ಸೇರಿದಂತೆ ಹಲವು ಕಠಿಣ ಕ್ರಮಗಳ ಜೊತೆಗೆ ತೀವ್ರ ರೀತಿಯ ರಾಜತಾಂತ್ರಿಕ ಬೆಳವಣಿಗೆ ಹಿನ್ನೆಲೆಯಲ್ಲಿ ಭಾರತ ಉಗ್ರರ ಪೋಷಕ ಪಾಕ್ ವಿರುದ್ಧ ಸಮರ ಸಾರುವ ಸಾಧ್ಯತೆಗಳು ಹೆಚ್ಚಾಗಿವೆ ಎಂದು ಯಾರಾದರೂ ಹೇಳಬಹುದು.

ಅತ್ತ ಪಾಕಿಸ್ತಾನ ಕೂಡ ಭಾರತದ ಕಠಿಣ ನಿಲುವುಗಳಿಂದ ಕಂಗೆಟ್ಟು, ತಾನೂ ಸಹ ಪ್ರತಿ ಪ್ರತೀಕಾರಕ್ಕೆ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಅದೂ ಸಹ ಸಿಂಧೂ ನದಿ ಜಲ ಒಪ್ಪಂದ ರದ್ದು ತಿರಸ್ಕಾರ, ವಿಸಾ ರದ್ದತಿ, ಭಾರತೀಯ ಪ್ರಜೆಗಳು ದೇಶ ತೊರೆಯುವಂತೆ ಕಟ್ಟಾದೇಶ ಹಾಗೂ ತನ್ನ ಭಾಗದ ಗಡಿ ಬಂದ್‌ಗೆ ಕರೆ ನೀಡಿದೆ. ಜೊತೆಗೆ ಉನ್ನತ ರಕ್ಷಣಾ ಸಭೆ ನಡೆಸಿ, ಪರಿಸ್ಥಿತಿ ಎದುರಿಸುವ ಸಿದ್ಧತೆ ಮಾಡಿಕೊಳ್ಳುವಂತಿದೆ. ಈಗಾಗಲೇ ಗಡಿ ಭಾಗದಲ್ಲಿ ಸೇನೆ ಜಮಾವಣೆ, ಅರಬ್ಬೀ ಸಮುದ್ರದ ಮೇಲೆ ವಾಯುಸೇನಾ ವಿಮಾನಗಳ ಹಾರಾಟ ಇದಕ್ಕೆ ಪುಷ್ಠಿ ನೀಡುತ್ತದೆ.

ಭಾರತ ಈ ಹಿಂದೆ ಉಗ್ರರ ದಾಳಿಗೆ ತೀಕ್ಷ್ಣ ಪ್ರತೀಕಾರ ಸಾರಿದಂತೆ ಯಾವುದೇ ಸಂದರ್ಭದಲ್ಲಿ ಉಗ್ರರ ನೆಲೆಗಳ ಮೇಲೆ ಮುಗಿಬೀಳುವ ಸಾಧ್ಯತೆಗಳು ಇಲ್ಲದಿಲ್ಲ.

ಪಹಲ್ಗಾಮ್ ವಿಚಾರದಲ್ಲಿ ರಾಜಕಾರಣ ಕೀಳು ವರ್ತನೆ

ಗೃಹ ಸಚಿವ ಡಾ.ಪರಮೇಶ್ವರ್ ಅಭಿಪ್ರಾಯ

ಮೈಸೂರು, ಏ.24(ಬಿಎಲ್‌ಯು)- ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ಪ್ರವಾಸಿಗರನ್ನು ಹತ್ಯೆ ಮಾಡಿದ ವಿಚಾರದಲ್ಲಿ ರಾಜಕಾರಣ ಮಾಡಿದರೆ ಅದಕ್ಕಿಂತ ಕೀಳು ವರ್ತನೆ ಬೇರೊಂದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಭಿಪ್ರಾಯಪಟ್ಟಿದ್ದಾರೆ.



ಡಾ.ಪರಮೇಶ್ವರ್

ಮೈಸೂರಿನಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ದೇಶದ ಐಕ್ಯತೆಯನ್ನು ಪ್ರದರ್ಶಿಸಬೇಕಾದ ಈ ಸಂದರ್ಭದಲ್ಲಿ ಯಾರು, ಯಾವ ರಾಜಕೀಯ ಪಕ್ಷವು ಭಿನ್ನಾಭಿಪ್ರಾಯ ತೋರಬಾರದು. ಈ ವಿಚಾರದಲ್ಲಿ ರಾಜಕಾರಣ ಮಾಡಬಾರದು.

ಉಗ್ರರನ್ನು ಸದೆಬಡಿಯಲು ಸರ್ಕಾರ ತೆಗೆದುಕೊಳ್ಳುವ ತೀರ್ಮಾನದ ವಿಷಯದಲ್ಲಿ ವಿರೋಧ ಪಕ್ಷಗಳನ್ನು ಗಣನೆಗೆ ತೆಗೆದುಕೊಳ್ಳಲು ಸರ್ವಪಕ್ಷ ಸಭೆ ಕರೆದಿರುವುದು ಸಂದರ್ಭೋಚಿತವಾಗಿದೆ. ಕಾಂಗ್ರೆಸ್ ಪಕ್ಷ ಈ ವಿಚಾರವಾಗಿ ಸರ್ಕಾರಕ್ಕೆ ಸಂಪೂರ್ಣ ಸಹಕಾರ ನೀಡಲಿದೆ ಎಂದು ಭರವಸೆ ನೀಡಿದರು.

ದೇಶದ ಒಗ್ಗಟ್ಟಿನ ವಿಚಾರ ಬಂದಾಗ ಕಾಂಗ್ರೆಸ್ ಯಾವಾಗಲೂ ಸ್ಪಷ್ಟ ನಿಲುವು ಹೊಂದಿದೆ. ಈ ಹಿಂದೆ ಪಾಕಿಸ್ತಾನದ ಜೊತೆ ಕಾಂಗ್ರೆಸ್ ಸರ್ಕಾರ ಯುದ್ಧವನ್ನೆ ಮಾಡಿದೆ ಎಂದು ಹೇಳಿದರು.

ಪಹಲ್ಗಾವ್ ಪ್ರಕರಣದಲ್ಲಿ ಮಿಲಿಟರಿ ಗುಪ್ತಚರ ವಿಭಾಗದ ವೈಫಲ್ಯ ಎದ್ದು ಕಾಣುತ್ತಿದೆ. ಈ ಬಗ್ಗೆ ಸಮಗ್ರ ತನಿಖೆಯಾಗಬೇಕು ಎಂದು ಆಗ್ರಹಿಸಿದರು.

ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ನರಮೇಧದ ಹಿನ್ನೆಲೆಯಲ್ಲಿ ಕರ್ನಾಟಕದಲ್ಲೂ ಕಟ್ಟೆಚ್ಚರ ವಹಿಸಲಾಗಿದೆ. ಈಗಾಗಲೇ ಈ ಸಂಬಂಧ ಹಿರಿಯ ಪೊಲೀಸ್ ಅಧಿಕಾರಿಗಳ ಆಂತರಿಕ ಸಭೆ ನಡೆಸಿ ಎಲ್ಲಾ ಕಡೆ ಹದ್ದಿನ ಕಣ್ಣಿಡಲಾಗಿದೆ. ಎಂತಹುದೆ ಪರಿಸ್ಥಿತಿ ಬಂದರೂ ಅದನ್ನು ಸಮರ್ಥವಾಗಿ ಎದುರಿಸಲು ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಡಾ.ಜಿ. ಪರಮೇಶ್ವರ್ ತಿಳಿಸಿದರು.

ಸಚಿವ ಸತೀಶ್ ಜಾರಕಿಹೊಳಿಗೆ ಅಭಿನಂದನೆ...



ಮೈಸೂರಿಗೆ ಭೇಟಿ ನೀಡಿದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಮೈಸೂರು ತಾಲೂಕು ನಾಯಕ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಶಾಸಕ ಜಿ.ಟಿ.ದೇವೇಗೌಡ, ಮೈಸೂರು ತಾಲೂಕು ನಾಯಕ ಸಂಘದ ಗೌರವಾಧ್ಯಕ್ಷ ಕೃಷ್ಣನಾಯಕ್, ಅಧ್ಯಕ್ಷ ಉದ್ಬೂರು ಎನ್.ಮಹಾದೇವಸ್ವಾಮಿ, ಪ್ರಧಾನ ಕಾರ್ಯದರ್ಶಿ ಕಡಕೊಳ ಕುಮಾರಸ್ವಾಮಿ, ಮುಖಂಡರಾದ ಎಲ್ಲಪ್ಪನಾಯಕ ಇತರರು ಉಪಸ್ಥಿತರಿದ್ದರು.

ಏ.27, ಡಾ.ವಿಷ್ಣು ಸ್ಮಾರಕದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ

ಮೈಸೂರು,ಏ.24(ಎಂಟಿವೈ)- ಮೈಸೂರು-ಮಾನಂದವಾಡಿ ರಸ್ತೆಯ ಉದ್ಬೂರು ಗೇಟ್ ಬಳಿಯಿರುವ ಡಾ.ವಿಷ್ಣುವರ್ಧನ್ ಸ್ಮಾರಕದಲ್ಲಿ ಏ.27ರಂದು ಬೆಳಗ್ಗೆ 10.30ರಿಂದ ಸಂಜೆ 5 ಗಂಟೆವರೆಗೆ ಹಿರಿಯ ನಟರನ್ನು ಹೋಲುವ ಜ್ಯೂನಿಯರ್ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಡಾ.ವಿಷ್ಣುದಾದಾ, ರೆಬೆಲ್ ಸ್ಟಾರ್ ಅಂಬರೀಶ್ ಕಲಾ ಬಳಗದ ಅಧ್ಯಕ್ಷೆ ಸುನೀತಾ ದೇವರಾಜು ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ.ವಿಷ್ಣುದಾದಾ, ರೆಬೆಲ್ ಸ್ಟಾರ್ ಅಂಬರೀಶ್ ಕಲಾ ಬಳಗದ ವತಿಯಿಂದ ಆಯೋಜಿಸಿರುವ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಅಂದು ಬೆಳಗ್ಗೆ 10.30ಕ್ಕೆ ಶಾಸಕ ಕೆ.ಹರೀಶ್‌ಗೌಡ ಚಾಲನೆ ನೀಡಲಿದ್ದಾರೆ. ಜ್ಯೂನಿಯರ್ ಕಲಾವಿದರಿಂದ ನೃತ್ಯ, ಹಾಡುಗಾರಿಕೆ ಇರಲಿವೆ. ಊಟದ ವ್ಯವಸ್ಥೆ ಮಾಡಿದ್ದು, ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದರು. ಗೋಷ್ಠಿಯಲ್ಲಿ ಶೇಖರ್ ನಾಯ್ಕ, ಆರ್.ಕೆ.ಗೌಡ, ಅಫ್ಸರ್‌ಪಾಷ, ಯು.ರಾಶಿಕ್ ಕಪೂರ್ ಇದ್ದರು.



ಅಭಿನಂದನೆ...

ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆಯಲ್ಲಿ ಪಾಲ್ಗೊಂಡು ಗುರುವಾರ ಮೈಸೂರಿಗೆ ಆಗಮಿಸಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಹಿರಿಯ ಕಾಂಗ್ರೆಸ್ ಮುಖಂಡ ವಿಕ್ರಾಂತ್ ಪಿ.ದೇವೇಗೌಡ ಅಭಿನಂದಿಸಿದರು.

ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿಗೆ ಮೈಸೂರು ಬ್ರಾಹ್ಮಣ ಯುವ ವೇದಿಕೆ ಖಂಡನೆ

ಮೈಸೂರು,ಏ.24-ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿಯನ್ನು ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಅಧ್ಯಕ್ಷ ಎಚ್.ಎನ್.ಶ್ರೀಧರಮೂರ್ತಿ ಖಂಡಿಸಿದ್ದಾರೆ.

ಸುಮಾರು 28ಕ್ಕೂ ಹೆಚ್ಚು ಅಮಾಯಕರು ದಾಳಿಯಲ್ಲಿ ಬಲಿಯಾಗಿದ್ದು, ಅತ್ಯಂತ ಖಂಡನೀಯ. ಇದೊಂದು ಪೈಶಾಚಿಕ ಕೃತ್ಯವಾಗಿದ್ದು, ದಾಳಿಕೋರ ಉಗ್ರರಿಗೆ ಕಠಿಣ ಶಿಕ್ಷೆ ಆಗಲೇಬೇಕು. ಈ ಕುರಿತು ಪ್ರಧಾನಿ ಮೋದಿ ಅವರು ದಿಟ್ಟ ಕ್ರಮ ತೆಗೆದುಕೊಳ್ಳಬೇಕು. ಪ್ರವಾಸಿಗರು ಮಾಡಿದ ತಪ್ಪಾದರೂ ಏನು, ಅಮಾಯಕರ ಜೀವಗಳಿಗೆ ಬೆಲೆ ಇಲ್ಲವೇ? ಉಗ್ರರ ನಡೆ ಪೈಶಾಚಿಕವಾದುದು. ಅವರ ಗುಂಡಿಗೆ ಬಲಿಯಾದ ಹಿಂದೂಗಳ ಆತ್ಮಕ್ಕೆ ಶಾಂತಿ ಸಿಗಲಿ. ದೇವರು ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ. ಈ ಕೂಡಲೇ ಕೇಂದ್ರ ಸರಕಾರ ಇಂತಹ ಪಾಪಿ ಉಗ್ರರಿಗೆ ತಕ್ಕಶಾಸ್ತಿ ಮಾಡುವುದರ ಜೊತೆಗೆ ಇನ್ನು ಮುಂದೆ ಇಂತಹ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಲೋಕೇಶ್ ಆರ್. ನಿಧನ



ಮೈಸೂರು,ಏ.24- ಮೈಸೂರಿನ ರಾಜೀವ್‌ನಗರ 1ನೇ ಹಂತದ ನಿವಾಸಿ ಲೇಟ್ ರಾಮಯ್ಯ ಅವರ ಪುತ್ರ ಲೋಕೇಶ್ ಆರ್.(44) ಇಂದು ಹೃದಯಾಘಾತದಿಂದ ನಿಧನರಾದರು. ಮೃತರು ತಾಯಿ ಜಯಮ್ಮ, ಓರ್ವ ಸಹೋದರ, ಇಬ್ಬರು ಸಹೋದರಿಯರು ಸೇರಿದಂತೆ ಅಪಾರ ಬಂಧು-ವರ್ಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನ ಚಾಮುಂಡಿ ಬೆಟ್ಟ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

'ಡಾ.ರಾಜ್ ಕಲಾ ಸೇವಾರತ್ನ' ಪ್ರಶಸ್ತಿ ಪ್ರದಾನ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಡಾ.ರಾಜ್‌ಕುಮಾರ್ ಕಲಾ ಸೇವಾ ಟ್ರಸ್ಟ್ ವತಿಯಿಂದ ಸಮಾಜ ಸೇವಕ ಕೆ.ರಘುರಾಮ್ ವಾಜಪೇಯಿ, ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ನಾಗರಾಜ್ ವಿ.ಬೈರಿ, ಮೈಸೂರು ಮಹಾನಗರ ಪಾಲಿಕೆಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಉದಯ್‌ಕುಮಾರ್ ಹಾಗೂ ಮೈಸೂರು ಜಿಲ್ಲಾ ಕುಸ್ತಿ ಸಂಘದ ಅಧ್ಯಕ್ಷ ಪೈ.ಎನ್.ಚಂದ್ರಶೇಖರ್ ಅವರಿಗೆ 'ಡಾ.ರಾಜ್ ಕಲಾ ಸೇವಾರತ್ನ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು,ಏ.24(ಎಂಟಿವೈ)- ವರನಟ ಡಾ.ರಾಜ್‌ಕುಮಾರ್ ಅವರ 97ನೇ ಜನ್ಮದಿನದ ಅಂಗವಾಗಿ ಡಾ.ರಾಜ್‌ಕುಮಾರ್ ಕಲಾ ಸೇವಾ ಟ್ರಸ್ಟ್ ವತಿಯಿಂದ ನಾಲ್ವರಿಗೆ 'ಡಾ.ರಾಜ್ ಕಲಾ ಸೇವಾರತ್ನ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಡಾ.ರಾಜ್‌ಕುಮಾರ್ ಕಲಾ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಡಾ.ರಾಜ್‌ಕುಮಾರ್ ಜನ್ಮದಿನದ ಕಾರ್ಯಕ್ರಮದಲ್ಲಿ ಸಮಾಜ ಸೇವಕ ಕೆ.ರಘುರಾವ್ ವಾಜಪೇಯಿ, ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ನಾಗರಾಜ್ ವಿ.ಬೈರಿ, ಮೈಸೂರು ಮಹಾನಗರಪಾಲಿಕೆ ಗುತ್ತಿಗೆದಾರರ ಸಂಘದ ಅಧ್ಯಕ್ಷ ಉದಯ್‌ಕುಮಾರ್ ಹಾಗೂ ಮೈಸೂರು ಜಿಲ್ಲಾ ಕುಸ್ತಿ ಸಂಘದ ಅಧ್ಯಕ್ಷ ಪೈ.ಎನ್.ಚಂದ್ರಶೇಖರ್ ಅವರಿಗೆ 'ಡಾ.ರಾಜ್ ಕಲಾ ಸೇವಾರತ್ನ' ಪ್ರಶಸ್ತಿ ನೀಡಿ, ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಕರ್ನಾಟಕದಲ್ಲಿ ಡಾ.ರಾಜ್‌ಕುಮಾರ್ ಹೆಸರು ಬಲ್ಲದೇ ಇರುವವರು ಯಾರೂ ಇಲ್ಲ. ಕನ್ನಡ, ಕರ್ನಾಟಕ ಎಲ್ಲಿಯವರೆಗೆ ಇರುತ್ತದೆಯೋ ಅಲ್ಲಿಯವರೆಗೆ ಡಾ. ರಾಜ್‌ಕುಮಾರ್ ಹೆಸರು ಶಾಶ್ವತವಾಗಿರುತ್ತದೆ. ಅವರ ಕುಟುಂಬ ಮೈಸೂರು, ಚಾಮರಾಜನಗರ ಜಿಲ್ಲೆಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದೆ. ಅವರಂತೆ ವೈವಿಧ್ಯಮಯ ಪಾತ್ರ ನಿರ್ವಹಿಸಿದ ನಟರು ಯಾರೂ ಸಿಗುವುದಿಲ್ಲ. ಒಂದು ವೇಳೆ ಅವರು ಗೋಕಾಕ್ ಚಳವಳಿಯಲ್ಲಿ ಭಾಗವಹಿಸದಿದ್ದರೆ ಕನ್ನಡಕ್ಕೆ ಈಗ ಇರುವ ಸ್ಥಾನಮಾನ ಸಿಗುತ್ತಿರಲಿಲ್ಲವೇನೋ ಎಂದರು.

ಇದಕ್ಕೂ ಮುನ್ನ ಡಾ.ರಾಜ್‌ಕುಮಾರ್ ಕಲಾ ಸೇವಾ ಟ್ರಸ್ಟ್ ಗೌರವಾಧ್ಯಕ್ಷ ಡಾ.ವೈ.ಡಿ.ರಾಜಣ್ಣ ಮಾತನಾಡಿ, ಡಾ.ರಾಜ್‌ಕುಮಾರ್ ಕೇವಲ ಅಭಿನಯಕ್ಕೆ ಮಾತ್ರ ಸೀಮಿತವಾಗಿರಲಿಲ್ಲ. ಕೋಟ್ಯಾಂತರ ಜನರ ಹೃದಯದಲ್ಲಿ ನೆಲೆನಿಂತಿದ್ದಾರೆ. ನಡೆ-ನುಡಿ, ವ್ಯಕ್ತಿತ್ವ, ಸರಳತೆ ಹಾಗೂ ದೇಸಿತನದಿಂದ ಅವರು ಜನರ ಮನಸ್ಸನ್ನು ಗೆದ್ದಿದ್ದರು ಎಂದು ತಿಳಿಸಿದರು.

ಭಾರತ ರತ್ನ ನೀಡಿ: ಇದೇ ವೇಳೆ ಡಾ.ರಾಜ್‌ಕುಮಾರ್ ಅವರಿಗೆ ಮರಣೋತ್ತರ 'ಭಾರತ ರತ್ನ' ಪ್ರಶಸ್ತಿ ನೀಡಿ ಎಂದು ಭಿತ್ತಿಪತ್ರ ಪ್ರದರ್ಶಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ.ರಾಜ್‌ಕುಮಾರ್ ಕಲಾ ಸೇವಾ ಟ್ರಸ್ಟ್ ಅಧ್ಯಕ್ಷ ಮೈಸೂರು ಜಯರಾಮ್, ಸದಸ್ಯರಾದ ಸಿದ್ದರಾಜು, ಗಣೇಶ್, ಈಶ್ವರ ಭಟ್, ಭಾಸ್ಕರ್, ಸುರೇಶ್, ಶ್ರುತಿ, ಅನಿತಾ, ಲತಾ ಬಾಲಕೃಷ್ಣ ಇನ್ನಿತರರು ಉಪಸ್ಥಿತರಿದ್ದರು.



ಡಾ.ರಾಜ್‌ಕುಮಾರ್ ಹುಟ್ಟುಹಬ್ಬದ ಅಂಗವಾಗಿ ನಗರ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗದ ಅಧ್ಯಕ್ಷ ಎನ್.ಆರ್.ನಾಗೇಶ್ ಮೈಸೂರಿನ ಡಾ.ರಾಜ್‌ಕುಮಾರ್ ಉದ್ಯಾನವನದಲ್ಲಿರುವ ರಾಜ್‌ಕುಮಾರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ನಗರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಪಂಚಾಯತ್‌ರಾಜ್ ಕಾರ್ಯದರ್ಶಿ ಲೋಕೇಶ್, ಸೇವಾದಳ ಕಾರ್ಯಾಧ್ಯಕ್ಷ ಮೋಹನ್, ಯುವ ಕಾಂಗ್ರೆಸ್ ಮುಖಂಡ ಸುರೇಶ್, ಮಹಾದೇವಸ್ವಾಮಿ, ನಿತೀಶ್‌ಗೌಡ, ಸೋಮು, ಮಂಜುನಾಥ್ ಇನ್ನಿತರರು ಉಪಸ್ಥಿತರಿದ್ದರು.



ವರನಟ ಡಾ.ರಾಜಕುಮಾರ್ ಹುಟ್ಟು ಹಬ್ಬದ ಅಂಗವಾಗಿ ಮಯೂರ ಕನ್ನಡ ಯುವಕರ ಬಳಗದಿಂದ ಚಾಮರಾಜ ಜೋಡಿ ರಸ್ತೆಯಲ್ಲಿರುವ ಡಾ.ರಾಜ್ ಪುತ್ಥಳಿಗೆ ಪೂಜೆ ಸಲ್ಲಿಸಿ, ಸಿಹಿ ವಿತರಿಸಲಾಯಿತು. ಬಳಗದ ಜಿ.ರಾಘವೇಂದ್ರ, ಕಿಶೋರ್ ಕುಮಾರ್, ಎಸ್.ಎನ್.ರಾಜೇಶ್, ಸುಬ್ರಮಣ್ಯ (ಸುಬ್ಬು), ಮಂಜುನಾಥ್, ಚಕ್ರಪಾಣಿ, ಲಕ್ಷ್ಮಣ, ರವಿಚಂದ್ರ, ಮುಸಿರ, ಹರೀಶ್‌ನಾಯ್ಡು, ಕಿರಣ್ ಹಾಗೂ ಇನ್ನಿತರರು ಹಾಜರಿದ್ದರು.

ನಾಳೆ ಮೈಸೂರಿನ ಶಾರದಾದೇವಿನಗರದಲ್ಲಿ ವಲಯ ಕಚೇರಿ-3ರ ಕಟ್ಟಡ ಸಿಎಂ ಸಿದ್ದರಾಮಯ್ಯ ಉದ್ಘಾಟನೆ



ಶಾರದಾದೇವಿ ನಗರದಲ್ಲಿ ಲೋಕಾರ್ಪಣೆಗೆ ಸಿದ್ಧವಾಗಿರುವ ಪಾಲಿಕೆ ವಲಯ-3ರ ಕಚೇರಿಗೆ ಶಾಸಕ ಜಿ.ಟಿ. ದೇವೇಗೌಡರು ಗುರುವಾರ ಭೇಟಿ ನೀಡಿ, ಸ್ಥಳ ಪರಿಶೀಲಿಸಿದರು.

ಮೈಸೂರು, ಏ.24(ಜಿಎ)-ಮೈಸೂರಿನ ಶಾರದಾದೇವಿನಗರದಲ್ಲಿ ಏ.26ರಂದು ಉದ್ಘಾಟನೆಗೊಳ್ಳಲಿರುವ ನಗರಪಾಲಿಕೆ ವಲಯ ಕಚೇರಿ-3ಕ್ಕೆ ಶಾಸಕ ಜಿ.ಟಿ.ದೇವೇಗೌಡರು ಗುರುವಾರ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೂತನ ವಲಯ ಕಚೇರಿಯನ್ನು ಉದ್ಘಾಟಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಜಿ.ಟಿ.ದೇವೇಗೌಡರು ಅಂತಿಮ ಹಂತದ ಸಿದ್ಧತೆ ಪರಿಶೀಲಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರಲ್ಲದೆ ಯಾವುದೇ ತೊಂದರೆ, ಗೊಂದಲವಾಗದಂತೆ ಕಾರ್ಯಕ್ರಮ ನಡೆಯುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟನೆಗೆ ಬಂದಾಗ ಸಾರ್ವಜನಿಕರು ಅಹವಾಲು ಸಲ್ಲಿಸಲು ಮುಂದಾಗಬಹುದೆಂದು ಪ್ರವೇಶ ದ್ವಾರದ ಎಡಕ್ಕೆ ಸಾರ್ವಜನಿಕರು ಕುಳಿತುಕೊಳ್ಳಲು ಶಾಮಿಯಾನ ಹಾಕಲಾಗಿದೆ. ಅದೇ ರೀತಿ ಗಣ್ಯರು ಕುಳಿತುಕೊಳ್ಳಲು ಪಕ್ಕದಲ್ಲಿ ಶಾಮಿಯಾನ ಹಾಕಲಾಗಿದೆ. ಕಚೇರಿಯ ಪ್ರವೇಶದ್ವಾರದಲ್ಲಿ ಟೇಪು ಕತ್ತರಿಸಿದ ಮೇಲೆ ಶಿಲಾಫಲಕ ಲೋಕಾರ್ಪಣೆ ಮಾಡಲಾಗುವುದು. ಸಂವಿಧಾನ ಪೀಠಿಕೆ ಭಾವಚಿತ್ರವನ್ನು ಅನಾವರಣ ಮಾಡಲಿದ್ದಾರೆ. ನಂತರ ಸಭಾಂಗಣದಲ್ಲಿ ಸಿಎಂ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ತಿಳಿಸಲಾಗಿದೆ.

ಶಾಸಕ ಜಿ.ಟಿ.ದೇವೇಗೌಡ ಅವರಿಂದ ಸ್ಥಳ ಪರಿಶೀಲನೆ

ಕಟ್ಟಡ ಉದ್ಘಾಟನೆಗೆ ಎಲ್ಲಾ ಸಿದ್ಧತೆಗಳು ಮುಗಿದಿರುವ ಕುರಿತು ಉಪ ಆಯುಕ್ತರಾದ ಕೆ.ಜೆ.ಸಿಂಧು, ಜಿ.ಎಸ್.ಸೋಮಶೇಖರ್, ವಲಯ ಆಯುಕ್ತ ಎಸ್.ಸತ್ಯಮೂರ್ತಿ ವಿವರಣೆ ನೀಡಿದರು.

ಈ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಶಾಸಕ ಜಿ.ಟಿ.ದೇವೇಗೌಡ, 6.5 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಲಾಗಿದೆ. ಮುಡಾದಲ್ಲಿ ಹೋರಾಟ ಮಾಡಿ ಉತ್ತಮವಾದ ಜಾಗವನ್ನು ಮಂಜೂರು ಮಾಡಿಸಿದ್ದೇನೆ. ಬಾಡಿಗೆ ಕಟ್ಟಡದಲ್ಲಿ ಕಚೇರಿ ಕೆಲಸ ನಡೆಯುತ್ತಿದ್ದಾಗ ಹಲವಾರು ಸಮಸ್ಯೆಗಳಿದ್ದವು. ಆದರೆ, ಈಗ ನೆಮ್ಮದಿಯಿಂದ ಜನರ ಕೆಲಸ ಮಾಡಬಹುದು ಎಂದರು.

ಕಾರ್ಯಕ್ರಮದ ಸಂದರ್ಭದಲ್ಲಿ ಮೈಸೂರು ನಗರ ಮತ್ತು ಚಾಮುಂಡೇಶ್ವರಿ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಿಎಂಗೆ ಪ್ರಸ್ತಾಪ ಸಲ್ಲಿಸಿ, ಹಳೆ ಉಂಡುವಾಡಿ ಯೋಜನೆ ಪೂರ್ಣಕ್ಕೆ ಬಾಕಿ ಅನುದಾನ, ಕಬಿನಿ 3ನೇ ಹಂತದ ಯೋಜನೆಗೆ ಅನುದಾನ, ಮುಡಾ ವ್ಯಾಪ್ತಿಯ ಪ್ರದೇಶಗಳಿಗೆ ಮೂಲಸೌಕರ್ಯಕ್ಕೆ ವಿಶೇಷ ಅನುದಾನ ಸೇರಿದಂತೆ ಇನ್ನಿತರ ಅಭಿವೃದ್ಧಿಗೆ ಮನವಿ ಮಾಡಲಾಗುವುದು ಎಂದು ತಿಳಿಸಿದರು.

ಅಕ್ಷಯ ತೃತೀಯ: ಬೃಹತ್ ಗುರು ರಾಘವೇಂದ್ರರ ರಂಗೋಲಿ ರಚನೆ

ಮೈಸೂರು, ಏ.24(ಎಂಟಿವೈ)- ಮೈಸೂರಿನ 9 ಮಂದಿ ಕಲಾವಿದರ ತಂಡ ಅಕ್ಷಯ ತೃತೀಯ ದಿನದ ಅಂಗವಾಗಿ ಮಂತ್ರಾಲಯದಲ್ಲಿ 40 ಸಾವಿರ ಚದರ ಅಡಿ ಅಳತೆಯ ಗುರುರಾಘವೇಂದ್ರರ ಚಿತ್ರವನ್ನು ರಂಗೋಲಿಯಲ್ಲಿ ರಚಿಸುತ್ತಿರುವುದಾಗಿ ಓಂಕಾರ್ಸ್ ಸಂಸ್ಥೆಯ ಮುಖ್ಯಸ್ಥ ಅಭಿಲಾಷ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ಷಯ ತೃತೀಯ ದಿನದ ಅಂಗವಾಗಿ ಮಂತ್ರಾಲಯದಲ್ಲಿ ಬೃಹತ್ ಗಾತ್ರದ ಗುರು ರಾಘವೇಂದ್ರ ಚಿತ್ರವನ್ನು ರಂಗೋಲಿಯಲ್ಲಿ ರಚಿಸಲಾಗುತ್ತಿದೆ. ಓಂಕಾರ್ಸ್ ಸಂಸ್ಥೆ ನೇತೃತ್ವದಲ್ಲಿ ಏ.29ರಂದು ರಂಗೋಲಿಯಲ್ಲಿ ರಾಘವೇಂದ್ರರ ಚಿತ್ರ ರಚನಾ ಕಾರ್ಯ ಆರಂಭವಾಗಲಿದ್ದು, ಏ.30ರಂದು ಬೆಳಗ್ಗೆ ಭಕ್ತರು ರಂಗೋಲಿ ಚಿತ್ರ ವೀಕ್ಷಿಸಬಹುದು. 40 ಸಾವಿರ ಚದರ ಅಡಿ ವಿಸ್ತೀರ್ಣದಲ್ಲಿ 3 ಸಾವಿರ ಕೆಜಿ ರಂಗೋಲಿ ಬಳಸಿ ಚಿತ್ರ ರಚಿಸಲಾಗುತ್ತಿದೆ ಎಂದರು.

ಈಗಾಗಲೇ ರಂಗೋಲಿ ಚಿತ್ರ ಕಲೆಯಲ್ಲಿ ವಿಶ್ವದಾಖಲೆ ಮಾಡಿರುವ ಕಲಾವಿದ ಪುನೀತ್ ಅವರೊಡನೆ ಸಿ.ಲಕ್ಷ್ಮೀ, ಪಿ.ಆದಿತ್ಯ, ಸಿ.ಸುಪ್ರೀತ್, ಎಸ್.ಸಂಜಯ್, ರವಿಚಂದ್ರನ್, ರಾಘವೇಂದ್ರ ಆರ್.ಅರಳಿಕಟ್ಟೆ, ಮಂಜುನಾಥ್ ಚಿತ್ರ ರಚನೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಶ್ರೀ ಸುಭುದೇಂದ್ರ ತೀರ್ಥರ ಆಶೀರ್ವಾದ ಪಡೆದು ಚಿತ್ರ ರಚಿಸಲಾಗುತ್ತಿದೆ. ಅದಕ್ಕೆ ಬೇಕಾದ ರಂಗೋಲಿ ಹಾಗೂ ಬಣ್ಣವನ್ನು ತೆಗೆದುಕೊಂಡು ಹೋಗಲಾಗುತ್ತಿದೆ. ಅಲ್ಲಿ ಅನುಮತಿ ಪಡೆದು, ಚಿತ್ರ ರಚನೆಗೆ ಬೇಕಾದ ಬ್ಯಾರಿಕೇಡ್ ಭದ್ರತೆ ಕಲ್ಪಿಸಿಕೊಂಡು ಚಿತ್ರ ರಚಿಸಲಾಗುತ್ತಿದೆ ಎಂದರು. ಗೋಷ್ಠಿಯಲ್ಲಿ ಕಲಾವಿದರಾದ ರಾಘವೇಂದ್ರ ಅರಳಿಕಟ್ಟೆ, ಸುಪ್ರೀತ್, ಮಂಜುನಾಥ್ ಇದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

25.04.2025 ಶುಕ್ರವಾರ, ಮಳೆ ನಕ್ಷತ್ರ: ಅಶ್ವಿನಿ 13.04.2025 ರಿಂದ 26.04.2025 ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ, ತಿಥಿ: ದ್ವಾದಶಿ, ನಕ್ಷತ್ರ: ಉಭಾ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಯಕೃತ್ತಿನ ಸಮಸ್ಯೆಗೆ ಚಿಕಿತ್ಸಾ ಶಿಬಿರ, ಕುತ್ತಿಗೆ ಮತ್ತು ಬೆನ್ನು ನೋವಿಗೆ ಆಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಮಕ್ಕಳ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಚರ್ಮರೋಗ ಕುರಿತು ಚಿಕಿತ್ಸೆ ಹಾಗೂ ಪುನಶ್ಚೇತನ (ರೆಜುವಿನೇಷನ್) ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಆಸ್ಪತ್ರೆಯ ಶಾಲಾಕ್ಯತಂತ್ರ ಸ್ನಾತಕೋತ್ತರ ವಿಭಾಗದಿಂದ ನೇತ್ರ, ಕಿವಿ, ಮೂಗು, ಗಂಟಲು ಮತ್ತು ಶಿರೋರೋಗಗಳ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಕಾನೂನು ಮಹಾವಿದ್ಯಾಲಯ, ಕುವೆಂಪುನಗರ, ಬೆಳಗ್ಗೆ 10 ರಿಂದ.

■ **ಭಾರತಿನಂದ ಆರ್.ಎಂ., ರಾಜಪ್ಪ ದಳವಾಯಿ ಬಂಧು-ಮಿತ್ರರು :** ಚಳವಳಿಗಳ ಸಂಗಾತಿ ಮಂಜುಳ ಮೇಡಂ ನೆನಪಿನ ಕಾರ್ಯಕ್ರಮ, ಹಾಡು, ಮಾತು, ಊಟ, ಉಪಸ್ಥಿತರು : ಬರಗೂರು ರಾಮಚಂದ್ರಪ್ಪ, ಸಬಿಹಾ ಭೂಮಿಗೌಡ, ಬಂಜಗೆರೆ ಜಯಪ್ರಕಾಶ್, ಸುನಂದಮ್ಮ, ಸಿ. ಬಸವಲಿಂಗಯ್ಯ, ಎಚ್.ಎಲ್. ಪುಷ್ಪ, ನೇತ್ರ ಕೋಲಾರ, ಎಚ್.ಆರ್. ಸ್ವಾಮಿ, ಮಲ್ಲಿಕಾರ್ಜುನಸ್ವಾಮಿ, ಎಚ್.ಎಸ್. ಅನುಪಮ, ನಾ. ದಿವಾಕರ, ರತಿರಾವ್, ಸುಶೀಲ ಬಸು, ಕಾಳಚನ್ನೇಗೌಡ, ವೆಂ. ವನಜ, ಮಹದೇವಯ್ಯ, ಶಿವಮ್ಮ, ಎಸ್.ಆರ್. ರಮೇಶ್, ಕೆ.ಆರ್. ಸುಮತಿ, ರಾಜೇ ಆರಸ್, ದು. ಸರಸ್ವತಿ, ಪರಶು ಒಡನಾಡಿ, ಸ್ಥಳ: ಕೊಡಗು ಸಹಕಾರ ಸಂಘ, ಜಯಲಕ್ಷ್ಮಿಪುರಂ, ಬೆಳಗ್ಗೆ 10.30 ರಿಂದ.

■ **ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ, ರೆಸ್ಪಾನ್ಸಿಬಲ್ ಸಿಟಿಜನ್ಸ್ ವಾಯ್ಸ್ :** ಕಾಶ್ಮೀರದಲ್ಲಿ ಭಯೋತ್ಪಾದಕರ ಗುಂಡಿಗೆ ಬಲಿಯಾದ ಸಹೋದರರಿಗೆ ನುಡಿ ನಮನ, ಉಪಸ್ಥಿತರು : ಆರೀಫ್ ಹುಸೇನ್, ಎಫ್.ಎಂ. ಕಲೀಂ, ಜಾವಿದ್ ಪಾಷಾ, ಶಿವಣ್ಣ ಎಂ. ಗುಡ್ಡಪ್ಪ, ಕೆ.ಎಸ್. ಶಿವರಾಮು, ರವಿನಂದನ್, ಸ್ಥಳ: ಚಿಕ್ಕಗಡಿಯಾರ ವೃತ್ತ, ದೇವರಾಜ ಮಾರ್ಕೆಟ್, ಬೆಳಗ್ಗೆ 11ಕ್ಕೆ.

■ **ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು :** ಬೆಳಗ್ಗೆ 10ಕ್ಕೆ 'ವಿದ್ಯುತ್-2025' ಸಾಂಸ್ಕೃತಿಕ ಉತ್ಸವ, ಉದ್ಘಾಟನೆ : ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿಯ ಉಪಾಧ್ಯಕ್ಷ ಪ್ರೊ.ಎಸ್.ಆರ್.ನಿರಂಜನ, ಮುಖ್ಯ ಅತಿಥಿಗಳು : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪ ಗೌಡ, ಪಿ. ವಿಶ್ವನಾಥ್, ಕೋಶಾಧಿಕಾರಿ ಶ್ರೀಶೈಲ ರಾಮಣ್ಣನವರ, ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ಸದಾಶಿವೇಗೌಡ, ಸಾಂಸ್ಕೃತಿಕ ಸಮಿತಿ ಅಧ್ಯಕ್ಷ ಡಾ.ಗೌರಿಶಂಕರ್, ಸಂಜೆ 6ರಿಂದ ಸ್ಯಾಂಡಲ್‌ವುಡ್ ನೈಟ್ ಸಂಗೀತ ಸಂಜೆ ಕಾರ್ಯಕ್ರಮ, ಗಾಯಕಿ ಸಂಗೀತ ರವೀಂದ್ರನಾಥ್ ತಂಡದಿಂದ ಗಾಯನ ಕಾರ್ಯಕ್ರಮ, ಸ್ಥಳ: ಕಾಲೇಜು ಆವರಣ.

■ **ನಾಲ್ವಡಿ ಸೋಶಿಯಲ್, ಕಲ್ಚರಲ್ ಅಂಡ್ ಎಜುಕೇಷನಲ್ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶನಾಲಯ, ಬೆಂಗಳೂರು :** ನಾಟಕ ಆಧಾರಿತ ಉಚಿತ ರಂಗ ತರಬೇತಿ ಶಿಬಿರ, ಉದ್ಘಾಟನೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಅಧ್ಯಕ್ಷತೆ : ಕಿರುತೆರೆ ನಟ ಶಿವಾಜಿರಾವ್ ಜಾದವ್, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಬಿ.ಎಂ. ರಾಮಚಂದ್ರ, ಕೃಷ್ಣಮೂರ್ತಿ ತಲಕಾಡು, ದಿನೇಶ್ ಚಮ್ಮಾಳಿಗೆ, ಸ್ಥಳ: ಕಾರಂತರ ರಂಗ ಚಾವಡಿ, ರಂಗಾಯಣ ಆವರಣ, ಸಂಜೆ 5.30ಕ್ಕೆ.

■ **ಬಿಎಸ್‌ಎಸ್ ವಿದ್ಯೋದಯ :** ಭಗಿನಿ ಸಂಗೀತೋತ್ಸವ, ವಿದುಷಿ ಲಕ್ಷ್ಮೀ ನಾಗರಾಜ್ ಮತ್ತು ವಿದುಷಿ ಇಂದು ನಾಗರಾಜ್ ಮತ್ತು ತಂಡದಿಂದ ಗಾಯನ, ಸ್ಥಳ: ಶಾಲಾ ಸಭಾಂಗಣ, ಕೃಷ್ಣಮೂರ್ತಿಪುರಂ, ಸಂಜೆ 6 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧನ - ಶೋಧನ, ಗ್ರಾಮೀಣ ಪರಿಸರದ ಉಪಕರಣಗಳು, ಲೇಖನ : ಡಾ. ಎಂ.ಎನ್. ಚಿಕ್ಕಮಾದು, ಪ್ರಸ್ತುತಿ : ಡಾ. ಮೈಸೂರು ಉಮೇಶ್, 6.40 ಅರಿವಿನ ಶಿಖರ - ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ನಮ್ಮ ಆರೋಗ್ಯ ಅಕಾಲ ಪ್ರೌಢಾವಸ್ಥೆ ಕುರಿತು ಮಕ್ಕಳ ಮತ್ತು ಹದಿಹರೆಯದವರ ಎಂಡೋಕ್ರೈನಾಲಜಿಸ್ಟ್ ಡಾ. ತೃಪ್ತಿ. ಎಸ್ ಅವರೊಂದಿಗೆ ಮಾತುಕತೆ ಮತ್ತು ಡೆಂಟಲ್ ಎಮರ್ಜೆನ್ಸಿಸ್ ಕುರಿತು ಡಾ. ಹೆಚ್.ಪಿ. ಚಂಚಲಾ ಅವರೊಂದಿಗೆ ಮಾತುಕತೆ, ಇವರೊಂದಿಗೆ ಭಾಗವಹಿಸುತ್ತಾರೆ-ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ :ಡಾ.ಕೆ.ಓಮನಕುಟ್ಟಿ - ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ-ಸಂಗೀತ ಸಂಭ್ರಮ ನಾದಲಯ ಸಂಗಮ, ಪ್ರಸ್ತುತಿ : ಹೆಚ್. ಎಲ್. ಶಿವಶಂಕರಸ್ವಾಮಿ

ಮಧ್ಯಾಹ್ನ: 12.35 ದೇವರನಾಮ, 12.45 ಕಾದಂಬರಿ ವಿಹಾರ - ಎಂ.ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್. ಎಸ್., 1.00 ಪ್ರಗತಿ ಪಥ- ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ-ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ: ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ವಾದ್ಯವೃಂದ, ನಿರ್ದೇಶನ - ಹೆಚ್.ಎಲ್. ಶಿವಶಂಕರಸ್ವಾಮಿ, 4.00 ಮಹಿಳಾರಂಗ, ಸಖೀ ಸಂವಾದ -ಅಜ್ಜಿ ಮನೆಯ ನೆನಪು, ಪ್ರಸ್ತುತಿ : ಕೀರ್ತನಾ ಮತ್ತು ಸಹನಾ, 4.30 ವೃತ್ತಿ ಮಾರ್ಗದರ್ಶನ- ಮಂಡ್ಯ ಜಿಲ್ಲೆ ಮೇಲುಕೋಟೆಯಲ್ಲಿರುವ ಭಗವದ್ ರಾಮಾನುಜ ರಾಷ್ಟ್ರೀಯ ಸಂಶೋಧನಾ ಸಂಸತ್‌ನಲ್ಲಿರುವ ಅಧ್ಯಯನ ಮತ್ತು ಸಂಶೋಧನಾ ಅವಕಾಶಗಳು ಕುರಿತು ಕುಲಸಚಿವರಾದ ಕುಮಾರ್. ಎಸ್ ಅವರೊಂದಿಗೆ ಮಾತುಕತೆ, ಇವರೊಂದಿಗೆ ಭಾಗವಹಿಸುತ್ತಾರೆ-ಬೇದ್ರೆ ಮಂಜುನಾಥ್, 6.50 ಕೃಷಿರಂಗ: ಹೈನುಗಾರಿಕೆ ಹಾಗೂ ಸೈಲೇಜ್ ತಯಾರಿಕೆ ಈ ಕುರಿತು ಪಿರಿಯಾಪಟ್ಟಣ ತಾಲ್ಲೂಕು ಕುಂದನಹಳ್ಳಿ ಅಂಚೆ ಹುಣಸವಾಡಿ ಗ್ರಾಮದ ಪಿ.ಡಿ. ರಾಜಾರಾಂ ಪೈ ಅವರೊಂದಿಗೆ ಸಂದರ್ಶನ, ಸಂದರ್ಶಕರು: ಎನ್. ಕೇಶವಮೂರ್ತಿ, 7.45 ಯಾರು ಕಾಣದ ಪ್ರವಾಸಿ ತಾಣ, 8.00 ಸಂಧ್ಯಾರಾಗ-ನಿವೃತ್ತ ಶಿಕ್ಷಕಿ ಆರ್. ವಿಶಾಲಾಕ್ಷಮ್ಮ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಜಾಂಪಣ್ಣ ಆಶೀಹಾಳ್, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ :ಲಾಲ್‌ಗುಡಿ ಶ್ರೀಮತಿ ಬ್ರಹ್ಮಾನಂದಂ ಮತ್ತು ಲಾಲ್‌ಗುಡಿ ರಾಜಲಕ್ಷ್ಮೀ-ಯುಗಳ ವೈಯೋಲಿನ್ ವಾದನ, 10.00 ಜನಪದ ಸಂಗೀತ, 10.30 ಸವಿನೆನಪು-ಹಳೆಯ ಕನ್ನಡ ಚಿತ್ರಗೀತೆಗಳು

ಉಗ್ರರ ದಾಳಿ ಖಂಡಿಸಿ ಮಳವಳ್ಳಿಯಲ್ಲಿ ಸಿಪಿಐ(ಎಂ) ಪ್ರತಿಭಟನೆ



ಉಗ್ರರ ದಾಳಿಯನ್ನು ಖಂಡಿಸಿ ಮಳವಳ್ಳಿಯಲ್ಲಿ ಪ್ರತಿಭಟನೆ ನಡೆಸಲಾಯಿತು.

ಮಳವಳ್ಳಿ,ಏ.24– ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಗುಂಡಿನ ದಾಳಿ ನಡೆಸಿ 26 ಮಂದಿಯನ್ನು ಹತ್ಯೆಗೀಡು ಮಾಡಿರುವ ಭಯೋತ್ಪಾದಕ ಕೃತ್ಯವನ್ನು ಖಂಡಿಸಿ ಹಾಗೂ ಹತ್ಯೆಗೀಡಾದ ಕುಟುಂಬದವರಿಗೆ ಸೂಕ್ತ ಪರಿಹಾರ ನೀಡಬೇಕು ಮತ್ತು ಉಗ್ರರನ್ನ ಮಟ್ಟ ಹಾಕಿ ಕಠಿಣ ಶಿಕ್ಷೆ ನೀಡಬೇಕೆಂದು ಒತ್ತಾಯಿಸಿ ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಎದುರು ಸಿಪಿಐ(ಎಂ) ಬೃಹತ್ ಪ್ರತಿಭಟನೆ ನಡೆಸಿತು.


ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಎನ್.ಎಲ್.ಭರತ್‌ರಾಜ್ ಮಾತನಾಡಿ, ಭಯೋತ್ಪಾದಕರಿಗೆ ಧರ್ಮ, ಜಾತಿ, ಭಾಷೆ ಯಾವುದೆ ಭೇದ ಇರುವುದಿಲ್ಲ. ಇವರಿಗೆ ಮನುಷ್ಯತ್ವ ಸಹ ಇರುವುದಿಲ್ಲ. ಇವರು ವಿಕೃತ ಮನಸ್ಥಿತಿಯ ಮಂದಿ. ಇಂಥವರಿಗೆ ಕಠಿಣ ಶಿಕ್ಷೆ ವಿಧಿಸಬೇಕು. ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುತ್ತೇನೆಂದು ಮೋದಿ ಸರ್ಕಾರ ನೋಟ್ ಬ್ಯಾನ್ ಮಾಡಿದರು ಹಾಗೂ 370ನೇ ಕಲಂನ ರದ್ದು ಮಾಡಿದರು. ಆದರೆ ಭಯೋತ್ಪಾದನೆಯನ್ನು ಹತ್ತಿಕ್ಕಲು ವಿಫಲವಾಗಿದೆ ಎಂದು ಕಿಡಿಕಾರಿದರು.

ಈ ಘಟನೆಯನ್ನು ಧರ್ಮಾಧಾರಿತವಾಗಿ ನೋಡುವುದರ ಮೂಲಕ ರಾಜಕೀಯ ಲಾಭ ಮಾಡಿಕೊಳ್ಳಲು ಹವಣಿಸುತ್ತ ಹತ್ಯೆಗೀಡಾದವರ ಸಮಾಧಿಯ ಮೇಲೆ ರಾಜಕೀಯ ಮಾಡುವ ನೀಚರು ಭಯೋತ್ಪಾದಕರಿಗಿಂತ ಏನು ಕಡಿಮೆ ಇಲ್ಲ. ಪ್ರವಾಸಿಗರ ರಕ್ಷಿಸಲು ಕುದುರೆ ಸವಾರ ಸೈಯದ್ ಆದೀಲ್ ಸಹ ಹತ್ಯೆಗೀಡಾಗಿದ್ದಾರೆ. ಅಲ್ಲದೆ ಪವಿತ್ರ ಎಂಬ ಮಹಿಳೆ ಹೇಳಿಕೆ ಪ್ರಕಾರ ಮುಸ್ಲಿಂ ಸಹೋದರರು ನಮ್ಮ ರಕ್ಷಣೆ ಮಾಡಿದ್ದಾರೆ. ಅವರಿಗೆ ನಾನು ಕೃತಜ್ಞನಾಗಿರುವೆ ಎಂದಿದ್ದಾರೆ. ಹಲವು ಮುಸ್ಲಿಂ ಸಂಘಟನೆಗಳು ಈ ಘಟನೆಯನ್ನು ಉಗ್ರವಾಗಿ ಖಂಡಿಸಿ ಹೋರಾಟ ನಡೆಸುತ್ತಿದ್ದಾರೆ ಎಂದರು.

ನಿವೃತ್ತ ಸೇನಾಧಿಕಾರಿ, ಜೆಡಿ ಬಕ್ಷಿ ಪ್ರಕಾರ ಕಾಶ್ಮೀರದಲ್ಲಿ 1,80,000 ಮಂದಿ ಸೈನಿಕರನ್ನು ಕಡಿಮೆ ಮಾಡಿದ್ದಾರೆ. ಜೊತೆಗೆ ಸೈನಿಕರ ನೇಮಕಾತಿಯು ನಡೆಯುತ್ತಿಲ್ಲ ಎಂದಿದ್ದಾರೆ. ಘಟನೆ ನಡೆದ ಸ್ಥಳದಲ್ಲಿ ನಾಗರಿಕರ ರಕ್ಷಣೆಗೆ ಸೈನ್ಯ ಆಗಲಿ, ಪೊಲೀಸರಾಗಲಿ ಇರಲಿಲ್ಲ ಇಂತಹ ಸೂಕ್ಷ್ಮ ಪ್ರದೇಶದಲ್ಲಿ ಏಕೆ ರಕ್ಷಣೆಗೆ ಇರಲಿಲ್ಲ ಎಂಬುದು ಅನುಮಾನ ಮೂಡಿದೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಸಿಪಿಐ(ಎಂ) ರಾಜ್ಯ ಸಮಿತಿ ಸದಸ್ಯೆ ದೇವಿ, ಜಿಲ್ಲಾ ಸಮಿತಿ ಸದಸ್ಯ ಎನ್.ಲಿಂಗರಾಜಮೂರ್ತಿ, ತಾಲೂಕು ಕಾರ್ಯದರ್ಶಿ ಸುಶೀಲ, ಜಿಲ್ಲಾ ಸಮಿತಿ ಸದಸ್ಯ ಆನಂದ್, ಮುಖಂಡರಾದ ಮಹದೇವಮ್ಮ, ಗುರುಸ್ವಾಮಿ, ತಿಮ್ಮೇಗೌಡ, ಶಿವಕುಮಾರ್, ಪ್ರೇಮ, ಜಯಶೀಲ, ರತ್ನಮ್ಮ, ಶಿವಮಲ್ಲು, ಹನುಮಂತು ಭಾಗವಹಿಸಿದ್ದರು.

ಕಾಶ್ಮೀರದ ಭಯೋತ್ಪಾದನಾ ದಾಳಿಗೆ ಚುಂಚಶ್ರೀ ಖಂಡನೆ



ಮಂಡ್ಯ,ಏ.24– ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದನಾ ಕೃತ್ಯ ಖಂಡನೀಯವಾಗಿದ್ದು, ಇದು ಸಾರ್ವಭೌಮತ್ವದ ಮೇಲೆ ನಡೆದಿರುವ ದಾಳಿಯಾಗಿದೆ ಎಂದು ಮಂಡ್ಯದ ಆದಿಚುಂಚನಗಿರಿ ಮಠದ ಪೀಠಾಧಿಪತಿ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಖಂಡಿಸಿದ್ದಾರೆ. ಈ ಸಂಬಂಧ ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಉಗ್ರರನ್ನು ಮಟ್ಟ ಹಾಕಲು ಸರ್ಕಾರ ಏನೆಲ್ಲಾ ಸಾಧ್ಯವೋ ಅದನ್ನು ಮಾಡಬೇಕು. 26 ಮಂದಿ ಸಾವು ಆಘಾತ ತಂದಿದೆ. ಪ್ರೀತಿಯ ಪಾತ್ರರನ್ನು ಕಳೆದುಕೊಂಡ ಕುಟುಂಬಕ್ಕೆ ಸಂತಾಪ ಸೂಚಿಸಿರುವ ಶ್ರೀಗಳು, ಗಾಯಗೊಂಡವರು ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

ಶ್ರೀರಂಗಪಟ್ಟಣದಲ್ಲಿ ವಕೀಲರ ಪ್ರತಿಭಟನೆ



ಉಗ್ರರ ದಾಳಿಯನ್ನು ಖಂಡಿಸಿ ಶ್ರೀರಂಗಪಟ್ಟಣದಲ್ಲಿ ವಕೀಲರು ಪ್ರತಿಭಟನೆ ನಡೆಸಿದರು.

ಶ್ರೀರಂಗಪಟ್ಟಣ: ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿರುವ ಹತ್ಯೆಯನ್ನು ಖಂಡಿಸಿ ತಾಲೂಕು ವಕೀಲರ ಸಂಘದ ಸದಸ್ಯರು ಗುರುವಾರ ಪ್ರತಿಭಟನೆ ನಡೆಸಿದರು.

ಪಟ್ಟಣದ ನ್ಯಾಯಾಲಯದ ಬಳಿ ಇರುವ ವಕೀಲರ ಕಚೇರಿಯಲ್ಲಿ ಸಂಘದ ಅಧ್ಯಕ್ಷ ಸತ್ಯನಾರಾಯಣ ಅವರ ನೇತೃತ್ವದಲ್ಲಿ ಸಭೆ ಸೇರಿ ಕೇಂದ್ರ ಸರ್ಕಾರ ಕೂಡಲೆ ಉಗ್ರರ ವಿರುದ್ಧ ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು. ಸಭೆ ನಂತರ ನ್ಯಾಯಾಲಯದ ಆವರಣದಿಂದ ಉಗ್ರರ ವಿರುದ್ಧ ಘೋಷಣೆಗಳ ಕೂಗುತ್ತ ಪಾದಯಾತ್ರೆ ನಡೆಸಿದ ವಕೀಲರು, ಅಂಬೇಡ್ಕರ್ ವೃತ್ತದಲ್ಲಿ ಮಾನವ ಸರಪಳಿ ನಡೆಸಿ ಪಾಕಿಸ್ತಾನದ ಉಗ್ರರಿಗೆ ಭಾರತ ಸರ್ಕಾರ ತಕ್ಕ ಉತ್ತರ ನೀಡಿ ಉಗ್ರರಿಂದ ಮೃತಪಟ್ಟವರ ಆತ್ಮಕ್ಕೆ ಶಾಂತಿ ನೀಡಬೇಕು ಎಂದು ಒತ್ತಾಯಿಸಿದರು.

ನಂತರ ತಾಲೂಕು ಕಚೇರಿ ಮುಂಭಾಗ ಧರಣಿ ನಡೆಸಿದರು. ಸಂಘದ ಉಪಾಧ್ಯಕ್ಷ ಮಂಜುನಾಥ್, ಕಾರ್ಯದರ್ಶಿ ಮಹೇಶ್‌ಗೌಡ, ಹಿರಿಯ ವಕೀಲರಾದ ಜಯಸ್ವಾಮಿ, ಕುಮಾರ್, ಎಸ್.ವೆಂಕಟೇಶ್, ಶಿವರಾಮು, ಲಿಂಗರಾಜು, ಸಿ.ಎಸ್.ವೆಂಕಟೇಶ್, ಜಯಕುಮಾರ್, ಪುಲಿಕೇಶಿ, ನಾರಾಯಣಸ್ವಾಮಿ, ಜ್ಯೋತಿ, ಜ್ಞಾನವಿ, ಸೌಮ್ಯ ಪಲ್ಲವಿ, ಪುಷ್ಪಾ, ಸೇರಿದಂತೆ ಇತರರು ಪ್ರತಿಭಟನೆಯಲ್ಲಿದ್ದರು.

ಸಾವಿನಲ್ಲೂ ಒಂದಾದ ಅಕ್ಕ–ತಮ್ಮ

ಹೃದಯಾಘಾತದಿಂದ ಸಾವನ್ನಪ್ಪಿದ ತಮ್ಮನನ್ನು ನೋಡಲು ಬಂದ ಅಕ್ಕನಿಗೂ ಹಾರ್ಟ್ ಅಟ್ಯಾಕ್



ಶಿವಮ್ಮ



ವೆಂಕಟೇಶ್

ಮಳವಳ್ಳಿ, ಏ.24– ಅಕ್ಕ–ತಂಗಿ, ಅಣ್ಣ–ತಮ್ಮ, ತಂದೆ–ತಾಯಿ, ಗಂಡ–ಹೆಂಡತಿ, ಅಕ್ಕ–ತಮ್ಮ ಹೀಗೆ ಸಂಬಂಧಗಳು ಬಿಡಿಸಲಾಗದ ಬಂಧ. ಇತ್ತೀಚಿನ ದಿನಗಳಲ್ಲಿ ಈ ಬಂಧಗಳು, ಸಂಬಂಧಗಳು ಅರ್ಥ ಕಳೆದುಕೊಂಡಿವೆ. ಒಬ್ಬರನ್ನೊಬ್ಬರು ದ್ವೇಷಿಸುವ ಮೂಲಕ ಸಂಬಂಧಗಳು ಹದಗೆಟ್ಟು ಹೋಗಿವೆ.

ಇಲ್ಲೊಂದು ಪ್ರಸಂಗದಲ್ಲಿ ಅಕ್ಕ–ತಮ್ಮ ಸಾವಿನಲ್ಲೂ ಒಂದಾಗಿದ್ದಾರೆ. ಮಂಡ್ಯ ಜಿಲ್ಲೆ, ಮಳವಳ್ಳಿ ತಾಲೂಕು, ಬಿ.ಜಿ.ಪುರ ಹೋಬಳಿಯ ಕೊಡಗಹಳ್ಳಿ ಗ್ರಾಮದಲ್ಲಿ ಅಕ್ಕ–ತಮ್ಮ ಸಾವಿನಲ್ಲೂ ಒಂದಾಗಿದ್ದಾರೆ. ಅಕ್ಕನಿಗೆ ತಮ್ಮನನ್ನು ಕಂಡರೆ ಅಕ್ಕರೆಯಂತೆ. ತಮ್ಮನಿಗೂ ನಮ್ಮಕ್ಕ ಎಂದು ಭಾರಿ ಪ್ರೀತಿ ಇತ್ತಂತೆ.

ಗ್ರಾಮದ ವಾಸಿ ವೆಂಕಟೇಶ್(52) ಹಾಗೂ ಇವರ ಅಕ್ಕ ಕೊಳ್ಳೆಗಾಲದ ಶಿವಮ್ಮ (72) ಸಾವಿನಲ್ಲೂ ಒಂದಾದ ತಮ್ಮ ಮತ್ತು ಅಕ್ಕ ಕೊಳ್ಳೆಗಾಲ ನಗರಸಭೆಯ ತೋಟಗಾರಿಕೆ ವಿಭಾಗದಲ್ಲಿ ಹೊರಗುತ್ತಿಗೆ ನೌಕರರಾಗಿದ್ದ ವೆಂಕಟೇಶ್‌ಗೆ ಎದೆನೋವು ಕಾಣಿಸಿಕೊಂಡಿದೆ. ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗ ಮಧ್ಯೆ ಸಾವನ್ನಪ್ಪಿದ್ದಾರೆ. ವಿಷಯ ತಿಳಿದು ತಮ್ಮನ ಅಂತಿಮ ದರ್ಶನ ಪಡೆಯಲು ಬಂದ ಶಿವಮ್ಮ ತಮ್ಮನ ಶವ ನೋಡುತ್ತಿದ್ದಂತೆಯೇ ಕುಸಿದು ಬಿದ್ದಿದ್ದಾರೆ. ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆ ಸಾವನ್ನಪ್ಪಿದ್ದಾರೆ.

ಮೃತ ವೆಂಕಟೇಶ್‌ಗೆ ಪತ್ನಿ ಪ್ರಮೀಳಾ, ಪುತ್ರ ಅಭಿಷೇಕ್ ಇದ್ದು, ಅತ್ತ ಮೃತ ಅಕ್ಕ ಶಿವಮ್ಮ (ರೇಷ್ಮೆ ಇಲಾಖೆಯ ನಿವೃತ್ತ ನೌಕರರು) ಅವರಿಗೆ ಲಕ್ಷ್ಮಿ, ಸರಸ್ವತಿ ಎಂಬ ಇಬ್ಬರು ವಿವಾಹಿತ ಪುತ್ರಿಯರಿದ್ದು, ಸರ್ಕಾರಿ ಶಾಲಾ ಶಿಕ್ಷಕಿಯರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ವೆಂಕಟೇಶ್ ಅಂತ್ಯಕ್ರಿಯೆ ಕೊಡಗಹಳ್ಳಿಯಲ್ಲಿ ನಡೆಯಿತು. ಸಹೋದರಿ ಶಿವಮ್ಮನವರ ಅಂತ್ಯಕ್ರಿಯೆ ಕೊಳ್ಳೇಗಾಲದಲ್ಲಿ ನಾಳೆ (ಶುಕ್ರವಾರ) ಬೆಳಿಗ್ಗೆ 10.30 ಗಂಟೆಗೆ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮಂಡ್ಯದಲ್ಲಿ ಡಾ.ರಾಜ್ ಜನ್ಮದಿನ ಆಚರಣೆ



ಡಾ.ರಾಜ್ ಜನ್ಮದಿನ ಸಮಾರಂಭದಲ್ಲಿ ಮಾತನಾಡುತ್ತಿರುವ ಡಿಸಿ ಡಾ.ಕುಮಾರ.

ಮಂಡ್ಯ,ಏ.24– ವರನಟ ಡಾ.ರಾಜ್‌ಕುಮಾರ್ ಕುರಿತು ಕನ್ನಡಿಗರಿಗೆ ಹೇಳುವ ಅಗತ್ಯವಿಲ್ಲ. ಅವರ ಸರಳತೆ, ಸಜ್ಜನಿಕೆ ವ್ಯಕ್ತಿತ್ವ ಹಾಗೂ ಅವರ ಕೊಡುಗೆ ಕನ್ನಡಿಗರ ಜನಮಾನಸದಲ್ಲಿ ಸದಾಕಾಲ ಚಿರವಾಗಿದೆ. ಕನ್ನಡ ಚಿತ್ರರಂಗ ಹಾಗೂ ಕಲೆಗೆ ಜೀವನವನ್ನೇ ಮುಡಿಪಾಗಿಟ್ಟವರು ಡಾ.ರಾಜ್‌ಕುಮಾರ್ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಬಣ್ಣಿಸಿದರು.

ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮತ್ತು ಮಹಿಳಾ ಸರ್ಕಾರಿ ಕಾಲೇಜು (ಸ್ವಾಯತ್ತ) ಸಂಯುಕ್ತಾಶ್ರಯದಲ್ಲಿ ವರನಟ ಡಾ.ರಾಜ್‌ಕುಮಾರ್ ಅವರ 97ನೇ ಜನ್ಮದಿನಾಚರಣೆಯನ್ನು ಮಹಿಳಾ ಸರ್ಕಾರಿ ಕಾಲೇಜು (ಸ್ವಾಯತ್ತ) ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೈಹಿಕವಾಗಿ ಡಾ.ರಾಜ್‌ಕುಮಾರ್ ನಮ್ಮನ್ನು ಅಗಲಿದ್ದರೂ ಅವರ ಕೊಡುಗೆಗಳು, ಆದರ್ಶಗಳು ಮೌಲ್ಯ, ವ್ಯಕ್ತಿತ್ವದ ಮೂಲಕ ಜನಮಾನಸದಲ್ಲಿ ನೆಲೆಸಿದ್ದಾರೆ ಎಂದು ಹೇಳಿದರು.

ಮಹಿಳಾ ಸರ್ಕಾರಿ ಕಾಲೇಜಿನ (ಸ್ವಾಯತ್ತ) ಪ್ರಾಂಶುಪಾಲ ಡಾ.ಗುರುರಾಜ್ ಪ್ರಭು ಮಾತನಾಡಿ, ಕನ್ನಡ ನಾಡು ನುಡಿ ಮತ್ತು ಕನ್ನಡ ಚಲನಚಿತ್ರರಂಗದ ಇತಿಹಾಸವನ್ನು ನೋಡಿದರೆ ಡಾ.ರಾಜ್‌ಕುಮಾರ್ ಉತ್ತುಂಗದಲ್ಲಿ ಕಾಣುತ್ತಾರೆ, ಜಗತ್ತಿನ ದೊಡ್ಡ ದೊಡ್ಡ ದೇಶಗಳಲ್ಲಿ ಡಾ.ರಾಜ್‌ಕುಮಾರ್ ಅವರ ಅಭಿಮಾನಿಗಳು ಸಂಘಗಳನ್ನು ಕಟ್ಟಿಕೊಂಡು ಉತ್ತಮ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ, ಅಮೇರಿಕಾದ ಅಕ್ಕ ಸಮ್ಮೇಳನದಲ್ಲಿ ಡಾ.ರಾಜ್‌ಕುಮಾರ್ ಅವರ ಕುರಿತು ವಿಚಾರ ಗೋಷ್ಠಿಗಳನ್ನು ನಡೆಯುತ್ತಿವೆ ಎಂದರು.


ಮಹಿಳಾ ಸರ್ಕಾರಿ ಕಾಲೇಜಿನ ಇತಿಹಾಸ ಪ್ರಾಧ್ಯಾಪಕ ಕಾಂತರಾಜು, ಡಿ ದೇವರಾಜ ಅರಸ್ ಹಿಂದುಳಿದ ವರ್ಗಗಳ ವೇದಿಕೆಯ ಅಧ್ಯಕ್ಷ ಸಂದೇಶ, ಅರಿವು ಬೋಧಿ ಫೌಂಡೇಶನ್ ಅಧ್ಯಕ್ಷ ಗಣೇಶ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಗಾಯಕರಾದ ನಿಶ್ಚಯ್ ಜೈನ್, ಮನ್ಸೂರ್ ಪಾಷಾ ಹಾಗೂ ಕೃಷ್ಣೇಗೌಡ ಅವರು ಡಾ.ರಾಜಕುಮಾರ್ ಅಭಿನಯಿಸಿದ ಚಲನಚಿತ್ರ ಗೀತೆಗಳನ್ನು ಪ್ರಸ್ತುತಪಡಿಸಿದರು. ಕಾರ್ಯಕ್ರಮದಲ್ಲಿ ವಾರ್ತಾಧಿಕಾರಿ ಎಸ್.ಎಚ್.ನಿರ್ಮಲ, ಮಹಿಳಾ ಸರ್ಕಾರಿ ಕಾಲೇಜಿನ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಾದ ಡಾ.ಶಿವರಾಜ್, ಮಹಿಳಾ ಸರ್ಕಾರಿ ಕಾಲೇಜಿನ ಸಾಂಸ್ಕೃತಿಕ ಕಾರ್ಯದರ್ಶಿ ನಿಂಗರಾಜು, ಡಾ.ರಾಜಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ರವೀಂದ್ರ ನಗರಸಭೆ ಮಾಜಿ ಸದಸ್ಯ ಆನಂದ್ ಇನ್ನಿತರರಿದ್ದರು.

ಕಾವೇರಿ ಆರತಿಗೆ 92 ಕೋಟಿ ರೂ. ಅನುದಾನ

ಸಿಎಂ, ಡಿಸಿಎಂ, ಉಸ್ತುವಾರಿ ಸಚಿವರಿಗೆ ಶಾಸಕ ದಿನೇಶ್ ಗೂಳಿಗೌಡ ಅಭಿನಂದನೆ





ಮಂಡ್ಯ: ಕಾವೇರಿ ಮಾತೆಗೆ ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿ ನೆರವೇರಿಸುವ ಸಂಬಂಧ ರಾಜ್ಯ ಸರ್ಕಾರವು ಗುರುವಾರ ನಡೆದ ಸಚಿವ ಸಂಪುಟದಲ್ಲಿ 92 ಕೋಟಿ ರೂಪಾಯಿ ಮೀಸಲಿಟ್ಟಿರುವುದು ಸ್ವಾಗತಾರ್ಹ ಕ್ರಮವಾಗಿದೆ. ಇದಕ್ಕೆ ಕಾರಣೀಕರ್ತರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ ಹಾಗೂ ಶಾಸಕ ರಮೇಶ್ ಬಂಡಿಸಿದ್ದೇಗೌಡ ಅವರನ್ನು ಕಾವೇರಿ ಪ್ರಾಂತ್ಯದ ಮಹಾಜನತೆ ಪರವಾಗಿ ಅಭಿನಂದಿಸುತ್ತೇನೆ ಎಂದು ವಿಧಾನಪರಿಷತ್ ಶಾಸಕರಾದ ದಿನೇಶ್ ಗೂಳಿಗೌಡ ಹೇಳಿದ್ದಾರೆ.

ದೇಶದ ಪುಣ್ಯನದಿಗಳಲ್ಲಿ ಕಾವೇರಿಯೂ ಒಂದು. ಅತ್ಯಂತ ಶ್ರೇಷ್ಠವಾದ ತಾಯಿ ಕಾವೇರಿಗೆ ಪೂಜೆ ಸಲ್ಲಿಸಲು ಈ ಅನುದಾನವನ್ನು ಬಳಸಿಕೊಳ್ಳಲಾಗುತ್ತದೆ. ಅಲ್ಲಿ ಕಾವೇರಿ ಆರತಿಗೆ ಸಂಬಂಧಪಟ್ಟಂತೆ ಎಲ್ಲ ಮೂಲ ಸೌಕರ್ಯವನ್ನು ಕಲ್ಪಿಸಲು ಇಂದಿನ ಸಚಿವ ಸಂಪುಟವು 92 ಕೋಟಿ ರೂಪಾಯಿಗೆ ಅನುಮೋದನೆ ನೀಡಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದ್ದಾರೆ.

ಕಾವೇರಿ ಆರತಿಗಾಗಿ ಮನವಿ ಮಾಡಿದ್ದ ಶಾಸಕರು: ಗಂಗಾರತಿ ಮಾದರಿಯಲ್ಲಿ ಕರ್ನಾಟಕದಲ್ಲಿ ಕಾವೇರಿ ಆರತಿ ಮಾಡುವ ಸಂಬಂಧ ಈ ಹಿಂದೆ ಶಾಸಕರಾದ ರಮೇಶ್ ಬಾಬು ಬಂಡಿಸಿದ್ದೇಗೌಡ ಮತ್ತು ದಿನೇಶ್ ಗೂಳಿಗೌಡ ಅವರು ಸಿಎಂ, ಡಿಸಿಎಂಗೆ ಮನವಿ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು.

ಮೂರನೇ ಪುಟದಿಂದ

ಹಿಂದುಳಿದ ಜಿಲ್ಲೆ ಹಣೆಪಟ್ಟಿ ಕಳಚಲಿದೆ

ಇಲಾಖೆ, ಭಾರೀ, ಸಣ್ಣ ನೀರಾವರಿ, ಇಂಧನ, ಆರೋಗ್ಯ, ಗ್ರಾಮೀಣಾಭಿವೃದ್ಧಿಯಲ್ಲಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆ, ಬುಡಕಟ್ಟು ಹಳ್ಳಿಗಳಿಗೆ ರಸ್ತೆ ನಿರ್ಮಾಣ ಮುಂತಾದ ವಿಷಯಗಳ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗಿದೆ.

ಪರಿಶಿಷ್ಟ ಪಂಗಡದ ಜನರು ವಾಸಿಸುವ ಪ್ರದೇಶಗಳ ಅಭಿವೃದ್ಧಿಗಾಗಿ 203 ಕೋಟಿ, ಮಾನವ–ಆನೆ ಸಂಘರ್ಷ ತಡೆಗೆ ಕಾಡಂಚಿನಲ್ಲಿ ಬ್ಯಾರಿಕೇಡ್ ನಿರ್ಮಾಣಕ್ಕಾಗಿ ಚಾಮರಾಜನಗರ ಜಿಲ್ಲೆಯ 210 ಕೋಟಿ ರೂ., ಕುಡಿಯುವ ನೀರು ಯೋಜನೆಗೆ 215 ಕೋಟಿ ರೂ., ಆರೋಗ್ಯ ಸುಧಾರಣೆಗೆ 228 ಕೋಟಿ, ಕೊಳ್ಳೇಗಾಲದಲ್ಲಿ ಈಗಿರುವ 250 ಹಾಸಿಗೆಗಳ ಉಪ ವಿಭಾಗ ಆಸ್ಪತ್ರೆಯನ್ನು ಜಿಲ್ಲಾ ಮಟ್ಟದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು 85 ಕೋಟಿ ರೂ.ಗೆ ಅನುಮೋದನೆ ನೀಡಲಾಗಿದೆ.

ಹನೂರಿನಲ್ಲಿ ಪ್ರಜಾಸೌಧ ನಿರ್ಮಿಸಲಾಗುವುದು. ಅಲ್ಲದೇ 50 ಹಾಸಿಗೆಗಳ ತಾಲೂಕು ಆಸ್ಪತ್ರೆ ನಿರ್ಮಿಸಲಾಗುವುದು. ಚಾಮರಾಜನಗರದಲ್ಲಿ ಹೊಸ ಪ್ರವಾಸ ಮಂದಿರ, 158 ಕೋಟಿ ವೆಚ್ಚದಲ್ಲಿ ಮಾಲಂಗಿಯಿಂದ ಚಾಮರಾಜನಗರಕ್ಕೆ 2ನೇ ಹಂತದ ಕುಡಿಯುವ ನೀರಿನ ಯೋಜನೆಗೆ ಅನುಮೋದನೆ ನೀಡಲಾಗಿದೆ. ಚಾಮರಾಜನಗರ ಸರ್ಕಾರಿ ವೈದ್ಯಕೀಯ ಕಾಲೇಜು, ಆಸ್ಪತ್ರೆಗೆ 50 ಕೋಟಿ ವೆಚ್ಚದಲ್ಲಿ ಎಂಡೋಕ್ರಾನಾಲಜಿ ಕೇಂದ್ರ, ರಾಷ್ಟ್ರೀಯ ಹೆದ್ದಾರಿ–209ರಲ್ಲಿ ಕೊಳ್ಳೇಗಾಲ ತಾಲೂಕು ಮುಡಿಗುಂಡ ಬಳಿ ಸ್ವರ್ಣಾವತಿ ನದಿಗೆ ಅಡ್ಡಲಾಗಿ 15 ಕೋಟಿ ವೆಚ್ಚದಲ್ಲಿ ಹೊಸ ಸೇತುವೆ ನಿರ್ಮಾಣ, 15 ಕೋಟಿ ವೆಚ್ಚದಲ್ಲಿ ಚಾಮರಾಜನಗರ ಕ್ರೀಡಾಂಗಣ ಅಭಿವೃದ್ಧಿಗೆ ಅನುಮೋದನೆ ನೀಡಲಾಗಿದೆ.

ದುಡ್ಡಿಲ್ಲದಿದ್ದರೆ ಇಷ್ಟು ಯೋಜನೆ ಪ್ರಕಟಿಸಲಾಗುತ್ತಿತ್ತಾ...

ಮಲೆ ಮಹದೇಶ್ವರ ಬೆಟ್ಟ, ಏ.24–ನಮ್ಮ ಸರ್ಕಾರದಲ್ಲಿ ದುಡ್ಡಿಲ್ಲ ಎಂದು ವಿರೋಧ ಪಕ್ಷದವರು ಅಪಪ್ರಚಾರ ಮಾಡುತ್ತಿದ್ದಾರೆ ಎಂದ ಮುಖ್ಯ ಮಂತ್ರಿಗಳು, ನಮ್ಮಲ್ಲಿ ಹಣವಿಲ್ಲದಿದ್ದರೆ 3647 ಕೋಟಿ ರೂ. ಯೋಜನೆಗೆ ಒಂದೇ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗುತ್ತಿತ್ತೇ ಎಂದು ಪ್ರಶ್ನಿಸಿದರು.

ಶಕ್ತಿ ಯೋಜನೆಯ ಫಲವಾಗಿ ಬಸ್ ಗಳಲ್ಲಿ ಒತ್ತಡ ಹೆಚ್ಚಾಗಿದೆ ಎಂದು ತಿಳಿದು ಬಂದಿದೆ ಎಂದ ಅವರು, ಇಂದು 80 ಹೊಸ ಬಸ್‌ಗಳನ್ನು ಬಿಡಲಾಗಿದೆ. ಮತ್ತಷ್ಟು ಬಸ್‌ಗಳ ಖರೀದಿಗೆ ಕ್ರಮ ಕೈಗೊಳ್ಳಲಾಗು ತ್ತದೆ ಎಂದರು. ಬೆಂಗಳೂರು–ಕನಕಪುರ–ಚಾಮರಾಜನಗರ ರೈಲ್ವೆ ಯೋಜನೆಗೆ ಭೂಮಿ ಕೊಡುತ್ತೇವೆ ಹಾಗೂ ಶೇ.50 ರಷ್ಟು ಯೋಜನಾ ವೆಚ್ಚವನ್ನು ಕೊಡಲು ಸಿದ್ಧರಿದ್ದೇವೆ. ಆದರೂ ಕೇಂದ್ರ ಸರ್ಕಾರ ಈ ಯೋಜನೆಯನ್ನು ಕೈಗೆತ್ತಿಕೊಳ್ಳು ತ್ತಿಲ್ಲ ಎಂದು ಆರೋಪಿಸಿದರು.

ಉಗ್ರರ ದಾಳಿಗೆ ಖಂಡನಾ ನಿರ್ಣಯ

ಚಾಮರಾಜನಗರ, ಏ.24 (ಎಸ್‌ಎಸ್) ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ದಾಳಿಯ ವಿರುದ್ಧ ಇಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಖಂಡನಾ ನಿರ್ಣಯ ಕೈಗೊಳ್ಳಲಾಯಿತು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮುಗ್ಧ ನಾಗರಿಕರ ಮೇಲೆ ಉಗ್ರರು ನಡೆಸಿದ ದಾಳಿಯನ್ನು ನಮ್ಮ ಸರ್ಕಾರವು ತೀವ್ರವಾಗಿ ಖಂಡಿಸುತ್ತದೆ. ಎಲ್ಲ ಮೃತರಿಗೆ ರಾಜ್ಯದ ಜನರು ಪರವಾಗಿ ನೋವಿನ ಸಂತಾಪಗಳನ್ನು ಸಲ್ಲಿಸುತ್ತದೆ.

ಉಗ್ರರ ದಾಳಿಗಳು ಮನುಷ್ಯ ಕುಲದ ಮೇಲೆ ನಡೆಸುತ್ತಿರುವ ಭೀಭತ್ಸ ಕೃತ್ಯಗಳು ಎಂದು ತೀರ್ಮಾನಿಸಬೇಕು. ಎಲ್ಲ ರೀತಿಯ ಉಗ್ರವಾದವನ್ನು ಬುಡಸಮೇತ ಕಿತ್ತು ಹಾಕಲು ಇಡೀ ದೇಶ ಒಂದಾಗಿ ನಿಂತು ಶ್ರಮಿಸಬೇಕು. ಈ ಘಟನೆಗೆ ಕಾರಣವಾಗಿರುವ ವೈಫಲ್ಯಗಳ ಕುರಿತು ಸಮರ್ಥವಾಗಿ ಮತ್ತು ಸಮರ್ಪಕವಾಗಿ ತನಿಖೆ ನಡೆಸಬೇಕು ಎಂದು ಆಗ್ರಹಿಸಲು ತೀರ್ಮಾನಿಸಲಾಯಿತು. ಮುಂದೆ ಈ ರೀತಿಯ ಯಾವುದೇ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ನಮ್ಮ ಸರ್ಕಾರವು ರಾಜ್ಯದ ಜನರ ಪರವಾಗಿ ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತದೆ ಎಂಬ ಖಂಡನಾ ನಿರ್ಣಯವನ್ನು ಕೈಗೊಳ್ಳಲಾಯಿತು.

ಪರೋಕ್ಷ ಬೆಂಬಲ

ಚಾಮರಾಜನಗರ ಜಿಲ್ಲೆಯ ಸಿದ್ದಯ್ಯನಪುರ, ಹರದನಹಳ್ಳಿ ಮತ್ತಿತರೆಡೆ ಸುಮಾರು 5 ಸಾವಿರ ಎಕರೆ ಭೂಮಿ ರಾಜವಂಶಸ್ಥರಿಗೆ ಸೇರಿದ್ದು, ಅದನ್ನು ತಮಗೆ ಖಾತೆ ಮಾಡಿಕೊಡಬೇಕೆಂದು ಮೈಸೂರು ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಕೆಲ ದಿನಗಳ ಹಿಂದೆ ಚಾಮರಾಜನಗರ ಜಿಲ್ಲಾಧಿಕಾರಿಗಳಿಗೆ ಅರ್ಜಿ ಸಲ್ಲಿಸಿದ್ದರು ಎಂಬುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ವೈಟ್ ಟ್ಯಾಂಪಿಂಗ್

ಗ್ರಾಮದ ಖಾದಿ ಗ್ರಾಮೋದ್ಯೋಗ ಅಭಿವೃದ್ಧಿಗೆ 40 ಕೋಟಿ ರೂ. ವೆಚ್ಚ ಮಾಡಲು ತೀರ್ಮಾನಿಸಲಾಗಿದ್ದು, ಈ ವರ್ಷ 20 ಕೋಟಿ ಹಾಗೂ ಮುಂದಿನ ವರ್ಷ 20 ಕೋಟಿ ವೆಚ್ಚ ಮಾಡಲಾಗುವುದು ಎಂದು ಸಿಎಂ ತಿಳಿಸಿದರು. ನಂಜನಗೂಡು ತಾಲೂಕು ಹೊಸ ಕೋಟೆಯಲ್ಲಿ 14 ಕೋಟಿ ರೂ. ವೆಚ್ಚದಲ್ಲಿ ಪದವಿ ಪೂರ್ವ ಕಾಲೇಜು, ಕಬಿನಿ ಅಣೆಕಟ್ಟು ದುರಸ್ತಿಗೆ 32 ಕೋಟಿ ರೂ. ಯೋಜನೆ, ದಳವಾಯಿ ಕೆರೆಗೆ 3 ಎಂಎಲ್‌ಡಿ ನೀರು ತುಂಬಿಸಲು 18 ಕೋಟಿ ರೂ. ಯೋಜನೆ, ಸಾಲಿಗ್ರಾಮ ಮತ್ತು ತಗಡೂರಿನಲ್ಲಿ 100 ಹಾಸಿಗೆಗಳ ಸಮುದಾಯ ಆಸ್ಪತ್ರೆ ನಿರ್ಮಾಣಕ್ಕೆ 82 ಕೋಟಿ ರೂ., ಹೆಚ್.ಡಿ.ಕೋಟೆಯಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಪಿಕಪ್ ಕಾಲುವೆ ನಿರ್ಮಾಣ, ಪಿರಿಯಾಪಟ್ಟಣದಲ್ಲಿ 12 ಕೋಟಿ, ಕೆ.ಆರ್.ನಗರ, ಸಾಲಿಗ್ರಾಮ, ಹೊಸ ಅಗ್ರಹಾರ, ಮಿರ್ಲೆ ಏತ ನೀರಾವರಿ ಯೋಜನೆಗೆ 50 ಕೋಟಿ ವೆಚ್ಚ ಮಾಡಲು ತೀರ್ಮಾನಿಸಲಾಗಿದೆ.

ಮುಖಂಡ ಮಿಟ್ಟು ಚಂಗಪ್ಪ ನಿಧನ

ರೆಬೆಲ್ ಸ್ಟಾರ್ ಅಂಬರೀಶ್ ಒಳಗೊಂಡಂತೆ ಅನೇಕ ಕಲಾವಿದರು ಆಗಿಂದಾಗ್ಗೆ ಭೇಟಿ ನೀಡುತ್ತಿದ್ದರು.

ಮತದಾನದ ಜಾಗೃತಿ: ಮಿಟ್ಟು ಚಂಗಪ್ಪ ತಮ್ಮ ಜೀವಿತಾವಧಿಯಲ್ಲಿ ನಡೆದ ಎಲ್ಲಾ 32 ಚುನಾವಣೆಗಳಲ್ಲೂ ಮತಗಟ್ಟೆಗೆ ತೆರಳಿ ಮೊದಲು ಮತ ಚಲಾವಣೆ ಮಾಡುವ ಮೂಲಕ ಮತದಾನದ ಬಗ್ಗೆ ಜಾಗೃತಿ ಮೂಡಿಸುತ್ತಿದ್ದರು.

ಮೈಸೂರು ರೇಸ್ ಕ್ಲಬ್‌ನ ಹಿರಿಯ ಸದಸ್ಯರಾಗಿದ್ದ ಮಿಟ್ಟು ಚಂಗಪ್ಪ ಅವರ ನಿಧನಕ್ಕೆ ಎಂಆರ್‌ಸಿ ಸಂತಾಪ ಸೂಚಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಡಾ. ಜಿ.ಪರಮೇಶ್ವರ್, ದಿನೇಶ್ ಗುಂಡೂರಾವ್, ಕೆ.ಜೆ.ಜಾರ್ಜ್, ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ. ಮಂಥರ್‌ಗೌಡ ಹಾಗೂ ಕೆಪಿಸಿಸಿ ಮತ್ತು ಡಿಸಿಸಿ ಪ್ರಮುಖರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಮಡಿಕೇರಿಯ ಗಾಂಧಿ ಮೈದಾನದಲ್ಲಿ ನಾಳೆ (ಏ.25) ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮಿಟ್ಟು ಚಂಗಪ್ಪ ಅವರ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ ತಿಳಿಸಿದ್ದಾರೆ. ನಂತರ ಸಂಜೆ ವೇಳೆಗೆ ಮಡಿಕೇರಿಯ ಕೊಡವ ಸಮಾಜದ ರುದ್ರಭೂಮಿಯಲ್ಲಿ ಕೊಡವ ಸಂಪ್ರದಾಯದಂತೆ ಅಂತ್ಯಸಂಸ್ಕಾರ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಶ್ರೀಯುತರು ಪತ್ನಿ ಯಶಿಕಾ, ಪುತ್ರಿಯರಾದ ಕಾವ್ಯ, ಕೃತಿ ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ.

ಎಲ್ಲಾ ನಿರ್ಧಾರಗಳಿಗೆ ಸರ್ವಪಕ್ಷಗಳ ಬೆಂಬಲ

ಪಾಲ್ಗೊಂಡಿದ್ದರು. ರಾಜ್ಯಸಭೆಯಲ್ಲಿ ಸದನದ ನಾಯಕ ಜೆ.ಪಿ. ನಡ್ಡಾ, ರಾಜ್ಯಸಭೆಯಲ್ಲಿ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯಲ್ಲಿ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಎನ್‌ಸಿಪಿ–ಎಸ್‌ಪಿಯ ಸುಪ್ರಿಯಾ ಸುಳೆ, ಎನ್‌ಸಿಪಿಯ ಪ್ರಫುಲ್ ಪಟೇಲ್, ಎಐಎಂಐಎಂನ ಅಸಾದುದ್ದೀನ್ ಓವೈಸಿ, ಬಿಜೆಡಿಯ ಸಸ್ಮಿತ್ ಪಾತ್ರಾ, ಟಿಡಿಪಿಯ ಲವು ಶ್ರೀಕೃಷ್ಣ ದೇವ ರಾಯಲು, ಶಿವಸೇನಾದ ಶ್ರೀಕಾಂತ್ ಶಿಂಧೆ, ಆಪ್‌ನ ಸಂಜಯ್ ಸಿಂಗ್, ಟಿಎಂಸಿಯ ಸುದೀಪ್ ಬಂದೋ ಪಾಧ್ಯಾಯ, ಆರ್‌ಜೆಡಿಯ ಪ್ರೇಮ್‌ಚಂದ್ ಗುಪ್ತಾ, ಡಿಎಂಕೆಯ ಟಿ. ಸಿವಾ ಹಾಗೂ ಎಸ್‌ಪಿಯ ರಾವ್ ಗೋಪಾಲ್ ಯಾದವ್ ಸಭೆಯಲ್ಲಿ ಉಪಸ್ಥಿತರಿದ್ದರು. ಸಭೆಯ ಬಳಿಕ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಎಲ್ಲಾ ರಾಜಕೀಯ ಪಕ್ಷಗಳೂ ಒಕ್ಕೊರಲಿನಿಂದ ಖಂಡಿಸಿವೆ. ಭಯೋತ್ಪಾದಕರ ದಾಳಿ ವಿರುದ್ಧ ಸರ್ಕಾರ ಯಾವುದೇ ಕ್ರಮ ಕೈಗೊಳ್ಳುವುದಾದರೂ ಪ್ರತಿಪಕ್ಷ, ಸರ್ಕಾರಕ್ಕೆ ಸಂಪೂರ್ಣ ಬೆಂಬಲ ನೀಡುತ್ತದೆ ಎಂದು ಲೋಕಸಭೆಯಲ್ಲಿ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಜಮ್ಮು ಮತ್ತು ಕಾಶ್ಮೀರದಲ್ಲಿ ಆದಷ್ಟು ಬೇಗ ಶಾಂತಿ ಪುನಃಸ್ಥಾಪಿಸಬೇಕೆಂದು ನಾವು ಬಯಸುತ್ತೇವೆ ಎಂದರು.

ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸದಸ್ಯ ಸಂಜಯ್ ಸಿಂಗ್, ಭಯೋತ್ಪಾದಕ ಶಿಬಿರಗಳನ್ನು ನಾಶಮಾಡಲು ಸರ್ಕಾರ ಕ್ರಮ ಕೈಗೊಳ್ಳುವಂತೆ ಸರ್ವ ಪಕ್ಷಗಳು ಆಗ್ರಹಿಸಿವೆ ಎಂದಿದ್ದಾರೆ.

ಭದ್ರತಾ ವೈಫಲ್ಯದ ಸಾಧ್ಯತೆ ಕುರಿತು ಕೂಡ ಚರ್ಚೆ ನಡೆಸಿದೆವು. ಆದರೆ, ಭಯೋತ್ಪಾದನೆ ವಿರುದ್ಧ ಹೋರಾಡಲು ಸರ್ಕಾರದ ಜೊತೆ ನಿಲ್ಲುತ್ತೇವೆ ಎಂದು ಪ್ರತಿಪಕ್ಷಗಳು ಭರವಸೆ ನೀಡಿವೆ. ಭಯೋತ್ಪಾದನೆ ವಿರುದ್ಧ ಹೋರಾಡಲು ದೇಶ ಸಂಘಟಿತವಾಗಬೇಕು ಎಂದು ತೃಣಮೂಲ ಕಾಂಗ್ರೆಸ್ ಸಂಸದ ಸುದೀಪ್ ಬಂದೋಪಾಧ್ಯಾಯ ಹೇಳಿದ್ದಾರೆ.

ಸರ್ವಪಕ್ಷ ಸಭೆನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಎಲ್ಲಾ ಪಕ್ಷಗಳೂ ಈ ವಿಷಯದ ಬಗ್ಗೆ ತಮ್ಮ ಅಭಿಪ್ರಾಯ ಮತ್ತು ಕಳವಳ ವ್ಯಕ್ತಪಡಿಸಿದ್ದು, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಸರ್ಕಾರದೊಂದಿಗೆ ಒಗ್ಗಟ್ಟಿನಿಂದ ನಿಲ್ಲುತ್ತೇವೆ ಎಂದು ಬೆಂಬಲ ವ್ಯಕ್ತಪಡಿಸಿವೆ ಎಂದರು.

ಪಹಲ್ಗಾಮ್‌ನಲ್ಲಿ ಉಗ್ರರ ಗುಂಡಿಗೆ ಬಲಿಯಾದ ರಾಜ್ಯದ ಮಂಜುನಾಥ್‌ರಾವ್, ಭರತ್ ಭೂಷಣ್ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ



ಭರತ್‌ಭೂಷಣ್ ಅಂತಿಮ ದರ್ಶನ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ.

ಬೆಂಗಳೂರು, ಏ. 24(ಕೆಂಶಿ)– ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ಗುಂಡಿಗೆ ಬಲಿಯಾದ ರಾಜ್ಯದ ಭರತ್ ಭೂಷಣ್ ಹಾಗೂ ಮಂಜುನಾಥ್ ರಾವ್ ಅವರ ಪಾರ್ಥಿವ ಶರೀರಗಳ ಇಂದು ಅವರುಗಳ ಊರಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಇಂದು ಅಂತ್ಯಕ್ರಿಯೆ ನೆರವೇರಿಸಲಾಯಿತು.

ಗುರುವಾರ ಬೆಳಗ್ಗೆ ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತಲುಪಿದ ಭರತ್ ಭೂಷಣ್ ಹಾಗೂ ಮಂಜುನಾಥ್ ಅವರುಗಳ ಪಾರ್ಥಿವ ಶರೀರವನ್ನು ಕುಟುಂಬಸ್ಥರು ಮತ್ತು ಸರ್ಕಾರಿ ಅಧಿಕಾರಿಗಳು ಆಂಬುಲೆನ್ಸ್ ಮೂಲಕ ಬೆಂಗಳೂರು ಮತ್ತೀಕೆರೆ ಮತ್ತು ಶಿವಮೊಗ್ಗದಲ್ಲಿನ ಅವರವರ ನಿವಾಸಕ್ಕೆ ಕೊಂಡೊಯ್ದರು.

ಇದಕ್ಕೂ ಮುನ್ನ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವ ವಿ.ಸೋಮಣ್ಣ, ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಕೇಂದ್ರ ಸಚಿವ ಸದಾನಂದಗೌಡ ಸೇರಿದಂತೆ ಅನೇಕ ಗಣ್ಯರು ಭರತ್ ಭೂಷಣ್ ಮನೆಗೆ ತೆರಳಿ, ಅಂತಿಮ ನಮನ ಸಲ್ಲಿಸಿದರು.

ಶಿವಮೊಗ್ಗಕ್ಕೆ ಕೊಂಡೊಯ್ಯಲಾದ ಮಂಜುನಾಥ್ ರಾವ್ ಪಾರ್ಥಿವ ಶರೀರಕ್ಕೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ, ಸಂಸದ ಬಿ.ವೈ.ರಾಘವೇಂದ್ರ ಹಾಗೂ ಸ್ಥಳೀಯ ಹಿಂದೂ ಸಂಘಟನೆಗಳ ಕಾರ್ಯಕರ್ತರು ಅಂತಿಮ ನಮನ ಸಲ್ಲಿಸಿದರು.

ನಂತರ ಮೆರವಣಿಗೆಯಲ್ಲಿ ಇಬ್ಬರ ಪಾರ್ಥಿವ ಶರೀರವನ್ನು ಅವರ ಕುಟುಂಬಗಳು, ಹಿತೈಷಿಗಳು ಹಾಗೂ ಸಂಬಂಧಿಕರು ಕೊಂಡೊಯ್ದು, ಅವರವರ ವಿಧಿ ವಿಧಾನಗಳೊಂದಿಗೆ, ಮಂಜುನಾಥ್‌ರಾವ್ ಪಾರ್ಥಿವ ಶರೀರದ ಅಂತ್ಯಕ್ರಿಯೆಯನ್ನು ಶಿವಮೊಗ್ಗದ ರೋಟರಿ ಚಿತಾಗಾರದಲ್ಲಿಯೂ, ಭರತ್ ಭೂಷಣ್ ಅವರ ಪಾರ್ಥಿವ ಶರೀರದ ಅಂತಿಮ ವಿಧಿ ವಿಧಾನವನ್ನು ಬೆಂಗಳೂರು ಹೆಬ್ಬಾಳ ಚಿತಾಗಾರದಲ್ಲಿ ನೆರವೇರಿಸಲಾಯಿತು.



ಶಿವಮೊಗ್ಗದಲ್ಲಿ ಮಂಜುನಾಥ ರಾವ್ ಅಂತ್ಯಕ್ರಿಯೆ ನೆರವೇರಿತು.

ಪಾಕ್ ಪ್ರತಿ ಪ್ರತೀಕಾರಕ್ಕೆ ಸಜ್ಜು

ಸಿಂಧೂ ಜಲ ಒಪ್ಪಂದ ರದ್ದು 'ಯುದ್ಧಕ್ಕೆ ಸಮ'

• ಭಾರತೀಯ ವಿಮಾನಗಳಿಗೆ ವಾಯುಪ್ರದೇಶ ಪ್ರವೇಶ ನಿಷಿದ್ಧ • ತನ್ನ ವಾಘಾ ಗಡಿ ಬಂದ್ ಮಾಡಿದ ಪಾಕ್

ಇಸ್ಲಾಮಾಬಾದ್: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಗೆ ಪ್ರತೀಕಾರವಾಗಿ ಭಾರತ 1960ರ ಸಿಂಧೂ ಜಲ ಒಪ್ಪಂದವನ್ನು ರದ್ದುಗೊಳಿಸಿದ್ದು, ಇದನ್ನು ಪಾಕಿಸ್ತಾನ ಗುರುವಾರ ತಿರಸ್ಕರಿಸಿದೆ.

ಭಾರತದ ಪ್ರತೀಕಾರದ ಕ್ರಮಗಳಿಗೆ ದೇಶದ ಪ್ರತಿಕ್ರಿಯೆಯನ್ನು ರೂಪಿಸಲು ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಭದ್ರತಾ ಮಂಡಳಿ ಸಭೆಯ ನಂತರ, ಸಿಂಧೂ ಜಲ ಒಪ್ಪಂದವನ್ನು ರದ್ದುಗೊಳಿಸುವುದರಿಂದ 240 ಮಿಲಿಯನ್ ಪಾಕಿಸ್ತಾನಿಗಳ ಜೀವನಾಡಿಯನ್ನು ನಿರ್ಬಂಧಿಸಿದಂತಾಗುತ್ತದೆ ಎಂದು ಹೇಳಿದೆ. ಪಾಕಿಸ್ತಾನದ ಸಾರ್ವಭೌಮತ್ವ ಮತ್ತು ದೇಶದ ಜನರ ಭದ್ರತೆಗೆ ಯಾವುದೇ ಬೆದರಿಕೆ ಬಂದರೆ ಅದಕ್ಕೆ ಪ್ರತಿಯಾಗಿ ಪ್ರತಿಕಾರ ತೀರಿಸಿಕೊಳ್ಳಲು ಎಲ್ಲಾ ಕ್ಷೇತ್ರಗಳಲ್ಲಿ ದೃಢವಾದ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ. ಭಾರತವು ತನ್ನ ಸಂಕುಚಿತ ರಾಜಕೀಯ ಕಾರ್ಯಸೂಚಿಯನ್ನು ಮುಂದುವರಿಸಲು ಪಹಲ್ಗಾಮ್‌ನಂತಹ ಘಟನೆಗಳಿಗೆ ಪಾಕಿಸ್ತಾನವನ್ನು ದೂಷಿಸುವ ಮೂಲಕ ಸಿನಿಕತನ ಪ್ರದರ್ಶಿಸಿದೆ ಎಂದು ಪಾಕಿಸ್ತಾನ ಪ್ರಧಾನಿ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ. ಸಿಂಧೂ ಜಲ ಒಪ್ಪಂದದ ಪ್ರಕಾರ ಪಾಕಿಸ್ತಾನಕ್ಕೆ ಸೇರಿದ ನೀರಿನ ಹರಿವನ್ನು ನಿಲ್ಲಿಸುವ ಅಥವಾ ತಿರುಗಿಸುವ ಯಾವುದೇ ಪ್ರಯತ್ನ ಮತ್ತು ಕೆಳ ನದಿಪಾತ್ರದ ಹಕ್ಕುಗಳನ್ನು ಕಸಿದುಕೊಳ್ಳುವುದನ್ನು ಯುದ್ಧಕ್ಕೆ ಸಮವೆಂದು ಪರಿಗಣಿಸಲಾಗುತ್ತದೆ ಮತ್ತು ಇದಕ್ಕೆ ಪೂರ್ಣ ಬಲದ ಪ್ರತಿಕ್ರಿಯೆ ನೀಡಲಾಗುತ್ತದೆ ಎಂದು ಹೇಳಿದೆ. ಭಾರತದ ಕ್ರಮಗಳಿಗೆ ಪ್ರತಿಕ್ರಿಯೆಯಾಗಿ ಇಸ್ಲಾಮಾಬಾದ್ ಭಾರತೀಯ ವಿಮಾನಯಾನ ಸಂಸ್ಥೆಗಳಿಗೆ ವಾಯುಪ್ರದೇಶವನ್ನು ನಿರ್ಬಂಧಿಸಿದೆ ಮತ್ತು ವಾಘಾ ಗಡಿಯನ್ನು ಬಂದ್ ಮಾಡಿದೆ.

ಕುರುಬಾರಹಳ್ಳಿ, ಆಲನಹಳ್ಳಿ, ಚೌಡಹಳ್ಳಿ ಭಾಗದ ಜಮೀನಿಗೆ ಎನ್‌ಒಸಿ ನೀಡುವುದಾಗಿ ಹಣ ವಸೂಲಿ

ವಂಚನೆಗೆ ಒಳಗಾಗದಂತೆ ಪ್ರಮೋದಾದೇವಿ ಒಡೆಯರ್ ಸಲಹೆ



ಪ್ರಮೋದಾದೇವಿ

ಮೈಸೂರು, ಏ.24(ಬಿಎಲ್‌ಯು)– ಮೈಸೂರಿನ ಕುರುಬಾರಹಳ್ಳಿ ಸರ್ವೆ ನಂಬರ್ 4, ಆಲನಹಳ್ಳಿ ಸರ್ವೆ ನಂಬರ್ 41 ಹಾಗೂ ಚೌಡಹಳ್ಳಿ ಸರ್ವೆ ನಂಬರ್ 39 ರ ಜಮೀನುಗಳಿಗೆ ಸಂಬಂಧಿಸಿದಂತೆ ನಿರಾಕ್ಷೇಪಣಾ ಪ್ರಮಾಣ ಪತ್ರ (ಎನ್‌ಒಸಿ) ನೀಡಲಾಗುವುದು ಎಂದು ಕೆಲವು ವ್ಯಕ್ತಿಗಳು ಹಣ ವಸೂಲಿ ಮಾಡುತ್ತಿದ್ದು, ಇದನ್ನು ಯಾರು ನಂಬಬಾರದು ಎಂದು ಮೈಸೂರು ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್ ಪರವಾಗಿ ಎಂ.ಲಕ್ಷ್ಮಿನಾರಾಯಣ ಸಲಹೆ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಜಮೀನುಗಳಿಗೆ ಸಂಬಂಧಿಸಿದಂತೆ ಎನ್‌ಒಸಿ ನೀಡಲಾಗುವುದು ಎಂದು ತಪ್ಪಾಗಿ ಬಿಂಬಿಸಿ ಸಾರ್ವಜನಿಕರನ್ನು ದಾರಿ ತಪ್ಪಿಸುತ್ತಿದ್ದಾರೆ ಎಂದು ದೂರಿದ್ದಾರೆ.

ಎನ್‌ಒಸಿ ನೀಡಲು ನಾವು ಯಾರಿಗೂ ಹಕ್ಕು ನೀಡಿಲ್ಲ. ಎನ್‌ಒಸಿ ನೀಡಲಾಗುತ್ತದೆ ಎಂಬ ಮಾತು ನಂಬಿ ಯಾರೂ ಹಣ ನೀಡಬಾರದು. ಇಂತಹ ವಂಚನೆಗಳಿಗೆ ಯಾರೂ ಒಳಗಾಗಬಾರದು ಎಂದು ಸಲಹೆ ನೀಡಿದ್ದಾರೆ. ಕುರುಬಾರಹಳ್ಳಿ, ಆಲನಹಳ್ಳಿ ಹಾಗೂ ಚೌಡಹಳ್ಳಿಯ ಜಮೀನಿಗೆ ಸಂಬಂಧಿಸಿದಂತೆ ಎನ್‌ಒಸಿ ವಿತರಣೆ ನೀಡುವುದು ಕಾನೂನುಬಾಹಿರ ಹಾಗೂ ವಂಚನೆಯ ಕೃತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಯಾರೂ ಇದನ್ನು ನಂಬಿ ಹಣ ಕಳೆದುಕೊಳ್ಳಬಾರದು ಎಂದು ಪುನರುಚ್ಚರಿಸಿದ್ದಾರೆ. ಜಮೀನುಗಳಿಗೆ ಎನ್‌ಒಸಿ ನೀಡುವ ವಂಚನೆ ಕೃತ್ಯದಲ್ಲಿ ಭಾಗಿಯಾಗಿರುವವರ ವಿರುದ್ಧ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಲಕ್ಷ್ಮಿನಾರಾಯಣ ಎಚ್ಚರಿಸಿದ್ದಾರೆ.

ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ಪೈಶಾಚಿಕ ದಾಳಿ ಖಂಡಿಸಿ

ನ್ಯಾಯಾಲಯದ ಕಲಾಪದಿಂದ ಹೊರಗುಳಿದು ವಕೀಲರ ಪ್ರತಿಭಟನೆ



ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ದಾಳಿ ಖಂಡಿಸಿ ಮೈಸೂರಲ್ಲಿ ವಕೀಲರು ಗುರುವಾರ ಪ್ರತಿಭಟನೆ ನಡೆಸಿದರು.

ಮೈಸೂರು, ಏ.24(ಎಂಟಿವೈ)– ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ದಾಳಿ ಖಂಡಿಸಿ ಗುರುವಾರ ಮೈಸೂರಲ್ಲಿ ವಕೀಲರು ಕಲಾಪದಿಂದ ದೂರ ಉಳಿದು ಪ್ರತಿಭಟನೆ ನಡೆಸಿದರು.

ಮೈಸೂರಿನ ನ್ಯಾಯಾಲಯ ಆವರಣದಲ್ಲಿರುವ ಮೈಸೂರು ವಕೀಲರ ಸಂಘದ ಸಭೆಯಲ್ಲಿ ತುರ್ತು ಸಭೆ ನಡೆಸಿದ ನಂತರ ಕಾಶ್ಮೀರದಲ್ಲಿ ಉಗ್ರರು ನಡೆಸಿದ ಹತ್ಯಾಕಾಂಡ ಖಂಡಿಸಿ ಕೋರ್ಟ್ ಮುಂಭಾಗವಿರುವ ಗಾಂಧಿ ಪುತ್ಥಳಿ ಎದುರು ಪ್ರತಿಭಟನೆ ನಡೆಸಿದರು. ಜಮ್ಮು–ಕಾಶ್ಮೀರದಲ್ಲಿ ಉಗ್ರರ ಉಪಟಳಕ್ಕೆ ಶಾಶ್ವತ ಕಡಿವಾಣ ಹಾಕಬೇಕು. ಅಮಾಯಕರನ್ನು ಬಲಿ ಪಡೆದ ಉಗ್ರರನ್ನು ಹೊಡೆದುರುಳಿಸಬೇಕು.

ಇದೇ ವೇಳೆ ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್ ಮಾತನಾಡಿ, ಉಗ್ರಾಮಿಗಳು ಹಿಂದೂಗಳನ್ನು ಗುರುತು ಮಾಡಿ ಕಗ್ಗೊಲೆ ಮಾಡಿದ್ದಾರೆ. ಬಟ್ಟೆ ಬಿಚ್ಚಿಸಿ ಹಿಂದೂ ಎಂದು ಖಚಿತಪಡಿಸಿಕೊಂಡು ಹತ್ಯೆ ಮಾಡಿದ್ದಾರೆ. ಇದು ಅಮಾನವೀಯ, ಖಂಡನೀಯ. ದೇಶದಲ್ಲಿ ಹಿಂದೂಗಳಿಗೆ ಅಭದ್ರತೆ ಕಾಡುತ್ತಿದೆ. ಬಟ್ಟೆ ಬಿಚ್ಚಿ ನೋಡಿದವರು ಒಕ್ಕಲಿಗ, ಲಿಂಗಾಯತ ಎಂದು ನೋಡಿಲ್ಲ. ಹಿಂದೂ ಎಂಬುದಷ್ಟೇ, ಆತ ಮುಸಲ್ಮಾನ ಅಲ್ಲ ಎಂಬುದನ್ನಷ್ಟೇ ನೋಡಿದ್ದಾರೆ. ಇದನ್ನು ಸರ್ಕಾರಗಳು ಅರ್ಥ ಮಾಡಿಕೊಂಡು ಜಾತಿ ಜಾತಿಗಳ ನಡುವೆ ಎತ್ತಿಕಟ್ಟುವ ಕೆಲಸ ಬಿಡಬೇಕು. ಇಂದು ಜಮ್ಮು–ಕಾಶ್ಮೀರದಲ್ಲಿ ಆಗಿದೆ. ಮೊನ್ನೆ ಪಶ್ಚಿಮಬಂಗಾಳದಲ್ಲಿ ಆಗಿದೆ. ಮುಂದೆ ಮೈಸೂರಿನಲ್ಲೂ ಆಗಬಹುದು. ಈಗಲಾದರೂ ಎಚ್ಚೆತ್ತುಕೊಳ್ಳದಿದ್ದರೆ ಸಮಸ್ಯೆ ಕಟ್ಟಿಟ್ಟಬುತ್ತಿ ಹಿಂದೂಗಳು ಕುಲವೆಂದು ಬಡಿದಾಡುವುದು ಬಿಟ್ಟು ಒಗ್ಗಟ್ಟಾಗಬೇಕಿದೆ ಎಂದರು.

ಪ್ರಧಾನ ಕಾರ್ಯದರ್ಶಿ ಎ.ಜೆ. ಸುಧೀರ್ ಮಾತನಾಡಿ, ಉಗ್ರಾದಿಗಳ ನಡೆ ಖಂಡಿಸಿ ಮೃತರ ಆತ್ಮಕ್ಕೆ ಶ್ರದ್ಧಾಂಜಲಿ ಕೋರಿದ್ದೇವೆ. ನ್ಯಾಯಾಲಯ ಕಲಾಪದಿಂದ ಹೊರಗುಳಿದು ಕೇಂದ್ರ ಸರ್ಕಾರಕ್ಕೆ ಬೆಂಬಲ ಸೂಚಿಸಿದ್ದೇವೆ. ಕೇಂದ್ರ ಈ ಕೂಡಲೇ ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಎಲ್ಲಾ ಉಗ್ರರ ಸದೆ ಬಡಿಯಬೇಕು. ಭಾರತದಿಂದ ಅವರನ್ನು ಓಡಿಸಿ ಉಗ್ರಾಮಿ ಪಾಕ್ ವಿರುದ್ಧ ಯುದ್ಧ ಸಾರಿ ಪಾಠ ಕಲಿಸಬೇಕು. ಇದರಲ್ಲಿ ಯಾವುದೇ ರಾಜಕೀಯ ಬೆರೆಸದೇ ಸರ್ಕಾರ ಕೈಗೊಂಡ ನಿರ್ಣಯವನ್ನು ಎಲ್ಲರೂ ಒಪ್ಪಿಕೊಳ್ಳಬೇಕು. ಉಗ್ರರ ಕೃತ್ಯವನ್ನು ಸಂಘ ಖಂಡಿಸಲಿದೆ ಎಂದರು.

ಪ್ರತಿಭಟನೆಯಲ್ಲಿ ಉಪಾಧ್ಯಕ್ಷ ಎಂ.ವಿ. ಚಂದ್ರಶೇಖರ್, ಜಂಟಿ ಕಾರ್ಯದರ್ಶಿ ಚರಣ್‌ರಾಜ್, ಮಹಿಳಾ ಜಂಟಿ ಕಾರ್ಯದರ್ಶಿ ವಿನೋದ, ಖಜಾಂಚಿ ಭರತ್, ಹಿರಿಯ ವಕೀಲ ಎಂ.ಶಿವಣ್ಣ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಭೂಮಿ ಪರಿಹಾರ ಕಲ್ಪಿಸುವಲ್ಲಿ ಮುಡಾದಿಂದ ವಂಚನೆ ಆರೋಪ

ಕುಟುಂಬವೊಂದರ ನಾಲ್ವರಿಂದ ನ್ಯಾ.ದೇಸಾಯಿ ಆಯೋಗಕ್ಕೆ ದೂರು ಸಲ್ಲಿಕೆ

ಮೈಸೂರು, ಏ.24–ಮೈಸೂರಿನ ದೇವನೂರು ಸರ್ವೆ ನಂ.91ರಲ್ಲಿ ಸಿಐಟಿಬಿ ವಶಪಡಿಸಿಕೊಂಡಿದ್ದ ಭೂಮಿಗೆ ನಮ್ಮ ಪಾಲಿನ ಪರಿಹಾರವನ್ನು ಮುಡಾದಿಂದ ಬೇರೆಯವರಿಗೆ ನೀಡುವ ಮೂಲಕ ಮೋಸ ಮಾಡಲಾಗಿದೆ ಎಂದು ಕುಟುಂಬವೊಂದರ ನಾಲ್ವರು ನ್ಯಾಯಮೂರ್ತಿ ಪಿ.ಎನ್.ದೇಸಾಯಿ ಆಯೋಗಕ್ಕೆ ದೂರು ಸಲ್ಲಿಸಿದ್ದಾರೆ.

ಗಾಂಧಿನಗರ ನಿವಾಸಿಗಳಾದ ದಿವಂಗತ ಬಿ.ಸಿದ್ದಯ್ಯ ಎಂಬುವರ ವಾರಸುದಾರರಾದ ಲೋಕೇಶ್ವರಿ, ಕರುಣಾನಿಧಿ, ಪೊನ್ನಪ್ಪ ಹೇಮಾವತಿ ಎಂಬುವರು ದೂರು ಸಲ್ಲಿಸಿದ್ದು, ತಮ್ಮ ತಾತ ಚಕ್ರ ಬೋರಯ್ಯ ಅವರಿಗೆ ಸೇರಿದ ದೇವನೂರು ಸರ್ವೆ ನಂ.91ರಲ್ಲಿನ 2 ಎಕರೆ 25 ಗುಂಟೆ ಭೂಮಿಯನ್ನು ಈಸ್ಟ್ ಆಫ್ ಎನ್.ಆರ್. ಮೊಹಲ್ಲಾ ಬಡಾವಣೆ ನಿರ್ಮಾಣಕ್ಕಾಗಿ ಸಿಐಟಿಬಿ (ಇಂದಿನ ಮುಡಾ) 1961ರಲ್ಲಿ ವಶಪಡಿಸಿಕೊಂಡಿತ್ತು. ಈ ಭೂಮಿಯನ್ನು 1991ರಲ್ಲಿ ಅಂದಿನ ತಹಶೀಲ್ದಾರರು ಚಕ್ರಬೋರಯ್ಯ ಮಕ್ಕಳಾದ ಬಿ.ಸಿದ್ದಯ್ಯ, ಬಿ.ಮಹದೇವ್ರ, ಬಿ.ಬಸವ ರಾಜು, ಬಿ.ಸಿದ್ದು ಮತ್ತು ಬಿ.ಗಣೇಶ್ ಅವರಿಗೆ ಜಂಟಿಯಾಗಿ ಮರು ಮಂಜೂರಾತಿ ಮಾಡಿದ್ದರು ಎಂದು ದೂರಿನಲ್ಲಿ ತಿಳಿಸಲಾಗಿದೆ.

ಈ ನಡುವೆ ಬಿ.ಸಿದ್ದಯ್ಯನವರ ವಾರಸುದಾರರಾದ ನಮ್ಮನ್ನು ಹೊರತುಪಡಿಸಿ ಉಳಿದ ನಾಲ್ವರು ವಾರಸುದಾರರಿಂದ ಜಿಪಿಎ ಪಡೆದ ಎಂ.ಬಸವರಾಜು ಮತ್ತು ವಿ.ಸತೀಶ್ ಅವರುಗಳು ನಮ್ಮನ್ನು ಮರೆಮಾಚಿ, ದಿನೇಶ್ ಕುಮಾರ್ ಮುಡಾ ಆಯುಕ್ತರಾಗಿದ್ದ ವೇಳೆ ವಿಜಯನಗರ 1, 3 ಮತ್ತು 4ನೇ ಹಂತಗಳಲ್ಲಿ ಒಟ್ಟು 28,568 ಚದರ ಅಡಿ ಇರುವ 12 ನಿವೇಶನಗಳನ್ನು ಪರಿಹಾರವಾಗಿ ಪಡೆದಿದ್ದಾರೆ. ಬಿ.ಸಿದ್ದಯ್ಯ ವಾರಸುದಾರರಾದ ನಮಗೆ ಸೇರಬೇಕಾದ 21 ಗುಂಟೆ ಭೂಮಿಗೆ ಸಂಬಂಧಿಸಿದ ಪರಿಹಾರವನ್ನು ನೀಡದೇ ಮೋಸ ಮಾಡಲಾಗಿದೆ ಎಂದು ತಮ್ಮ ದೂರಿನಲ್ಲಿ ತಿಳಿಸಿದ್ದಾರೆ.

ಮೈಸೂರಲ್ಲಿ ನೂತನ ಸುಮಂಗಲಿ ಸಿಲ್ಕ್ಸ್ ಸ್ಟೋರ್ ಉದ್ಘಾಟನೆ...



ಮೈಸೂರಿನ ಹರ್ಷ ರಸ್ತೆಯಲ್ಲಿ ಆರಂಭಗೊಂಡಿರುವ ನೂತನ ಸುಮಂಗಲಿ ಸಿಲ್ಕ್ಸ್–ದಿ ಫ್ಯಾಮಿಲಿ ಸ್ಟೋರ್ಸ್ ಅನ್ನು ಚಿತ್ರನಟಿ ಮಿಲನ ನಾಗರಾಜ್ ಉದ್ಘಾಟಿಸಿದರು. ಈ ವೇಳೆ ಸುಮಂಗಲಿ ಸಿಲ್ಕ್ಸ್‌ನ ಮಾಲೀಕರು ಉಪಸ್ಥಿತರಿದ್ದರು.

ಪಹಲ್ಗಾಮ್ ಹತ್ಯಾಕಾಂಡದಲ್ಲಿ ಬಲಿಯಾದ ಪ್ರವಾಸಿಗರಿಗೆ ಬಿಜೆಪಿ, ಬ್ರಾಹ್ಮಣ ಯುವ ವೇದಿಕೆಯಿಂದ ಶ್ರದ್ಧಾಂಜಲಿ



ಜಮ್ಮು–ಕಾಶ್ಮೀರದ ಪಹಲ್ಗಾಮ್ ಹತ್ಯಾಕಾಂಡದಲ್ಲಿ ಬಲಿಯಾದ ಪ್ರವಾಸಿಗರಿಗೆ ಎನ್.ಆರ್. ವಿಧಾನ ಸಭಾ ಕ್ಷೇತ್ರದ ಬಿಜೆಪಿ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಮೈಸೂರು, ಏ.24(ಎಂಕೆ)– ಜಮ್ಮು–ಕಾಶ್ಮೀರದಲ್ಲಿ ಉಗ್ರರ ದಾಳಿಯಲ್ಲಿ ಮೃತಪಟ್ಟ ಪ್ರವಾಸಿಗರಿಗೆ ಮೊಂಬತ್ತಿ ಬೆಳಗಿ, ಮೌನ ಮೆರವಣಿಗೆ ಮೂಲಕ ನರಸಿಂಹರಾಜ ವಿಧಾನ ಸಭಾ ಕ್ಷೇತ್ರದ ಬಿಜೆಪಿ ವತಿಯಿಂದ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರೆ, ಸಾಮೂಹಿಕ ಶಾಂತಿ ಮಂತ್ರ ಜಪಿಸುವ ಮೂಲಕ ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಗಾಯತ್ರಿಪುರಂ ಬಸ್ ನಿಲ್ದಾಣದ (ಗಾಯಿತ್ರಿಪುರಂ ಸೇತುವೆ ವೃತ್ತ) ಬಳಿ ಜಮಾವಣೆಗೊಂಡ ಎನ್.ಆರ್.ಕ್ಷೇತ್ರದ ಬಿಜೆಪಿ ಮುಖಂಡರು, ಕಾರ್ಯಕರ್ತರು ಕ್ಯಾಂಡಲ್ ಲೈಟ್ ಬೆಳಗಿಸಿ, ಎಸ್‌ಪಿ ಕಚೇರಿ ಎದುರಿನ(ಕಿತ್ತೂರು ರಾಣಿ ಚೆನ್ನಮ್ಮ ವೃತ್ತ)ವೃತ್ತದವರೆಗೆ ಮೌನ ಮೆರವಣಿಗೆ ನಡೆಸಿದರು. ಹಾಗೆಯೇ ಉಗ್ರರ ಪೈಶಾಚಿಕ ಕೃತ್ಯವನ್ನು ತೀವ್ರವಾಗಿ ಖಂಡಿಸಿದರು.

ನಂತರ ಮಾಜಿ ಮೇಯರ್ ಸಂದೇಶ್ ಸ್ವಾಮಿ ಮಾತನಾಡಿ, ಉಗ್ರರ ಅಟ್ಟಹಾಸಕ್ಕೆ ಹಿಂದೂಗಳು ಬಲಿಯಾಗಲು ಅಲ್ಲಿನ ರಾಜ್ಯ ಸರ್ಕಾರದ ಭದ್ರತಾ ಲೋಪವೇ ಕಾರಣ. ಜಮ್ಮು–ಕಾಶ್ಮಿರದಲ್ಲಿ 370ನೇ ವಿಧಿ ರದ್ದಾದ ಮೇಲೆ ಇಲ್ಲಿನ ಸುಂದರ ಪ್ರವಾಸಿ ತಾಣಗಳನ್ನು ವೀಕ್ಷಿಸಲು ದೇಶ–ವಿದೇಶದ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದಾರೆ. ಹೀಗಿರುವಾಗ ಅಲ್ಲಿನ ರಾಜ್ಯ ಸರ್ಕಾರ ಪ್ರವಾಸಿಗರ ಹಿತರಕ್ಷಣೆಗಾಗಿ ಪೊಲೀಸರನ್ನು ನಿಯೋಜಿಸಬೇಕಿತ್ತು. ಯಾವುದೇ ಭದ್ರತೆ ಒದಗಿಸದ ಕಾರಣ ಅಮಾಯಕ ಜೀವಗಳು ಬಲಿಯಾಗಬೇಕಾಯಿತು ಎಂದು ವಿಷಾಧಿಸಿದರಲ್ಲದೆ ಕೇಂದ್ರ ಸರ್ಕಾರ ಉಗ್ರರ ನಿರ್ನಾಮಕ್ಕೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಬಿಜೆಪಿ ಮುಖಂಡರಾದ ಹೆಚ್.ಜಿ.ಗಿರಿಧರ, ಮಂಜು, ಪದ್ಮನಾಭ, ಮುರುಳಿಧರ, ರೇಣುಕಾರಾಜು, ಜೋಗಿ ಮಂಜು, ನವೀನ್ ರಾಜು, ಶಾಲಿನಿ, ಕವಿತಾ ಸಿಂಗ್, ಲಕ್ಷ್ಮಣ್, ಶಿವಾನಂದರಾವ್, ನಾರಾಯಣ ಲೋಲಪ್ಪ ಮತ್ತಿತರರಿದ್ದರು.

ಶಾಂತಿಮಂತ್ರ ಜಪಿಸಿ ಶ್ರದ್ಧಾಂಜಲಿ: ಕಾಶ್ಮೀರದ ಪಹಲ್ಗಾಮ್ ಬಳಿ ಉಗ್ರರ ಅಟ್ಟಹಾಸಕ್ಕೆ ಪ್ರಾಣ ತೆತ್ತ ಪ್ರವಾಸಿಗರ ಆತ್ಮಕ್ಕೆ ಶಾಂತಿ ಕೋರಿ ಮೈಸೂರು ನಗರ ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಪದಾಧಿಕಾರಿಗಳು ಗುರುವಾರ ಸಂಜೆ ನಗರದ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಹೊಯ್ಸಳ ಕರ್ನಾಟಕ ಸಂಘದ ಆವರಣದಲ್ಲಿ ಸಾಮೂಹಿಕ ಶಾಂತಿಮಂತ್ರ ಜಪಿಸಿ ಉಗ್ರರ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಪ್ರವಾಸಿಗರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.

ವೆಂಗೀಪುರ ಮಠದ ಇಳೈ ಸ್ವಾಮೀಜಿ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಪ್ರತಿನಿಧಿ ಡಾ.ಲಕ್ಷ್ಮೀದೇವಿ, ಗ್ರಾಮಾಂತರ ಅಧ್ಯಕ್ಷ ಗೋಪಾಲ್ ರಾವ್, ಹಿರಿಯ ಸಮಾಜ ಸೇವಕ ಕೆ.ರಘುರಾಮ್ ವಾಜಪೇಯಿ, ಹೊಯ್ಸಳ ಕರ್ನಾಟಕ ಸಂಘದ ಅಧ್ಯಕ್ಷ ಕೆ.ಆರ್. ಸತ್ಯನಾರಾಯಣ್, ನಗರಪಾಲಿಕೆ ಮಾಜಿ ಸದಸ್ಯ ಮ.ವಿ.ರಾಮಪ್ರಸಾದ್, ಎಂ.ಡಿ. ಪಾರ್ಥಸಾರಥಿ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್ ಕುಮಾರ್, ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಅಧ್ಯಕ್ಷ ಹೆಚ್.ಎನ್.ಶ್ರೀಧರಮೂರ್ತಿ, ವಿದ್ವಾನ್ ಕೃಷ್ಣಮೂರ್ತಿ, ವಿಕ್ರಂ ಅಯ್ಯಂಗಾರ್, ಅಜಯ್ ಶಾಸ್ತ್ರಿ, ಟಿ.ಎಸ್ ಅರುಣ್ ಮತ್ತಿತರರಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣದ ಲೋಕಾಯುಕ್ತ ತನಿಖೆ ಪುನರಾರಂಭ

ಮೈಸೂರು, ಏ.24(ಬಿಎಲ್ ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣದ ಬಗ್ಗೆ ಮೈಸೂರು ಲೋಕಾಯುಕ್ತ ಎಸ್ಪಿ ಟಿ.ಜೆ.ಉದೇಶ್ ಅವರು ತನಿಖೆ ಪುನರಾರಂಭಗೊಳಿಸಿದ್ದಾರೆ.

ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣದ ಬಗ್ಗೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಟಿ.ಜೆ. ಉದೇಶ್ ಅವರು ಮಧ್ಯಂತರ ವರದಿ ಸಲ್ಲಿಸಿದ್ದರು. ಆದರೆ ಮತ್ತಷ್ಟು ತನಿಖೆ ನಡೆಸಬೇಕಿರುವ ಹಿನ್ನೆಲೆಯಲ್ಲಿ ಸೆಕ್ಷನ್ 173 (8) ಸಿಆರ್ ಪಿಸಿ ಪ್ರಕಾರ ಅನುಮತಿ ನೀಡಬೇಕೆಂದು ನ್ಯಾಯಾಲಯದಲ್ಲಿ ಮನವಿ ಮಾಡಿದ್ದರು.

ಹಾಗಾಗಿ ತನಿಖೆ ಮುಂದುವರೆಸಲು ಅನುಮತಿ ನೀಡಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್, ಮುಂದಿನ ವಿಚಾರಣೆಯನ್ನು ಮೇ.7 ಕ್ಕೆ ಮುಂದೂಡಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಉದೇಶ್ ಅವರು, ನ್ಯಾಯಾಲಯದ ಸೂಚನೆಯಂತೆ ತನಿಖೆ ನಡೆಯುತ್ತಿದೆ. ಯಾರನ್ನು ಕರೆದು ವಿಚಾರಣೆ ಮಾಡಬೇಕು ಎಂಬ ಬಗ್ಗೆ ಇನ್ನು ನಿರ್ಧರಿಸಿಲ್ಲ ಎಂದು ಹೇಳಿದರು.

ತನಿಖಾ ವರದಿಯನ್ನು ಮೇ.7 ಕ್ಕೆ ಸಲ್ಲಿಸುತ್ತೀರಾ ಎಂಬ ಪ್ರಶ್ನೆಗೆ, ಅಂದು ನ್ಯಾಯಾಲಯಕ್ಕೆ ವರದಿ ಸಲ್ಲಿಸಬಹುದು ಅಥಾವ ಮತ್ತೆ ಸಮಯಾವಕಾಶ ಕೇಳಬಹುದು. ಆದರೆ ಈ ಬಗ್ಗೆ ಈಗಲೇ ಹೇಳಲು ಸಾಧ್ಯವಿಲ್ಲ ಎಂದು ಉದೇಶ್ ಅವರು ಸ್ಪಷ್ಟಪಡಿಸಿದರು.

ಪಹಲ್ಗಾಮ್ ಉಗ್ರರ ಅಟ್ಟಹಾಸಕ್ಕೆ ಮುಸ್ಲಿಂ ರಾಷ್ಟ್ರೀಯ ಮಂಚ್ ಖಂಡನೆ



ಮೈಸೂರು, ಏ.24– ಜಮ್ಮು–ಕಾಶ್ಮೀರದ ಪಹಲ್ಗಾಮ್ ಬಳಿ 28 ಮಂದಿ ಪ್ರವಾಸಿಗರನ್ನು ಹತ್ಯೆಗೈದಿರುವ ಉಗ್ರರ ಕೃತ್ಯವನ್ನು ತೀವ್ರವಾಗಿ ಖಂಡಿಸಿರುವ ಮುಸ್ಲಿಂ ರಾಷ್ಟ್ರೀಯ ಮಂಚ್, ಉಗ್ರ ರಾಕ್ಷಸರನ್ನು ಹಿಡಿದು ಸಾರ್ವಜನಿಕವಾಗಿ ಗುಂಡು ಹೊಡೆಯಬೇಕು ಎಂದು ಆಗ್ರಹಿಸಿದೆ.

ಯಾವುದೇ ಧರ್ಮವೂ ಭಯೋತ್ಪಾದನೆಗೆ ಬೆಂಬಲ ನೀಡುವುದಿಲ್ಲ. ಆದರೆ, ಭಯೋತ್ಪಾದಕರಿಗೆ ಬೆಂಬಲ ನೀಡಿ, ಇಂತಹ ಅಮಾನವೀಯ ಕೃತ್ಯ ನಡೆಸುತ್ತಿರುವ ದೇಶದ ವಿರುದ್ಧ ಕೇಂದ್ರ ಸರ್ಕಾರ ಉಗ್ರ ಕ್ರಮ ಕೈಗೊಳ್ಳಬೇಕು. ಹಾಗೆಯೇ ಮೃತಪಟ್ಟ ರಾಜ್ಯದ ಇಬ್ಬರಿಗೆ 10 ಲಕ್ಷ ರೂ. ಪರಿಹಾರದ ಬದಲು 50 ಲಕ್ಷ ರೂ. ಪರಿಹಾರ ನೀಡಿ, ಮೃತರ ಮಕ್ಕಳ ಉನ್ನತ ವ್ಯಾಸಂಗಕ್ಕೆ ರಾಜ್ಯ ಸರ್ಕಾರ ನೆರವಾಗಬೇಕು ಎಂದು ಮುಸ್ಲಿಂ ರಾಷ್ಟ್ರೀಯ ಮಂಚ್ ರಾಷ್ಟ್ರೀಯ ಸಂಚಾಲಕ ಇಲ್ಯಾಸ್ ಅಹಮದ್ ಪತ್ರಿಕಾ ಪ್ರಕಟಣೆ ಮೂಲಕ ಒತ್ತಾಯಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ಉಗ್ರರಿಂದ ಅಮಾಯಕರ ಹತ್ಯಾಕಾಂಡ ಖಂಡಿಸಿ ಮೈಸೂರಲ್ಲಿ ಪಂಜಿನ ಮೆರವಣಿಗೆ

ಯುವ ಬ್ರಿಗೇಡ್, ಮೈಸೂರು ಟ್ರೇಡರ್ಸ್ ಸುರಕ್ಷಾ ಕ್ಷೇಮಾಭಿವೃದ್ಧಿ ಸಂಘದಿಂದ ಉಗ್ರರ ಪೈಶಾಚಿಕ ಕೃತ್ಯಕ್ಕೆ ತೀವ್ರ ಆಕ್ರೋಶ





ಮೈಸೂರಿನಲ್ಲಿ ಗುರುವಾರ ಯುವ ಬ್ರಿಗೇಡ್‌ನಿಂದ ಪಂಜಿನ ಮೆರವಣಿಗೆ ನಡೆಸಲಾಯಿತು. ಮತ್ತೊಂದು ಚಿತ್ರದಲ್ಲಿ ವರ್ತಕರ ಸಂಘಟನೆಯು ಪಂಜಿನ ಮೆರವಣಿಗೆ ಬಳಿಕ ಮೈಸೂರಿನ ಚಿಕ್ಕ ಗಡಿಯಾರ ವೃತ್ತದಲ್ಲಿ ಶಂಕಿತ ಉಗ್ರರ ಫೋಟೋ ಒಳಗೊಂಡ ಪೋಸ್ಟರ್ ದಹಿಸಿ ಆಕ್ರೋಶ ವ್ಯಕ್ತಪಡಿಸಿದ್ದನ್ನು ಕಾಣಬಹುದು.

ಮೈಸೂರು,ಏ.24(ಪಿಎಂ)– ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕ ಪ್ರವಾಸಿಗರ ಹತ್ಯಾಕಾಂಡ ನಡೆಸಿದ ಉಗ್ರರ ಕೃತ್ಯ ಖಂಡಿಸಿ ಯುವ ಬ್ರಿಗೇಡ್ ಮತ್ತು ಮೈಸೂರು ಟ್ರೇಡರ್ಸ್ ಸುರಕ್ಷಾ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಗುರುವಾರ ಸಂಜೆ ಪ್ರತ್ಯೇಕ ಪಂಜಿನ ಮೆರವಣಿಗೆ ಮೂಲಕ ಪ್ರತಿಭಟನೆ ನಡೆಸಲಾಯಿತು.

ಎರಡೂ ಪ್ರತಿಭಟನೆಗಳಲ್ಲಿಯೂ ಪ್ರತಿಭಟನಾಕಾರರು ಪಂಜು ಹಿಡಿದು ಪ್ರತಿಭಟನಾ ಮೆರವಣಿಗೆ ನಡೆಸುವ ಮೂಲಕ ಉಗ್ರರ ಕೃತ್ಯವನ್ನು ತೀವ್ರವಾಗಿ ಖಂಡಿಸಿದರು. ಅಮಾಯಕ ಪ್ರವಾಸಿಗರ ಮೇಲೆ ಗುಂಡಿನ ದಾಳಿ ನಡೆಸಿ ಹತ್ಯಾಕಾಂಡ ನಡೆಸಿರುವ ಉಗ್ರರಿಗೆ ತಕ್ಕ ಶಾಸ್ತಿ ಮಾಡಬೇಕೆಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಯುವ ಬ್ರಿಗೇಡ್: ಮೈಸೂರಿನ ವಿನೋಬಾ ರಸ್ತೆಯ ನಂಜರಾಜ ಬಹುದ್ದೂರ್ ಛತ್ರದ ಮುಂಭಾಗ ಸಮಾವೇಶಗೊಂಡ ಯುವ ಬ್ರಿಗೇಡ್ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಇನ್ನಿತರ ಸಂಘಟನೆಗಳ ಮುಖಂಡರು, ಪಂಜುಗಳನ್ನು ಹಿಡಿದು ಮೆರವಣಿಗೆ ಹೊರಟರು. 'ಬಂದೂಕು ಹಣೆಗಿಟ್ಟಾಗ ಕೇಳಿದ್ದು ಜಾತಿಯಲ್ಲ, ಧರ್ಮ...', 'ಭಯೋತ್ಪಾದಕ ಗುಂಡಿಕ್ಕುವ ಮುನ್ನ ಕೇಳುವುದು ನೀನು ಹಿಂದುನಾ?' ಎಂಬಿತ್ಯಾದಿ ಘೋಷವಾಕ್ಯಗಳ ಫಲಕಗಳನ್ನು ಹಿಡಿದು ಸಾಗಿದ ಪ್ರತಿಭಟನಾಕಾರರು, 'ನಾವೆಲ್ಲಾ ಹಿಂದೂ ನಾವೆಲ್ಲಾ ಒಂದು' ಎಂಬ ಘೋಷಣೆ ಮೊಳಗಿಸಿದರು.

'ವಂದೇ ಮಾತರಂ...', 'ಭಾರತ್ ಮಾತಾ ಕಿ ಜೈ...' ಘೋಷಣೆ ಕೂಗಿದ ಪ್ರತಿಭಟನಾಕಾರರು, ಉಗ್ರರಿಗೆ ಗುಂಡಿಕ್ಕಿ ಹತ್ಯೆ ಮಾಡುವಂತೆ ಒತ್ತಾಯಿಸಿದರು. ಅಲ್ಲದೆ, ಉಗ್ರರು ಹಾಗೂ ಪಾಕಿಸ್ತಾನದ ವಿರುದ್ಧ ಘೋಷಣೆ ಮೊಳಗಿಸಿ ಭಾರೀ ಆಕ್ರೋಶ ವ್ಯಕ್ತಪಡಿಸಿದರು. ಶಿವರಾಂಪೇಟೆಯ ಮುಖ್ಯರಸ್ತೆಯಲ್ಲಿ (ವಿನೋಬಾ ರಸ್ತೆ) ಸಾಗಿದ ಪ್ರತಿಭಟನಾಕಾರರು, ಚಿಕ್ಕ ಗಡಿಯಾರ ವೃತ್ತದ ಬಳಿ ಬಲ ತಿರುವು ಪಡೆದು ಡಿ.ದೇವರಾಜ ಅರಸು ರಸ್ತೆಯಲ್ಲಿ ಮುನ್ನಡೆದರು. ಬಳಿಕ ಜೆಎಲ್‌ಬಿ ರಸ್ತೆ ಮಾರ್ಗವಾಗಿ ಮತ್ತೆ ನಂಜರಾಜ ಬಹದ್ದೂರ್ ಛತ್ರದ ಮುಂಭಾಗಕ್ಕೆ ತಲುಪಿ ಪಂಜಿನ ಮೆರವಣಿಗೆ ಅಂತ್ಯಗೊಳಿಸಿದರು.

ಆದಿತ್ಯ ಅಧಿಕಾರಿ ಆಸ್ಪತ್ರೆಯ ಡಾ.ಚಂದ್ರಶೇಖರ್, ಯುವ ಬ್ರಿಗೇಡ್ ರಾಜ್ಯ ಸಂಚಾಲಕ ಎಸ್.ಚಂದ್ರಶೇಖರ್, ಮೈಸೂರು ಸಂಚಾಲಕ ಮಹೇಂದ್ರ, ಕಾರ್ಯಕರ್ತರಾದ ಸಂಜೀವ್, ಸಾಗರ್, ಧನುಷ್, ರಮೇಶ್, ಎನ್.ಶ್ರೀಕಂಠಮೂರ್ತಿ, ಮುಖಂಡ ಸಂಜಯ್ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ವಿವಿಧ ಸಂಘಟನೆಯ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

ಮೈಸೂರು ಟ್ರೇಡರ್ಸ್ ಸುರಕ್ಷಾ ಕ್ಷೇಮಾಭಿವೃದ್ಧಿ ಸಂಘ: ಸದರಿ ಸಂಘದ ನೇತೃತ್ವದಲ್ಲಿ ಶಿವರಾಂಪೇಟೆಯ ವಿನೋಭಾ ರಸ್ತೆಯ 1ನೇ ಕ್ರಾಸ್‌ನಲ್ಲಿರುವ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಅಪಾರ ಸಂಖ್ಯೆಯಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಉಗ್ರರ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. 'ಕಾಶ್ಮೀರದಲ್ಲಿ ಹಿಂದೂಗಳನ್ನು ಬದುಕಲು ಬಿಡಿ...', 'ಜೈ ಭಾರತ್ ಜೈ ಭಾರತ್ ಸೈನಿಕ್...' ಎಂಬಿತ್ಯಾದಿ ಘೋಷವಾಕ್ಯಗಳನ್ನು ಹೊಂದಿರುವ ಫಲಕಗಳನ್ನಿಡಿದು ಸಾಗಿದ ಪ್ರತಿಭಟನಾಕಾರರು ಉಗ್ರರ ಕೃತ್ಯವನ್ನು ತೀವ್ರವಾಗಿ ಖಂಡಿಸಿದರು.

ಡಿ.ದೇವರಾಜ ರಸ್ತೆ, ನಾರಾಯಣಶಾಸ್ತ್ರಿ ರಸ್ತೆ, ಶಿವರಾಂಪೇಟೆ ಮುಖ್ಯರಸ್ತೆಯಲ್ಲಿ ಸಾಗಿದ ಪ್ರತಿಭಟನಾಕಾರರು, ಚಿಕ್ಕಗಡಿಯಾರ ವೃತ್ತದಲ್ಲಿ ಜಮಾಯಿಸಿದರು. ಬಳಿ ಇಲ್ಲಿ, ಹತ್ಯೆಗೀಡಾದವರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ಅಲ್ಲದೆ, ಬಿಡುಗಡೆಗೊಂಡಿರುವ ಶಂಕಿತ ಉಗ್ರರ ಫೋಟೋ ಒಳಗೊಂಡ ಪೋಸ್ಟರ್ ಅನ್ನು ದಹಿಸಿ ಆಕ್ರೋಶ ವ್ಯಕ್ತಪಡಿಸಿ, ಪ್ರತಿಭಟನೆ ಅಂತ್ಯಗೊಳಿಸಲಾಯಿತು.

ಇದೇ ವೇಳೆ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಸಂಘದ ಅಧ್ಯಕ್ಷ ಹಾಗೂ ನಗರಪಾಲಿಕೆ ಮಾಜಿ ಸದಸ್ಯ ಪ್ರಶಾಂತ್‌ಗೌಡ, ಶಿವರಾಂಪೇಟೆ, ಸಂತೆಪೇಟೆಯಲ್ಲಿ ಸಾವಿರಕ್ಕೂ ಹೆಚ್ಚು ಮಳಿಗಳನ್ನು ನಾವು ಮುಚ್ಚಿ ಈ ಹೋರಾಟ ನಡೆಸುತ್ತಿದ್ದೇವೆ. ಪಹಲ್ಗಾಮ್‌ನಲ್ಲಿ 'ನೀನು ಹಿಂದೂ ನಾ' ಎಂದು ಧರ್ಮ ಕೇಳಿ ಹತ್ಯೆ ಮಾಡಲಾಗಿದೆ. ಇದನ್ನು ನಾವು ವರ್ತಕರು ತೀವ್ರವಾಗಿ ಖಂಡಿಸುತ್ತೇವೆ. ನಮ್ಮ ದೇಶದ ಯೋಧರು ಉಗ್ರರನ್ನು ಸದೆಬಡಿಯಬೇಕು. ಮತ್ತೊಮ್ಮೆ ಹಿಂದೂಗಳ ಮೇಲೆ ಈ ರೀತಿ ಕೃತ್ಯ ನಡೆಯದಂತೆ ಕೇಂದ್ರ ಸರ್ಕಾರ ಕ್ರಮ ವಹಿಸಬೇಕು ಎಂದು ಕೋರಿದರು.

ಸಂಘದ ಉಪಾಧ್ಯಕ್ಷ ಪ್ರವೀಣ್ ಜೈನ್, ಕಾರ್ಯದರ್ಶಿ ರಾಜೇಶ್ ಮೆಹತ, ಪದಾಧಿಕಾರಿಗಳಾದ ಕಾಂತಿಲಾಲ್, ಸಾಗರ್, ಸುದೀಪ್ ಸೇರಿದಂತೆ ವಿವಿಧ ಸಂಘಟನೆಗಳು ಮುಖಂಡರು, ಕಾರ್ಯಕರ್ತರು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಡಾ.ರಾಜ್‌ಕುಮಾರ್ ಕನ್ನಡಿಗರ ಕಣ್ಮಣಿ

ಡಾ.ರಾಜ್‌ಕುಮಾರ್ ಅವರ 97ನೇ ಜನ್ಮ ದಿನಾಚರಣೆ

ಮಡಿಕೇರಿ ಏ.24– ಚಲನಚಿತ್ರ ಬರೀ ಮನರಂಜನೆಯಲ್ಲ. ಅದೊಂದು ಸಮಾಜದಲ್ಲಿ ಬದಲಾವಣೆ ಮತ್ತು ಸುಧಾರಣೆ ತರುವ ಮಾಧ್ಯಮವಾಗಿದೆ. ಆ ನಿಟ್ಟಿನಲ್ಲಿ ಡಾ.ರಾಜ್‌ಕುಮಾರ್ ಅವರು ಕನ್ನಡ ನಾಡಿನ ಚಲನಚಿತ್ರ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದು, ಕನ್ನಡಿಗರ ಕಣ್ಮಣಿಯಾಗಿದ್ದಾರೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಸಹಕಾರದಲ್ಲಿ ನಗರದ ಗಾಂಧಿ ಭವನದಲ್ಲಿ ಗುರುವಾರ ನಡೆದ ಡಾ.ರಾಜ್‌ಕುಮಾರ್ ಅವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಡಾ.ರಾಜ್‌ಕುಮಾರ್ ಅವರು ಬೇಡರ ಕಣ್ಣಪ್ಪ, ಭಕ್ತ ಕನಕದಾಸ, ರಣಧೀರ ಕಂಠೀರವ, ಸತ್ಯ ಹರಿಶ್ಚಂದ್ರ, ಇಮ್ಮಡಿ ಪುಲಿಕೇಶಿ, ಶ್ರೀಕೃಷ್ಣದೇವರಾಯ, ಭಕ್ತ ಕುಂಬಾರ, ಮಯೂರ, ಬಬ್ರುವಾಹನ, ಭಕ್ತ ಪ್ರಹ್ಲಾದ, ಬಂಗಾರದ ಮನುಷ್ಯ... ಹೀಗೆ ಹಲವು ಐತಿಹಾಸಿಕ, ಪೌರಾಣಿಕ ಮತ್ತು ಸಾಮಾಜಿಕ ಚಿತ್ರಗಳಲ್ಲಿ ನಟಿಸಿ ಕನ್ನಡಿಗರ ಮನಸ್ಸಿನಲ್ಲಿ ಸದಾ ಇದ್ದಾರೆ ಎಂದು ವರ್ಣಿಸಿದರು.



ಡಾ.ರಾಜ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುತ್ತಿರುವ ಗಣ್ಯರು.

ಡಾ.ರಾಜ್‌ಕುಮಾರ್ ಅವರು ಗಾಯಕರಾಗಿ, ಯಾರೇ ಕೂಗಾಡಲಿ, ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು, ಹೇ.. ದಿನಕರ, ಹೃದಯ ಸಮುದ್ರ, ನಾದಮಯ ಹೀಗೆ ಹಲವು ಹಾಡುಗಳನ್ನು ಹಾಡಿ ರಾಷ್ಟ್ರೀಯ ಸಿನೆಮಾ ಪ್ರಶಸ್ತಿ ಪಡೆದಿದ್ದಾರೆ ಎಂದರು.

ಚಲನಚಿತ್ರ ಕಲಾವಿದರಾದ ನೆರವಂಡ ಉಮೇಶ್ ಮಾತನಾಡಿ, ಡಾ.ರಾಜ್‌ಕುಮಾರ್ ಅವರ ತಂದೆ ಪುಟ್ಟಸ್ವಾಮಯ್ಯ ಅವರು ಗುಬ್ಬಿ ವೀರಣ್ಣ ಕಂಪನಿಯಲ್ಲಿ ಕಲಾವಿದರಾಗಿ ಕೆಲಸ ಮಾಡುತ್ತಿದ್ದರು. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಸಿಂಗನಲ್ಲೂರು ಗ್ರಾಮದಲ್ಲಿ ಮುತ್ತುರಾಯ ದೇವರ ಭಕ್ತರಾಗಿದ್ದರು. ಆ ನಿಟ್ಟಿನಲ್ಲಿ ಡಾ. ರಾಜ್‌ಕುಮಾರ್ ಮೂಲ ಹೆಸರು 'ಮುತ್ತುರಾಜ' ಆಗಿತ್ತು. ಬೇಡರ ಕಣ್ಣಪ್ಪ ಚಲನಚಿತ್ರ ಸಂದರ್ಭದಲ್ಲಿ ರಾಜ್‌ಕುಮಾರ್ ಎಂದು ಹೆಸರು ಇಟ್ಟು ಚಲನಚಿತ್ರಕ್ಕೆ ಪಾದಾರ್ಪಣೆ ಮಾಡುತ್ತಾರೆ. ಕನ್ನಡ ಹೊರತುಪಡಿಸಿ ಬೇರೆ ಭಾಷೆಯಲ್ಲಿ ನಟನೆ ಮಾಡಿಲ್ಲ ಎಂದು ತಿಳಿಸಿದರು.

ಡಾ.ರಾಜ್‌ಕುಮಾರ್ ಅವರು ಸರಳತೆಯ ಸಾಕಾರಮೂರ್ತಿಯಾಗಿದ್ದು, ಸಂವೇದನಾಶೀಲರಾಗಿ ಡಾ.ರಾಜ್‌ಕುಮಾರ್ ಅವರು ಬದುಕು ರೂಪಿಸಿಕೊಂಡಿದ್ದರು ಎಂದು ನೆರವಂಡ ಉಮೇಶ್ ಅವರು ಹೇಳಿದರು.

ಚಲನಚಿತ್ರ ಬರಹಗಾರರಾದ ಅನಿಲ್ ಎಚ್.ಟಿ ಅವರು ಮಾತನಾಡಿ, ಡಾ.ರಾಜ್‌ಕುಮಾರ್ ಅವರು ಪೌರಾಣಿಕ, ಸಾಮಾಜಿಕ ಚಲನಚಿತ್ರ ಹಾಗೂ ಹಾಡುಗಾರಿಕೆ ಹೀಗೆ ಚಿತ್ರರಂಗದ ವಿವಿಧ ಕೇತ್ರದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು, 200 ಕ್ಕೂ ಹೆಚ್ಚು ಕನ್ನಡ ಚಲನಚಿತ್ರಗಳಲ್ಲಿ ಅಭಿನಯಿಸಿ, ಪದ್ಮಭೂಷಣ, ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ, ಕರ್ನಾಟಕ ರತ್ನ ಹೀಗೆ ಹತ್ತು ಹಲವು ಪ್ರಶಸ್ತಿಗಳು ಡಾ. ರಾಜ್‌ಕುಮಾರ್ ಅವರಿಗೆ ಹುಡುಕಿ ಬಂದವು ಎಂದರು.

ವಾರ್ತಾಧಿಕಾರಿ ಚಿನ್ನಸ್ವಾಮಿ ಸ್ವಾಗತಿಸಿ, ನಿರೂಪಿಸಿದರು. ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿನ ವಿದ್ಯಾರ್ಥಿನಿಯರು ನಾಡಗೀತೆ ಹಾಡಿದರು. ಕನ್ನಡ ಮತ್ತು ಸಂಸ್ಕೃತಿ ಸಹಾಯಕ ನಿರ್ದೇಶಕರಾದ ಕುಮಾರ ವಂದಿಸಿದರು.

ಕಾಡಾನೆ ದಾಳಿಯಿಂದ ವಾಯು ವಿಹಾರಕ್ಕೆ ತೆರಳಿದ್ದ ವ್ಯಕ್ತಿ ಸಾವು

ಸರ್ಕಾರದಿಂದ 20 ಲಕ್ಷ ರೂ. ಪರಿಹಾರ ಕೊಡಿಸುವೆ: ಸಂಕೇತ್ ಪೂವಯ್ಯ

ಸಿದ್ದಾಪುರ,ಏ.24– ಕಾಡಾನೆ ದಾಳಿಯಿಂದ ವಾಯು ವಿಹಾರಕ್ಕೆ ತೆರಳಿದ ವ್ಯಕ್ತಿಯೊಬ್ಬರು ಸಾವನ್ನಪ್ಪಿರುವ ಘಟನೆ ವಿರಾಜಪೇಟೆ ತಾಲೂಕಿನ ಅಮ್ಮತ್ತಿ ಸಮೀಪದ ಎಮ್ಮೆಗುಂಡಿ ಕಾಫಿ ತೋಟದ ಮುಖ್ಯ ರಸ್ತೆಯಲ್ಲಿ ಸಂಭವಿಸಿದೆ. ಎಮ್ಮೆಗುಂಡಿ ಕಾಫಿ ತೋಟದ ಕಾರ್ಮಿಕ ಸೆಲ್ವಂ (ಚೆಲ್ಲಮೇಸ್ತ್ರಿ–55) ಮೃತ ದುರ್ದೈವಿ.

ಸೆಲ್ವಂ ಗುರುವಾರ ಬೆಳಿಗ್ಗೆ ಮನೆಯ ಸಮೀಪದ ಮುಖ್ಯರಸ್ತೆಯಲ್ಲಿ ವಾಯುವಿಹಾರಕ್ಕೆ ತೆರಳುತ್ತಿದ್ದಾಗ ಸಮೀಪದ ಕಾಫಿ ತೋಟದಲ್ಲಿ ಬೀಡು ಬಿಟ್ಟಿದ್ದ 3 ಕಾಡಾನೆಗಳು ರಸ್ತೆ ದಾಟಲು ಮುಂದಾಗಿವೆ. ಈ ವೇಳೆ ಸೆಲ್ವಂ ಅವರು ಆಕಸ್ಮಿಕವಾಗಿ ಕಾಡಾನೆ ಬಳಿ ಸಿಲುಕಿಕೊಂಡಿದ್ದು, ದಾಳಿಯಿಂದ ತಪ್ಪಿಸಿಕೊಳ್ಳಲು ಯತ್ನಿಸಿದ ಸಂದರ್ಭ ಕಾಡಾನೆಯೊಂದು ದಾಳಿ ಮಾಡಿದ ಪರಿಣಾಮ ಗಂಭೀರ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕಾಡಾನೆಗಳ ಘೀಳಿನ ಶಬ್ದ ಕೇಳಿದ ಸ್ಥಳೀಯರು ತಕ್ಷಣ ಸ್ಥಳಕ್ಕೆ ಬಂದಿದ್ದಾರೆ. ಆದರೆ ರಕ್ತದ ಮಡುವಿನಲ್ಲಿದ್ದ ಸೆಲ್ವಂ ಅವರು ಮೃತಪಟ್ಟಿದ್ದರು.

ಮಾಹಿತಿ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸಿದರು. ಈ ವ್ಯಾಪ್ತಿಯಲ್ಲಿ ಕಾಡಾನೆಗಳ ಉಪಟಳ ಮಿತಿಮೀರಿದ್ದು, ಶಾಶ್ವತ ಪರಿಹಾರ ಕಂಡುಹಿಡಿಯುವಂತೆ ಕಾರ್ಮಿಕರು ಅರಣ್ಯಾಧಿಕಾರಿಗಳನ್ನು ಒತ್ತಾಯಿಸಿದರು. ಬಳಿಕ ಮೃತದೇಹವನ್ನು ಸಿದ್ದಾಪುರ ಸಮುದಾಯ ಆರೋಗ್ಯ ಕೇಂದ್ರದ ಶವಾಗಾರಕ್ಕೆ ಸ್ಥಳಾಂತರಿಸಿ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಹಸ್ತಾಂತರಿಸಲಾಯಿತು.

ಸ್ಥಳಕ್ಕೆ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಮೇರಿಯಂಡ ಸಂಕೇತ್ ಪೂವಯ್ಯ ಭೇಟಿ ನೀಡಿ ಕುಟುಂಬಕ್ಕೆ ಸಾಂತ್ವನ ಹೇಳಿದರು. ಸರ್ಕಾರದಿಂದ ಪರಿಹಾರ ರೂಪದಲ್ಲಿ ದೊರೆಯುವ 20 ಲಕ್ಷ ರೂ.ಗಳನ್ನು ತಕ್ಷಣವೇ ನೀಡಲಾಗುವುದು ಎಂದರು. ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ವಿರಾಜಪೇಟೆ ಕ್ಷೇತ್ರದ ಶಾಸಕ ಅಜ್ಜಿಕುಟ್ಟಿರ. ಎಸ್.ಪೊನ್ನಣ್ಣ ಅವರಿಗೆ ಘಟನೆಯ ಬಗ್ಗೆ ಸಂಕೇತ್ ಪೂವಯ್ಯ ಮಾಹಿತಿ ನೀಡಿದರು. ಶಾಸಕ ಪೊನ್ನಣ್ಣ ಅವರು ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ ಕಾಫಿ ತೋಟಗಳಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳನ್ನು ತಕ್ಷಣವೇ ಕಾರ್ಯಾಚರಣೆ ಮೂಲಕ ಕಾಡಿಗಟ್ಟಬೇಕೆಂದು ಸೂಚನೆ ನೀಡಿದರು.

ತಕ್ಷಣವೇ ಕಾಡಾನೆ ಹಾವಳಿ ಇರುವ ಪ್ರದೇಶದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಗಳನ್ನು ನಿಯೋಜಿಸಿ ಕಾಡಾನೆಗಳನ್ನು ಕಾಡಿಗಟ್ಟಲು ಅರಣ್ಯಾಧಿಕಾರಿಗಳು ಮುಂದಾಗಿದ್ದಾರೆ. ಮಾಜಿ ಜಿಪಂ ಸದಸ್ಯ ಹಾಗೂ ಬಿಜೆಪಿ ಮುಖಂಡ ಪಾಲಿಬೆಟ್ಟದ ಮೂಕೊಂಡ ವಿಜು ಸುಬ್ರಮಣಿ, ಮಾಜಿ ತಾಪಂ ಸದಸ್ಯ ಅಜಿತ್ ಕರಂಬಯ್ಯ ಅವರು ಸ್ಥಳಕ್ಕೆ ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿದರು. ದಿನನಿತ್ಯ ಕಾಫಿ ತೋಟಗಳಲ್ಲಿ ಕಾಡಾನೆ ಹಾವಳಿ ಮಿತಿಮೀರಿದ್ದು ಕೃಷಿ ಫಸಲು ನಾಶದೊಂದಿಗೆ ಪ್ರಾಣಹಾನಿಯಾಗುತ್ತಿದೆ. ಕಾರ್ಮಿಕರು, ಬೆಳೆಗಾರರು ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಹಲವು ವರ್ಷಗಳಿಂದಲೂ ಅಮಾಯಕ ಜೀವಗಳು ಬಲಿಯಾಗುತ್ತಿದ್ದು ಕೊಡಗಿನ ಜನರ ತಾಳ್ಮೆಯನ್ನು ಪರೀಕ್ಷಿಸದೆ ಕಾಡುಪ್ರಾಣಿಗಳ ಹಾವಳಿಗೆ ಶಾಶ್ವತ ಪರಿಹಾರ ಒದಗಿಸಬೇಕು. ಇಲ್ಲವಾದಲ್ಲಿ ಕಾರ್ಮಿಕರು, ಬೆಳೆಗಾರರನ್ನು ಒಗ್ಗೂಡಿಸಿ ಪ್ರತಿಭಟನೆ ಮಾಡಬೇಕಾಗುತ್ತದೆ ಎಚ್ಚರಿಸಿದರು.



ಆನೆ ದಾಳಿಗೆ ಕಾರ್ಮಿಕ ಬಲಿಯಾಗಿದ್ದ ಸ್ಥಳಕ್ಕೆ ಪೊಲೀಸರ ಭೇಟಿ.

ಇದೇ ಸಂದರ್ಭ ಅರಣ್ಯ ಇಲಾಖೆ ಅಧಿಕಾರಿಗಳು ಮೃತ ಸೆಲ್ವಂ ಪತ್ನಿಗೆ ತುರ್ತು ಪರಿಹಾರವಾಗಿ 5 ಲಕ್ಷ ಚೆಕ್ ಅನ್ನು ಹಸ್ತಾಂತರಿಸಿದರು. ಈ ಸಂದರ್ಭ ಡಿಎಫ್‌ಓ ಜಗನ್ನಾಥ್, ಎಸಿಫ್ ಗೋಪಾಲ್, ಆರ್‌ಎಫ್‌ಓ ಶಿವರಾಮ್, ಗಂಗಾಧರ್ ಸೇರಿದಂತೆ ಸಿಬ್ಬಂದಿಗಳು ಹಾಜರಿದ್ದರು. ಮೃತದೇಹದ ಅಂತ್ಯಸಂಸ್ಕಾರಕ್ಕಾಗಿ ತಮಿಳುನಾಡಿನ ಮಧುರೈಗೆ ಆಂಬುಲೆನ್ಸ್ ಮೂಲಕ ಕೊಂಡೊಯ್ಯಲಾಯಿತು. ಘಟನೆ ಕುರಿತು ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಡಿಕೇರಿ-ಮಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತ

ಗಾಜು ಸಾಗಿಸುತ್ತಿದ್ದ ಲಾರಿ ಸೇತುವೆಗೆ ಡಿಕ್ಕಿ: ಇಬ್ಬರಿಗೆ ಗಾಯ



ಜೋಡುಪಾಲದ ಸೇತುವೆಗೆ ಡಿಕ್ಕಿ ಹೊಡೆದು ನಿಂತಿರುವ ಲಾರಿ.

ಮಡಿಕೇರಿ,ಏ.24– ಮಡಿಕೇರಿ–ಮಂಗಳೂರು ರಾಷ್ಟ್ರೀಯ ಹೆದ್ದಾರಿ 275ರ ಜೋಡುಪಾಲದ ಬಳಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಕಾರ್ಮಿಕರಿಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮಡಿಕೇರಿಯಿಂದ ಮಂಗಳೂರಿಗೆ ಗಾಜನ್ನು ಸಾಗಿಸುತ್ತಿದ್ದ ಲಾರಿಯೊಂದು ಎದುರಿನಿಂದ ಬರುತ್ತಿದ್ದ ಕಾರಿಗೆ ಡಿಕ್ಕಿಯಾಗುವುದನ್ನು ತಪ್ಪಿಸಲು ಹೋಗಿ ಚಾಲಕನ ನಿಯಂತ್ರಣ ಕಳೆದುಕೊಂಡು ಜೋಡುಪಾಲದ ಸೇತುವೆಗೆ ಡಿಕ್ಕಿ ಹೊಡೆದಿದೆ.

ಈ ವೇಳೆ ಮಂಗಳೂರು ಕಡೆಯಿಂದ ಮಡಿಕೇರಿ ಕಡೆಗೆ ಬರುತ್ತಿದ್ದ ಕಾರಿಗೆ ಡಿಕ್ಕಿ ಹೊಡೆದು ಗಾಜುಗಳು ಕಾರಿನ ಮೇಲೆ ಬಿದ್ದಿವೆ. ಈ ವೇಳೆ ಲಾರಿಯ ಹಿಂಬದಿಯಲ್ಲಿದ್ದ ಇಬ್ಬರು ಕಾರ್ಮಿಕರು ಗಾಜಿನ ಅಡಿಯಲ್ಲಿ ಸಿಲುಕಿ ಗಂಭೀರ ಗಾಯಗೊಂಡಿದ್ದಾರೆ. ಗಾಯಾಳು ಕಾರ್ಮಿಕರನ್ನು ಖಾಸಗಿ ವಾಹನದಲ್ಲಿ ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಕಾರಿನಲ್ಲಿದ್ದವರು ಸಣ್ಣಪುಟ್ಟ ಗಾಯಗಳಿಂದ ಅಪಾಯದಿಂದ ಪಾರಾಗಿದ್ದಾರೆ. ಜೋಡುಪಾಲ ಸೇತುವೆ ಮೇಲೆ ಕೆಎಸ್‌ಆರ್‌ಟಿಸಿ ಬಸ್ ಕೆಟ್ಟುನಿಂತಿದ್ದು, ಈ ಅಪಘಾತಕ್ಕೆ ಕಾರಣವಾಗಿದೆ ಎಂದು ಸಾರ್ವಜನಿಕರು ಅನಿಸಿಕೆ ವ್ಯಕ್ತಪಡಿಸಿದ್ದಾರೆ. ಅಪಘಾತ ಪ್ರಕರಣ ಕುರಿತು ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹೈವೆಯಲ್ಲಿ ಅಪಘಾತವಾದ ಕಾರಣ ನೂರಾರು ವಾಹನಗಳು ರಸ್ತೆಯ ಎರಡೂ ಬದಿಯಲ್ಲಿ ಸಾಲುಗಟ್ಟಿ ನಿಂತಿದ್ದವು. ಸ್ಥಳಕ್ಕಾಗಮಿಸಿದ ಪೊಲೀಸರು, ಮಹಜರು ನಡೆಸಿದ ಬಳಿಕ ಬಸ್ ಅನ್ನು ಹೊರತೆಗೆದು ಇತರ ವಾಹನಗಳ ಸಂಚಾರಕ್ಕೆ ಅವಕಾಶ ಕಲ್ಪಿಸಿದರು.

ಇಂದು ಬಲ್ಲಮಾವಟಿ ದೇವಸ್ಥಾನದ ವಾರ್ಷಿಕ ಉತ್ಸವ

ನಾಪೋಕ್ಲು: ಸಮೀಪದ ಬಲ್ಲಮಾವಟಿ ಗ್ರಾಮದ ಶ್ರೀ ಭದ್ರಕಾಳಿ ರಾಟೆ ದೇವಸ್ಥಾನದ ವಾರ್ಷಿಕ ಉತ್ಸವವು ಏ.25ರ ಶುಕ್ರವಾರ ನಡೆಯಲಿದೆ. ಬೆಳಗ್ಗೆ 11 ಗಂಟೆಗೆ ದೇವರನ್ನು ರಾಟೆಯಲ್ಲಿ ಆಡಿಸುವುದು, ಮಧ್ಯಾಹ್ನ 3 ಗಂಟೆಗೆ ಮೂರು ಕೋಲಗಳು ದೇವಾಲಯದ ಮೈದಾನದಲ್ಲಿ ಸೇರಿ ಉತ್ಸವ ನಡೆಯಲಿದೆ.

ಏ.29, ಸಾರಿಗೆ ಅದಾಲತ್

ಮಡಿಕೇರಿ, ಏ.24– ಪ್ರಾದೇಶಿಕ ಸಾರಿಗೆ ಕಚೇರಿ ಸಭಾಂಗಣದಲ್ಲಿ ಏ.29 ರಂದು ಮಧ್ಯಾಹ್ನ 3 ಗಂಟೆಗೆ ಸಾರಿಗೆ ಅದಾಲತ್ ನಡೆಯಲಿದೆ. ಸಾರ್ವಜನಿಕರು ಸಾರಿಗೆ ಇಲಾಖೆಯ ಕೆಲಸ ಕಾರ್ಯಗಳಿಗೆ ಸಂಬಂಧಿಸಿದಂತೆ ತಮ್ಮ ಕುಂದುಕೊರತೆಯ ಅಹವಾಲನ್ನು ಸಲ್ಲಿಸಬಹುದು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ನಾಗರಾಜ ಚಾರ್ ಅವರು ಕೋರಿದ್ದಾರೆ.

ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

ವಿರಾಜಪೇಟೆ: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯು ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಕ್ಷೇತ್ರದ ಶಾಸಕರ ಕಚೇರಿಯ ಸಭಾಂಗಣದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಪಿ.ವಿ.ಜಾನ್ಸನ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಅನ್ನಭಾಗ್ಯ ಯೋಜನೆ ಬಗ್ಗೆ ಚರ್ಚೆಯಾಗಿ ಸರಕಾರ ಉಚಿತವಾಗಿ ಅಕ್ಕಿ ನೀಡಿದರೂ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿದಾರರಿಂದ 20 ರೂ. ಪಡೆದುಕೊಳ್ಳುತ್ತಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಕಳೆದ ತಿಂಗಳು ಅಹಾರ ನಿರೀಕ್ಷಕರಿಗೆ ದೂರು ನೀಡಲಾಗಿತ್ತು. ಇದುವರೆಗೂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದಿರುವ ಬಗ್ಗೆ ಆಕ್ರೋಶ ವ್ಯಕ್ತವಾಯಿತು.

ಉಚಿತ ಅಕ್ಕಿ ವಿತರಣೆ ಎಂದು ನ್ಯಾಯಬೆಲೆ ಅಂಗಡಿಗಳಲ್ಲಿ ನಾಮಫಲಕ ಹಾಕುವಂತೆ ಸೂಚಿಸಲು ತೀರ್ಮಾನಿಸಲಾಯಿತು. ಈಗಾಗಲೇ ತಾಲೂಕು ಅಹಾರ ಇಲಾಖೆ 25922 ಫಲಾನುಭವಿಗಳಿಗೆ ನೂತನ ಪಡಿತರ ಚೀಟಿ ನೀಡಿದೆ ಎಂದು ಅಧಿಕಾರಿ ತಿಳಿಸಿದರು.

ವಿರಾಜಪೇಟೆ ಮತ್ತು ಪೊನ್ನಂಪೇಟೆ ತಾಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ಸೌಲಭ್ಯ ತಲುಪುತ್ತಿರುವ ಬಗ್ಗೆ ಮತ್ತು ಶಕ್ತಿ ಯೋಜನೆಯನ್ನು ವಯಸ್ಕ ಮಹಿಳಾ ಪ್ರಯಾಣಿಕರು, ಶಾಲಾ ಕಾಲೇಜು ವಿದ್ಯಾರ್ಥಿನಿಯರು, ಹೆಣ್ಣು ಮಕ್ಕಳು ಈ ಪ್ರಯೋಜನವನ್ನು ಪಡೆದುಕೊಳ್ಳುತ್ತಿದ್ದಾರೆ ಎಂದು ಜಾನ್ಸನ್ ಹೇಳಿದರು.



ಪ್ರಗತಿ ಪರಿಶೀಲನಾ ಸಭೆಯಲ್ಲಿ ಯೋಜನೆ ಕಾರ್ಯದರ್ಶಿ ತಾಪಂ ಇಓ ಅಪ್ಪಣ್ಣ, ಇಲಾಖೆಯ ಅಧಿಕಾರಿಗಳು ಮತ್ತು ಸಮಿತಿ ಸದಸ್ಯರು ಭಾಗವಹಿಸಿದ್ದರು.

ಮಲೆ ಮಹದೇಶ್ವರಬೆಟ್ಟದಲ್ಲಿ ಡಾ.ರಾಜ್ ಜನ್ಮದಿನ ಆಚರಣೆ

ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಸಚಿವರು, ಶಾಸಕರಿಂದ ಡಾ. ರಾಜ್ ಭಾವಚಿತ್ರಕ್ಕೆ ಪುಷ್ಪಾರ್ಚನೆ

ಚಾಮರಾಜನಗರ, ಏ.24– ಕನ್ನಡದ ಮೇರುನಟ ಸಾರ್ವಭೌಮ ಡಾ. ರಾಜ್‌ಕುಮಾರ್‌ರ 97ನೇ ಜನ್ಮ ದಿನಾಚರಣೆ ಅಂಗವಾಗಿ ಚಾಮರಾಜನಗರ ಜಿಲ್ಲೆಯ ಮಹದೇಶ್ವರ ಬೆಟ್ಟದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಡಾ. ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು.

ಸಚಿವ ಸಂಪುಟ ಸಭೆ ನಡೆದ ಬಳಿಕ ಮಾಧ್ಯಮಗೋಷ್ಠಿಗೂ ಮೊದಲು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಇದೇ ವೇಳೆ ಡಾ.ರಾಜ್‌ಕುಮಾರ್ ಅವರ ಬದುಕು, ಚಲನಚಿತ್ರ ರಂಗದ ಮಹತ್ವ ಸಾರುವ ಛಾಯಾಚಿತ್ರ ಸಂಗ್ರಹದ ವೀಡಿಯೋ ಅನ್ನು ಬೃಹತ್ ಎಲ್‌ಇಡಿ ಪರದೆ ಮೇಲೆ ಪ್ರದರ್ಶಿಸಲಾಯಿತು. ವರನಟ ಡಾ. ರಾಜ್‌ಕುಮಾರ್ ಅವರ ತವರು ಜಿಲ್ಲೆ ಚಾಮರಾಜನಗರ ಜಿಲ್ಲೆಯಲ್ಲಿ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಇತರೆ ಸಚಿವರು, ಶಾಸಕರು, ಭಾಗವಹಿಸಿ ಡಾ. ರಾಜ್‌ಕುಮಾರ್ ಅವರ ಜನ್ಮ ದಿನಾಚರಣೆಯಲ್ಲಿ ಪುಷ್ಪಾರ್ಚನೆ ನೆರವೇರಿಸಿದ್ದು ಅರ್ಥಪೂರ್ಣವಾಗಿತ್ತು.



ಡಾ. ರಾಜ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ.

ಸಮಾಜ ಕಲ್ಯಾಣ ಸಚಿವ ಡಾ ಹೆಚ್.ಸಿ. ಮಹದೇವಪ್ಪ, ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್, ಉನ್ನತ ಶಿಕ್ಷಣ ಸಚಿವ ಸುಧಾಕರ್, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎಂ.ಆರ್. ಮಂಜುನಾಥ್, ಎ.ಆರ್. ಕೃಷ್ಣಮೂರ್ತಿ, ಡಾ.ಡಿ.ತಿಮ್ಮಯ್ಯ ಹಿರಿಯ ಉನ್ನತ ಅಧಿಕಾರಿಗಳಾದ ಎಲ್.ಕೆ.ಅತೀಕ್, ಮುಂತಾದ ಗಣ್ಯರು ಈ ಸಂದರ್ಭದಲ್ಲಿ ಪಾಲ್ಗೊಂಡಿದ್ದರು.

ಮಹದೇಶ್ವರಬೆಟ್ಟ ಇನ್ನು ಮುಂದೆ ಪಾನಮುಕ್ತ

ಲಾಡು ಪ್ರಸಾದಕ್ಕೆ ನಂದಿನಿ ತುಪ್ಪ ಬಳಕೆಗೆ ತೀರ್ಮಾನ

ಚಾಮರಾಜನಗರ, ಏ.24– ಮಲೆ ಮಹದೇಶ್ವರ ಬೆಟ್ಟ ಇನ್ನು ಮುಂದೆ ಪಾನಮುಕ್ತ ಪ್ರದೇಶವಾಗಿಸಲು ಕಟ್ಟುನಿಟ್ಟಿನ ಕ್ರಮಕೈಗೊಳ್ಳುವುದಾಗಿ ಪ್ರಾಧಿಕಾರದ ಅಧ್ಯಕ್ಷ, ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಬೆಟ್ಟದಲ್ಲಿ ಗುರುವಾರ ನಡೆದ ಮಲೆ ಮಹದೇಶ್ವರ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಲ್ಲಿಯವರೆಗೂ ಬೆಟ್ಟದಲ್ಲಿ, ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮಾರಾಟಮುಕ್ತ ಇತ್ತು ಇನ್ನು ಮುಂದೆ ಹೊರಗಿನಿಂದ ತರುವುದಕ್ಕೂ ತಡೆ ಹಾಕಬೇಕು ಎಂದು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಮತ್ತು ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಲೈ ಮಹದೇಶ್ವರ ಬೆಟ್ಟದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಆಗುವುದನ್ನು ಸಂಪೂರ್ಣ ತಡೆಯಬೇಕು. ಚಾಳಿ ಬಿದ್ದ ಆರೋಪಿಯೊಬ್ಬ ಗಡಿಪಾರು ಆಗಿದ್ದರೂ, ಅಕ್ರಮ ಮಾರಾಟ ಮಾಡುತ್ತಿರುವುದನ್ನು ಅಧಿಕಾರಿಗಳಿಂದ ತಿಳಿದ ಮುಖ್ಯಮಂತ್ರಿಯವರು ಅವನನ್ನು ತಕ್ಷಣ ಕಠಿಣ ಕಾನೂನಿನ ಅಡಿ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದರು.

ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ವಿವಿಧ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಹಿಂದಿನ ಪ್ರಾಧಿಕಾರದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳು ಒಂದೂವರೆ ವರ್ಷದಿಂದ ಜಾರಿ ಆಗದೇ ಇರುವುದಕ್ಕೆ ಮುಖ್ಯಮಂತ್ರಿಗಳು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರನ್ನು ತೀವ್ರವಾಗಿ ಪ್ರಶ್ನಿಸಿದರು.



ಪ್ರಾಧಿಕಾರದ ಸಭೆ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ.

ಪ್ರಾಧಿಕಾರದ ಕೆಲಸ ಕಾರ್ಯಗಳು, ಕಾಮಗಾರಿಗಳು ಸೂಕ್ತವಾಗಿ, ವೇಗವಾಗಿ ನಡೆಯಲು ಒಬ್ಬ ಎಇಇಯನ್ನು ಪ್ರಾಧಿಕಾರಕ್ಕೆ ನೇಮಿಸಲು ಲೋಕೋಪಯೋಗಿ ಇಲಾಖೆ ಕಾರ್ಯದರ್ಶಿ ಸತ್ಯನಾರಾಯಣರಿಗೆ ಸೂಚಿಸಿದರು.

ಹಿಂದಿನ ಸಭೆಯ ನಿರ್ಣಯದಂತೆ ಪ್ರವಾಸಿಗರ ಶೆಲ್ಟರ್ ಮತ್ತು ಶೌಚಾಲಯಗಳ ಕಾಮಗಾರಿ ಪೂರ್ಣಗೊಳ್ಳದ ಬಗ್ಗೆ ಸಿಎಂ ತರಾಟೆಗೆ ತೆಗೆದುಕೊಂಡರು. ಪ್ರಾಧಿಕಾರ ಮತ್ತು ಮಹದೇಶ್ವರ ಬೆಟ್ಟಕ್ಕೆ ಸೇರಿದ ಜಾಗದಲ್ಲಿ ನೆಲೆಸಿರುವ 13 ಕುಟುಂಬಗಳಿಗೆ ಪರ್ಯಾಯ ಸ್ಥಳ ಒದಗಿಸಿ ಸ್ಥಳಾಂತರಿಸುವ ಮತ್ತು ಉಳಿದಿರುವವರನ್ನು ಹಾಗೇ ಉಳಿಸಿ, ಹೊಸದಾಗಿ ವಾಣಿಜ್ಯ ಉದ್ದೇಶದ ನಿರ್ಮಾಣಗಳಿಗೆ ಅವಕಾಶ ಆಗದಂತೆ ಖಚಿತವಾಗಿ ತಡೆಯುವ ಬಗ್ಗೆ ಚರ್ಚೆ ನಡೆಸಲಾಯಿತು.

ಪ್ರಾಧಿಕಾರದಲ್ಲಿ ಕೆಲಸ ಮಾಡುವ 66 ಕಾರ್ಮಿಕ ಕುಟುಂಬಗಳಿಗೆ ತಲಾ 20 ಲಕ್ಷ ವೆಚ್ಚದಲ್ಲಿ, ಒಟ್ಟು 12–13 ಕೋಟಿ ವೆಚ್ಚದಲ್ಲಿ ಆದಷ್ಟು ಬೇಗ ನೂತನ ಮನೆ ಕಟ್ಟಿ ಕೊಡಲು ಸಭೆ ನಿರ್ಣಯಿಸಿತು.

ಮಹದೇಶ್ವರ ಬೆಟ್ಟದ ಪ್ರಸಾದ ಲಾಡುಗೆ, ತಿರುಪತಿ ದೇವಸ್ಥಾನದ ಮಾದರಿಯಲ್ಲಿ ನಂದಿನಿ ತುಪ್ಪ ಬಳಸಿ, ಪ್ರಸಾದದ ಗುಣಮಟ್ಟವನ್ನು ಇನ್ನಷ್ಟು ಉನ್ನತೀಕರಿಸುವುದು. ಮುಂದಿನ ದಿನಗಳಲ್ಲಿ 100 ಗ್ರಾಂ ತೂಕದ ಪ್ರಸಾದ ಲಾಡುವನ್ನು ಕೇವಲ 35 ರೂ.ಗೆ ವಿತರಿಸುವ ಬಗ್ಗೆ ಸಭೆ ನಿರ್ಣಯಿಸಿತು.

ಮಲೈ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ಸಭೆಯ ಬಳಿಕ ಮುಖ್ಯಮಂತ್ರಿ ಅವರು ಕೆಲವು ಸೂಚನೆಗಳನ್ನು ನೀಡಿದರು. 2500 ರಿಂದ 4000 ಭಕ್ತರು ಒಟ್ಟಿಗೇ ಕುಳಿತು ನಿತ್ಯ ಪ್ರಸಾದ ಸ್ವೀಕರಿಸುವ ದಾಸೋಹ ಭವನ ನಿರ್ಮಿಸಲು ಪರಿಷ್ಕರಿಸಿದ ಯೋಜನೆ ಸಿದ್ಧಪಡಿಸಿ ಪ್ರಸ್ತುತ ಪಡಿಸಲು, ಮಹದೇಶ್ವರ ಸನ್ನಿಧಿಗೆ ಬರುವ ಭಕ್ತರು ಶೂದ್ರ ಸಮುದಾಯದವರು, ಬಡವರು. ಇವರಿಗೆ ಉತ್ತಮ ವ್ಯವಸ್ಥೆ ಕಲ್ಪಿಸಲು ಹಿಂದೆ ಮುಂದೆ ನೋಡಬಾರದು. ಭಕ್ತಾದಿಗಳಿಗೆ ಉತ್ತಮ ಕುಡಿಯುವ ನೀರು, ಶುಚಿತ್ವದ ಶೌಚಾಲಯ, ಸೌಂದರ್ಯೀಕರಣ, ಉಳಿಯಲು ಸೂಕ್ತ ವ್ಯವಸ್ಥೆ ಕಲ್ಪಿಸುವಲ್ಲಿ ರಾಜಿ ಮಾಡಿಕೊಳ್ಳಬಾರದು. ಹೆಚ್ಚಿನ ಸಂಖ್ಯೆಯ ಶೌಚಾಲಯಗಳನ್ನು ನಿರ್ಮಿಸುವಂತೆ ಮುಖ್ಯಮಂತ್ರಿ ಸೂಚಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಸಾಲೂರು ಮಠದ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಎಂ.ಆರ್. ಮಂಜುನಾಥ್, ಡಾ.ಡಿ. ತಿಮ್ಮಯ್ಯ, ಉನ್ನತ ಅಧಿಕಾರಿಗಳಾದ ಬಿ.ಬಿ. ಕಾವೇರಿ, ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮೋನಾರೋತ್, ಎಸ್‌ಪಿ ಡಾ. ಬಿ.ಟಿ. ಕವಿತಾ, ಪ್ರಾಧಿಕಾರದ ಸದಸ್ಯರು ಹಾಗೂ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಉಳುವವರೇ ಭೂಮಿಯ ಒಡೆಯರು

ಜಾಗ ಖಾಲಿ ಮಾಡಿಸುವಂತೆ ರಾಜವಂಶಸ್ಥರು ಡಿಸಿಗೆ ಪತ್ರ ನೀಡಿರುವುದನ್ನು ಸಿಎಂ ಗಮನಕ್ಕೆ ತಂದ ನಿವಾಸಿಗಳು

ಚಾಮರಾಜನಗರ: ಚಾಮರಾಜನಗರ ಜಿಲ್ಲೆಯಲ್ಲಿ ನೂರಾರು ವರ್ಷಗಳಿಂದ ಬೇಸಾಯ ಮಾಡುತ್ತಿರುವ ಜಮೀನುಗಳಿಗೆ ಉಳುವವರೇ ಒಡೆಯರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಚಾ.ನಗರ ಜಿಲ್ಲೆ ಸಿದ್ದಯ್ಯನಪುರ, ಹರದನಹಳ್ಳಿ ಮತ್ತಿತರೆಡೆ ಇರುವ ಸಾವಿರಾರು ಎಕರೆ ಜಮೀನನ್ನು ತಮಗೆ ಖಾತೆ ಮಾಡುವಂತೆ ಮೈಸೂರು ರಾಜವಂಶಸ್ಥರು ಡಿಸಿಗೆ ಪತ್ರ ನೀಡಿರುವ ಬಗ್ಗೆ ಉತ್ತರಿಸಿದ ಮುಖ್ಯಮಂತ್ರಿಯವರು, ಈಗ ಆ ಜಮೀನುಗಳಲ್ಲಿ ಯಾರು ಉಳುಮೆ ಮಾಡುತ್ತಿದ್ದಾರೆ ಅವರೇ ಒಡೆಯರು. ಅವರಿಗೆ ಖಾತೆ ಮಾಡಿಕೊಡಲಾಗುವುದು ಎಂದರು.

ಬೆಂಗಳೂರು ಕನಕಪುರ ಚಾಮರಾಜನಗರ ರೈಲ್ವೆ ಮಾರ್ಗಕ್ಕೆ ಭೂಮಿ ಕೊಡುತ್ತೇವೆ ಮತ್ತು ಶೇ.50 ಯೋಜನಾ ವೆಚ್ಚವನ್ನೂ ನೀಡಲು ಸಿದ್ಧರಿದ್ದೇವೆ. ಆದರೆ ಕೇಂದ್ರ ಸರ್ಕಾರ ರೈಲ್ವೆ ಮಾರ್ಗ ಮಾಡಲ್ಲ ಎಂದು ಸಿಎಂ ಉತ್ತರಿಸಿದರು. ಶಕ್ತಿ ಯೋಜನೆಯಿಂದ ಬಸ್‌ಗಳಲ್ಲಿ ಒತ್ತಡ ಉಂಟಾಗಿದ್ದು ಜನರು ಓಡಾಡಲು ಕಷ್ಟವಾಗಿದೆ ಎಂಬ ಪ್ರಶ್ನೆಗೆ ಉತ್ತರಿಸಿ, ಇಂದು 80 ಹೊಸ ಬಸ್‌ಗಳನ್ನು ಬಿಡಲಾಗಿದೆ. ಮತ್ತಷ್ಟು ಹೊಸ ಬಸ್‌ಗಳನ್ನು ನೀಡಲಾಗುತ್ತದೆ ಎಂದರು. ಡಾ.ರಾಜ್‌ಕುಮಾರ್ ನಮ್ಮ ಜಿಲ್ಲೆಯವರು. ಮುಂದಿನ ದಿನಗಳಲ್ಲಿ ಅವರ ನೆನಪಿಗೆ ಮ್ಯೂಸಿಯಂ ನಿರ್ಮಾಣ ಮಾಡಲಾಗುವುದು ಎಂದರು.

ಇಂದು ಚಾ.ನಗರದಲ್ಲಿ ಮುಖ್ಯಮಂತ್ರಿಗಳಿಂದ ಬಸವೇಶ್ವರ ಪ್ರತಿಮೆ ಉದ್ಘಾಟನೆ



ಚಾಮರಾಜನಗರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಚಾಮರಾಜನಗರ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ನಿರ್ಮಿಸಿರುವ ಬಸವೇಶ್ವರ ಪ್ರತಿಮೆ ಉದ್ಘಾಟನೆ ಮತ್ತು ಶ್ರೀ ಭಗೀರಥ ಮಹರ್ಷಿ, ಶ್ರೀ ಮಹರ್ಷಿ ವಾಲ್ಮೀಕಿ ಹಾಗೂ ಶ್ರೀ ಕನಕದಾಸರ ಪುತ್ಥಳಿಗಳ ಶಂಕುಸ್ಥಾಪನೆ ಕಾರ್ಯಕ್ರಮ ಏ.25ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ನೆರವೇರಲಿದೆ.

ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸುವರು. ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸುವರು.

ಸಂಪುಟ ಸಭೆಗೆ ಮೂವರು ಸಚಿವರು ಗೈರು


ಚಾಮರಾಜನಗರ: ಜಿಲ್ಲೆಯ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಗೆ ಮೂವರು ಸಚಿವರನ್ನುಳಿದು ಇನ್ನೆಲ್ಲ ಸಂಪುಟ ದರ್ಜೆಯ ಸಚಿವರು ಭಾಗವಹಿಸಿದ್ದರು.

ವಜ್ರಮಲೆ ಭವನದ ಎದುರಿನ ಜರ್ಮನ್ ಟೆಂಟಿನಲ್ಲಿ ಇದೇ ಮೊದಲ ಬಾರಿಗೆ ನಡೆದ ಸಚಿವ ಸಂಪುಟ ಸಭೆ ಮಧ್ಯಾಹ್ನ 12.30ಕ್ಕೆ ಆರಂಭವಾಗಿ ಎರಡು ಗಂಟೆಗಳ ಕಾಲ ನಡೆಯಿತು. ಈ ಸಭೆಯಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಸೇರಿದಂತೆ ಸಂಪುಟದ 30 ಸಚಿವರು ಭಾಗವಹಿಸಿದ್ದರು.

ಸಚಿವರಾದ ಸಂತೋಷ್ ಲಾಡ್, ಪ್ರಿಯಾಂಕ್ ಖರ್ಗೆ, ಮಧು ಬಂಗಾರಪ್ಪ ಸಕಾರಣಗಳಿಂದ ಗೈರು ಹಾಜರಾಗಿದ್ದರು. ಸಂತೋಷ್ ಲಾಡ್ ಅವರು ಕಾಶ್ಮೀರದಲ್ಲಿದ್ದ ಕನ್ನಡಿಗರನ್ನು ಕರೆತರಲು ತೆರಳಿದ್ದಾರೆ. ಮಧು ಬಂಗಾರಪ್ಪ ಅವರು ಕಾಶ್ಮೀರ ಉಗ್ರರ ದಾಳಿಯಿಂದ ಮೃತಪಟ್ಟ ಮಂಜುನಾಥ್ ರಾವ್ ಅವರ ಕುಟುಂಬಕ್ಕೆ ಸಾಂತ್ವನ ಹೇಳಲು ತೆರಳಿದ್ದರು. ಪ್ರಿಯಾಂಕ್ ಖರ್ಗೆ ವಿದೇಶ ಪ್ರವಾಸದಲ್ಲಿದ್ದರಿಂದ ಸಂಪುಟ ಸಭೆಯಲ್ಲಿ ಪಾಲ್ಗೊಂಡಿರಲಿಲ್ಲ. ಬೆಟ್ಟಕ್ಕೆ ಆಗಮಿಸಿದ್ದ ಸಚಿವರು ಮೊದಲಿಗೆ ದೇವಾಲಯಕ್ಕೆ ಭೇಟಿ ನೀಡಿ, ದೇವರ ದರ್ಶನ ಪಡೆದರು. ಅವರನ್ನು ಪ್ರಾಧಿಕಾರದಿಂದ ಮಂಗಳವಾದ್ಯಗಳೊಡನೆ ಸ್ವಾಗತಿಸಲಾಯಿತು.

ಕಾಡಂಚಿನಲ್ಲಿ ಕಚ್ಚಾಬಾಂಬ್‌ನಿಂದ ವನ್ಯಜೀವಿಗೆ ಹಾನಿಯಾಗದಂತೆ ತಡೆಯಲು ಸಚಿವರ ಸೂಚನೆ

ಕೊಳ್ಳೆಗಾಲ, ಏ.24– ಕಾಡುಹಂದಿ ಬೇಟೆಗಾಗಿ ಕಾಡಿನಂಚಿನ ಗ್ರಾಮಗಳಲ್ಲಿ ಕಡಿಮೆ ತೀವ್ರತೆಯ ಕಚ್ಚಾ ಬಾಂಬ್ ಇಡಲಾಗುತ್ತಿದ್ದು, ಇದನ್ನು ಸೇವಿಸಿ ಜಾನುವಾರು ಮತ್ತು ವನ್ಯಜೀವಿಗಳು ಮೃತಪಡುತ್ತಿರುವ ದೂರುಗಳಿದ್ದು, ಈ ಬಗ್ಗೆ ಸೂಕ್ತ ನಿಗಾ ಇಡುವಂತೆ ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ಸೂಚನೆ ನೀಡಿದ್ದಾರೆ.



ಈಶ್ವರ ಖಂಡ್ರೆ

ಕೊಳ್ಳೆಗಾಲದ ಕೀರ್ತಿಚಕ್ರ ಪಿ ಶ್ರೀನಿವಾಸ್ ಅತಿಥಿಗೃಹದಲ್ಲಿಂದು ಅರಣ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕಚ್ಚಾ ಬಾಂಬ್ ತಿಂದು ಹಲವು ಆನೆಯ ಮರಿಗಳೂ ಸ್ಫೋಟವಾಗಿ, ದವಡೆ ಛಿದ್ರವಾಗಿ, ಹಸಿವಿನಿಂದ ಬಳಲಿ ಸಾಯುತ್ತಿವೆ ಎಂದು ವರದಿಯಾಗಿದೆ. ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಆ ರೀತಿ ಬಾಂಬ್ ಇಡುವವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಿ ಎಂದು ನಿರ್ದೇಶಿಸಿದರು.

ಆನೆ ಕಾಡಲ್ಲಿ ಬಿದಿರು; ಕಾವೇರಿ ವನ್ಯಜೀವಿ ವಿಭಾಗದಲ್ಲಿ ಸಮೃದ್ಧವಾಗಿ ಬಿದಿರು ಬೆಳೆಸಲಾಗಿದೆ, ಬಿದಿರು ಸ್ವಾಭಾವಿಕ ಮತ್ತು ಜೈವಿಕ ಬ್ಯಾರಿಕೇಡ್‌ನಂತೆ ಕಾರ್ಯನಿರ್ವಹಿಸುತ್ತದೆ. ಇದು ಆನೆಗಳಿಗೆ ಆಹಾರವೂ ಆಗುತ್ತದೆ. ಜೊತೆಗೆ ಆನೆಗಳು ನಾಡಿಗೆ ಬಾರದಂತೆ ತಡೆಯುತ್ತದೆ. ಇದನ್ನು ಬೇರೆ ವಲಯದಲ್ಲಿ ಬೆಳೆಸಲು ಕ್ರಮ ಕೈಗೊಳ್ಳಿ ಎಂದು ಸೂಚನೆ ನೀಡಿದರು.

ಅರಣ್ಯದೊಳಗಿನ ಹೋಂಸ್ಟೇ, ರೆಸಾರ್ಟ್ ತೆರವಿಗೆ ಸೂಚನೆ : ಅರಣ್ಯದೊಳಗೆ ಮತ್ತು ಸೂಕ್ಷ್ಮ ಪರಿಸರ ವಲಯದಲ್ಲಿ ಹೋಂ ಸ್ಟೇ ಹೆಸರಲ್ಲಿ ಶಾಶ್ವತ ರೆಸಾರ್ಟ್ ಕಟ್ಟಡ ತಲೆ ಎತ್ತುತ್ತಿದೆ ಎಂದು ದೂರುಗಳು ಬಂದಿದ್ದು, ಇವುಗಳ ವಿರುದ್ಧ ಕಾನೂನಾತ್ಮಕವಾಗಿ ಕ್ರಮ ವಹಿಸುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚಿಸಿದರು.

ಶ್ರೀಗಂಧದ ಮರಗಳಿಗೆ ಜಿಯೋ ಟ್ಯಾಗ್ ಮಾಡಿ ಸಂರಕ್ಷಿಸುವಂತೆಯೂ ನಿರ್ದೇಶನ ನೀಡಿದರು.

ಸಭೆಯಲ್ಲಿ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಎಪಿಸಿಸಿಎಫ್ ಕುಮಾರ್ ಪುಷ್ಕರ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹೀರಾಲಾಲ್ ಮೊದಲಾದವರು ಭಾಗಿಯಾಗಿದ್ದರು.

ಉಗ್ರರು ಎಲ್ಲೇ, ಇರಲಿ ಅವರನ್ನು ಮಟ್ಟಹಾಕಿ: ಸಿಎಂ

ಚಾಮರಾಜನಗರ: ಉಗ್ರರು ಎಲ್ಲೇ ಇರಲಿ, ಯಾವ ರಾಜ್ಯದಲ್ಲೇ ಇರಲಿ, ಅವರನ್ನು ಮಟ್ಟ ಹಾಕಬೇಕು. ಕೇಂದ್ರ ಸರ್ಕಾರ ಉಗ್ರರು ಬೆಳೆಯಲಿಕ್ಕೆ, ಅವರು ಚಟುವಟಿಕೆ ಮಾಡಲಿಕ್ಕೆ ಅವಕಾಶ ಕೊಡಬಾರದು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಸಚಿವ ಸಂಪುಟ ಸಭೆಯಲ್ಲಿ ಪಾಲ್ಗೊಳ್ಳುವ ಸಲುವಾಗಿ ಗುರುವಾರ ಬೆಳಿಗ್ಗೆ ಮಲೆ ಮಹದೇಶ್ವರ ಬೆಟ್ಟಕ್ಕೆ ಹೆಲಿಕಾಪ್ಟರ್‌ನಲ್ಲಿ ಆಗಮಿಸಿದ ಅವರು, ಹೆಲಿಪ್ಯಾಡ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದರು.

ಮೊನ್ನೆ ಕಾಶ್ಮೀರದಲ್ಲಿ ನಡೆದಿರುವ ಘಟನೆ ಬಹಳ ಅಮಾನವೀಯ, ಹೇಯ ಘಟನೆ. ಇದನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ. ಈ ಹಿಂದೆ ಪುಲ್ವಾಮಾ ಘಟನೆ ನಡೆದಿತ್ತು. ಕೇಂದ್ರ ಸರ್ಕಾರ ಬಹಳ ಎಚ್ಚರಿಕೆಯಿಂದ ಇರಬೇಕಿತ್ತು. ಸ್ವಲ್ಪವೂ ರಿಲ್ಯಾಕ್ಸ್ ಆಗಬಾರದಿತ್ತು ಈ ಘಟನೆ ನಡೆಯಲು ಗುಪ್ತಚರ ವೈಫಲ್ಯವಿದೆ ಎಂದು ನನಗನಿಸುತ್ತದೆ. ಘಟನೆ ನಡೆಯುವ ಮೊದಲೇ ಕ್ರಮ ಕೈಗೊಳ್ಳಬೇಕಿತ್ತು. ಅದನ್ನು ಕೇಂದ್ರ ಸರ್ಕಾರ ಮಾಡಲಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.


ಪುಲ್ವಾಮಾದಲ್ಲಿ 40 ಮಂದಿ ಭಾರತೀಯ ಸೈನಿಕರು ಮೃತಪಟ್ಟಿದ್ದರು. ಈಗ ಪಹಲ್ಗಾಮ್‌ನಲ್ಲಿ 28 ಜನ ನಾಗರಿಕರು ಸತ್ತಿದ್ದಾರೆ. ಇದನ್ನು ತಪ್ಪಿಸಲು ಪ್ರಯತ್ನ ಮಾಡಬೇಕು. ಇದು ಇನ್ನೊಮ್ಮೆ ಮರುಕಳಿಸದಂತೆ ನೋಡಿಕೊಳ್ಳಬೇಕು. ಉಗ್ರರು ಎಲ್ಲೇ ಇರಲಿ, ಯಾವ ಜಾತಿ ಧರ್ಮಕ್ಕೇ ಸೇರಿರಲಿ, ಅವರೆಲ್ಲರನ್ನೂ ಮಟ್ಟ ಹಾಕಿ ನಾಶ ಮಾಡುವುದು, ಸರ್ಕಾರದ ಜವಾಬ್ದಾರಿ. ಅದಕ್ಕೆ ಬೇಕಾದ ಎಲ್ಲ ಸಹಕಾರವನ್ನು ನಮ್ಮ ಸರ್ಕಾರ, ನಮ್ಮ ಪಕ್ಷ ನೀಡುತ್ತದೆ ಎಂದು ಅವರು ತಿಳಿಸಿದರು.

ಘಟನೆಯಲ್ಲಿ ಮೃತಪಟ್ಟ ಕರ್ನಾಟಕದ ಮೂವರ ಕುಟುಂಬಗಳಿಗೆ ತಲಾ 10 ಲಕ್ಷ ರೂ. ಪರಿಹಾರ ನೀಡಲಾಗುವುದು. ಪೊಲೀಸ್ ಗೌರವದಿಂದ ಅವರ ಅಂತ್ಯಕ್ರಿಯೆ ಮಾಡಲು ಸೂಚಿಸಲಾಗಿದೆ ಎಂದರು.

ಈ ಘಟನೆಯ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿ ಎಚ್ಚರಿಕೆ ವಹಿಸುವಂತೆ ಪೊಲೀಸ್ ಇಲಾಖೆಗೆ ಸೂಚನೆ ನೀಡಿದ್ದೇನೆ ಎಂದರು.

ಮೇಕೆದಾಟು ಯೋಜನೆಗೆ ನಾವು ಸಿದ್ಧ: ಮೇಕೆದಾಟು ಯೋಜನೆ ಮಾಡಲು ನಾವು ತಯಾರಿದ್ದೇವೆ. ಕೇಂದ್ರ ಸರ್ಕಾರ ಒಪ್ಪಬೇಕು. ಕೇಂದ್ರ ಸರ್ಕಾರ ಇಂದು ಒಪ್ಪಿದರೆ ನಾಳೆಯೇ ಮಾಡುತ್ತೇವೆ. ಕೇಂದ್ರ ಸರ್ಕಾರ ತಾವು ಘೋಷಣೆ ಮಾಡಿದ್ದ ಹಣನೇ ಕೊಟ್ಟಿಲ್ಲ. ಭದ್ರಾ ಮೇಲ್ದಂಡೆಗೆ ಬೊಮ್ಮಾಯಿ ಸಿಎಂ ಆಗಿದ್ದಾಗ 5300 ಕೋಟಿ ಘೋಷಣೆ ಮಾಡಿದ್ದರು. ನಿರ್ಮಲಾ ಸೀತಾರಾಮನ್ ಅವರೇ ಬಜೆಟ್‌ನಲ್ಲಿ ಘೋಷಿಸಿದ್ದರು. ಆದರೆ ಆ ಹಣವನ್ನೇ ಕೊಟ್ಟಿಲ್ಲ ಎಂದರು.

'ಡಿ ಡಿ ಢಿಕ್ಕಿ' ಊರುಬಿಟ್ಟು ಬಂದವರ ಕಥೆ..



ಗುರುಶಿಷ್ಯರು, ಲ್ಯಾಂಡ್‌ಲಾರ್ಡ್ ಚಿತ್ರಗಳ ನಿರ್ದೇಶಕ ಹಾಗೂ ಕಾಟೇರ ಕಥೆಗಾರ ಜಡೇಶ್ ಕೆ.ಹಂಪಿ ಈಗ ನಿರ್ಮಾಪಕರಾಗಿದ್ದಾರೆ. ಹೌದು, ಹಂಪಿ ಪಿಕ್ಚರ್ಸ್ ಮೊದಲ ಪ್ರಯತ್ನವಾಗಿ ಡಿ ಡಿ ಢಿಕ್ಕಿ ಎಂಬ ಹೊಸ ಚಿತ್ರವನ್ನು ಪ್ರಾರಂಭಿಸಿದ್ದಾರೆ. ಆರ್‌ಕೆ ಅಂಡ್ ಎಕೆ ಎಂಟರ್‌ಟೈನ್ಮೆಂಟ್ ಸಹಯೋಗದಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರಕ್ಕೆ ನಟಿ ರಂಜನಿ ರಾಘವನ್ ಅವರು ಕಥೆ ಬರೆದು ಮೊದಲ ಬಾರಿಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ನೆನಪಿರಲಿ ಪ್ರೇಮ್ ಚಿತ್ರದ ನಾಯಕನಾಗಿದ್ದು, ಗೋಲ್ಡನ್ ಸ್ಟಾರ್ ಗಣೇಶ್ ಪುತ್ರ ಮಾಸ್ಟರ್ ವಿಹಾನ್ ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದಾರೆ. ತಂದೆ ಮಗನ ಸುತ್ತ ನಡೆವ ಕಥೆ ಇದಾಗಿದ್ದು, ಲೆಜೆಂಡ್ ಇಳಯರಾಜ ಅವರು ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮೋಷನ್ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಡೇಶ್ ಕೆ. ಹಂಪಿ, ರಂಜನಿ ರಾಘವನ್ ಅವರು ಬರೆದಿದ್ದ ಒಂದು ಕಥೆ ಸಿನಿಮಾಗೆ ಹೇಳಿ ಮಾಡಿಸಿದಂತಿತ್ತು. ಅದನ್ನು ಓದಿದ ನಾನು ತರುಣ್ ಸುಧೀರ್ ಜೊತೆ ಚರ್ಚಿಸಿ, ರಂಜನಿ ಅವರೇ ಈ ಚಿತ್ರ ನಿರ್ದೇಶಿಸಿದರೆ ಚೆನ್ನಾಗಿರುತ್ತೆ ಎಂದು ಪ್ಲಾನ್ ಮಾಡಿದೆವು ಎಂದು ವಿವರಿಸಿದರು.

ನಿರ್ದೇಶಕಿ ರಂಜನಿ ರಾಘವನ್ ಮಾತನಾಡುತ್ತಾ, ನಿರ್ದೇಶಕಿಯಾಗಬೇಕೆಂಬುದು ನನ್ನ ಬಹುದಿನಗಳ ಕನಸಾಗಿತ್ತು. ಈ ಚಿತ್ರದ ಮೂಲಕ ನೆರವೇರಿದೆ. ಡಿ ಡಿ ಢಿಕ್ಕಿ ಚಿತ್ರದಲ್ಲಿ ಹಾಸ್ಯದ ಮೂಲಕ ಭಾವನಾತ್ಮಕ ಸನ್ನಿವೇಶಗಳನ್ನು ತೋರಿಸುವ ಪ್ರಯತ್ನ ಮಾಡಿದ್ದೇವೆ. ಲೆಜೆಂಡ್ ಇಳಯರಾಜ ಅವರು ನಾಲ್ಕು ಹಾಡುಗಳಿಗೆ ಸಂಗೀತ ನೀಡಿದ್ದು, ಇದೊಂದು ಸಂಗೀತಪ್ರಧಾನ ಚಿತ್ರವೂ ಆಗಲಿದೆ. ಈಗಾಗಲೇ ಅರ್ಧಕ್ಕೂ ಹೆಚ್ಚು ಮಾತಿನಭಾಗದ ಚಿತ್ರೀಕರಣ ನಡೆಸಿದ್ದೇವೆ ಎಂದರು.

ನಾಯಕನಟ ನೆನಪಿರಲಿ ಪ್ರೇಮ್ ಮಾತನಾಡುತ್ತಾ, ರಂಜನಿ ಅವರು ಒಂದೊಳ್ಳೆ ಕಥೆ ಮಾಡಿಕೊಂಡಿದ್ದಾರೆ. ಇಳಯರಾಜ ಅವರು ಸಂಗೀತ ನೀಡಿರುವುದು ಚಿತ್ರದ ತೂಕವನ್ನು ಮತ್ತಷ್ಟು ಹೆಚ್ಚಿಸಿದೆ. ಈ ಚಿತ್ರದ ಚಿತ್ರೀಕರಣ ಮುಗಿಸಿ ಮನೆಗೆ ಹೋದ ನಂತರ ಚಿತ್ರದ ಸನ್ನಿವೇಶಗಳನ್ನು ನೆನಪಿಸಿಕೊಂಡು ನಾನು ಅತ್ತಿದ್ದೂ ಉಂಟು. ಗಣೇಶ್ ಪುತ್ರ ವಿಹಾನ್ ಕೂಡ ಅದ್ಭುತ ಕಲಾವಿದ. ಏನೇನೋ ಕಾರಣಗಳಿಂದ ತಮ್ಮ ಊರನ್ನು ಬಿಟ್ಟು ಬೆಂಗಳೂರಿಗೆ ಬಂದ ಎಷ್ಟೋ ಜನರನ್ನು ನಾವು ನೋಡಿದ್ದೇವೆ, ನಾವು ಊರು ಬಿಟ್ಟು ಬಂದಿದ್ದು ತಪ್ಪಾಯಿತಾ ಎಂಬ ಪ್ರಶ್ನೆ ಈ ಚಿತ್ರ ನೋಡಿದ ಮೇಲೆ ಮೂಡುವುದಂತೂ ಖಂಡಿತ ಎಂದು ಹೇಳಿದರು.



ಪೂಜಾ ಹೆಗ್ಡೆ

ಸುದೀಪ್‌ಗೆ ನಾಯಕಿ !





ಬಾಲಿವುಡ್‌ನಲ್ಲಿ ಮಿಂಚುತ್ತಿರುವ ಕರಾವಳಿ ಸುಂದರಿ, ಕನ್ನಡತಿ ಪೂಜಾ ಹೆಗ್ಡೆ ಇತ್ತೀಚೆಗೆ ಸಂದರ್ಶನವೊಂದರಲ್ಲಿ ತನಗೂ ಕನ್ನಡ ಸಿನಿಮಾದಲ್ಲಿ ನಟಿಸುವ ಆಸಕ್ತಿಯಿದೆ ಎಂದು ಹೇಳಿಕೊಂಡಿದ್ದರು. ಉತ್ತಮ ಕಥೆ, ತಂಡ ಸಿಕ್ಕರೆ ಖಂಡಿತ ತಾನು ಕನ್ನಡದಲ್ಲಿ ನಟಿಸೋದಾಗಿಯೂ ಅವರು ಹೇಳಿದ್ದರು. ಅದರಂತೆ ಈಗ ಕಿಚ್ಚ ಸುದೀಪ್ ನಟನೆಯ 'ಬಿಲ್ಲಾ ರಂಗ ಭಾಷಾ' ಚಿತ್ರದಲ್ಲಿ ಸುದೀಪ್ ನಾಯಕಿಯಾಗಿ ಪೂಜಾ ಹೆಗ್ಡೆ ಅವರು ನಟಿಸಲಿದ್ದಾರೆ ಎನ್ನುವ ಸುದ್ದಿಯೊಂದು ಚರ್ಚೆಯಾಗುತ್ತಿದೆ.

ಕನ್ನಡದಲ್ಲಿ ನಟಿಸುವಂತೆ ಪೋಷಕರಿಂದಲೂ ನನಗೆ ಒತ್ತಡವಿದೆ. ನಾನು ಕೂಡ ಹಲವು ಕಥೆಗಳನ್ನು ಕೇಳಿದ್ದೇನೆ. ಆದರೆ ಯಾವುದೂ ನನ್ನ ಮನಸಿಗೆ ಇಷ್ಟವಾಗಿಲ್ಲ. ಉತ್ತಮ ಕಥೆ ಸಿಕ್ಕಿದ್ದಲ್ಲಿ ಖಂಡಿತಾ ಕನ್ನಡದಲ್ಲಿ ನಟಿಸೋದಾಗಿಯೂ ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದರು. ಈ ಬೆನ್ನಲ್ಲೇ ಅವರಿಗೆ ಕಿಚ್ಚ ಸುದೀಪ್ ಅವರ ಸಿನಿಮಾದಲ್ಲಿ ನಟಿಸುವ ಅವಕಾಶ ಸಿಕ್ಕಿದೆ ಎನ್ನಲಾಗಿದೆ.

ಈಗಾಗಲೇ ಕಿಚ್ಚ ಸುದೀಪ್ ನಾಯಕನಾಗಿ ನಟಿಸುತ್ತಿರುವ, ಅನೂಪ್ ಭಂಡಾರಿ ನಿರ್ದೇಶನ ಮಾಡುತ್ತಿರುವ 'ಬಿಲ್ಲಾ ರಂಗ ಭಾಷಾ' ಚಿತ್ರದ ಶೂಟಿಂಗ್ ನಡೆಯುತ್ತಿದೆ. ಈ ಚಿತ್ರದಲ್ಲಿ ಪೂಜಾ ಹೆಗ್ಡೆ ಅವರನ್ನು ಸುದೀಪ್ ಜತೆ ನಾಯಕಿಯಾಗಿ ಆಯ್ಕೆ ಮಾಡಿಕೊಂಡಿದ್ದಾರೆ. ಕನ್ನಡದಲ್ಲಿ ಒಳ್ಳೆಯ ಅವಕಾಶಕ್ಕಾಗಿ ಕಾಯ್ತಿದ್ದ ಪೂಜಾ ಅವರೂ ಸಹ ಸುದೀಪ್ ಜತೆ ನಟಿಸಲು ಒಪ್ಪಿದ್ದಾರೆ. ಒಂದು ಸುತ್ತಿನ ಮಾತುಕತೆಯೂ ಆಗಿದೆ ಎನ್ನಲಾಗಿದ್ದು, ಚಿತ್ರತಂಡದ ಕಡೆಯಿಂದ ಅಧಿಕೃತ ಮಾಹಿತಿ ಸಿಗಬೇಕಿದೆ. ಒಂದು ವೇಳೆ ಪೂಜಾ ಹೆಗ್ಡೆ ಸುದೀಪ್‌ಗೆ ನಾಯಕಿಯಾಗೋದು ಫೈನಲ್ ಆದಲ್ಲಿ ಮೊದಲ ಬಾರಿಗೆ ಅವರು ಕನ್ನಡಕ್ಕೆ ಎಂಟ್ರಿ ಕೊಟ್ಟಂತಾಗಲಿದೆ.

ಪ್ರೀತಿ, ಪ್ರೇಮ ಪಂಗನಾಮ

ಕಾಮಿಡಿ ದಿಗ್ಗಜರ ಚಿತ್ರ



ಕಿರುತೆರೆಯಲ್ಲಿ ಎರಡು ದಶಕಕ್ಕೂ ಹೆಚ್ಚು ಕಾಲ 'ಹಾಸ್ಯ ಲಾಸ್ಯ' ಕಾಮಿಡಿ ಕಾರ್ಯಕ್ರಮ ನೀಡುವ ಮೂಲಕ ಮನೆ ಮಾತಾಗಿದ್ದ ಜೋಡಿ ಮುತ್ತುರಾಜ್, ಶ್ರೀಕಂಠು. ತಮ್ಮ ವಿಶಿಷ್ಟ ಹಾವಭಾವದಿಂದಲೇ ವೀಕ್ಷಕರನ್ನು ರಂಜಿಸುತ್ತಾ ಬಂದಿರುವ ಈ ಜೋಡಿ ಇದೀಗ ಪ್ರೀತಿ ಪ್ರೇಮದ ಕಾನ್ಸೆಪ್ಟ್ ಇಟ್ಟುಕೊಂಡು ಪ್ರೀತಿ ಪ್ರೇಮ ಪಂಗನಾಮ ಎಂಬ ಚಿತ್ರ ನಿರ್ಮಿಸಿ ತೆರೆಗೆ ತರುತ್ತಿದ್ದಾರೆ. ಶ್ರೀಕಂಠು ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿರುವ ಈ ಚಿತ್ರಕ್ಕೆ ಗೆಳೆಯ ಮುತ್ತುರಾಜ್ ಬಂಡವಾಳ ಹೂಡಿದ್ದಾರೆ. ಈ ಚಿತ್ರದ ಟೀಸರ್ ಹಾಗೂ ಹಾಡುಗಳ ಬಿಡುಗಡೆ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. ಒಂದು ಚಿತ್ರ ನಿರ್ದೇಶಿಸಬೇಕೆನ್ನುವುದು ಶ್ರೀಕಂಠು ಅವರ ಬಹುಕಾಲದ ಕನಸಾಗಿತ್ತು, ಆ ಕನಸನ್ನು ಗೆಳೆಯ ಡಾ.ಮುತ್ತುರಾಜ್ ನನಸು ಮಾಡಿಕೊಂಡಿದ್ದಾರೆ. ಮೇ 12ಕ್ಕೆ ಈ ಚಿತ್ರ ರಾಜ್ಯಾದ್ಯಂತ ತೆರೆಕಾಣುತ್ತಿದೆ.

ವೇದಿಕೆಯಲ್ಲಿ ಮಾತನಾಡಿದ ಮುತ್ತುರಾಜ್, ನಮ್ಮಿಬ್ಬರ ಸ್ನೇಹ 30 ವರ್ಷಗಳಷ್ಟು ಹಳೇದು, ಕಿರುತೆರೆಯಲ್ಲಿ ಮೊಟ್ಟ ಮೊದಲ ಬಾರಿಗೆ ಕಾಮಿಡಿ ಶೋ ಆರಂಭಿಸಿದೆವು. ಎಲ್ಲೇ ಹೋದರೂ ಜನ ನಮ್ಮನ್ನು ಗುರ್ತಿಸುತ್ತಾರೆ. ಡಾ.ರಾಜ್, ಡಾ.ವಿಷ್ಣುವರ್ಧನ್, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ನಮ್ಮ ಕಾರ್ಯಕ್ರಮಗಳನ್ನು ತಪ್ಪದೆ ನೋಡುತ್ತಿದ್ದರು. ಗೆಳೆಯ ಶ್ರೀಕಂಠು ಡೈರಕ್ಷನ್ ಮಾಡಲು ಆಸೆಪಟ್ಟಿದ್ದರು. ಅದರಂತೆ ನಾನು ಈ ಚಿತ್ರಕ್ಕೆ ಬಂಡವಾಳ ಹೂಡಿದ್ದೇನೆ ಎಂದರು.


ನಿರ್ದೇಶಕ ಶ್ರೀಕಂಠು ಮಾತನಾಡುತ್ತಾ, ಹಿಂದಿನ ಕಾಲದಲ್ಲಿ ಪ್ರೀತಿ ಪ್ರೇಮಕ್ಕೆ ಬೆಲೆ ಇತ್ತು. ಆದರೆ ಇವತ್ತು ಪ್ರೀತಿ ಅನ್ನೋದು ಆರು, ಮೂರು, ಎರಡು, ಒಂದು ತಿಂಗಳು. ಕೊನೆಗೆ ಮೂರೇ ದಿನಕ್ಕೆ ಹಣ ಇಲ್ಲವೆ ಕೊಲೆಯಲ್ಲಿ ಅಂತ್ಯ ಕಾಣುತ್ತದೆ. ಜಾತಿಗಿಂತ ದೊಡ್ಡದು ಪ್ರೀತಿ, ಜಗತ್ತಿನಲ್ಲಿ ಗಂಡು-ಹೆಣ್ಣು ಅಂತ ಎರಡೇ ಜಾತಿ ಇರುವುದು. ಚಿತ್ರದಲ್ಲೂ ನಾವು ಸ್ನೇಹಿತರಾಗೇ ಕಾಣಿಸಿಕೊಂಡಿದ್ದೇವೆ, ಪ್ರೀತಿ ಪ್ರೇಮ ಅನ್ನೋದು ಕೊನೆಗೆ ಪಂಗನಾಮನೇ ಅಂತ ಚಿತ್ರದ ಮೂಲಕ ಹೇಳಹೊರಟಿದ್ದೇವೆ. ನಾವು ಬಡತನದಿಂದ ಬಂದಿದ್ದರೂ, ನಮ್ಮ ಮಕ್ಕಳು ಹಾಗಾಗಬಾರದು. ಅವರನ್ನು ಶ್ರೀಮಂತರನ್ನಾಗಿ ಮಾಡಬೇಕೆಂದು ಹೋದಾಗ ಅದು ನಮಗೇ ಹೇಗೆ ಪಂಗನಾಮವಾಯಿತು ಎಂಬುದನ್ನು ಹಾಸ್ಯದ ಜತೆಗೆ ಸಮಾಜಕ್ಕೆ ಹೇಳುವ ಪ್ರಯತ್ನ ಮಾಡಿದ್ದೇವೆ. ಮುತ್ತುರಾಜ್ ಅವರ ಮಗ ಧೀರಜ್ ಹಾಗೂ ಉದಯ್ ನಾಯಕನಾಗಿ ಕಾಣಿಸಿಕೊಂಡಿದ್ದಾರೆ ಎಂದು ಹೇಳಿದರು.

ಡಯಾನ ಹಾಗೂ ಚೈತ್ರಾ ಚಿತ್ರದ ನಾಯಕಿಯರು. ಕುಮಾರ್ ಈಶ್ವರ್ ಅವರ ಸಂಗೀತ, ಗುರುರಾಜ್ ಅವರ ಛಾಯಾಗ್ರಹಣ ಚಿತ್ರಕ್ಕಿದ್ದು, ಹಾಸನ, ಚಿಕ್ಕಮಗಳೂರು, ಮಡಿಕೇರಿ, ಮೈಸೂರು ಸುತ್ತಮುತ್ತ ಚಿತ್ರೀಕರಿಸಲಾಗಿದೆ. ಸಚಿತ್ ಫಿಲಂಸ್‌ನ ವೆಂಕಟಗೌಡ ಅವರು ಪ್ರೀತಿ ಪ್ರೇಮ ಪಂಗನಾಮ ಚಿತ್ರವನ್ನು ರಿಲೀಸ್ ಮಾಡುತ್ತಿದ್ದಾರೆ.

ಸಿನಿಪದಬಂಧ-574



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು
ವಿಳಾಸ
ದೂರವಾಣಿ ಸಂಖ್ಯೆ

ಎಡದಿಂದ ಬಲಕ್ಕೆ

1. ಶಿವರಾಜ್ ಕುಮಾರ್ - ಅನುಪ್ರಭಾಕರ್ ಅಭಿನಯದ ಚಿತ್ರ 6
6. ಸೇವಂತಿ ಸೇವಂತಿ ಚಿತ್ರದ ಹಾಡೊಂದರ ಸಾಲು ಜಾನಪದ ಗೀತೆಯೂ ಹೌದು ! 9
7. ಆರಾಧನೆ ಚಿತ್ರದ ನಾಯಕಿ 2
8. ಹೆಣ್ಣು - ಗಂಡಿನ ಪೋಷಕರ ನಡುವಿನ ಸ್ಪರ್ಧೆ 5
13. ಮದನ ನಿರ್ಮಿಸಿದ ಪ್ರೀತಿಯ ಭವನ 5
15. ತಿಮ್ಮನಿಗೆ ಕವಿದಿದ್ದು 2
16. ಸಾಕ್ಷಾತ್ಕಾರ ಚಿತ್ರದ ಹಾಡಿಗೂ ತಂಗಾಳಿಯಲ್ಲಿ ನಾನು ತೇಲಿ ಬಂದೆ ಹಾಡಿನ ಚಿತ್ರಕ್ಕೂ ಏನೀ ಸಂಬಂಧ! 9
18. ಗೀತಪ್ರಿಯ ನಿರ್ದೇಶನದ ರಾಜ್ ಕುಮಾರ್ ಚಿತ್ರವನ್ನು ಸ್ತ್ರೀ ರೂಪಗೊಳಿಸಿದರೆ ಜಯಂತಿ ಅಭಿನಯವಿದೆ 6

ಮೇಲಿನಿಂದ ಕೆಳಕ್ಕೆ

1. ವಿಷ್ಣುವರ್ಧನ್ - ಖುಷ್ಬೂವಿನ ಅಂತಕರಣದ ಹಾಡು 5
2. ರಾಜ್ ಕುಮಾರ್ - ಭಾರತಿ ಹಾರ್ಟ್ ಮಿಲನಗೊಂಡಿದೆ 6
3. ಎಲ್ಲರಂತಲ್ಲ ನನ್ನ ಗಂಡ ಚಿತ್ರದ ನಾಯಕಿ 2
4. ವಿಷ್ಣುವರ್ಧನ್ - ಜಯಪ್ರದ ಅವರ ಪ್ರೇಮಕಾವ್ಯ ! 4
5. ಶಿವಣ್ಣನಿಗೂ ರಾಧಿಕಾಳಿಗೂ ಇರುವ ಸಂಬಂಧ ! 4
9. ವೇದಗಳ ಸಂಖ್ಯೆ 3
10. ಅಂಬರೀಷ್ ಅಭಿನಯದಲ್ಲಿ ಒಳಮನಸ್ಸು ಬೆಸೆದುಕೊಂಡಿದೆ 6
11. ಅಂಬಿಯ ಹುಟ್ಟಿನ ಸಂಖ್ಯೆ 4
12. ವಿಷ್ಣು, ಅಂಬಿ,ಲಕ್ಷ್ಮಿ, ಸಾಂಘವಿ ಅಭಿನಯದ ಚಿತ್ರ 4
14. ರಾಜ್ ಕುಮಾರ್ - ಕಲ್ಪನಾ ಪೋಷಿಸಿದ ಪುತ್ರಿ 5
17. ದರ್ಶನ್ - ರಮ್ಯ ಅಭಿನಯದ ಚಿತ್ರ 2

ಸಿನಿ ಪದಬಂಧ 573ರ ಉತ್ತರ

ಮ	ಯೂ	ರ		ಕ	ಲ್ಯಾ	ಣ್	ಕು	ಮಾ	ರ್	
ದು				ನ				ವ		ಮ
ವೆ	ಡ್ಸ್		ವಾ	ಸು		ಮಾ	ವ	ನ	ಮ	ನೆ
ಮ				ನ	ಗಾ	ರಿ		ಮ		ಅ
ದು	ಯಾ	ಕ		ನ		ಕ		ಗ	ಯ್ಯಾ	ಳಿ
ವೆ		ರಿ		ಸು		ಣ್ಣು		ಳು		ಯ
ಮ	ರಾ	ಯ	ಜ			ಹೋ			ಪ್ರೇ	
ದು		ಐ		ಕೆ	ಸ	ರಿ	ನ	ಕ	ಮ	ಲ
ವೆ		ಲ	ಕ್ಷ್ಮಿ			ಮ್ಯಾ			ಸಂ	
		ವ್		ಬೆ	ಸು	ಗೆ		ಗ	ಗ	ನ
	ಆ	ಯು	ಧ						ಮ	

ವಿಜೇತರು: ಹಿತಶ್ರೀ.ಎ, ನಂ.೮, ಅನುಗ್ರಹ ನಿಲಯ, ಎ೮ನೇ ಬ್ಲಾಕ್, ವಾಸು ಲೇಔಟ್, ಆರ್.ಕೆ.ನಗರ, ಮೈಸೂರು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಇಂದಿನಿಂದ ಗ್ಯಾಂಗ್‌ಸ್ಟರ್ ಅಲ್ಲ, ಫ್ರಾಂಕ್‌ಸ್ಟರ್



ಸ್ಫೂರ್ತಿದಾಯಕ ಕಥಾಹಂದರ ಒಳಗೊಂಡ ಆಕ್ಷನ್, ಕಾಮಿಡಿ ಚಿತ್ರ ಗ್ಯಾಂಗ್‌ಸ್ಟರ್ ಅಲ್ಲ ಫ್ರಾಂಕ್‌ಸ್ಟರ್ ಈ ವಾರ ಬಿಡುಗಡೆಯಾಗಿದೆ. ಈ ಹಿಂದೆ ಭಾವಚಿತ್ರ ಎಂಬ ಚಿತ್ರ ನಿರ್ದೇಶಿಸಿದ್ದ ಗಿರೀಶ್ ಕುಮಾರ್ ಈ ಚಿತ್ರಕ್ಕೆ ಆ್ಯಕ್ಷನ್-ಕಟ್ ಹೇಳುವ ಜೊತೆಗೆ ನಾಯಕರಲ್ಲೊಬ್ಬನಾಗಿಯೂ ಕಾಣಿಸಿಕೊಂಡಿದ್ದಾರೆ. ಚಿತ್ರದ ಮತ್ತೊಬ್ಬ ನಾಯಕನಾಗಿ ಉಗ್ರಂ ಖ್ಯಾತಿಯ ತಿಲಕ್ ಶೇಖರ್ ಅಭಿನಯಿಸಿದ್ದಾರೆ. ನಾಯಕಿ ಪಾತ್ರವನ್ನು ವಿರಾನಿಕ ಶೆಟ್ಟಿ ಮಾಡಿದ್ದಾರೆ.

ಇತ್ತೀಚೆಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಿರ್ದೇಶಕ ಕಮ್ ನಟ ಗಿರೀಶ್ ಕುಮಾರ್, ಗ್ಯಾಂಗ್‌ಸ್ಟರ್ ಅಲ್ಲ ಫ್ರಾಂಕ್‌ಸ್ಟರ್, ಯೂಟ್ಯೂಬರ್ ಒಬ್ಬನ ಕಥೆಯಾಗಿದ್ದು, ಫ್ರಾಂಕ್ ವಿಡಿಯೋ ಮಾಡಿಕೊಂಡಿರುವವನ ಸುತ್ತ ನಡೆಯುವ ಘಟನೆಗಳೇ ಚಿತ್ರದ ಕಥಾವಸ್ತು. ಆಕ್ಷನ್, ಕಾಮಿಡಿ ಜಾನರ್‌ನಲ್ಲಿ ಮೂಡಿ ಬಂದಿರುವ ಈ ಚಿತ್ರದಲ್ಲಿ ನಾನೊಬ್ಬ ಫ್ರಾಂಕ್‌ಸ್ಟರ್ ಆಗಿದ್ದರೆ, ತಿಲಕ್ ಅವರು ಗ್ಯಾಂಗ್‌ಸ್ಟರ್ ಆಗಿ ಕಾಣಿಸಿಕೊಂಡಿದ್ದಾರೆ. ಜೀವನದಲ್ಲಿ ಏನಾದರೂ ಸಾಧನೆ ಮಾಡಬೇಕು ಎಂಬುವವರಿಗೆ ನಮ್ಮ ಚಿತ್ರ ಸ್ಫೂರ್ತಿಯಾಗಿರುತ್ತದೆ. ಅಲ್ಲದೆ ಎಲ್ಲರ ಲೈಫ್‌ಗೂ ನಮ್ಮ ಚಿತ್ರ ಕನೆಕ್ಟ್ ಆಗುತ್ತದೆ ಎಂದು ಹೇಳಿದರು.

ನಂತರ ಚಿತ್ರದ ನಾಯಕಿ ವಿರಾನಿಕ ಶೆಟ್ಟಿ ಮಾತನಾಡಿ, ಇದು ನನ್ನ ಆರನೇ ಚಿತ್ರ. ನಾನೀ ಚಿತ್ರದಲ್ಲಿ ಶೃತಿ ಎಂಬ ಕಾಲೇಜ್ ಹುಡುಗಿಯ ಪಾತ್ರ ಮಾಡಿದ್ದೇನೆ. ಈ ತಂಡದ ಜೊತೆ ಕೆಲಸ ಮಾಡಿರುವುದಕ್ಕೆ ಖುಷಿ ಇದೆ. ಫ್ರಾಂಕ್ ವಿಡಿಯೋಗಳ ಮೂಲಕ ಚಿತ್ರದ ಪ್ರಮೋಷನ್ ಮಾಡುತ್ತಿದ್ದೇವೆ. ಚಿತ್ರತಂಡದವರು ನನಗೆ ಗೊತ್ತಿಲ್ಲದಂತೆ ನನ್ನನ್ನು ಫ್ರಾಂಕ್ ಮಾಡಿದ್ದರು. ಆ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ ಎಂದರು. ಕಲಾವಿದರಾದ ಯುವ ಕಿಶೋರ್, ಲೋಕೇಂದ್ರ, ಸೂರಜ್ ತಮ್ಮ ಪಾತ್ರಗಳ ಬಗ್ಗೆ ಮಾಹಿತಿ ನೀಡಿದರು.

ಸುಮಾರು 60 ಸ್ಕ್ರೀನ್‌ಗಳಲ್ಲಿ ರಿಲೀಸಾಗಲಿರುವ ಈ ಚಿತ್ರದಲ್ಲಿ ನಾಲ್ಕು ಹಾಡುಗಳಿದ್ದು, ಜಾನ್ ಕೆನಡಿ ಅವರು ಸಂಗೀತ ಸಂಯೋಜನೆ ಮಾಡಿದ್ದಾರೆ. ಅಜಯ್ ಕುಮಾರ್ ಅವರ ಛಾಯಾಗ್ರಹಣ ಹಾಗೂ ರತೀಶ್ ಕುಮಾರ್ ಅವರ ಸಂಕಲನ ಈ ಚಿತ್ರಕ್ಕಿದೆ. ಉಳಿದ ತಾರಾಗಣದಲ್ಲಿ ಬಲರಾಜವಾಡಿ, ಗಿರೀಶ್ ಬಿಜ್ಜಳ್, ಹೊನ್ನವಳ್ಳಿ ಕೃಷ್ಣ, ಸಂಗೀತ ಅನಿಲ್, ಸುಂದರ್, ರತೀಶ್‌ಕುಮಾರ್, ಮಜಾ ಟಾಕೀಸ್ ಪವನ್, ಹನುಮಂತೇಗೌಡ, ಭವಾನಿ ಪ್ರಕಾಶ್ ಮುಂತಾದವರಿದ್ದಾರೆ.



ಅಂಬೇಡ್ಕರ್ ಅಭಿಮಾನಿಯಾದರೆ ಸಾಲದು ಅನುಯಾಯಿಯಾಗಬೇಕು

ದಲಿತ ಸಮುದಾಯಗಳಿಗೆ ಇನ್ಸ್‌ಪೆಕ್ಟರ್ ಧನಂಜಯ ಕರೆ



ಅಂಬೇಡ್ಕರ್ ಜಯಂತಿಯನ್ನು ಇನ್ಸ್‌ಪೆಕ್ಟರ್ ಧನಂಜಯ ಉದ್ಘಾಟಿಸಿದರು.

ತಿ.ನರಸೀಪುರ, ಏ.24– ಅಂಬೇಡ್ಕರ್ ಅಭಿಮಾನಿಯಾದರೆ ಸಾಲದು. ಅವರ ನಿಜವಾದ ಅನುಯಾಯಿ ಆಗಬೇಕು. ಊರು ಕೇರಿಗಳ ಪ್ರವೇಶ ದ್ವಾರ, ರಸ್ತೆಗಳಲ್ಲಿ ರಾರಾಜಿಸುತ್ತಿರುವ ಅಂಬೇಡ್ಕರ್ ಅವರನ್ನು ಮೊದಲು ಮನೆ ಮನೆಗೆ ಕೊಂಡೊಯ್ಯಬೇಕು ಎಂದು ಇನ್ಸ್‌ಪೆಕ್ಟರ್ ಧನಂಜಯ ದಲಿತ ಸಮುದಾಯಗಳಿಗೆ ಕರೆ ನೀಡಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಗುರುವಾರ ತಾಲೂಕು ದಲಿತ ಸಂಘಟನೆಗಳ ಒಕ್ಕೂಟದಿಂದ ಆಯೋಜಿಸಿದ್ದ ಅಂಬೇಡ್ಕರ್ ಅವರ 134ನೇ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಧಾರ್ಮಿಕ ಕಟ್ಟುಪಾಡುಗಳಲ್ಲಿ ನಮ್ಮನ್ನು ಕಟ್ಟಿ ಹಾಕಿರುವ ದೇವರನ್ನು ಮನೆಯೊಳಗೆ ಇರಿಸಿದ್ದೇವೆ. ಬದುಕನ್ನು ಕಟ್ಟಿಕೊಟ್ಟ ಬಾಬಾ ಸಾಹೇಬರನ್ನು ಅಭಿಮಾನಿಗಳಾಗಿ ಜಯಂತಿ ಉತ್ಸವಗಳಲ್ಲಿ ಮೆರೆಸಿ ಬೀದಿಗಳಲ್ಲಿ ಬಿಟ್ಟು ಇತರರಿಂದ ಅಪಮಾನಿಸಲು ಎಡೆ ಮಾಡಿಕೊಡುತ್ತಿದ್ದೇವೆ ಎಂದು ವಾಜಮಂಗಲ ಘಟನೆಯನ್ನು ಉಲ್ಲೇಖಿಸಿ ವಿಷಾದ ವ್ಯಕ್ತಪಡಿಸಿದರು.

ಅಭಿಮಾನ ಇರುವವರು ಅಂಬೇಡ್ಕರ್ ಅನುಯಾಯಿ ಆಗುವುದು ನಿಜಕ್ಕೂ ಸವಾಲೆ. ಮೊದಲು ಮನೆಯವರನ್ನು, ಬೀದಿಯವರನ್ನು, ಬಳಿಕ ಊರಿನವರನ್ನೇ ಎದುರು ಹಾಕಿಕೊಳ್ಳಬೇಕು. ಈಗಲೂ ಬಹುತೇಕ ಕಡೆ ಅಂಬೇಡ್ಕರ್ ಅಥವಾ ಪರಿಶಿಷ್ಟ ಜಾತಿಯವ ಎಂಬುದನ್ನ ಹೇಳಿಕೊಳ್ಳಲು ಹಿಂಜರಿಕೆ, ಕೀಳರಿಮೆ ಭಾವನೆಯಿದೆ. ಅಂಬೇಡ್ಕರ್ ಅವರ ಬುದ್ಧ ಧರ್ಮದ ಪುನರುತ್ಥಾನದ ಕನಸನ್ನು ಸಾಕಾರಗೊಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಬೌದ್ಧ ಮಂದಿರಗಳನ್ನು ಧ್ಯಾನಕ್ಕೆ, ಗ್ರಂಥಾಲಯ ಹಾಗೂ ಉದ್ಯೋಗ ವಿನಿಮಯ ಕೇಂದ್ರವನ್ನಾಗಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಜಿಪಂ ಮಾಜಿ ಅಧ್ಯಕ್ಷ ಎಸ್.ಎನ್.ಸಿದ್ಧಾರ್ಥ ಮಾತನಾಡಿ, ಅಂಬೇಡ್ಕರ್ ಮೇಲಿನ ಅಭಿಮಾನವನ್ನು ಜಯಂತಿ ಆಚರಣೆ ವೇಳೆ ಕುಣಿದು ಕುಪ್ಪಳಿಸುವ ಮೂಲಕ ವ್ಯಕ್ತಪಡಿಸಿ ಬಿಡುತ್ತಿದ್ದೇವೆ. ಅಂಬೇಡ್ಕರ್ ಚಿಂತನೆಗಳು ಹಾಗೂ ಬದುಕಿನ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಪ್ರಯತ್ನ ಮಾಡುತ್ತಿಲ್ಲ. ಅವರು ತೋರಿದ ಬುದ್ಧನ ಮಾರ್ಗದೆಡೆ ನಡೆಯುವ ಪ್ರಯತ್ನವೂ ಆಗುತ್ತಿಲ್ಲ. ಅಭಿಮಾನ ಇರುವ ಪ್ರತಿಯೊಬ್ಬರೂ ಅಂಬೇಡ್ಕರ್ ಅನುಯಾಯಿ ಆಗುವ ಬಗ್ಗೆ ಚಿಂತನೆ ಮಾಡಬೇಕೆಂದು ಕಿವಿಮಾತು ಹೇಳಿದರು.

ಜನಜಾಗೃತಿ ಸಮಿತಿ ಜಿಲ್ಲಾಧ್ಯಕ್ಷ ಕೆ.ಎನ್.ಪ್ರಭುಸ್ವಾಮಿ, ಸಾನಿಧ್ಯ ವಹಿಸಿದ್ದ ನಳಂದ ಬುದ್ಧ ವಿಹಾರದ ಬೋಧಿರತ್ನ ಬಂತೇಜಿ ಮಾತನಾಡಿದರು. ಒಕ್ಕೂಟದ ಸಂಚಾಲಕ ಬನ್ನಹಳ್ಳಿ ಸೋಮಣ್ಣ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಸಂಚಾಲಕ ಸೋಸಲೆ ರಾಜಶೇಖರಮೂರ್ತಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರಶಸ್ತಿ ಪುರಸ್ಕೃತ ಹಿರಿಯ ಹೋರಾಟಗಾರ ಹರಿಹರ ಆನಂದಸ್ವಾಮಿ ಅವರನ್ನು ಸನ್ಮಾನಿಸಲಾಯಿತು.

ಕದಸಂಸ ರಾಜ್ಯ ವಿಭಾಗೀಯ ಸಂಚಾಲಕ ಆಲಗೂಡು ಚಂದ್ರಶೇಖರ್, ಜಿಲ್ಲಾ ಸಂಘಟನಾ ಸಂಚಾಲಕರಾದ ಯಡದೊರೆ ಮಹದೇವಯ್ಯ, ಆಲಗೂಡು ಶಿವಣ್ಣ, ಕೆಬ್ಬೆಹುಂಡಿ ನಿಂಗರಾಜು, ಯರಗನಹಳ್ಳಿ ಸುರೇಶ್, ಸಿದ್ದರಾಜು, ಮುಖಂಡರಾದ ವಾಟಾಳ್ ನಾಗರಾಜು, ಕೆಂಪಯ್ಯನಹುಂಡಿ ರಾಜು, ಕನಾಯಕನಹಳ್ಳಿ ಮರಿಸ್ವಾಮಿ, ನೆರಗ್ಯಾತನಹಳ್ಳಿ ಮನೋಜ್, ಕರೋಹಟ್ಟಿ ರಜನಿ, ಅರ್ಜುನ್, ವಿನಯ್, ನಿಲಸೋಗೆ ಕುಮಾರ್ ಇತರರಿದ್ದರು.

ಡಾ.ಬಿ.ಆರ್.ಅಂಬೇಡ್ಕರ್ ಒಂದು ಜಾತಿಗೆ ಸೀಮಿತಗೊಂಡಿರುವುದು ದುರದೃಷ್ಟಕರ

ಪ್ರಧಾನ ಸಿವಿಲ್ ನ್ಯಾಯಾಧೀಶ ಸತೀಶ್



ಅಂಬೇಡ್ಕರ್ ಜಯಂತಿಯನ್ನು ಗಣ್ಯರು ಉದ್ಘಾಟಿಸಿದರು.

ನಂಜನಗೂಡು, ಏ.24– ಅಂಬೇಡ್ಕರ್ ಜಯಂತಿಯನ್ನು ಇಡೀ ವಿಶ್ವವೇ ಜ್ಞಾನದ ದಿನವನ್ನಾಗಿ ಆಚರಿಸುತ್ತಿದೆ. ಆದರೆ ದೇಶದ ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಅವರನ್ನು ಒಂದು ಜಾತಿಗೆ ಸೀಮಿತಗೊಳಿಸಿ ಜಾತಿ ನಾಯಕನನ್ನಾಗಿ ಬಿಂಬಿಸಿರುವುದು ದುರದೃಷ್ಟಕರ ಸಂಗತಿ ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶ ಸತೀಶ್ ತಿಳಿಸಿದರು.

ನಗರದ ನ್ಯಾಯಾಲಯದ ಆವರಣದಲ್ಲಿ ವಕೀಲರ ಸಂಘದಿಂದ ಏರ್ಪಡಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯಲ್ಲಿ ಅವರು ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕೇವಲ ಆಚರಣೆಗೆ ಮಾತ್ರ ಸೀಮಿತವಾಗದೆ, ಎಲ್ಲರಲ್ಲೂ ಸಮಾನತೆ, ಸಾಮಾಜಿಕ ನ್ಯಾಯವನ್ನು ಮನಸ್ಸಿನಲ್ಲಿ ಜಾಗೃತಗೊಳಿಸಿ ಚಿಂತನಾ ಕ್ರಾಂತಿ ಮೂಡಿಸುವ ದಿನವಾಗಿದೆ. ಅಂಬೇಡ್ಕರ್ ಅವರು ಕೇವಲ ಭಾಗ್ಯದ ಬಲದಿಂದ ವಿಶ್ವ ವಿಖ್ಯಾತರಾದವರಲ್ಲ. ಬದಲಾಗಿ ಅವರ ವಿಶೇಷ ವ್ಯಕ್ತಿತ್ವ, ಆಳವಾದ ಅಧ್ಯಯನ, ಅನುಪಮ ಪಾಂಡಿತ್ಯ, ಸಾಮಾಜಿಕ ಮತ್ತು ಆರ್ಥಿಕ ಸಮಾನತೆಗಾಗಿ ಜೀವನದುದ್ದಕ್ಕೂ ನಡೆಸಿದ ಹೋರಾಟದಿಂದಾಗಿ ವಿಶ್ವವಿಖ್ಯಾತಿ ಗಳಿಸಿದವರು. ಅಲ್ಲದೆ ರಾಜಕೀಯ ತಜ್ಞ, ಅರ್ಥಶಾಸ್ತ್ರಜ್ಞರಾಗಿ ಸ್ವತಂತ್ರ ಭಾರತದ ಭವಿಷ್ಯವನ್ನು ಪ್ರಬಲವಾಗಿ ರೂಪಿಸಿದ್ದಾರೆ. ಅವರ ಸಂವಿಧಾನದಿಂದಾಗಿ ದೇಶದ ಅನೇಕ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತಿದೆ. ಜೊತೆಗೆ ವೈವಿಧ್ಯತೆಯಿಂದ ಕೂಡಿದ ದೇಶದ ಎಲ್ಲಾ ಪ್ರಜೆಗಳಿಗೂ ರಕ್ಷಣೆ ಒದಗಿಸಿದೆ. ಅಂತಹ ಮಹಾನ್ ನಾಯಕನ ಜನ್ಮ ದಿನಾಚರಣೆಯನ್ನು ಇಡೀ ವಿಶ್ವವೇ ಜ್ಞಾನವೆಂದು ಆಚರಿಸುತ್ತಿದೆ. ಆದರೆ ನಮ್ಮ ದೇಶದ ಕೆಲವು ಪಟ್ಟಭದ್ರ ಹಿತಾಸಕ್ತಿಗಳ ಷಡ್ಯಂತರದಿಂದಾಗಿ ಜಾತಿ ನಾಯಕರಾಗಿ ಬಿಂಬಿತವಾಗಿ ಅವಮಾನಕ್ಕೆ ಒಳಗಾಗಿರುವುದು ದುರದೃಷ್ಟಕರ ಸಂಗತಿ. ವಕೀಲರಾಗಿಯೂ ಸೇವೆ ಸಲ್ಲಿಸಿರುವ ಅಂಬೇಡ್ಕರ್ ಅವರು ಬಡವರ ಪರ ಉಚಿತವಾಗಿ ವಕಾಲತ್ತು ವಹಿಸುತ್ತಿದ್ದರು. ಆದ್ದರಿಂದಲೇ ಅವರನ್ನು ಬಡವರ ಬ್ಯಾರಿಸ್ಟರ್ ಎಂದು ಕರೆಯಲಾಗುತ್ತಿತ್ತು. ಎಲ್ಲರೂ ಅವರು ತೋರಿಸಿದ ದಾರಿಯಲ್ಲಿ ಮುನ್ನಡೆದು ನೊಂದವರಿಗೆ ನ್ಯಾಯ ಒದಗಿಸಿ ಕೊಡುವುದೇ ಅವರಿಗೆ ಸಲ್ಲಿಸುವ ಗೌರವ ಎಂದರು.

ಪ್ರಧಾನ ನ್ಯಾಯಾಧೀಶ ಡಿ.ಕಮಲಾಕ್ಷ ಮಾತನಾಡಿ, ಅಂಬೇಡ್ಕರ್ ಶಿಕ್ಷಣದಿಂದ ಮಾತ್ರ ಅಸ್ಪೃಶ್ಯತೆ, ಲಿಂಗ ತಾರತಮ್ಯ ದೂರವಾಗಲು ಸಾಧ್ಯ ಎಂದು ಬಲವಾಗಿ ನಂಬಿದ್ದರು. ಅಲ್ಲದೆ ಜೀವನದ ಉದ್ದಕ್ಕೂ ಅಸ್ಪೃಶ್ಯತೆ, ಲಿಂಗ ತಾರತಮ್ಯದ ವಿರುದ್ಧ ಹೋರಾಟ ನಡೆಸಿ ಆರ್ಥಿಕ ಮತ್ತು ಸಾಮಾಜಿಕ ಸಮಾನತೆ ತರಲು ಶ್ರಮಿಸಿದ್ದರು. ಅವರ ಸಂವಿಧಾನದಿಂದಾಗಿ ನಾನು ಸೇರಿದಂತೆ ಎಲ್ಲರೂ ಉನ್ನತ ಸ್ಥಾನಕ್ಕೆ ತಲುಪಲು ಸಾಧ್ಯವಾಗಿದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಮಹದೇವಸ್ವಾಮಿ ಮಾತನಾಡಿದರು. ಇದೇ ವೇಳೆ ನ್ಯಾಯಾಲಯದ ಆವರಣದಲ್ಲಿ ಮಹಿಳಾ ವಿಶ್ರಾಂತಿ ಗೃಹ ಉದ್ಘಾಟಿಸಲಾಯಿತು. ಅಕಾಲಿಕ ಮರಣಕ್ಕೀಡಾದ ವಕೀಲ ಮಹೇಶ್ ಕುಟುಂಬಕ್ಕೆ ಪರಿಹಾರ ವಿತರಿಸಲಾಯಿತು. ಹಿರಿಯ ವಕೀಲ ಮುನಿಸುವ್ರತ ಅವರನ್ನು ಸನ್ಮಾನಿಸಲಾಯಿತು. ಸಮಾರಂಭದಲ್ಲಿ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಶಶಿಕಲಾ, ಕೃತಿಕಾ, ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಎಂ.ಕೆ.ಬಸವಣ್ಣ, ಉಪಾಧ್ಯಕ್ಷ ಕೆಂಪರಾಜು, ಸರ್ಕಾರಿ ಅಭಿಯೋಜಕರಾದ ಚಂದ್ರಶೇಖರ್, ಉಮಾ ಲಕ್ಷ್ಮಿ, ದುರ್ಗಾಶ್ರೀ, ವಕೀಲರಾದ ನಾಗರಾಜಯ್ಯ, ರವಿ, ಶ್ರೀನಿವಾಸ್, ಸೋಮಶೇಖರ್, ಸುರೇಶ್ ಸೇರಿದಂತೆ ವಕೀಲರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮಹಿಳೆಯರ ಹಕ್ಕುಗಳಿಗಾಗಿ ಹೋರಾಡಿದ ಡಾ.ಅಂಬೇಡ್ಕರ್

ಹುಣಸೂರು, 24– ಅಂಬೇಡ್ಕರ್ ಮಹಿಳೆಯರ ಹಕ್ಕುಗಳಿಗಾಗಿ ಹೋರಾಡಿದ ಮಹಾನ್ ಮಾನವತಾವಾದಿ ಎಂದು ಡಾ.ಅಂಬೇಡ್ಕರ್ ಪ್ರಶಸ್ತಿ ಪುರಸ್ಕೃತ ಹರಿಹರ ಆನಂದಸ್ವಾಮಿ ತಿಳಿಸಿದರು.

ತಾಲೂಕಿನ ರತ್ನಪುರಿಯ ಉದ್ದೂರ್ ಕಾವಲ್ ಗ್ರಾಪಂನಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಸರ್ಕಾರ ನನ್ನನ್ನು ಗುರುತಿಸಿ ಪ್ರಶಸ್ತಿ ನೀಡಿರುವುದು ಸಂತಸದ ವಿಷಯ. ಅಲ್ಲದೇ ನನಗೆ ಇನ್ನೂ ಹೋರಾಟ ಮಾಡುವ ಛಲ ನೀಡಿದೆ. ಇದಕ್ಕಾಗಿ ಸಿದ್ದರಾಮಯ್ಯ ಸರ್ಕಾರಕ್ಕೆ ಆಭಾರಿಯಾಗಿದ್ದೇನೆ ಎಂದರು.

ಪುರುಷ ಪ್ರಧಾನ ಸಮಾಜದಲ್ಲಿ ಮಾನವೀಯತೆ ಸಂಪೂರ್ಣವಾಗಿ ನೆಲ ಕಚ್ಚಿದಾಗ ಮಹಿಳೆಯರ ಹಕ್ಕುಗಳಿಗಾಗಿ ಅಂಬೇಡ್ಕರ್ ಹೋರಾಡಿ ಮಾನವೀಯ ಮೌಲ್ಯಗಳಿಗೆ ಪುನರುಜ್ಜೀವನ ನೀಡಿದರು ಎಂದರು. ಗ್ರಾಪಂ ಸದಸ್ಯ ಮನುಕುಮಾರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷೆ ಪದ್ಮಮ್ಮ, ಉಪಾಧ್ಯಕ್ಷೆ ಶಾಂತಿ, ಮಾಜಿ ಅಧ್ಯಕ್ಷರಾದ ನಂದೀಶ್, ವೀರಭದ್ರಸ್ವಾಮಿ, ಮುಬಾರಕ್ ಭಾನು, ಸದಸ್ಯರಾದ ವಿಜೇಂದ್ರ ಕುಮಾರ್, ಗೋವಿಂದಶೆಟ್ಟಿ, ರಾಮುಬೋವಿ, ಗೌರಮ, ಶೋಭಾ, ಮೀನಾ, ರತ್ನಮ್ಮ, ಪಿಡಿಓ ಅರುಣ್, ಗ್ರಾಮ ಲೆಕ್ಕಿಗ ಕಿರಣ್ ಕುಮಾರ್ ಸೇರಿದಂತೆ ಅನೇಕರಿದ್ದರು.

ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ಖಂಡಿಸಿ ಪ್ರತಿಭಟನೆ



ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಖಂಡಿಸಿ ಪ್ರತಿಭಟನೆ ನಡೆಸಲಾಯಿತು.

ನಂಜನಗೂಡು, ಏ.24– ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿ ಖಂಡಿಸಿ, ಉಗ್ರರ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಪ್ರತಿಭಟಿಸಿದರು.

ನಗರದ ಚಿಂತಾಮಣಿ ಗಣಪತಿ ದೇವಾಲಯದ ಬಳಿ ಜಮಾಯಿಸಿದ ಬಿಜೆಪಿ ಕಾರ್ಯಕರ್ತರು, ಮೇಣದ ಬತ್ತಿ ಹಚ್ಚಿ ಉಗ್ರರ ದಾಳಿಗೆ ಬಲಿಯಾದ 26 ಜನರ ಆತ್ಮಕ್ಕೆ ಶಾಂತಿ ಕೋರಿದರು.

ರಾಜ್ಯ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ ಮಾತನಾಡಿ, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಹಿಂದೂಗಳನ್ನು ಗುಂಡಿಟ್ಟು ಕೊಂದಿರುವ ಘಟನೆ ಅಮಾನವೀಯವಾದುದು. ಉಗ್ರಗಾಮಿಗಳು ಪ್ರವಾಸಿಗರ ಧರ್ಮ ಕೇಳಿ, ದಾಖಲೆ ನೋಡಿ ಹಿಂದೂ ಎಂದು ಖಾತ್ರಿಪಡಿಸಿಕೊಂಡು ಕುಟುಂಬದವರ ಕಣ್ಣೆದುರಿಗೆ ಗುಂಡಿಟ್ಟು ಕೊಂದಿದ್ದಾರೆ. ನಿಶಸ್ತ್ರರಾಗಿದ್ದ ಪ್ರವಾಸಿಗರ ಮೇಲೆ ದಾಳಿ ನಡೆಸಿ ಹೇಡಿತನ ಪ್ರದರ್ಶಿಸಿದ್ದಾರೆ. ಕೇವಲ ಹಿಂದೂಗಳನ್ನು ಗುರಿಯಾಗಿಸಿಕೊಂಡು ದೇಶದಲ್ಲಿ ನಡೆಯುತ್ತಿರುವ ಹಿಂಸಾಚಾರ ಕೊನೆಗೊಳ್ಳಬೇಕು. ನೇರವಾಗಿ ನಮ್ಮೊಂದಿಗೆ ಯುದ್ಧ ಮಾಡಲು ಸಾಧ್ಯವಿಲ್ಲದ ಹೇಡಿ ಪಾಕಿಸ್ತಾನ ಇಂತಹ ಕೃತ್ಯ ನಡೆಸಿದೆ. ಕೇಂದ್ರ ಸರ್ಕಾರ ಉಗ್ರಗಾಮಿಗಳ ಹುಟ್ಟಡಗಿಸಬೇಕು. ಆ ಮೂಲಕ ಘಟನೆಯಲ್ಲಿ ಪ್ರಾಣ ಕಳೆದುಕೊಂಡ ದೇಶ ಬಾಂಧವರ ಆತ್ಮಗಳಿಗೆ ಸದ್ಗತಿ ದೊರೆಯಲಿದ್ದು, ತಮ್ಮವರನ್ನು ಕಳೆದುಕೊಂಡ ಕುಟುಂಬಗಳೊಂದಿಗೆ ಇಡೀ ದೇಶ ನಿಲ್ಲಲಿದೆ ಎಂದರು.

ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ ಮಾತನಾಡಿ, ಪೈಶಾಚಿಕ ಕೃತ್ಯ ನಡೆಸಿದ ಉಗ್ರಗಾಮಿಗಳ ವಿರುದ್ಧ ಕೇಂದ್ರ ಸರ್ಕಾರ ಉಗ್ರ ಕ್ರಮ ಕೈಗೊಳ್ಳಬೇಕು. ನಮ್ಮ ಸೈನ್ಯ, ಪ್ರಧಾನಿ ಮೋದಿ ಈ ಸೇಡನ್ನು ತೀರಿಸುತ್ತಾರೆ. ಉಗ್ರಗಾಮಿ ಗಳನ್ನು ಸಲಹುತ್ತಿರುವ ಪಾಕಿಸ್ತಾನದ ವಿರುದ್ದ ಕೇಂದ್ರ ಸರ್ಕಾರ ಕಠಿಣ ಕ್ರಮ ಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ನಿವೃತ್ತ ಸೈನಿಕ ಹರಿನಾರಾಯಣ, ಮುಖಂಡರಾದ ಶ್ರೀನಿವಾಸರೆಡ್ಡಿ, ಬಾಲಚಂದ್ರ, ನಗರಸಭೆ ಸದಸ್ಯರಾದ ಹೆಚ್.ಎಸ್.ಮಹದೇವಸ್ವಾಮಿ, ಸಿದ್ದರಾಜು, ಮಹೇಶ್, ಮುಖಂಡರಾದ ಎನ್.ಸಿ.ಬಸವಣ್ಣ, ಗುರುಸ್ವಾಮಿ, ಮಧುರಾಜ್, ಸಿದ್ದರಾಜು, ಗಿರೀಶ್, ರಾಜು, ರಾಘವೇಂದ್ರ ಜಯರಾಮ ಹಲವರಿದ್ದರು.

ಅಸ್ವಾಳು ಡೈರಿಗೆ ನಿರ್ದೇಶಕರ ಆಯ್ಕೆ



ಡೈರಿ ನೂತನ ನಿರ್ದೇಶಕರನ್ನು ಅಭಿನಂದಿಸಲಾಯಿತು.

ಹುಣಸೂರು, ಏ.24– ತಾಲೂಕಿನ ಅಸ್ವಾಳು ಡೈರಿ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರು ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.

ಸಂಘದ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ನಿರ್ದೇಶಕರಾಗಿ ರುದ್ರೇಗೌಡ, ಸ್ವಾಮಿಗೌಡ, ಜಗದೀಶ್, ಬಸವರಾಜು, ಮೇಲುಸ್ವಾಮಿ ಜಯಲಕ್ಷ್ಮಿ, ಜಯಣ್ಣ, ಕಾಮಾಕ್ಷಮ್ಮ, ಪದ್ಮಮ್ಮ, ವಿಶ್ವಕಂಠಮೂರ್ತಿ, ಮಹದೇವ್ ಆಯ್ಕೆಯಾಗಿದ್ದಾರೆ.

ಶಾಸಕ ಜಿ.ಡಿ.ಹರೀಶ್‌ಗೌಡ ಮಾತನಾಡಿ, ಆಡಳಿತ ಮಂಡಳಿಯನ್ನು ಆಯ್ಕೆ ಮಾಡಿದ ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವ ಸದಸ್ಯರಿಗೆ ಅಭಿನಂದನೆ ತಿಳಿಸುತ್ತೇನೆ. ಮುಂದಿನ ದಿನಗಳಲ್ಲಿ ಎಲ್ಲಾ ನಿರ್ದೇಶಕರ ವಿಶ್ವಾಸ ಪಡೆದು ಹಾಲು ಉತ್ಪಾದಕರ ಘಟಕವನ್ನು ಅಭಿವೃದ್ಧಿ ಪಡಿಸುವ ಜೊತೆಗೆ ಹಾಲು ಉತ್ಪಾದಕರಿಗೆ ಎಲ್ಲಾ ರೀತಿಯ ಅನುಕೂಲ ಕಲ್ಪಿಸಿ ಅಭಿವೃದ್ಧಿಗೆ ಪೂರಕವಾದ ಅನುದಾನ ನೀಡುವ ಭರವಸೆ ನೀಡಿದರು. ಈ ವೇಳೆ ಮುಖಂಡರಾದ ಕೆಂಪೇಗೌಡ, ಡೈರಿ ಮಾಜಿ ಅಧ್ಯಕ್ಷ ಸುರೇಶ್, ಕಾಳಂಗೇಗೌಡ, ರಮೇಶ್, ನಿಂಗಣ್ಣ, ಗ್ರಾಮಸ್ಥರು ಹಾಜರಿದ್ದರು.

ನೇಮಕ



ಹುಣಸೂರು, ಏ.24– ಕೆಪಿಸಿಸಿ ಅಧ್ಯಕ್ಷರ ಅನುಮೋದನೆ, ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್ ಶಿಫಾರಸ್ಸಿನ ಮೇರೆಗೆ ಆರ್.ಪರಮೇಶ್ ಅವರನ್ನು ಹುಣಸೂರು ಬ್ಲಾಕ್ ಕಾಂಗ್ರೆಸ್ ಬೀದಿ ಬದಿ ವ್ಯಾಪಾರಿಗಳ ವಿಭಾಗದ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.

ಗ್ರಾಮೀಣ ವಿದ್ಯಾರ್ಥಿಗಳಿಗಾಗಿ ಉದ್ಯೋಗ ಮೇಳ ಆಯೋಜನೆ

ಕೋಟೆ ಸರ್ಕಾರಿ ಕಾಲೇಜಿನ ಪ್ರಾಂಶುಪಾಲ ಅರುಣ್ ಕುಮಾರ್



ಉದ್ಯೋಗ ಮೇಳವನ್ನು ಪ್ರಾಂಶುಪಾಲ ಅರುಣ್ ಕುಮಾರ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಏ.24– ಗ್ರಾಮೀಣ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಅರುಣ್ ಕುಮಾರ್ ತಿಳಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ನಡೆದ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ಕೆಲ ಪೋಷಕರು ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ವಿದ್ಯಾಭ್ಯಾಸ ಕೊಡಿಸಲು ಹಿಂಜರಿಯುತ್ತಾರೆ. ಆದರೆ ಇದೀಗ ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣ ಮಕ್ಕಳಿಗೆ ಸಿಗುತ್ತಿದೆ ಎಂದರು.

ನಮ್ಮ ಕಾಲೇಜಿನಲ್ಲಿ ಶಿಕ್ಷಣ ಪಡೆದ ಎಷ್ಟೋ ಬಡ ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಸರ್ಕಾರಿ ಕಾಲೇಜುಗಳಲ್ಲಿ ಉದ್ಯೋಗ ಮೇಳ ನಡೆಸುವುದು ಕಡಿಮೆ. ಹೀಗಾಗಿ ನಮ್ಮ ಕಾಲೇಜಿನಲ್ಲಿ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಗ್ರಾಮೀಣ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಮೇಳದಲ್ಲಿ ಭಾಗವಹಿಸಿದ್ದ 150ಕ್ಕೂ ಹೆಚ್ಚು ವಿದ್ಯಾರ್ಥಿಗಳ ಪೈಕಿ 80 ಮಂದಿಗೆ ಉದ್ಯೋಗ ದೊರೆಯಿತು. ಈ ವೇಳೆ ವಿವಿಧ ಕಂಪನಿಗಳ ಮುಖ್ಯಸ್ಥರಾದ ಪ್ರಗತಿಗೌಡ, ದಿವ್ಯ ಆಚಾರ್, ಕವಿತ, ಮಾದು, ರಿವೇದ್ ಗೌಡ, ನವೀನ್, ಪೃಥ್ವಿಕ್, ಉಪನ್ಯಾಸಕರಾದ ಕಾತ್ಯಾಯಿನಿ, ಗುರುದತ್ ಕಾಮತ್, ಡಿ.ಎಸ್.ನಿಂಗರಾಜು, ಕೃಪ, ಪುಟ್ಟರಾಜು, ಬಾಲಾಜಿ, ಕೆಂಪರಾಜು, ರಾಜಶೇಖರ್, ಪೂರ್ಣಿಮಾ, ಮಂಜುನಾಥ್, ಎಂ.ರವಿಕುಮಾರ್, ಚಂದ್ರಮ್ಮ, ಸೌಮ್ಯ, ವಿದ್ಯಾಶ್ರೀ, ಸಂಗೀತ, ಬಾಲಾಜಿ ಇನ್ನಿತರರಿದ್ದರು.

ಏ.30ಕ್ಕೆ ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಣೆ



ಪೂರ್ವಭಾವಿ ಸಭೆಯಲ್ಲಿ ಶಾಸಕ ಡಿ.ರವಿಶಂಕರ್ ಮಾತನಾಡಿದರು.

ಕೆ.ಆರ್.ನಗರ, ಏ.24– ಪಟ್ಟಣದ ಬಸವೇಶ್ವರ ಬಡಾವಣೆಯ ಮಹದೇಶ್ವರ ದೇವಾಲಯದ ಆವರಣ ಮತ್ತು ಸಾಲಿಗ್ರಾಮ ತಾಲೂಕು ಕಚೇರಿಯಲ್ಲಿ ಜಗಜ್ಯೋತಿ ಬಸವೇಶ್ವರರ ಜಯಂತಿ ಆಚರಿಸಲು ನಿರ್ಧರಿಸಲಾಯಿತು.

ಇಲ್ಲಿನ ತಾಲೂಕು ಕಚೇರಿ ಕೃಷ್ಣರಾಜೇಂದ್ರ ಸಭಾಂಗಣದಲ್ಲಿ ಶಾಸಕ ಡಿ.ರವಿಶಂಕರ್ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಶಾಸಕ ಡಿ.ರವಿಶಂಕರ್ ಮಾತನಾಡಿ, ಏ.30 ರಂದು ಸಾಲಿಗ್ರಾಮ ಮತ್ತು ಕೆ.ಆರ್.ನಗರ ತಾಲೂಕು ಕೇಂದ್ರಗಳಲ್ಲಿ ಬಸವ ಜಯಂತಿ ಆಚರಿಸಲಾಗುವುದು. ಮುಂದಿನ ದಿನಗಳಲ್ಲಿ ವೀರಶೈವ ಸಂಘಟನೆಗಳ ಪ್ರಮುಖರ ಸಲಹೆ ಪಡೆದು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಬಸವ ಜಯಂತಿ ಆಚರಿಸಲು ನಾನು ಬದ್ಧನಾಗಿದ್ದೇನೆ ಎಂದು ಪ್ರಕಟಿಸಿದರು.

ಜಗತ್ತಿಗೆ ಕಾಯಕ ತತ್ವದ ಸಂದೇಶ ಸಾರಿದ ಬಸವಣ್ಣನವರು ಯುಗ ಯೋಗಿಯಾಗಿದ್ದು, ಆ ಮಹಾಪುರುಷನ ಜಯಂತಿ ಆಚರಣೆ ಮಾಡುವುದರ ಜತೆಗೆ ಅವರ ತತ್ವ ಮತ್ತು ಸಿದ್ಧಾಂತಗಳನ್ನು ಮೈಗೂಡಿಸಿಕೊಳ್ಳುವಂತೆ ಕರೆ ನೀಡಿದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಕೆ.ಎಸ್.ಮಹೇಶ್, ತಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಎಪಿಎಂಸಿ ಮಾಜಿ ಅಧ್ಯಕ್ಷ ನಟರಾಜು, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿ.ಪಿ. ರಮೇಶ್, ವೀರಶೈವ ಮುಖಂಡರಾದ ಎಲ್.ಪಿ.ರವಿ ಕುಮಾರ್ ಮತ್ತಿತರರು ಮಾತನಾಡಿ ಜಯಂತಿ ಆಚರಣೆ ಸಂಬಂಧ ಹಲವು ಸಲಹೆ ಮತ್ತು ಸೂಚನೆ ಗಳನ್ನು ನೀಡಿದರು.

ಪುರಸಭೆ ಸದಸ್ಯರಾದ ಪ್ರಕಾಶ್, ಶಂಕರಸ್ವಾಮಿ, ಜಿಲ್ಲಾ ಪರಿಷತ್ ಮಾಜಿ ಉಪಾಧ್ಯಕ್ಷ ಹೆಚ್.ಕೆ. ಸುಬ್ಬಯ್ಯ, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಎನ್.ಸಿ.ಪ್ರಸಾದ್, ರಾಜ್ಯ ರೈತ ಪರ್ವ ಸಂಘಟನೆ ಉಪಾಧ್ಯಕ್ಷ ಎಂ.ಜೆ.ಕುಮಾರ್, ಗ್ರಾಪಂ ಮಾಜಿ ಸದಸ್ಯ ಸಿ.ಎ.ರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್.ಮಹದೇವ್, ಉದಯಶಂಕರ್, ನಗರಾಧ್ಯಕ್ಷ ಎಂ.ಜೆ.ರಮೇಶ್, ವಕ್ತಾರ ಸೈಯದ್ ಜಾಬೀರ್, ತಹಸೀಲ್ದಾರಾದ ಜಿ.ಸುರೇಂದ್ರ ಮೂರ್ತಿ, ಎಸ್.ನರಗುಂದ, ಇಓ ವಿ.ಪಿ.ಕುಲದೀಪ್, ಬಿಇಓ ಆರ್.ಕೃಷ್ಣಪ್ಪ, ಪುರಸಭೆ ಮುಖ್ಯಾಧಿಕಾರಿ ವಿ.ಬಿ.ವೆಂಕಟೇಶ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಕೆ.ಜೆ.ಮಲ್ಲಿಕಾರ್ಜುನ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ವೀರಶೈವ ಸಮಾಜದ ಮುಖಂಡರು ಹಾಜರಿದ್ದರು.

ಮೇ 9ಕ್ಕೆ ಸಿಎಂ, ಡಿಸಿಎಂ ಭೇಟಿ

ಕೆ.ಆರ್.ನಗರ: ಮುಂಬರುವ ಮೇ 9ರಂದು ಪಟ್ಟಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಇತರ ಸಚಿವರು ಆಗಮಿಸಲಿದ್ದಾರೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಇಲ್ಲಿನ ತಾಲೂಕು ಕಚೇರಿ ಕೃಷ್ಣರಾಜೇಂದ್ರ ಸಭಾಂಗಣದಲ್ಲಿ ನಡೆದ ಬಸವ ಜಯಂತಿ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಅಂದು ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳು ವಿವಿದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದರು.

ಈ ಸಂಬಂಧ ಈಗಾಗಲೇ ಪೂರ್ವ ಸಿದ್ಧತೆಗಳು ನಡೆಯುತ್ತಿದ್ದು ಸಿಎಂ, ಡಿಸಿಎಂ ಜೊತೆಗೆ ಜಿಲ್ಲಾ ಉಸ್ತುವಾರಿ ಸಚಿವರು, ಹಾಗೂ ಕಾಮಗಾರಿ ಉದ್ಘಾಟನೆಗಳಿಗೆ ಸಂಬಂಧಿತ ಇಲಾಖೆಗಳ ಸಚಿವರು ಪಾಲ್ಗೊಳ್ಳಲಿದ್ದಾರೆ ಎಂದರು.

ಕಾಂಗ್ರೆಸ್‌ಗೆ ಬಲ ತುಂಬಲು, ಮುಖ್ಯಮಂತ್ರಿ ಸಿದ್ದರಾಮಯ್ಯ ನಾಯಕತ್ವಕ್ಕೆ ಚೈತನ್ಯ ನೀಡಲು

ರಾಷ್ಟ್ರೀಯ ಅಹಿಂದ ಒಕ್ಕೂಟದ ಪದಾಧಿಕಾರಿಗಳು ಕಾರ್ಯ ನಿರ್ವಹಿಸಿ



ಪದಾಧಿಕಾರಿಗಳಿಗೆ ಬಿ.ಶಿವಣ್ಣ ನೇಮಕಾತಿ ಆದೇಶ ಪತ್ರ ವಿತರಿಸಿದರು.

ತಿ.ನರಸೀಪುರ, ಏ.24– ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಲ ತುಂಬಲು, ಸಿಎಂ ಸಿದ್ದರಾಮಯ್ಯ ಅವರ ನಾಯಕತ್ವಕ್ಕೆ ಚೈತನ್ಯ ನೀಡಲು ರಾಷ್ಟ್ರೀಯ ಅಹಿಂದ ಒಕ್ಕೂಟದ ಪದಾಧಿಕಾರಿಗಳು ಜನರ ಹಿತ ಕಾಪಾಡಲು ಸಮಾಜ ಸೇವಾ ಕಾರ್ಯಗಳನ್ನು ನಿರ್ವಹಿಸಬೇಕು ಎಂದು ರಾಜ್ಯ ಕಾರ್ಯಾಧ್ಯಕ್ಷ ಕುಪ್ಪರವಳ್ಳಿ ಬಿ.ಶಿವಣ್ಣ ಕರೆ ನೀಡಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ಬುಧವಾರ ರಾಷ್ಟ್ರೀಯ ಅಹಿಂದ ಒಕ್ಕೂಟದ ತಾಲೂಕು ನೂತನ ಪದಾಧಿಕಾರಿಗಳಿಗೆ ನೇಮಕಾತಿ ಆದೇಶ ಪತ್ರ ವಿತರಿಸಿ, ರಾಜ್ಯ ಮತ್ತು ಜಿಲ್ಲಾ ಘಟಕ ಪದಾಧಿಕಾರಿಗಳನ್ನು ಸನ್ಮಾನಿಸಿ ಮಾತನಾಡಿದ ಅವರು ಒಕ್ಕೂಟದ ಪ್ರತಿಯೊಬ್ಬ ಪದಾಧಿಕಾರಿ ಸ್ಥಳೀಯ ಜನರ ಸಮಸ್ಯೆಗಳನ್ನು ಆಲಿಸಿ ಜನಪ್ರತಿನಿಧಿಗಳು ಮತ್ತು ಆಡಳಿತ ವರ್ಗದ ಗಮನಕ್ಕೆ ತರಬೇಕು. ಆ ಮೂಲಕ ರಾಜ್ಯ ಸರ್ಕಾರದ ಸೌಲಭ್ಯಗಳನ್ನು ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಕಿವಿ ಮಾತು ಹೇಳಿದರು.

ಸಾಮಾಜಿಕ ಮತ್ತು ರಾಜಕೀಯ ಕ್ಷೇತ್ರಗಳಲ್ಲಿ 2ನೇ ಹಂತದ ನಾಯಕತ್ವ ಬೆಳೆಯಬೇಕು. ಯುವ ಜನತೆಯಲ್ಲಿ ನಾಯಕತ್ವ ಬೆಳೆಯುವಲ್ಲಿ ಅಹಿಂದ ಸಂಘಟನೆ ಸೂಕ್ತ ಮಾರ್ಗದರ್ಶನ ನೀಡಲಿದೆ. ರಾಜಕೀಯ ಚಿಂತನೆಗಳನ್ನು ಉತ್ತಮ ಕಾರ್ಯಗಳಿಗೆ ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು. ಸಂಘಟನೆಯಲ್ಲಿ ಗುರುತಿಸಿಕೊಂಡಿರುವ ಪದಾಧಿಕಾರಿಗಳು ಸಮಾಜವನ್ನು ಶೈಕ್ಷಣಿಕವಾಗಿ ಜಾಗೃತಿಗೊಳಿಸುವ ಕೆಲಸವನ್ನು ಮಾಡಬೇಕೆಂದು ತಿಳಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕನ್ನಾಯಕನಹಳ್ಳಿ ಕುಮಾರ್ ರಾಮೇಗೌಡ ಮಾತನಾಡಿ, ಅಂಬೇಡ್ಕರ್ ವಿಚಾರಗಳಲ್ಲಿ ನಂಬಿಕೆಯಿಟ್ಟು, ಡಿ.ದೇವರಾಜ ಅರಸು ಹಾಗೂ ಸಿದ್ದರಾಮಯ್ಯರ ಪ್ರೇರಣೆಯಿಂದ ಅಹಿಂದ ಸಂಘಟನೆಯಲ್ಲಿ ಎಲ್ಲರೂ ಕಾರ್ಯ ನಿರ್ವಹಿಸಬೇಕು. ನರಸೀಪುರ ಹಾಗೂ ವರುಣ ಕ್ಷೇತ್ರ ಒಳಗೊಂಡ ತಾಲೂಕಿನಲ್ಲಿ ಯುವಕರಿಗೆ ರಾಜಕೀಯವಾಗಿ ಹೆಚ್ಚಿನ ಆದ್ಯತೆ ಸಿಗಬೇಕು. ನಮ್ಮ ರಾಷ್ಟ್ರೀಯ ಅಹಿಂದ ಒಕ್ಕೂಟ ಒಂದು ಒಳ್ಳೆಯ ವೇದಿಕೆಯಾಗಿದ್ದು, ಮುಂದಿನ ಸ್ಥಳೀಯ ಚುನಾವಣೆಗಳಲ್ಲಿ ಪ್ರಬಲ ನಾಯಕತ್ವ ಗುಣಗಳಿರುವ ಅಭ್ಯರ್ಥಿಗಳನ್ನು ಮುಂದಕ್ಕೆ ತರಬೇಕಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕಾರ್ಯ ಪ್ರವೃತ್ತರಾಗಬೇಕು. ಇತ್ತೀಚಿಗೆ ಕ್ಷೇತ್ರದಲ್ಲಿ ನಿನ್ನೆ ಮೊನ್ನೆ ಬಂದವರು ಎಂಬ ಬೇಧ ಭಾವ ಜಾಸ್ತಿ ಆಗಿದ್ದು, ಯುವಕರನ್ನು ಬೆಳೆಯಲು ಬಿಡದೆ ಕೇವಲ ದುಡಿಯಲಿಕ್ಕೆ ಬಳಸಿಕೊಳ್ಳುತ್ತಿದ್ದಾರೆ. ಇದನ್ನೆಲ್ಲಾ ನಾವು ಧಿಕ್ಕರಿಸಿ ಪ್ರಬಲವಾಗಿ ಸಂಘಟನೆ ಕಟ್ಟುವ ಎಂದರು. ಸಭೆಯಲ್ಲಿ ಜಿಲ್ಲಾಧ್ಯಕ್ಷ ಪಾಪಣ್ಣ, ಉಪಾಧ್ಯಕ್ಷ ಬೀರೇಶ್ ಕೆಬ್ಬೆಹುಂಡಿ, ಎಸ್ಟಿ ಘಟಕದ ಜಿಲ್ಲಾಧ್ಯಕ್ಷ ಸುಂದರ್ ನಾಯಕ, ಮೈಸೂರು ನಗರಾಧ್ಯಕ್ಷ ದೀಪಕ್ ಪುಟ್ಟಸ್ವಾಮಿ ಹಾಗೂ ಇತರರಿದ್ದರು.

ತಾಲೂಕು ಘಟಕದ ಪದಾಧಿಕಾರಿಗಳ ಆಯ್ಕೆ

ತಾಲೂಕು ಘಟಕಕ್ಕೆ ಸೋಸಲೆ ದೇವರಾಜ್ (ಅಧ್ಯಕ್ಷ), ಅರುಣ್‌ಗೌಡ (ಗೌರವಾಧ್ಯಕ್ಷ), ಸೋಮುದಾದ (ಪ್ರಧಾನ ಕಾರ್ಯದರ್ಶಿ), ಎಂ.ಲೋಹಿತ್‌ಗೌಡ, ಮೊಯಿನ್ ಮೊಹಮ್ಮದ್ ಖಾನ್ (ಉಪಾಧ್ಯಕ್ಷರು), ಅಶ್ವಿನ್ ಕುಮಾರ್ (ಕಾರ್ಯಾಧ್ಯಕ್ಷ), ಬೆಳ್ಳಿರಾಜು (ಕಾರ್ಯದರ್ಶಿ), ಅರುಣ್ (ಸಂ ಕಾರ್ಯದರ್ಶಿ), ಗೋಪಾಲ್ ರಾಜ್ (ಪ್ರಚಾರ ಸಮಿತಿ ಅಧ್ಯಕ್ಷ), ಶಬ್ಬೀಲ್ ಖಾನ್ (ಸಹ ಕಾರ್ಯದರ್ಶಿ), ಕೇತಹಳ್ಳಿ ಹರೀಶ್ (ಪ್ರಚಾರ ಸಮಿತಿ ಉಪಾಧ್ಯಕ್ಷ), ಕುಮಾರ್ ಚಿದರಹಳ್ಳಿ (ಮಾಧ್ಯಮ ಕಾರ್ಯದರ್ಶಿ), ಬಸವರಾಜ್ ಮುತ್ತತ್ತಿ (ಮಾಧ್ಯಮ ಸಹ ಕಾರ್ಯದರ್ಶಿ), ಮುದ್ದುಬೀರನಹುಂಡಿ ಮಹೇಶ, ಚಿನ್ನಸ್ವಾಮಿ ವಾಟಾಳ್, ಮಹೇಶ್ ಕುಮಾರ್ (ಸಂಚಾಲಕ), ಭರತ್ ರಾಜ್ ತಲಕಾಡು (ಯುವ ಅಧ್ಯಕ್ಷ), ಶಿವರಾಜ್ ಕುರುಬೂರು (ಯುವ ಉಪಾಧ್ಯಕ್ಷ) ಹಾಗೂ ಬಿ.ಎಸ್.ಮಹೇಶ್ ಲೋಕು (ಖಜಾಂಜಿ) ಅವರನ್ನು ಆಯ್ಕೆ ಮಾಡಲಾಯಿತು.

ಸರಗೂರಲ್ಲಿ ವರನಟ

ಡಾ.ರಾಜ್‌ಕುಮಾರ್ ಹುಟ್ಟುಹಬ್ಬ ಆಚರಣೆ



ಸರಗೂರಲ್ಲಿ ಡಾ.ರಾಜ್‌ಕುಮಾರ್ ಹುಟ್ಟುಹಬ್ಬ ಆಚರಿಸಲಾಯಿತು.

ಸರಗೂರು, ಏ.24– ಪಟ್ಟಣದ ಸಂತೇಮಾಳದಲ್ಲಿ ವರನಟ ಡಾ.ರಾಜ್‌ಕುಮಾರ್ ಹುಟ್ಟುಹಬ್ಬ ಆಚರಿಸಲಾಯಿತು.

ಡಾ.ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅಭಿಮಾನಿ ಲಕ್ಷ್ಮಣ, ಇಂದು ಡಾ.ರಾಜ್‌ಕುಮಾರ್ ಹುಟ್ಟುಹಬ್ಬವನ್ನು ಆಚರಿಸುತ್ತಿದ್ದೇವೆ. ಅವರು ನಮ್ಮೊಡನೆ ಇಲ್ಲದಿದ್ದರೂ ಅವರ ನೆನಪು ಎಂದೆಂದಿಗೂ ಅಮರ. ನಾಡುನುಡಿಯ ಬಗ್ಗೆ ಅವರಿಗಿದ್ದ ಅಭಿಮಾನವನ್ನು ಪ್ರತಿಯೊಬ್ಬರೂ ರೂಢಿಸಿಕೊಳ್ಳಬೇಕು. ಕನ್ನಡದ ಅಸ್ಮಿತೆ ಮತ್ತು ಆದರ್ಶವಾಗಿದ್ದ ರಾಜ್ ಅವರ ಸದಭಿರುಚಿ ಸಿನಿಮಾಗಳನ್ನು ಇಂದಿನ ಯುವ ಪೀಳಿಗೆ ನೋಡಿ ಅವರ ಆದರ್ಶ ಮೈಗೂಡಿಸಿಕೊಳ್ಳಬೇಕು ಎಂದರು.

ಈ ವೇಳೆ ಡಾ.ರಾಜ್ ಕುಮಾರ್ ಅಪ್ಪಟ ಅಭಿಮಾನಿ ಪ್ರಕಾಶ್, ರಂಗಸ್ವಾಮಿ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಅಪ್ಪು ಹೋಟೆಲ್ ಅಶ್ವತ್, ಟೈಲರ್ ಸತೀಶ್, ಮಂಜು, ರಂಗಪ್ಪ, ಭೋಜ, ಮಹೇಶ್, ಗಿರಿ, ಕಿರಣ್, ನಿಂಗಪ್ಪ, ಸ್ವಾಮಿ, ರಾಮಚಂದ್ರ ಇತರರಿದ್ದರು.

ಐಪಿಎಲ್ ಹಂಗಾಮ

ಕೊನೆಗೂ ತವರಲ್ಲಿ ಆರ್‌ಸಿಬಿಗೆ ಮೊದಲ ಗೆಲುವು



ಬೆಂಗಳೂರು, ಏ.24– ವಿರಾಟ್ ಕೊಹ್ಲಿ, ಕನ್ನಡಿಗ ದೇವದತ್ ಪಡಿಕ್ಕಲ್ ಅವರ ಅರ್ಧಶತಕ ಹಾಗೂ ಜೋಶ್ ಹೇಜಲ್ವುಡ್ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು, ರಾಜಸ್ಥಾನ ರಾಯಲ್ಸ್ ವಿರುದ್ಧ 11 ರನ್‌ಗಳ ರೋಚಕ ಗೆಲುವು ಸಾಧಿಸಿದೆ.

ಆ ಮೂಲಕ ಕಳೆದ ಮೂರು ಪಂದ್ಯಗಳಲ್ಲಿ ಹೀನಾಯ ಸೋಲು ಕಂಡಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಕೊನೆಗೂ ತನ್ನ ತವರು ಮೈದಾನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಈ ಆವೃತ್ತಿಯಲ್ಲಿ ಮೊದಲ ಗೆಲುವು ದಾಖಲಿಸಿದೆ. ಅಲ್ಲದೇ ಆಡಿರುವ 9 ಪಂದ್ಯಗಳಲ್ಲಿ 6 ಗೆಲುವಿನೊಂದಿಗೆ 12 ಅಂಕ ಕಲೆ ಹಾಕಿ ಅಂಕಪಟ್ಟಿಯಲ್ಲಿ ಮತ್ತೆ 3ನೇ ಸ್ಥಾನಕ್ಕೇರಿದೆ.

ಗೆಲುವಿಗೆ 206 ರನ್‌ಗಳ ಕಠಿಣ ಗುರಿ ಪಡೆದ ರಾಜಸ್ಥಾನ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 194 ರನ್ ಗಳಿಸಲಷ್ಟೇ ಶಕ್ತವಾಯಿತು. ರಾಜಸ್ಥಾನ ಪರ ಇನ್ನಿಂಗ್ಸ್ ಆರಂಭಿಸಿದ ಯಶಸ್ವಿ ಜೈಸ್ವಾಲ್ ಹಾಗೂ ವೈಭವ್ ಸೂರ್ಯವಂಶಿ ಮೊದಲ ವಿಕೆಟ್‌ಗೆ 52 ರನ್ ಗಳಿಸುವ ಮೂಲಕ ಸ್ಫೋಟಕ ಆರಂಭ ಒದಗಿಸಿದರು. ಆದರೆ ಸೂರ್ಯ ವಂಶಿ 16 ರನ್ ಗಳಿಸಿ ನಿರ್ಗಮಿಸಿದರು. ಮತ್ತೊಂದೆಡೆ ಮಿಂಚಿನ ಬ್ಯಾಟಿಂಗ್ ಮಾಡಿದ ಜೈಸ್ವಾಲ್ 19 ಎಸೆತಗಳಲ್ಲಿ 7 ಬೌಂಡರಿ, 3 ಸಿಕ್ಸರ್ ಒಳಗೊಂಡ 49 ರನ್ ಗಳಿಸಿ ಔಟಾಗುವ ಮೂಲಕ 1 ರನ್‌ನಿಂದ ಅರ್ಧಶತಕದಿಂದ ವಂಚಿತರಾದರು. ನಂತರ ಬಂದ ನಿತೀಶ್ ರಾಣಾ 28, ರಿಯಾನ್ ಪರಾಗ್ 22 ರನ್ ಗಳಿಸಿ ಬಂದಷ್ಟೇ ವೇಗವಾಗಿ ಹೊರ ನಡೆದರು. ಬಳಿಕ ಜವಾಬ್ದಾರಿಯುತವಾಗಿ ಬ್ಯಾಟ್ ಬೀಸಿದ ಧ್ರುವ್ ಜುರೇಲ್ 34 ಎಸೆತಗಳಲ್ಲಿ ತಲಾ 3 ಸಿಕ್ಸರ್, ಬೌಂಡರಿ ಒಳಗೊಂಡ 47 ರನ್ ಗಳಿಸಿ ನಿರ್ಗಮಿಸಿದರು. ಉಳಿದಂತೆ ಹೇಟ್ಮೆಯರ್ 11, ಶುಭಂ ದುಬೆ 12 ರನ್ ಗಳಿಸಿದರು. ಆರ್‌ಸಿಬಿ ಪರ ಜೋಶ್ ಹೇಜಲ್ವುಡ್ 4, ಕೃನಾಲ್ ಪಾಂಡ್ಯ 2, ಭುವನೇಶ್ವರ್ ಕುಮಾರ್, ಯಶ್ ದಯಾಳ್ ತಲಾ 1 ವಿಕೆಟ್ ಗಳಿಸಿದರು.

ಇದಕ್ಕೂ ಮೊದಲು ಟಾಸ್ ಸೋತು ಬ್ಯಾಟಿಂಗ್ ಬೆಂಗಳೂರು 20 ಓವರ್‌ಗಳಲ್ಲಿ 5 ವಿಕೆಟ್ 205 ರನ್‌ಗಳ ಬೃಹತ್ ಮೊತ್ತ ದಾಖಲಿಸಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಫಿಲ್ ಸಾಲ್ಟ್ ಹಾಗೂ ವಿರಾಟ್ ಕೊಹ್ಲಿ ಮೊದಲ ವಿಕೆಟ್‌ಗೆ 61 ರನ್ ಜೊತೆಯಾಟವಾಡುವ ಮೂಲಕ ಉತ್ತಮ ಆರಂಭ ಒದಗಿಸಿದರು. ಆದರೆ ಸಾಲ್ಟ್ 26 ರನ್ ಗಳಿಸಿ ನಿರ್ಗಮಿಸಿದರು. ಬಳಿಕ ವಿರಾಟ್ ಕೊಹ್ಲಿ ಜೊತೆಗೂಡಿದ ದೇವದತ್ ಪಡಿಕ್ಕಲ್ 95 ರನ್‌ಗಳ ಮಹತ್ವದ ಜೊತೆಯಾಟವಾಡಿದರು. ಆ ಮೂಲಕ ತಂಡದ ಮೊತ್ತವನ್ನು 150ರ ಗಡಿದಾಟಿಸಿದರು. ಈ ವೇಳೆ 42 ಎಸೆತಗಳಲ್ಲಿ 2 ಸಿಕ್ಸರ್, 8 ಬೌಂಡರಿ ಒಳಗೊಂಡ 70 ರನ್ ಗಳಿಸಿದ್ದ ಕೊಹ್ಲಿ ವಿಕೆಟ್ ಒಪ್ಪಿಸಿದರು. ಇವರ ಹಿಂದೆಯೇ 27 ಎಸೆತಗಳಲ್ಲಿ 3 ಸಿಕ್ಸರ್, 4 ಬೌಂಡರಿ ಒಳಗೊಂಡ 50 ಗಳಿಸಿದ್ದ ಪಡಿಕ್ಕಲ್ ನಿರ್ಗಮಿಸಿದರು. ಅಂತಿಮ ಹಂತದಲ್ಲಿ ಬಿರುಸಿನ ಆಟವಾಡಿದ ಟೀಂ ಡೇವಿಡ್ ಹಾಗೂ ಜಿತೇಶ್ ಶರ್ಮಾ ತಂಡದ ಮೊತ್ತವನ್ನು 200ರ ಗಡಿ ದಾಟಿಸಿದರು. ಅಂತಿಮವಾಗಿ ಡೇವಿಡ್ 23, ಶರ್ಮಾ 20 ರನ್ ಗಳಿಸಿದರು. ರಾಜಸ್ಥಾನ ಪರ ಸಂದೀಪ್ ಶರ್ಮಾ 2 ಜೋಫ್ರಾ ಆರ್ಚರ್ ಮತ್ತು ಹಸರಂಗ ತಲಾ ಒಂದು ವಿಕೆಟ್ ಉರುಳಿಸಿದರು. ರಾಜಸ್ಥಾನ ರಾಯಲ್ಸ್ ಬ್ಯಾಟರ್‌ಗಳನ್ನು ಕಟ್ಟಿಹಾಕುವಲ್ಲಿ ಪ್ರಮುಖ ಪಾತ್ರ ವಹಿಸಿದ ಜೋಶ್ ಹೇಜಲ್ವುಡ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ತಂಡದ ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	8	6	2	0	12
ಡೆಲ್ಲಿ	8	6	2	0	12
ಬೆಂಗಳೂರು	9	6	3	0	12
ಮುಂಬೈ	9	5	4	0	10
ಪಂಜಾಬ್	8	5	3	0	10
ಲಕ್ನೋ	9	5	4	0	10
ಕೋಲ್ಕತ್ತಾ	8	3	5	0	6
ರಾಜಸ್ಥಾನ್	9	2	7	0	4
ಹೈದರಾಬಾದ್	8	2	6	0	4
ಚೆನ್ನೈ	8	2	6	0	4

ಇಂದಿನ ಪಂದ್ಯ

ಚೆನ್ನೈ ಸೂಪರ್ ಕಿಂಗ್ಸ್
V/S
ಸನ್‌ರೈಸರ್ಸ್ ಹೈದರಾಬಾದ್

ಸಮಯ: ಸಂಜೆ 7.30

ಸ್ಥಳ : ಎಂ.ಎ. ಚಿದಂಬರಂ ಕ್ರೀಡಾಂಗಣ, ಚೆನ್ನೈ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಗಂಧದ ಗುಡಿ (ಕ)+ ಒಡೆಲಾ–2 (ತೆ)	2+2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಗುಡ್ ಬ್ಯಾಡ್ ಅಗ್ಲಿ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕೇಸರಿ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ದಾಸರಹಳ್ಳಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ವಿದ್ಯಾಪತಿ (ಕ)	4 ಪ್ರದರ್ಶನಗಳು
ರಾಜಕಮಲ್	
ಗ್ಯಾಂಗ್ಸ್ (ಕ)	4 ಪ್ರದರ್ಶನಗಳು
ಸಂಗಂ	
ವಾಮನ (ಕ)	4 ಪ್ರದರ್ಶನಗಳು
ಲಿಡೋ	
ದಾಸರಹಳ್ಳಿ (ಕ) + ರಿಕ್ಷಾ ಚಾಲಕ (ಕ)	2+2 ಪ್ರದರ್ಶನಗಳು
ತಿಬ್ಬಾದೇವಿ	
ಭಗೀರಥ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್ ದೂ : 4240422/4241800

ಸ್ಕ್ರೀನ್ 1	ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಮ.1.25ಕ್ಕೆ, ಸಂ.4.20ಕ್ಕೆ, ರಾ.7.15ಕ್ಕೆ, ರಾ.10.15ಕ್ಕೆ.
ಸ್ಕ್ರೀನ್ 2	ಅಲಪ್ಪುಳ ಜಿಮ್ಖಾನ (ಮ): ಬೆ.10.20ಕ್ಕೆ, ಜಾಕ್ (ತೆ): ಮ.1.20ಕ್ಕೆ, ಸಂ.4.15ಕ್ಕೆ, ಅಜ್ಞಾತವಾಸಿ (ಕ): ರಾ.7.15ಕ್ಕೆ, ಬಜೂಕ (ಮ): ರಾ.9.55ಕ್ಕೆ.
ಸ್ಕ್ರೀನ್ 3	ದಿ ಅಮಚೂರ್ (ಇಂ): ಬೆ.10.40ಕ್ಕೆ, ರಾ.7.15ಕ್ಕೆ, ಅಲಪ್ಪುಳ ಜಿಮ್ಖಾನ (ಮ): ಮ.1.20ಕ್ಕೆ, ರಾ.10ಕ್ಕೆ, ಜಾಟ್ (ಹಿಂ): ಸಂ.4.10ಕ್ಕೆ.
ಸ್ಕ್ರೀನ್ 4	ವಿದ್ಯಾಪತಿ (ಕ): ಬೆ.10.30ಕ್ಕೆ, ರಾ.7.05ಕ್ಕೆ, ವಾಮನ (ಕ): ಮ.1.20ಕ್ಕೆ, ಸಂ.4.15ಕ್ಕೆ, ಜಾಟ್ (ಹಿಂ): ರಾ.9.55ಕ್ಕೆ.

ಐನಾಕ್ಸ್ ಮೂವೀಸ್ INOX LIVE THE MOVIE ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ ದೂ : 0821–2973519

ಸ್ಕ್ರೀನ್ 1	ವಿದ್ಯಾಪತಿ (ಕ): ಬೆ.10.45ಕ್ಕೆ, ಸಂ.4.15ಕ್ಕೆ, ಸಂ.6.45ಕ್ಕೆ, ಮನದ ಕಡಲು (ಕ): ಮ.1.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 2	ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಸಂ.4ಕ್ಕೆ, ವಾಮನ (ಕ): ಮ.1.15ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ವಾಮನ (ಕ): ಬೆ.10.40ಕ್ಕೆ, ಸಂ.4.05ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಮ.1.20ಕ್ಕೆ, ಸಂ.6.45ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಎಂಪುರನ್ 2 (ಕ): ಮ.12.30ಕ್ಕೆ, ಬಜೂಕ (ಮ): ಮ.3.50ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್ ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪಹಲ್ಗಾಮ್ ಉಗ್ರರ ದಾಳಿ ಹಿನ್ನೆಲೆ

ಮೈಸೂರಿಂದ ಪಾಕಿಸ್ತಾನಿ ಪ್ರಜೆಗಳು ಸ್ವದೇಶಕ್ಕೆ ಹಿಂದಿರುಗಲು ಸಿದ್ಧತೆ

ಮೈಸೂರು, ಏ.24(ಆರ್‌ಕೆ)– ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರನ್ನು ಗುರಿಯಾಗಿಸಿ ನಡೆದ ಭಯೋತ್ಪಾದಕರ ಪೈಶಾಚಿಕ ದಾಳಿಯಿಂದಾಗಿ ಕೇಂದ್ರ ಸಂಪುಟ ಸಮಿತಿ ಕೈಗೊಂಡ ನಿರ್ಣಯದ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ನೆಲೆಸಿರುವ ಪಾಕಿಸ್ತಾನಿ ಪ್ರಜೆಗಳು ಸ್ವದೇಶಕ್ಕೆ ಹಿಂದಿರುಗಲು ಸಿದ್ಧತೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬುಧವಾರ ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆದ ಸಂಪುಟ ಸಮಿತಿಯಲ್ಲಿ ಉಗ್ರರ ಪೋಷಕ ಪಾಕಿಸ್ತಾನದ ವಿರುದ್ಧ ಕ್ರಮ ಕೈಗೊಳ್ಳಲು ನಿರ್ಧರಿಸಿದ ಬೆನ್ನಲ್ಲೇ ಕೇಂದ್ರದ ಗೃಹ ವ್ಯವಹಾರಗಳ ಸಚಿವಾಲಯ (Ministry of Home Affairs) ದಿಂದ ದೇಶದ ಎಲ್ಲಾ ರಾಜ್ಯಗಳ ಗೃಹ ಇಲಾಖೆಗಳಿಗೆ ಇ ಮೇಲ್ ಸಂದೇಶ ರವಾನಿಸಲಾಗಿದೆ ಎಂದು ತಿಳಿದು ಬಂದಿದೆ.

ಅದರಂತೆ ರಾಜ್ಯ ಗೃಹ ಇಲಾಖೆ ಪ್ರಧಾನ ಕಾರ್ಯದರ್ಶಿಗಳ ಸೂಚನೆ ಮೇರೆಗೆ ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಎಲ್ಲಾ ನಗರಗಳ ಪೊಲೀಸ್ ಕಮಿಷ್ನರ್‌ಗಳು, ಜಿಲ್ಲಾ ಎಸ್ಪಿಗಳಿಗೆ ಇಂದು ಬೆಳಗ್ಗೆ ಸೂಚನೆ ಹೊರಡಿಸಿದ್ದು, ಕರ್ನಾಟಕ ರಾಜ್ಯದಲ್ಲಿ ನೆಲೆಸಿರುವ ಪಾಕ್ ಪ್ರಜೆಗಳ ವೀಸಾ ಅವಧಿ ಮುಗಿಯದಿದ್ದರೂ, ಅವರನ್ನು ಕಳುಹಿಸಲು ಕ್ರಮ ವಹಿಸಿ ಎಂದು ತಿಳಿಸಲಾಗಿದೆ. ಅದರಂತೆ ಮೈಸೂರು ನಗರದಲ್ಲಿ ವಾಸಿಸುತ್ತಿರುವ ಪಾಕ್ ಪ್ರಜೆಗಳ ಪಟ್ಟಿ ಮಾಡಿ ಅವರಿಗೆ ಜಾಗ ಖಾಲಿ ಮಾಡುವಂತೆ ಪೊಲೀಸರು ಸೂಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ

ಜಮ್ಮು–ಕಾಶ್ಮೀರದ ಉದ್ದಂಪುರದಲ್ಲಿ ಉಗ್ರರೊಂದಿಗೆ ಗುಂಡಿನ ಚಕಮಕಿ; ಸೇನಾ ಯೋಧ ಹುತಾತ್ಮ!

ಜಮ್ಮು: ಜಮ್ಮು ಮತ್ತು ಕಾಶ್ಮೀರದ ಉದ್ಧಂಪುರ ಜಿಲ್ಲೆಯ ದುಡು–ಬಸಂತ್ ಗರ್ಗ್ ಪ್ರದೇಶದಲ್ಲಿ ಭದ್ರತಾ ಪಡೆಗಳು ಉಗ್ರರೊಂದಿಗೆ ನಡೆಸುತ್ತಿರುವ ಎನ್‌ಕೌಂಟರ್‌ನಲ್ಲಿ ಸೇನಾ ಯೋಧರೊಬ್ಬರು ಹುತಾತ್ಮರಾಗಿದ್ದಾರೆ. ಹುತಾತ್ಮ ಯೋಧನನ್ನು ಗಣ್ಯ 6 PARA (ವಿಶೇಷ ಪಡೆ) ಘಟಕದ ಹವಾಲ್ದಾರ್ ಜಂತು ಅಲಿ ಶೇಖ್ ಎಂದು ಗುರುತಿಸಲಾಗಿದೆ. ಅವರ ಅದಮ್ಯ ಧೈರ್ಯ ಮತ್ತು ಶೌರ್ಯವನ್ನು ಎಂದಿಗೂ ಮರೆಯಲಾಗುವುದಿಲ್ಲ ಎಂದು ಸೇನೆಯು ಹೇಳಿಕೆಯಲ್ಲಿ ತಿಳಿಸಿದೆ.

ಪಹಲ್ಗಾಮ್‌ನ ಬೈಸರನ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರ ದಾಳಿಯಲ್ಲಿ 25 ಪ್ರವಾಸಿಗರು ಮತ್ತು ಸ್ಥಳೀಯ ನಿವಾಸಿಗಳು ಸಾವನ್ನಪ್ಪಿದ ನಂತರ ಜಮ್ಮು ಮತ್ತು ಕಾಶ್ಮೀರದಲ್ಲಿ ಕಳೆದೆರಡು ದಿನಗಳಲ್ಲಿ ನಡೆಯುತ್ತಿರುವ ಮೂರನೇ ಎನ್‌ಕೌಂಟರ್ ಇದಾಗಿದೆ.

ಉದ್ಧಂಪುರದ ದುಡಿ ಬಸಂತ್‌ಗಢ ಗ್ರಾಮದಲ್ಲಿ ಉಗ್ರರು ಅಡಗಿರುವ ಮಾಹಿತಿ ಮೇರೆಗೆ ಭದ್ರತಾ ಪಡೆಗಳು ಶೋಧ ಕಾರ್ಯಾಚರಣೆ ಆರಂಭಿಸಿವೆ ಎಂದು ಭದ್ರತಾ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಶಂಕಿತರು ಅಡಗಿದ್ದ ಸ್ಥಳದಲ್ಲಿ ಭದ್ರತಾ ಪಡೆಗಳು ಜಮಾಯಿಸುತ್ತಿದ್ದಂತೆಯೇ, ಉಗ್ರರು ಅವರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಭದ್ರತಾ ಪಡೆಗಳು ಪ್ರತಿಯಾಗಿ ಗುಂಡಿನ ದಾಳಿ ನಡೆಸಿದ್ದು, ಎನ್ ಕೌಂಟರ್ ಆರಂಭವಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ನಿರ್ದಿಷ್ಟ ಮಾಹಿತಿ ಆಧಾರದ ಮೇಲೆ ಇಂದು ಉದ್ಧಂಪುರದ ಬಸಂತ್‌ಗಢ ಪ್ರದೇಶದಲ್ಲಿ ಜಮ್ಮು ಮತ್ತು ಕಾಶ್ಮೀರ ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ" ಎಂದು ವೈಟ್ ನೈಟ್ ಕಾರ್ಪ್ಸ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿದೆ.

ಗುಂಡಿನ ಚಕಮಕಿಯಲ್ಲಿ ಆರಂಭದಲ್ಲಿ ಗಂಭೀರವಾಗಿ ಗಾಯಗೊಂಡ ನಮ್ಮ ಯೋಧರೊಬ್ಬರಿಗೆ ಉತ್ತಮ ವೈದ್ಯಕೀಯ ನೆರವು ನೀಡಲಾಯಿತು. ಆದಾಗ್ಯೂ, ಅವರು ಹುತಾತ್ಮರಾದರು ಎಂದು ಸೇನೆ ಮಾಹಿತಿ ನೀಡಿದೆ.

ನಿನ್ನೆ ಸಂಜೆ ದಕ್ಷಿಣ ಕಾಶ್ಮೀರದ ಕುಲ್ಗಾಮ್‌ನಲ್ಲಿ ಮತ್ತೊಂದು ಎನ್ ಕೌಂಟರ್ ನಡೆದಿದ್ದು, ಉರಿ ಸೆಕ್ಟರ್‌ನಲ್ಲಿ ಒಳನುಸುಳುವಿಕೆ ಪ್ರಯತ್ನವನ್ನು ಸೈನಿಕರು ವಿಫಲಗೊಳಿಸಿದ್ದು, ಇಬ್ಬರು ಉಗ್ರರು ಹತರಾಗಿದ್ದಾರೆ.

ಕಾಶ್ಮೀರದಿಂದ ಸುರಕ್ಷಿತವಾಗಿ ವಾಪಸ್ಸಾದ ಮೈಸೂರಿಗರು

ಸ್ಥಳೀಯರ ಆತಿಥ್ಯದ ಬಗ್ಗೆ ಗುಣಗಾನ



ಕಾಶ್ಮೀರದಿಂದ ಸುರಕ್ಷಿತವಾಗಿ ವಾಪಸ್ಸಾದ ಮೈಸೂರಿನ ಹತ್ತು ಮಂದಿ, ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸೆಲ್ಫೀ ತೆಗೆದುಕೊಂಡಿದ್ದು.

ಮೈಸೂರು, ಏ.24(ಎಸ್‌ಬಿಡಿ)– ಉಗ್ರರು ಪ್ರವಾಸಿಗರ ಮೇಲೆ ಅಟ್ಟಹಾಸ ಮೆರೆದಾಗ ಕಾಶ್ಮೀರದಲ್ಲಿದ್ದ ಮೈಸೂರಿನ ಹತ್ತು ಮಂದಿ ಸುರಕ್ಷಿತವಾಗಿ ವಾಪಸ್ಸಾಗಿದ್ದಾರೆ.

ಕಾಶ್ಮೀರದ ಶ್ರೀನಗರದಿಂದ ವಿಮಾನದಲ್ಲಿ ಗುರುವಾರ ಮಧ್ಯಾಹ್ನ 12.30ಕ್ಕೆ ಬೆಂಗಳೂರು ತಲುಪಿದ ಇವರು, ಅಲ್ಲಿಂದ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ರಾತ್ರಿ ಮೈಸೂರಿಗೆ ಬಂದಿದ್ದಾರೆ. ಸಚಿವ ಸಂತೋಷ್ ಲಾಡ್ ಅವರು ಮೈಸೂರಿನವರು ಸೇರಿ ಕಾಶ್ಮೀರದಲ್ಲಿದ್ದ ಅನೇಕ ಪ್ರವಾಸಿಗರನ್ನು ತಮ್ಮೊಂದಿಗೆ ರಾಜ್ಯಕ್ಕೆ ಸುರಕ್ಷಿತವಾಗಿ ಕರೆತಂದಿದ್ದಾರೆ.

ಮೈಸೂರಿನ ಮೂರು ಕುಟುಂಬ: ನಗರದ ಶ್ರೀರಾಂಪುರ ನಿವಾಸಿ, ಅಸಿಸ್ಟೆಂಟ್ ಪೋಸ್ಟ್ ಮಾಸ್ಟರ್ ಎಸ್.ವಲ್ಲೀಶ್, ಇವರ ಪತ್ನಿ ಕೆ.ಆರ್.ಸುನೀತಾ, ಪುತ್ರ ಪೂರ್ಣಚಂದ್ರ ವಲ್ಲೀಶ್, ತಂಗಿ ಎಸ್. ಆಶಾ, ಅವರ ಪತಿ ಹಿರೀಶ್, ಇವರ ಪುತ್ರ ಆದಿತ್ಯ ದೀಕ್ಷಿತ್, ವಲ್ಲೀಶ್ ಸ್ನೇಹಿತ ಜೆ.ಪ್ರಸಾದ್, ಇವರ ಪತ್ನಿ ಲಕ್ಷ್ಮೀ ಪ್ರಸಾದ್, ಇವರ ಮಕ್ಕಳಾದ ಆದಿತ್ಯ ಕಶ್ಯಪ್ ಹಾಗೂ ಅಕ್ಷೋಭ್ಯ ಕಶ್ಯಪ್ ಏ.17ಕ್ಕೆ ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದರು. ಏ.28ಕ್ಕೆ ವಾಪಸ್ಸಾಗಬೇಕಿತ್ತು. ಆದರೆ ಭಯೋತ್ಪಾದಕರು ಪಹಲ್ಗಾಮ್‌ನಲ್ಲಿ ದುಷ್ಕೃತ್ಯ ಮೆರೆದ ಬಳಿಕ ಇಡೀ ಕಾಶ್ಮೀರದ ಚಿತ್ರಣವೇ ಬದಲಾಗಿತ್ತು. ಮೈಸೂರಿನ ಮೂರು ಕುಟುಂಬದ ಈ ಹತ್ತು ಮಂದಿ ಶ್ರೀನಗರದಲ್ಲಿ ಸುರಕ್ಷಿತವಾಗಿದ್ದರೂ ವಿಮಾನ ಪ್ರಯಾಣ ದರ ದಿಢೀರ್ ಏರಿಕೆ ಹಾಗೂ ಭಯಭೀತ ವಾತಾವರಣದ ಕಾರಣದಿಂದ ವಾಪಸ್ಸಾಗಲು ಪರಿತಪಿಸುವಂತಾಗಿತ್ತು ಕನ್ನಡಿಗರ ನೆರವಿಗೆ ತೆರಳಿದ್ದ ಸಚಿವ ಸಂತೋಷ್ ಲಾಡ್, ಮೊನ್ನೆ ರಾತ್ರಿ ಮೈಸೂರಿಗರನ್ನು ಭೇಟಿಯಾಗಿ ಧೈರ್ಯ ತುಂಬಿದ್ದಲ್ಲದೆ, ನೆರವಿನ ಭರವಸೆ ನೀಡಿದ್ದರು.

ಸಚಿವರಿಗೆ ಧನ್ಯವಾದ: ಸುರಕ್ಷಿತವಾಗಿ ವಾಪಸ್ಸಾದ ಅಸಿಸ್ಟೆಂಟ್ ಪೋಸ್ಟ್ ಮಾಸ್ಟರ್ ವಲ್ಲೀಶ್ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಸಚಿವ ಸಂತೋಷ್ ಲಾಡ್ ಅವರು ಭದ್ರತಾ ಪಡೆಯೊಂದಿಗೆ ನಮ್ಮನ್ನು ಭೇಟಿಯಾಗಿ ಧೈರ್ಯ ತುಂಬಿದರು. ಅವರೊಂದಿಗೆ ನಮ್ಮನ್ನು ವಿಮಾನದಲ್ಲಿ ಕರ್ನಾಟಕಕ್ಕೆ ಸುರಕ್ಷಿತವಾಗಿ ಕರೆತಂದಿದ್ದಾರೆ. ಪ್ರಯಾಣ ದರವನ್ನು ಸಚಿವರು ಭರಿಸಿದ್ದಾರೋ ಅಥವಾ ಸರ್ಕಾರ ನೀಡಿದೆಯೋ ಗೊತ್ತಿಲ್ಲ. ಆದರೆ ನಿಜಕ್ಕೂ ಸಂತೋಷ್ ಲಾಡ್ ಅವರು ಒಬ್ಬ ದಕ್ಷ ಹಾಗೂ ಜನರ ಬಗ್ಗೆ ಅತೀವ ಕಾಳಜಿ ಹೊಂದಿರುವ ನಾಯಕ ಎನ್ನುವುದು ಅರಿವಾಯಿತು. ಅವರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ಸ್ಥಳೀಯರು ಒಳ್ಳೆಯವರು: ನಾವು ಶ್ರೀನಗರದ ಹೋಟೆಲ್ ಟ್ರಿಡನ್ ಕಾಶ್ಮೀರ್ ರೆಸಾರ್ಟ್‌ನಲ್ಲಿ ಉಳಿದುಕೊಂಡಿದ್ದೆವು. ಸೋನಮಾರ್ಗ್‌ನಿಂದ ಹೋಟೆಲ್‌ಗೆ ವಾಪಸ್ಸಾಗುವಾಗ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಪ್ರವಾಸಿಗರನ್ನು ಹತ್ಯೆ ಮಾಡಿರುವ ವಿಷಯ ತಿಳಿಯಿತು. ಅಷ್ಟರಲ್ಲಾಗಲೇ ಸೈನಿಕರು ಶ್ರೀನಗರದಲ್ಲಿ ಭಾರೀ ಬಂದೋಬಸ್ತ್ ಮಾಡಿದ್ದರು. ನಮ್ಮನ್ನೂ ಕೊಠಡಿಯೊಳಗೆ ಹೋಗುವಂತೆ ಸೂಚಿಸಿದರು. ಎಲ್ಲಾ ಅಂಗಡಿ ಮುಂಗಟ್ಟುಗಳನ್ನು ಸ್ವಯಂ ಪ್ರೇರಿತವಾಗಿ ಬಂದ್ ಮಾಡಿದರು. ಎರಡು ದಿನ ಹೋಟೆಲ್ ರೂಂನಲ್ಲೇ ಕ್ವಾರಂಟೈನ್ ಆಗಿದ್ದೆವು. ಸ್ಥಳೀಯರು ತುಂಬಾ ಒಳ್ಳೆಯವರು. ನಾವು ಹೊರಗೆ ಬಂದಾಗ ದಯಮಾಡಿ ಒಳಗೆ ಹೋಗುವಂತೆ ತಿಳಿಸುತ್ತಿದ್ದರು. ಕೆಲ ವರ್ಷಗಳಿಂದ ಯಾವುದೇ ಸಮಸ್ಯೆ ಇರಲಿಲ್ಲ. ಪ್ರವಾಸೋದ್ಯಮ ಅಭಿವೃದ್ಧಿಯಾಗುವ ವೇಳೆಗೆ ಈ ಕೆಟ್ಟ ಘಟನೆ ನಡೆದಿದೆ. ಇದರಿಂದ ನಮ್ಮ ಜೀವನಕ್ಕೂ ತೊಂದರೆಯಾಗಿದೆ ಎಂದು ನೋವಿನಿಂದ ಹೇಳುತ್ತಿದ್ದರು. ಹೋಟೆಲ್ ನವರು ಸಂದರ್ಭವನ್ನು ದುರ್ಬಳಕೆ ಮಾಡಿಕೊಳ್ಳಲಿಲ್ಲ ಉತ್ತಮ ಆತಿಥ್ಯ ನೀಡಿದರು. ಕ್ವಾರಂಟೈನ್ ಆಗಿದ್ದಾಗ ಬಿಟ್ಟರೆ ಇನ್ಯಾವುದೇ ರೀತಿಯಲ್ಲೂ ತೊಂದರೆಯಾಗಲಿಲ್ಲ ಎಂದು ತಿಳಿಸಿದರು.

ದಕ್ಷಿಣ ಏಷ್ಯಾ ಪ್ರಾದೇಶಿಕ ರಾಷ್ಟ್ರಗಳ ಚರ್ಮರೋಗ ತಜ್ಞರ ಸಮ್ಮೇಳನದಲ್ಲಿ ಡಾ.ಹನುಮಂತಪ್ಪ ವಿಶೇಷ ಉಪನ್ಯಾಸ



ಮೈಸೂರು, ಏ.24– ಮಂಗಳೂರಿನ ಟಿಎಂಎಪೈ ಇಂಟರ್ ನ್ಯಾಷನಲ್ ಕನ್ವೆನ್ಷನಲ್ ಸೆಂಟರ್‌ನಲ್ಲಿ ಮೇ 2, 3 ಮತ್ತು 4 ರಂದು ನಡೆಯುವ ದಕ್ಷಿಣ ಏಷ್ಯಾ ಪ್ರಾದೇಶಿಕ ರಾಷ್ಟ್ರಗಳ ಚರ್ಮರೋಗ ತಜ್ಞರ ಸಮ್ಮೇಳನದಲ್ಲಿ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಚರ್ಮ ರೋಗ ತಜ್ಞ ಡಾ.ಹನುಮಂತಪ್ಪ 'ಮಕ್ಕಳ ಸೂಕ್ಷ್ಮ ಚರ್ಮದ ಮೇಲೆ ಉಂಟಾಗುವ ಸೋರಿಯಾಸಿಸ್, ಇಸುಬು ಮತ್ತು ಅಪರೂಪದ ಅನುವಂಶೀಯ ಚರ್ಮ ಕಾಯಿಲೆ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಭಾರತದ ವಿರುದ್ಧ ಸೇಡು! : ಆಕಸ್ಮಿಕವಾಗಿ ಪಾಕ್ ಗಡಿ ಪ್ರವೇಶಿಸಿದ್ದ ಬಿಎಸ್‌ಎಫ್ ಯೋಧನ ಬಂಧನ



ಪಂಜಾಬ್: ಪಾಕಿಸ್ತಾನದ ಪಂಜಾಬ್ ಗಡಿಯನ್ನು ಆಕಸ್ಮಿಕವಾಗಿ ದಾಟಿದ ಬಿಎಸ್‌ಎಫ್ ಜವಾನನನ್ನು ಪಾಕಿಸ್ತಾನ ರೇಂಜರ್ಸ್ ಬಂಧಿಸಿದ್ದಾರೆ. ಅವರ ಬಿಡುಗಡೆಗಾಗಿ ಎರಡು ಪಡೆಗಳ ನಡುವೆ ಧ್ವಜ ಸಭೆ ನಡೆಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಹಲ್ಗಾಮ್ ಉಗ್ರ ದಾಳಿಯ ಹಿನ್ನೆಲೆಯಲ್ಲಿ ಭಾರತ ಪಾಕ್ ವಿರುದ್ಧ ಕೈಗೊಂಡಿದ್ದ ಕ್ರಮಗಳಿಗೆ ಪ್ರತಿಕ್ರಿಯೆ ನೀಡಿರುವ ಪಾಕಿಸ್ತಾನ, ಭಾರತೀಯ ವಿಮಾನಯಾನ ಸಂಸ್ಥೆಗಳಿಗೆ ತನ್ನ ವಾಯುಪ್ರದೇಶವನ್ನು ನಿರ್ಬಂಧಿಸಿದೆ. ವಾಘಾ ಗಡಿ ದಾಟುವಿಕೆಯನ್ನು ತಾನೂ ಮುಚ್ಚಿದೆ. ಭಾರತದೊಂದಿಗಿನ ಎಲ್ಲಾ ವ್ಯಾಪಾರವನ್ನು ಸ್ಥಗಿತಗೊಳಿಸಿದೆ. ಸಿಂಧೂ ಜಲ ಒಪ್ಪಂದದಡಿಯಲ್ಲಿ ಪಾಕಿಸ್ತಾನಕ್ಕೆ ಉದ್ದೇಶಿಸಲಾದ ನೀರನ್ನು ಬೇರೆಡೆಗೆ ತಿರುಗಿಸುವ ಯಾವುದೇ ಪ್ರಯತ್ನವನ್ನು ಯುದ್ಧದ ಕೃತ್ಯವೆಂದು ಪರಿಗಣಿಸಲಾಗುತ್ತದೆ ಎಂದು ಹೇಳಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಲು ಮತ್ತು ರಾಜತಾಂತ್ರಿಕ ಸಂಬಂಧಗಳನ್ನು ಕೆಳಮಟ್ಟಕ್ಕಿಳಿಸುವ ಭಾರತದ ಕ್ರಮಕ್ಕೆ ದೇಶದ ಪ್ರತಿಕ್ರಿಯೆಯನ್ನು ರೂಪಿಸಲು ಪ್ರಧಾನಿ ಶೆಹಬಾಜ್ ಷರೀಫ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಂತರ ಈ ಪ್ರಕಟಣೆಗಳನ್ನು ಮಾಡಲಾಯಿತು. ಸಭೆಯಲ್ಲಿ ಪ್ರಮುಖ ಮಂತ್ರಿಗಳು ಮತ್ತು ಮೂರು ಪಡೆಗಳ ಮುಖ್ಯಸ್ಥರು ಭಾಗವಹಿಸಿದ್ದರು.

ಈಗ ಆಕಸ್ಮಿಕವಾಗಿ ಪಾಕ್ ಪ್ರದೇಶ ದಾಟಿದ ಯೋಧನನ್ನು ಪಾಕಿಸ್ತಾನ ಬಂಧಿಸಿರುವುದು ಆತಂಕಕ್ಕೆ ಕಾರಣವಾಗಿದೆ.

ಹುಯಿಲಾಳು ಬಳಿ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂಗೆ ಜಾಗ ಕಲ್ಪಿಸಲು ಮಲೆ ಮಹದೇಶ್ವರ ಬೆಟ್ಟದ ಸಂಪುಟ ಸಭೆ ಸಮ್ಮತಿ

ಮಾಜಿ ಸಂಸದ ಪ್ರತಾಪಸಿಂಹ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಧನ್ಯವಾದ

ಮೈಸೂರಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣಕ್ಕೆ ಸಂಸದರಾಗಿದ್ದಾಗ ಅವಿರತ ಶ್ರಮಿಸಿದ್ದ ಪ್ರತಾಪಸಿಂಹ



ಮೈಸೂರಲ್ಲಿ ಅಂತಾರಾಷ್ಟ್ರೀಯ ಸುಸಜ್ಜಿತ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಸಂಬಂಧ ಪ್ರತಾಪ್ ಸಿಂಹ ಸಂಸದರಾಗಿದ್ದಾಗ ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ (ಕೆಎಸ್‌ಸಿಎ) ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದ್ದರು.

ಮೈಸೂರು, ಏ.24(ಎಸ್‌ಬಿಡಿ)– ಮೈಸೂರು ತಾಲೂಕು ಇಲವಾಲದ ಬಳಿ ಅಂತಾರಾಷ್ಟ್ರೀಯ ಕ್ರೀಡಾಂಗಣ ನಿರ್ಮಾಣಕ್ಕೆ ಜಾಗ ಒದಗಿಸಲು ಮಹದೇಶ್ವರ ಬೆಟ್ಟದಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯಿಸಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರಕ್ಕೆ ಮಾಜಿ ಸಂಸದ ಪ್ರತಾಪ್ ಸಿಂಹ ಧನ್ಯವಾದ ತಿಳಿಸಿದ್ದಾರೆ. ಇದೇ ವೇಳೆ ಸುಸಜ್ಜಿತ ಕ್ರಿಕೆಟ್ ಸ್ಟೇಡಿಯಂ ವಿಚಾರವಾಗಿ ತಾವು ಸಂಸದರಾಗಿದ್ದಾಗ ನಿರಂತರ ಪ್ರಯತ್ನ ನಡೆಸಿದ್ದನ್ನು ಸ್ಮರಿಸಿಕೊಂಡಿದ್ದಾರೆ.

ಮೈಸೂರಿಗೆ ಒಂದು ಸುಸಜ್ಜಿತವಾದ ಕ್ರಿಕೆಟ್ ಸ್ಟೇಡಿಯಂ ಬೇಕೆಂಬುದು ಮೈಸೂರಿಗರ ಬಹು ವರ್ಷಗಳ ಕನಸಾಗಿತ್ತು. ಈ ನಿಟ್ಟಿನಲ್ಲಿ ನಗರದ ಸಾತಗಳ್ಳಿ ಸಮೀಪ ಸುಮಾರು 19.5 ಎಕರೆ ಜಾಗವನ್ನ ಮುಡಾ ಗುರುತಿಸಿತ್ತು. 2021ರಲ್ಲಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರವಿದ್ದಾಗ ಆ ಭೂಮಿಯ ಹಸ್ತಾಂತರ ಸಂಬಂಧ ನಾನು ಎಲ್ಲಾ ಪ್ರಯತ್ನ ಮಾಡಿದ್ದೆ. ಮೈದಾನ, ಸ್ಟೇಡಿಯಂ ಜೊತೆಗೆ ಪಾರ್ಕಿಂಗ್, ಕ್ಲಬ್ ಹೌಸ್ ನಿರ್ಮಾಣಕ್ಕೂ ಸಾಕಷ್ಟು ಜಾಗ ಬೇಕು. ಆದರೆ 19.5 ಎಕರೆ ಜಾಗದ ಮಧ್ಯದಲ್ಲಿ ಒಂದು ನಿರ್ಜೀವ ಕೆರೆ ಇತ್ತು. ಅದನ್ನು ಸುಪ್ರೀಂಕೋರ್ಟ್‌ನ ನ್ಯಾಷನಲ್ ಗ್ರೀನ್ ಟ್ರಿಬುನಲ್ (ಎನ್‌ಜಿಟಿ) ನಿಯಮಗಳನ್ವಯ ಸ್ಥಳಾಂತರ ಮಾಡಲು ಅವಕಾಶವಿಲ್ಲದ ಕಾರಣ ಸದರಿ ಯೋಜನೆಯನ್ನು ಕೈಬಿಡಬೇಕಾಯಿತು. ತಕ್ಷಣವೇ ಇಲವಾಲ ಹೋಬಳಿಯ ಹುಯಿಲಾಳು ಬಳಿ ಸುಮಾರು 26 ಎಕರೆ ಸರ್ಕಾರಿ ಜಾಗವನ್ನು ಅಧಿಕಾರಿಗಳ ಸಹ ಕಾರದಿಂದ ಗುರುತಿಸಿ, ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಕಂದಾಯ ಇಲಾಖೆಯ ತಹಶೀಲ್ದಾರ್, ಉಪ ವಿಭಾಗಾಧಿಕಾರಿಗಳು, ಜಿಲ್ಲಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರ ವರದಿಯೊಡನೆ ಕಂದಾಯ ಇಲಾಖೆ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು

ಈ ಸಂಬಂಧ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ)ಯ ಬ್ರಿಜೇಶ್ ಪಟೇಲ್, ಶಂಕರ್, ಪ್ರದೀಪ್ ಶಿವಪ್ಪ, ಸುಧಾಕರ್ ರೈ, ಬಾಲಚಂದರ್, ಹರಿಕೃಷ್ಣ ಇನ್ನಿತರ ಸದಸ್ಯರೊಂದಿಗೆ ನಾನು ಹಲವು ಬಾರಿ ಚರ್ಚಿಸಿದ್ದರ ಫಲವಾಗಿ ಸುಮಾರು ನೂರು ಕೋಟಿ ವೆಚ್ಚದಲ್ಲಿ ಮೈಸೂರಲ್ಲಿ ಸುಸಜ್ಜಿತ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಮಾಡಲು ಒಪ್ಪಿಗೆ ಸೂಚಿಸಿದ್ದರು. ಸದರಿ ಪ್ರಸ್ತಾವನೆಯ ಅನುಮೋದನೆಗೆ ಕ್ಯಾಬಿನೆಟ್ ನೋಟ್ ಕೂಡ ಸಿದ್ಧವಾಗಿತ್ತು. ಆದರೆ ಬಿಜೆಪಿ ಸರ್ಕಾರ ಪುನರ್ ಸ್ಥಾಪನೆಯಾಗದ ಕಾರಣ ಆ ಪ್ರಸ್ತಾವನೆ ಹಾಗೆಯೇ ಉಳಿದಿತ್ತು.

ಸದ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅಂತಾರಾಷ್ಟ್ರೀಯ ಕ್ರೀಡಾಂಗಣ ನಿರ್ಮಾಣಕ್ಕೆ ಜಾಗ ಒದಗಿಸುವ ಪ್ರಸ್ತಾವನೆಗೆ ಅನು ಮೋದನೆ ದೊರೆತಿದೆ. ಇದಕ್ಕಾಗಿ ಮುಖ್ಯಮಂತ್ರಿಗಳಿಗೆ ನನ್ನ ಧನ್ಯವಾದಗಳನ್ನು ತಿಳಿಸುತ್ತೇನೆ. ಇದರೊಂದಿಗೆ ಕಳೆದ ಮೂರು ವರ್ಷಗಳ ನನ್ನ ಪ್ರಯತ್ನ ಸಾರ್ಥಕತೆ ಕಂಡಿದೆ. ಮುಂದಿನ ದಿನಗಳಲ್ಲಿ ಮೈಸೂರಲ್ಲಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ವತಿಯಿಂದ ಸುಸಜ್ಜಿತ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣಗೊಳ್ಳಲಿದೆ. ನನ್ನ ಪ್ರಯತ್ನಕ್ಕೆ ಸಹಕರಿಸಿದ ಹಿರಿಯ ಶಾಸಕರಾದ ಜಿ.ಟಿ.ದೇವೇಗೌಡರು, ಆ ವೇಳೆ ಪ್ರಾದೇಶಿಕ ಆಯುಕ್ತರಾಗಿದ್ದ ಸಿ.ಜಿ.ಪ್ರಕಾಶ್, ಜಿಲ್ಲಾಧಿಕಾರಿಯಾಗಿದ್ದ ಡಾ.ಕೆ.ವಿ.ರಾಜೇಂದ್ರ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಕಾರ್ಯದರ್ಶಿ ಬ್ರಿಜೇಶ್ ಪಟೇಲ್, ಶಂಕರ್, ಪ್ರದೀಪ್ ಶಿವಪ್ಪ ಸುಧಾಕರ್ ರೈ, ಬಾಲಚಂದರ್, ಹರಿಕೃಷ್ಣ ಹಾಗೂ ಇತರೆ ಸದಸ್ಯರಿಗೂ ನನ್ನ ಧನ್ಯವಾದಗಳನ್ನು ತಿಳಿಸುವುದಾಗಿ ಪ್ರತಾಪ್ ಸಿಂಹ ಹೇಳಿದ್ದಾರೆ.

ಪಹಲ್ಗಾಮ್ ಉಗ್ರರ ದಾಳಿಗೆ ಶ್ರೀ ವಾಸವಿ ಸ್ನೇಹವೃಂದ ಖಂಡನೆ

ಮೈಸೂರು, ಏ.24– ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ನಡೆಸಿದ ಹತ್ಯಾಕಾಂಡವನ್ನು ಸರಸ್ವತಿಪುರಂನ ಶ್ರೀ ವಾಸವಿ ಸ್ನೇಹ ವೃಂದ ತೀವ್ರವಾಗಿ ಖಂಡಿಸಿದೆ.

ಪಾಕ್ ಪ್ರಚೋದಿತ ಉಗ್ರಗಾಮಿಗಳು ಅಮಾಯಕ ಪ್ರವಾಸಿಗರ ಮೇಲೆ ನಡೆಸಿದ ಹತ್ಯಾ ದಾಳಿ ಅತ್ಯಂತ ಅಮಾನವೀಯ. ಇದು ಭಾರತದ ಪ್ರತಿಯೊಬ್ಬ ಪ್ರಜೆಗಳು ಖಂಡಿಸಲೇಬೇಕಾದ ಹೀನ ಕೃತ್ಯ. ಪರಮ ಹೇಡಿಗಳು ಮಾತ್ರ ಇಂತಹ ದುಷ್ಕೃತ್ಯ ನಡೆಸಲು ಸಾಧ್ಯ. ಈ ಮಾನವ ವಿರೋಧಿಗಳನ್ನು ಸೆರೆ ಹಿಡಿದು ಅತ್ಯಂತ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಹಾಗೆಯೇ ಇಂಥಹ ಪಾಪ ಕೃತ್ಯಗಳು ಮರುಕಳಿಸದಂತೆ ಎಚ್ಚರವಹಿಸಬೇಕು. ನಮ್ಮೆಲ್ಲಾ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ, ನಮ್ಮ ಪ್ರಧಾನಮಂತ್ರಿ ಹಾಗೂ ಕೇಂದ್ರ ಸರ್ಕಾರದ ಯಾವುದೇ ಕ್ರಮಗಳನ್ನು ಬೆಂಬಲಿಸಿ, ಸಹಕರಿಸಬೇಕು. ಭಯೋತ್ಪಾದಕರ ಅಟ್ಟಹಾಸದಲ್ಲಿ ಸಾವನ್ನಪ್ಪಿದವರಿಗೆ ಸದ್ಗತಿ ಪ್ರಾಪ್ತವಾಗಲಿ ಎಂದು ಶ್ರೀ ವಾಸವಿ ಸ್ನೇಹ ವೃಂದದ ಅಧ್ಯಕ್ಷ ಎಂ.ಶಾಂತಾರಾಮ್ ಹಾಗೂ ಸಿಪಿವಿ ಗುಪ್ತ ತಿಳಿಸಿದ್ದಾರೆ.

ಸಿನಿಮಾದ ನಾಯಕ-ನಾಯಕಿಯರ ಆದರ್ಶವಾಗಿಟ್ಟುಕೊಳ್ಳಬೇಡಿ...!

● ಅವರ ಸ್ವಾರ್ಥಕ್ಕೆ ನಿಮ್ಮನ್ನ ಬಲಿ ತೆಗೆದುಕೊಳ್ಳುತ್ತಾರೆ... ಹುಷಾರ್!
● ವಿದ್ಯಾರ್ಥಿಗಳಿಗೆ ಖ್ಯಾತ ಗಾಯಕ ರಘು ದೀಕ್ಷಿತ್ ಕಿವಿಮಾತು



ಮೈಸೂರಿನ ಯುವರಾಜ ಕಾಲೇಜಿನ ಜಯಚಾಮರಾಜೇಂದ್ರ ಒಡೆಯರ್ ಸಭಾಂಗಣದಲ್ಲಿ ಗುರುವಾರ ನಡೆದ ಕಾಲೇಜಿನ ವಾರ್ಷಿಕೋತ್ಸವ ಸಮಾರಂಭದಲ್ಲಿ ಖ್ಯಾತ ಗಾಯಕ ರಘು ದೀಕ್ಷಿತ್ ಮಾತನಾಡಿದರು.

ಮೈಸೂರು, ಏ.24(ಬಿಎಲ್‌ಯು)- ಗ್ಲಾಮರ್ ಆಕರ್ಷಣೆಯಿಂದ ಸಿನಿಮಾ ರಂಗದ ನಾಯಕ-ನಾಯಕಿಯರನ್ನು ಆದರ್ಶವಾಗಿಟ್ಟುಕೊಂಡು ನಿಮ್ಮ ಅಮೂಲ್ಯ ಸಮಯವನ್ನು ವ್ಯರ್ಥ ಮಾಡಿಕೊಳ್ಳಬೇಡಿ ಎಂದು ಖ್ಯಾತ ಚಲನಚಿತ್ರ ಗಾಯಕ ರಘು ದೀಕ್ಷಿತ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ಯುವರಾಜ ಕಾಲೇಜಿನ ಜಯಚಾಮರಾಜೇಂದ್ರ ಒಡೆಯರ್ ಸಭಾಂಗಣದಲ್ಲಿ ಇಂದು ನಡೆದ ಕಾಲೇಜು ವಾರ್ಷಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಉತ್ತಮ ಭವಿಷ್ಯ ರೂಪಿಸಿಕೊಳ್ಳುವ ಈ ಸಮಯದಲ್ಲಿ ಸಿನಿಮಾ ರಂಗದ ನಾಯಕ-ನಾಯಕಿಯರ ಅನುಸರಿಸಿ, ಓದಿನ ನಿಮ್ಮ ಅಮೂಲ್ಯ ಸಮಯ ವ್ಯರ್ಥ ಮಾಡಿಕೊಂಡು ಜೀವನ ಹಾಳು ಮಾಡಿಕೊಳ್ಳಬೇಡಿ ಎಂದರು.

ಗ್ಲಾಮರ್ ಆಕರ್ಷಣೆಯಿಂದ ಸಿನಿಮಾ ರಂಗದ ಕಲಾವಿದರು ಅವರ ಸ್ವಾರ್ಥಕ್ಕೆ ನಿಮ್ಮನ್ನು ಸೆಳೆಯುತ್ತಾರೆ. ಇದರಿಂದ ಅವರು ಬೆಳವಣಿಗೆ ಹೊಂದುತ್ತಾರೆಯೇ ಹೊರತು ನಿಮಗೆ ಅವರಿಂದ ಯಾವುದೇ ಪ್ರಯೋಜನವಿಲ್ಲ. ನಿಮ್ಮ ಜೀವನ ಹಾಳಾದರೆ ಅವರು ನಿಮ್ಮ ನೆರವಿಗೆ ಬರುವುದಿಲ್ಲ ಎಂದು ಎಚ್ಚರಿಸಿದರು.


ಈ ಹಿನ್ನೆಲೆಯಲ್ಲಿ ಸಿನಿಮಾ ರಂಗದ ಕಲಾವಿದರ ಹಿಂದೆ-ಮುಂದೆ ಓಡಾಡಿ, ಓದಿಗೆ ಮೀಸಲಾದ ನಿಮ್ಮ ಅಮೂಲ್ಯ ಸಮಯ ವ್ಯರ್ಥ ಮಾಡಿಕೊಳ್ಳಬೇಡಿ ಎಂದು ಹೇಳಿದರು.

ಅಪ್ಪ-ಅಮ್ಮನ ಮಾತು ಕೇಳಿ: ಕಾಲೇಜು ವಿದ್ಯಾಭ್ಯಾಸದ ಈ ಸಂದರ್ಭದಲ್ಲಿ ಕೆಲವು ಸಣ್ಣ-ಪುಟ್ಟ ವಿಚಾರಕ್ಕೆ ನಿಮ್ಮ ತಂದೆ-ತಾಯಿ ಜೊತೆ ಜಗಳ ಆಡುವುದು ಸಾಮಾನ್ಯ. ಇಂತಹ ವರ್ತನೆಯಿಂದ ಮುಕ್ತರಾಗಿ ಅಪ್ಪ-ಅಮ್ಮ ಹೇಳಿದಂತೆ ಬದುಕು ರೂಪಿಸಿಕೊಳ್ಳಿರಿ. ಪೋಷಕರ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು ಸಮಾಜದಲ್ಲಿ ಸಾಧಕರಾಗಿ ಎಂದು ಸಲಹೆ ನೀಡಿದರು.

ತಂದೆ-ತಾಯಿ ಹಾಗೂ ಗುರುಗಳಿಲ್ಲದೆ ಇದ್ದರೆ ನೀವು ಏನನ್ನು ಸಾಧನೆ ಮಾಡಲು ಸಾಧ್ಯವಿಲ್ಲ. ತಪ್ಪು ಮಾಡಿದಾಗ ಅದನ್ನು ತಿದ್ದಿಕೊಂಡು ಮುನ್ನಡೆಯಿರಿ. ಆದರೆ ಮತ್ತೊಮ್ಮೆ ಅದೇ ತಪ್ಪುಗಳನ್ನು ಮಾಡುತ್ತಾ ಹೋಗಬೇಡಿ. ಇದು ಪುನರಾವರ್ತನೆಯಾದರೆ ಭವಿಷ್ಯತ್ತಿನಲ್ಲಿ ತುಂಬಾ ಕಷ್ಟದ ದಿನಗಳನ್ನು ಎದುರಿಸಬೇಕಾಗುತ್ತದೆ ಎಂದು ರಘು ದೀಕ್ಷಿತ್ ಎಚ್ಚರಿಕೆ ನೀಡಿದರು.

ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರಾದ ಎಂ.ಕೆ.ಸವಿತಾ, ಕಾಲೇಜಿನ ಪ್ರಾಂಶುಪಾಲ ಪ್ರೊ.ಎಸ್.ಮಹದೇವ ಮೂರ್ತಿ, ಕಾಲೇಜಿನ ವಿವಿಧ ವಿಭಾಗದ ಮುಖ್ಯಸ್ಥರಾದ ಜಿ.ಕೃಷ್ಣಮೂರ್ತಿ, ಪ್ರೊ.ಜಿ.ಎಂ.ವೆಂಕಟೇಶ್, ನಾಗೇಶ್ ಬಾಬು, ಪ್ರೊ. ಅಜಯ್ ಕುಮಾರ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮೈಸೂರು ವಿವಿ ಈಜುಕೊಳದಲ್ಲಿ ಎರಡನೇ ಹಂತದ ಬೇಸಿಗೆ ಶಿಬಿರಕ್ಕೆ ಚಾಲನೆ



ಮೈಸೂರು, ಏ.24(ಎಂಕೆ)- ನಗರದ ಸರಸ್ವತಿಪುರಂನಲ್ಲಿರುವ ಮೈಸೂರು ವಿಶ್ವವಿದ್ಯಾನಿಲಯದ ಈಜುಕೊಳದಲ್ಲಿ ಹಮ್ಮಿಕೊಂಡಿರುವ 2ನೇ ಹಂತದ 21 ದಿನಗಳ ಈಜು ತರಬೇತಿ ಬೇಸಿಗೆ ಶಿಬಿರಕ್ಕೆ ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ.ಲೋಕನಾಥ್ ಗುರುವಾರ ಚಾಲನೆ ನೀಡಿದರು.

ಶಿಬಿರಾರ್ಥಿಗಳನ್ನು ನೀರಿಗೆ ಜಂಪ್ ಮಾಡಿಸುವ ಮೂಲಕ ಬೇಸಿಗೆ ಶಿಬಿರಕ್ಕೆ ಚಾಲನೆ ನೀಡಿದ ಅವರು, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಪ್ರತೀ ವರ್ಷದಂತೆ ಈ ವರ್ಷವೂ ಬೇಸಿಗೆ ಶಿಬಿರ ಆಯೋಜಿಸಲಾಗಿದೆ. ಈಗಾಗಲೇ ಮೊದಲ ಹಂತದ 21 ದಿನಗಳ ಶಿಬಿರ ಮುಕ್ತಾಯಗೊಂಡಿದ್ದು, 2ನೇ ಹಂತದ 21 ದಿನಗಳ ಶಿಬಿರ ಇಂದಿನಿಂದ ಆರಂಭವಾಗಿದೆ. ಪ್ರತಿದಿನ ಮೂರು ಬ್ಯಾಚ್‌ಗಳಿಗೆ ಈಜು ತರಬೇತಿ ನೀಡಲಾಗುತ್ತದೆ ಎಂದರು.

ಮಕ್ಕಳನ್ನು ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳ ಅಭ್ಯಾಸಕ್ಕೂ ಸೇರಿಸಬೇಕು. ಇದರಿಂದ ಮಕ್ಕಳಲ್ಲಿ ಬುದ್ಧಿಶಕ್ತಿ ಹೆಚ್ಚಾಗುವುದಲ್ಲದೆ ಅವರಲ್ಲಿ ಪ್ರತಿಭೆ ಅನಾವರಣಗೊಳ್ಳಲಿದೆ. ಹಾಗಾಗಿ ಪೋಷಕರು ಮಕ್ಕಳ ಆಸಕ್ತಿಗೆ ಅನುಗುಣವಾಗಿ ಪ್ರೋತ್ಸಾಹ ನೀಡಬೇಕು. ಮೈಸೂರು ವಿಶ್ವವಿದ್ಯಾನಿಲಯದ ಈಜುಕೊಳ ಮೈಸೂರಿನಲ್ಲಿರುವ ಹಳೆಯ ಈಜುಕೊಳವಾಗಿದ್ದು, ಪೋಷಕರು ಈಜುಕೊಳದ ಆವರಣದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ವೆಂಕಟೇಶ್, ಸಹಾಯಕ ನಿರ್ದೇಶಕ ಕಾರ್ತಿಕ್, ತರಬೇತುದಾರರಾದ ಆಲ್ಬರ್ಟ್ ಸೆಬಾಸ್ಟಿಯನ್, ಮನೋಜ್, ಸ್ಕಂದ ಅಶ್ವತ್, ಚೆನ್ನಮಲ್ಲನಾಯಕ, ರವೀಶ್, ಸಿಬ್ಬಂದಿಗಳಾದ ಜಯಕುಮಾರ್, ಚಂದ್ರಶೇಖರ್, ಸಂಜಯ್, ಮಹದೇವ್, ಶಂಕರ್, ಬೆಳವಾಡಿ ಚಂದ್ರು, ಮಂಜುನಾಥ್ ಮತ್ತಿತರರಿದ್ದರು.

ಸಾರ್ವಜನಿಕ ಪ್ರಕಟಣೆ

ನನ್ನ ಕಕ್ಷಿದಾರರಾದ ಎಸ್.ಜಿ ಆದರ್ಶ್ ಬಿನ್ ಎಸ್ ಗುಂಡೂರಾವ್, ಮೈಸೂರು ಸಿಟಿ, 6ನೇ ಕ್ರಾಸ್, ಶ್ರೀರಾಂಪುರ, 2ನೇ ಹಂತ. ಮನೆ ನಂ 919 ರಲ್ಲಿ ವಾಸವಾಗಿರುವವರು ಕೆಳಕಂಡ ಷೆಡ್ಯೂಲ್ ಸ್ವತ್ತನ್ನು ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಮುಳ್ಳೂರು ಗ್ರಾಮದ ವಾಸಿ ವೀರಭದ್ರಸ್ವಾಮಿ ಬಿನ್ ನಂಜಪ್ಪ ಹಾಗೂ ನಾಗರಾಜ ಎನ್ ಬಿನ್ ನಂಜಪ್ಪ ರವರಿಂದ ಖರೀದಿಸುತ್ತಿದ್ದು, ಈ ಸದರಿ ಸ್ವತ್ತಿಗೆ ಸಂಬಂಧಪಟ್ಟಂತೆ ಸಾರ್ವಜನಿಕರಿಗೆ ಯಾರಿಗಾದರೂ ಹಕ್ಕು, ಹಿತಾಸಕ್ತಿ, ಅಧಿಕಾರ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ-ತಕರಾರುಗಳು ಇದ್ದಲ್ಲಿ ಈ ನೋಟೀಸ್ ಪ್ರಕಟಗೊಂಡ 15 ದಿನಗಳ ಒಳಗೆ ತಮ್ಮ ಆಕ್ಷೇಪಣೆಗಳನ್ನು ಉಚಿತ ರೂಪದಲ್ಲಿ ಸೂಕ್ತ ದಾಖಲೆಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಮೇಲೆ ತಿಳಿಸಿದ ದಿನಗಳ ಒಳಗೆ ಯಾವುದೇ ರೀತಿಯ ತಕರಾರು ವ್ಯಾಜ್ಯ ಬರದೇ ಇದ್ದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ-ತಕರಾರುಗಳಿಗೆ ನನ್ನ ಕಕ್ಷಿದಾರರು ಜವಾಬ್ದಾರರಾಗಿರುವುದಿಲ್ಲ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ : ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ಮುಳ್ಳೂರು ಗ್ರಾಮದ ಸರ್ವೆ ನಂ 18/3 ರಲ್ಲಿ 0-22 (ಇಪ್ಪತ್ತೆರಡು ಗುಂಟೆ) ಖುಷ್ಕಿ ಜಮೀನಿಗೆ ಚಕ್ಕುಬಂದಿ :-

ಪೂರ್ವಕ್ಕೆ - ಜವರಶೆಟ್ಟರವರ ಜಮೀನು, ಪಶ್ಚಿಮಕ್ಕೆ- ನಿರಂಜನ್ ರವರ ಜಮೀನು, ಉತ್ತರಕ್ಕೆ -ಗೋವಿಂದಶೆಟ್ಟಿರವರ ಜಮೀನು, ದಕ್ಷಿಣಕ್ಕೆ : ಸರ್ವೆ ನಂ 89 ರ ಉಳಿಕೆ ಜಮೀನು.

ಸಹಿ /- ಎನ್.ವಿ.ನಾಗೇಂದ್ರ,
ವಕೀಲರು & ನೋಟರಿ ಕಲ್ಯಾಣ ಭವನ ಕಟ್ಟಡ,
ತ್ಯಾಗರಾಜ ರಸ್ತೆ, ಮೈಸೂರು.
ಮೊ : 9481512904, 9449370961

ಗೋಪಾಲಗೌಡ ಶಾಂತವೇರಿ ಸ್ಮಾರಕ ಆಸ್ಪತ್ರೆ ನಜರ್‌ಬಾದ್ ಮೆಡಿಕಲ್ ಸರ್ವಿಸಸ್ ಪ್ರೈ ಲಿ.,

ಟಿ. ನರಸೀಪುರ ರಸ್ತೆ, ನಜರ್‌ಬಾದ್ ಮೈಸೂರು-570010

ವೈದ್ಯಕೀಯ ದಾಖಲಾತಿಗಳ ವಿಲೇವಾರಿ ಮಾಡುವ ಬಗ್ಗೆ ಸಾರ್ವಜನಿಕ ಪ್ರಕಟಣೆ

ಭಾರತೀಯ ವೈದ್ಯಕೀಯ ಮಂಡಳಿಯ ಪ್ರಕಾರ ವೈದ್ಯಕೀಯ ದಾಖಲೆಗಳ ನೀತಿಗೆ ಸಂಬಂಧಿಸಿದಂತೆ ಗೋಪಾಲಗೌಡ ಶಾಂತವೇರಿ ಸ್ಮಾರಕ ಆಸ್ಪತ್ರೆ, ಮೈಸೂರು. ಇಲ್ಲಿನ 2019 ನೇ ವರ್ಷದ ಒಳರೋಗಿ ಹಾಗೂ ಹೊರರೋಗಿ ಕಡತಗಳನ್ನು (IN PATIENT AND OUT PATIENT FILES) ವಿಲೇವಾರಿ ಮಾಡುತ್ತಿದ್ದು ಆಸಕ್ತಿಯುಳ್ಳ ರೋಗಿಗಳು ಸದರಿಯವರ ಒಳರೋಗಿ ಹಾಗೂ ಹೊರ ರೋಗಿ ಕಡತವನ್ನು ಪಡೆದುಕೊಳ್ಳಲು ಈ ಪ್ರಕಟಣೆಗೊಂಡ 15 ದಿನಗಳ (08.05.2025) ಒಳಗಾಗಿ ವೈದ್ಯಕೀಯ ದಾಖಲೆಗಳ ವಿಭಾಗದಲ್ಲಿ ಸಂಪರ್ಕಿಸಬಹುದಾಗಿ ಈ ಮೂಲಕ ತಿಳಿಯಪಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ: ವೈದ್ಯಕೀಯ ದಾಖಲಾತಿ ವಿಭಾಗ, ಗೋಪಾಲಗೌಡ ಶಾಂತವೇರಿ ಸ್ಮಾರಕ ಆಸ್ಪತ್ರೆ, ನಜರ್‌ಬಾದ್, ಮೈಸೂರು-570010, ದೂರವಾಣಿ ಸಂಖ್ಯೆ: 0821-4001600

ಸಹಿ/-
ಆಡಳಿತಾಧಿಕಾರಿಗಳು

ನಮೂನೆ-XII

ದೂರವಾಣಿ: 2423094
(ನಿಯಮ 14(3)ಪ್ರಕಾರ)

ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ ನಿ., ಮೈಸೂರು

ಇದರ ರಿಟರ್ನಿಂಗ್ ಆಫೀಸರ್ ಕಾರ್ಯಾಲಯದಿಂದ
ಚುನಾವಣಾ ನೋಟೀಸಿನೊಂದಿಗೆ ಚುನಾವಣಾ ವೇಳಾಪಟ್ಟಿ

ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ ನಿ., ಮೈಸೂರು ಇದರ ಆಡಳಿತ ಮಂಡಳಿಗೆ ಚುನಾವಣಾ ದಿನಾಂಕದಿಂದ ಮುಂದಿನ 5 ವರ್ಷಗಳ ಅವಧಿಗೆ ಚುನಾವಣೆ ನಡೆಸಲು ಸಹಕಾರ ಚುನಾವಣಾ ಪ್ರಾಧಿಕಾರ ಬೆಂಗಳೂರು ರವರ ಆದೇಶ ಸಂಖ್ಯೆ:ಸಚುಪ್ರಾ/ಮೈ.ಪ್ರಾ / ಮೈಜಿ/11/2025 ದಿ: 22-4-2025 ರನ್ವಯ ನನ್ನನ್ನು ರಿಟರ್ನಿಂಗ್ ಆಫೀಸರ್ ಆಗಿ ನೇಮಿಸಿ ಆದೇಶಿಸಿರುತ್ತಾರೆ. ಸದರಿ ಆದೇಶದ ರೀತ್ಯಾ, ಸಂಘದ ಉಪನಿಯಮಗಳು ಹಾಗೂ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ಅಧಿನಿಯಮ 2012 (2013ರ ಕರ್ನಾಟಕ ಅಧಿನಿಯಮ ಸಂಖ್ಯೆ 3ರನ್ವಯ) ಮತ್ತು ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ನಿಯಮಗಳು 2013ರನ್ವಯ ಮೇಲಿನ ಸಹಕಾರ ಸಂಘದ ಆಡಳಿತ ಮಂಡಳಿಯ ನಿರ್ದೇಶಕರುಗಳ ಸಾಮಾನ್ಯ ಚುನಾವಣೆಯನ್ನು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ ನಿ. ಮೈಸೂರು ಇದರ ಕೇಂದ್ರ ಕಛೇರಿ, ಬಂಬೂಬಜಾರ್, ನ್ಯೂ ಸಂತೇಪೇಟೆ, ಮೈಸೂರು ಇಲ್ಲಿ ದಿನಾಂಕ : 10.05.2025 ರಂದು ಶನಿವಾರ ಬೆಳಗ್ಗೆ 9.00 ಗಂಟೆಯಿಂದ ಸಾಯಂಕಾಲ 4.00 ಗಂಟೆಯವರೆಗೆ ನಡೆಸಲಾಗುವುದೆಂದು. ಈ ನೋಟೀಸಿನೊಂದಿಗೆ ಚುನಾವಣಾ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪ್ರಕಟಿಸಿರುತ್ತೇನೆ.

ಕ್ರ.ಸಂ	ವಿವರಗಳು	ದಿನಾಂಕ, ವಾರ, ಸ್ಥಳ ಮತ್ತು ವೇಳೆ ವಿವರ
1	ಆಕಾಂಕ್ಷೆಯುಳ್ಳ ಅಭ್ಯರ್ಥಿಗಳು ನಾಮ ಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ (ನಿಯಮ 14ಎ)	ದಿ: 02.05.2025ನೇ ಶುಕ್ರವಾರ ಮಧ್ಯಾಹ್ನ 3.00 ಗಂಟೆ ಒಳಗೆ ಸಂಘದ ಕಛೇರಿಯಲ್ಲಿ ರಿಟರ್ನಿಂಗ್ ಆಫೀಸರ್/ಸಹಾಯಕ ರಿಟರ್ನಿಂಗ್ ಆಫೀಸರ್‌ರವರಿಗೆ
2	ರಿಟರ್ನಿಂಗ್ ಆಫೀಸರ್ ರವರಿಂದ ನಾಮ ಪತ್ರಗಳ ಪರಿಶೀಲನೆ (ನಿಯಮ 14ಬಿ)	ದಿ: 03.05.2025 ನೇ ಶನಿವಾರ ಬೆಳಿಗ್ಗೆ 11.00 ಗಂಟೆಗೆ ಸಂಘದ ಕಛೇರಿಯಲ್ಲಿ ರಿಟರ್ನಿಂಗ್ ಆಫೀಸರ್‌ರವರಿಂದ
3	ರಿಟರ್ನಿಂಗ್ ಆಫೀಸರ್ ರವರಿಂದ ಕ್ರಮಬದ್ಧವಾಗಿ ನಾಮಪತ್ರ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿಯ ಪ್ರಕಟಣೆ (ನಿಯಮ 14 ಬಿ (4))	ದಿ: 03.05.2025 ನೇ ಶನಿವಾರ ನಾಮಪತ್ರಗಳ ಪರಿಶೀಲನೆಯ ನಂತರ ಸಂಘದ ಕಛೇರಿಯ ನೋಟೀಸ್ ಬೋರ್ಡ್‌ನಲ್ಲಿ
4	ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳಿಂದ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನ (ನಿಯಮ 14 ಸಿ)	ದಿ: 04-5-2025 ನೇ ಭಾನುವಾರ ಮಧ್ಯಾಹ್ನ 3.00 ಗಂಟೆಯ ಒಳಗೆ ರಿಟರ್ನಿಂಗ್ ಆಫೀಸರ್ ರವರಿಗೆ ಸಂಘದ ಕಛೇರಿಯಲ್ಲಿ ಖುದ್ದು ಹಾಜರಾಗಿ ಸಲ್ಲಿಸತಕ್ಕದ್ದು.
5	ರಿಟರ್ನಿಂಗ್ ಆಫೀಸರ್ ರವರಿಂದ ಕ್ರಮಬದ್ಧ ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ (ನಿಯಮ 14 ಡಿ)	ದಿ: 04.5.2025 ನೇ ಭಾನುವಾರ ಮಧ್ಯಾಹ್ನ 3.00 ಗಂಟೆಯ ನಂತರ ಸಂಘದ ನೋಟೀಸ್ ಬೋರ್ಡಿನಲ್ಲಿ
6.	ರಿಟರ್ನಿಂಗ್ ಆಫೀಸರ್ ರವರಿಂದ ಮತದಾನದ ಅವಶ್ಯವಿದ್ದಲ್ಲಿ ಅಭ್ಯರ್ಥಿಗಳಿಗೆ ಚಿಹ್ನೆ ಹಂಚಿಕೆ ಮಾಡುವುದು (ನಿಯಮ 14 ಇ)	ದಿ: 04.05.2025 ನೇ ಭಾನುವಾರ ಸಾಯಂಕಾಲ 4.00 ಗಂಟೆಯ ನಂತರ ಸಂಘದ ನೋಟೀಸ್ ಬೋರ್ಡಿನಲ್ಲಿ
7	ಚಿಹ್ನೆಯ ಸಹಿತ ಕ್ರಮಬದ್ಧವಾಗಿ ಸ್ಪರ್ಧೆಯಲ್ಲಿರುವ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ (ನಿಯಮ 14 ಡಿ ಹಾಗೂ ಇ)	ದಿ: 05.05.2025 ನೇ ಸೋಮವಾರ ಬೆಳಿಗ್ಗೆ 11.00 ಗಂಟೆಗೆ ರಿಟರ್ನಿಂಗ್ ಆಫೀಸರ್‌ರವರಿಂದ ಸಂಘದ ಕಛೇರಿಯ ನೋಟೀಸ್ ಬೋರ್ಡ್‌ನಲ್ಲಿ
8	ಮತದಾನದ ಅವಶ್ಯಕತೆ ಇದ್ದಲ್ಲಿ ಮತದಾನದ ದಿನಾಂಕ, ವೇಳೆ ಮತ್ತು ಸ್ಥಳ	ದಿ: 10.05.2025 ನೇ ಶನಿವಾರ ಬೆಳಿಗ್ಗೆ 9.00 ಗಂಟೆಯಿಂದ ಸಾಯಂಕಾಲ 4.00 ಗಂಟೆಯವರೆಗೆ ಸ್ಥಳ: ಎಂಸಿಡಿಸಿಸಿಡಬ್ಲ್ಯೂ ಸ್ಟೋರ್ಸ್, ನ್ಯೂ ಸಂತೇಪೇಟೆ, ಬಂಬೂಬಜಾರ್, ಮೈಸೂರು
9	ಮತಗಳ ಎಣಿಕೆಯ ದಿನಾಂಕ ಮತ್ತು ದಿನ	ದಿ: 10.05.2025 ನೇ ಶನಿವಾರ ಮತದಾನ ಮುಕ್ತಾಯವಾದ ನಂತರ ಸ್ಥಳ: ಎಂಸಿಡಿಸಿಸಿಡಬ್ಲ್ಯೂ ಸ್ಟೋರ್ಸ್, ನ್ಯೂ ಸಂತೇಪೇಟೆ, ಬಂಬೂ ಬಜಾರ್, ಮೈಸೂರು
10	ರಿಟರ್ನಿಂಗ್ ಆಫೀಸರ್ ರವರಿಂದ ಚುನಾವಣಾ ಫಲಿತಾಂಶ ಘೋಷಣೆ	ದಿ: 10.05.2025 ರಂದು ಮತ ಎಣಿಕೆ ಮುಕ್ತಾಯವಾದ ನಂತರ ರಿಟರ್ನಿಂಗ್ ಆಫೀಸರ್‌ರವರಿಂದ

ಸ್ಥಳ: ಮೈಸೂರು
ದಿನಾಂಕ: 23-4-2025

ಸಹಿ/- (ಎಂ.ಎಸ್. ದಯಾನಂದ), ರಿಟರ್ನಿಂಗ್ ಆಫೀಸರ್,
ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ ನಿ., ಮೈಸೂರು ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಸ.ಕ್ಷೆ.ನಿ. ಕಛೇರಿ, ಕಾಡಾ, ಮೈಸೂರು

ಮೈಸೂರು ಜಿಲ್ಲಾ ತೋಟದ ಬೆಳೆಗಾರರ ಮಾರಾಟ ಮತ್ತು ಸಂಸ್ಕರಣ ಸಹಕಾರ ಸಂಘ ನಿ.

(ಜಿಲಾ ಹಾಪ್‌ಕಾಮ್ಸ್) ಕರ್ಜನ್‌ಪಾರ್ಕ್: ಮೈಸೂರು-1
(ಕರ್ನಾಟಕ ರಾಜ್ಯ ತೋಟಗಾರಿಕೆ ಇಲಾಖೆ ಅಂಗಸಂಸ್ಥೆ)

Email:districthopcomsmysore@gmail.com ದೂ: 0821-2422558
ಮೈ.ಜಿ.ಹಾ/19/2025/26 ದಿನಾಂಕ: 23.04.2025

ಪ್ರಕಟಣೆ

2025-26ನೇ ಸಾಲಿಗೆ ಜಿಲ್ಲಾ, ಹಾಪ್ ಕಾಮ್ಸ್, ಕರ್ಜನ್‌ಪಾರ್ಕ್, ಮೈಸೂರು ಸಂಸ್ಥೆಯಲ್ಲಿ Annual Maintenance contract of Mysore District HOPCOMS END to END Solution with Integrated ANDROID On-line Billing Weighing Scales with built in 2G/3G GPRS Modems for a period of 3 Years ನಿರ್ವಹಣೆ ಮಾಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮೂಲಕ KTPP ಕಾಯ್ದೆ ಪ್ರಕಾರ ದ್ವಿ-ಲಕೋಟೆ ಪದ್ಧತಿಯಲ್ಲಿ (KPPP) Karnataka Public Procurement Portal ನಲ್ಲಿ ಟೆಂಡರ್ ಸಂಖ್ಯೆ : Hopcoms/2025-26/SE0011 Date: 23-04-2025 ಇ-ಟೆಂಡರ್ ಕರೆದಿದ್ದು, ಟೆಂಡರ್‌ಗಳನ್ನು ದಿನಾಂಕ: 23-04-2025 ರಿಂದ ದಿನಾಂಕ: 12-05-2025ರ ಸಂಜೆ 5.00 ಗಂಟೆಯವರೆಗೆ KPPP ಪೋರ್ಟಲ್ ನಲ್ಲಿ ಸಲ್ಲಿಸುವುದು. ಭರ್ತಿ ಮಾಡಿದ ತಾಂತ್ರಿಕ ಬಿಡ್ ಅನ್ನು ತೆರೆಯುವ ದಿನಾಂಕ: 13-05-2025 ರಂದು ಸಂಜೆ 5.30 ಗಂಟೆಗೆ ಮತ್ತು ಆರ್ಥಿಕ ಬಿಡ್ ಅನ್ನು ದಿನಾಂಕ: 14-05-2025 ರಂದು ಸಂಜೆ 5.00 ಗಂಟೆಗೆ ಜಿಲ್ಲಾ, ಹಾಪ್ ಕಾಮ್ಸ್, ಕರ್ಜನ್‌ಪಾರ್ಕ್, ಮೈಸೂರು ಕಛೇರಿ ಆವರಣದಲ್ಲಿ ತೆರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಗೆ ಸಂಪರ್ಕಿಸಲು ದೂರವಾಣಿ ಸಂಖ್ಯೆ: 0821-2422558.

ಸಹಿ/- ಪದನಿಮಿತ್ತ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ, ಹಾಪ್‌ಕಾಮ್ಸ್ ಮೈಸೂರು